

ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 324, ಪುಟಗಳು: 8, ಶನಿವಾರ, 31 ಆಗಸ್ಟ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3





ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines




ಸುಭಾಷಿತ

ತಾಳ್ಮೆ ದುರ್ಬಲತೆಯಲ್ಲ, ಮನುಷ್ಯನನ್ನು ದೀರ್ಘಕಾಲ ಸ್ಥಿರವಾಗಿ ನಿಲ್ಲಿಸುವ ಪ್ರಬಲವಾದ ಶಕ್ತಿ.

-ಅನಾಮಿಕ

## ಪಂಚಾಂಗ

(ಶನಿವಾರ 31, ಆಗಸ್ಟ್-2024)

- ಶ್ರೀಕ್ರೋಧಿ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ,
- ತ್ರಯೋದಶಿ, ಶನಿವಾರ, ಪುಷ್ಯ ನಕ್ಷತ್ರ
- ರಾಹುಕಾಲ - 09:17 ರಿಂದ 10:50
- ಗುಳಿಕಕಾಲ - 06:12 ರಿಂದ 07:44
- ಯಮಗಂಡಕಾಲ - 01:55 ರಿಂದ 03:28

## ಸಂಕ್ಷಿಪ್ತ ಸುದ್ದಿ

### ಉಪ ಚುನಾವಣೆ ಚರ್ಚೆಯಿಂದ ಬಿ.ವೈ.ವಿ.ದೂರ

**ಬೆಂಗಳೂರು:** ಕಳೆದ ಎರಡು ದಿನಗಳಿಂದ ಮುಂಬರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಸಂಬಂಧ ರಾಜ್ಯ ಬಿಜೆಪಿಯ ಹಲವು ಹಿರಿಯ ನಾಯಕರು ದೆಹಲಿಯಲ್ಲಿ ವರಿಷ್ಠರ ಜತೆ ಸರಣಿ ಸಭೆಗಳನ್ನು ನಡೆಸಿದರೂ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಕಾಣಿಸಿಕೊಳ್ಳದೇ ಇರುವುದು ಚರ್ಚೆಗೆ ಗ್ರಾಸವಾಗಿದೆ. ಪಕ್ಷದ ನಾಯಕ ರಾದ ಬಸವರಾಜ ಬೊಮ್ಮಾಯಿ, ಆರ್.ಅಶೋಕ್, ಡಾ. ಸಿ.ಎನ್.ಅಶ್ವತ್ಥ ನಾರಾಯಣ, ಅರವಿಂದ್ ಬೆಲ್ಲದ, ಸಿ.ಪಿ. ಯೋಗೇಶ್ವರ್ ದೆಹಲಿಗೆ ತೆರಳಿದ್ದಾರೆ. ಅವರು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ, ಎಚ್.ಡಿ.ಕುಮಾರ ಸ್ವಾಮಿ, ವಿ.ಸೋಮಣ್ಣ ಅವರನ್ನು ಭೇಟಿಯಾಗಿ ಸುದೀರ್ಘ ಮಾತುಕತೆ ನಡೆಸಿದರು. ಪುಟ 2



### ಜೈಲು ಸಿಬ್ಬಂದಿ ಪ್ರತಿಭಟನೆ

**ಬೆಂಗಳೂರು:** ಪರಪ್ಪನ ಅಗ್ರಹಾರಕ್ಕೆ ಜೈಲಿನಲ್ಲಿ ನಟ ದರ್ಶನ್‌ಗೆ ರಾಜಾತಿಥ್ಯ ಪ್ರಕರಣಕ್ಕೆ ಮತ್ತೊಂದು ತಿರುವು ಸಿಕ್ಕಿದೆ. ಕೆಎಸ್ಐಎಸ್ಎಫ್ ಅಧಿಕಾರಿ ಹಾಗೂ ಸಿಬ್ಬಂದಿ ವಿರುದ್ಧ ಕೇಂದ್ರ ಕಾರಾಗೃಹ ಸಿಬ್ಬಂದಿ ಪ್ರತಿಭಟಿಸಿದ್ದಾರೆ. ನಿನ್ನೆ ಶುಕ್ರವಾರ ಮಧ್ಯಾಹ್ನ ಜೈಲಿನ ಸುಮಾರು 100ಕ್ಕೂ ಹೆಚ್ಚು ಜೈಲಾಧಿಕಾರಿಗಳು, ಸಿಬ್ಬಂದಿ ಪ್ರತಿಭಟಿಸಿದ್ದಾರೆ. ನಟ ದರ್ಶನ್ ವಿಚಾರ ಅಷ್ಟೇ ಅಲ್ಲದೆ, ಜೈಲಿನ ಯಾವುದೇ ಅವ್ಯವಹಾರ ಬಯಲಿಗೆ ಬಂದಾಗಲೂ ಕೇವಲ ಜೈಲು ಸಿಬ್ಬಂದಿ ಮತ್ತು ಅಧಿಕಾರಿಗಳೇ ಟಾರ್ಗೆಟ್ ಆಗುತ್ತಿದ್ದಾರೆ. ಮಾಧ್ಯಮಗಳಲ್ಲೂ ಜೈಲು ಸಿಬ್ಬಂದಿ ಬಗ್ಗೆ ಮಾತ್ರ ಸುದ್ದಿಯಾಗುತ್ತಿದೆ. ಆದರೆ ಜೈಲಿಗೆ ಒಂದು ಇರುವೆ ಬರಬೇಕಾದರೂ ಕರ್ನಾಟಕ ಕೈಗಾರಿಕ ಭದ್ರತಾ ದಳದ ಅಧಿಕಾರಿಗಳು ಪರಿಶೀಲನೆ ನಡೆಸಬೇಕು. ಜೈಲಿನ ಸಿಬ್ಬಂದಿಯ ಶೂ, ಬೆಲ್ಟ್ ತೆಗೆಸಿ ಕೆಎಸ್ಐಎಸ್ಎಫ್ ಅಧಿಕಾರಿಗಳು ಪರಿಶೀಲನೆ ಮಾಡುತ್ತಾರೆ. ಪುಟ 2








## ಕೇದಾರನಾಥದಲ್ಲಿ ಹೆಲಿಕಾಪ್ಟರ್ ಪತನ

**ಡೆಹ್ರಾಡೂನ್:** ದುರಸ್ತಿಗಾಗಿ ಎತ್ತಿಕೊಂಡು ಸಾಗುತ್ತಿದ್ದಾಗ ಖಾಸಗಿ ಹೆಲಿಕಾಪ್ಟರ್ ಪತನಗೊಂಡ ಘಟನೆ ಉತ್ತರಾಖಂಡದ ಕೇದಾರನಾಥದಲ್ಲಿ ನಡೆದಿದೆ. ಈ ಹಿಂದೆ ಉತ್ತರಾಖಂಡದ ಕೇದಾರನಾಥ ಧಾಮದಲ್ಲಿ ಲ್ಯಾಂಡಿಂಗ್ ಸಮಯದಲ್ಲಿ ಹಾನಿಗೊಳಗಾದ ಹೆಲಿಕಾಪ್ಟರ್ ಅನ್ನು ವಾಯುಸೇನೆಯ ಎಂಐ-17 ಹೆಲಿಕಾಪ್ಟರ್ ಎತ್ತಿಕೊಂಡು ಸಾಗುತ್ತಿತ್ತು. ಈ ವೇಳೆ ಹೆಲಿಕಾಪ್ಟರ್ ಜಾರಿ ಬಿದ್ದು ಮಂದಾಕಿನಿ ನದಿಯ ಬಳಿ ಪತನಗೊಂಡಿದೆ.

ಅಪಘಾತದಲ್ಲಿ ಯಾರಾದರೂ ಗಾಯಗೊಂಡಿದ್ದಾರೆಯೇ ಎಂಬುದು ತಕ್ಷಣ ತಿಳಿದು ಬಂದಿಲ್ಲ. ಹೆಲಿಕಾಪ್ಟರ್ ಪತನಗೊಳ್ಳುತ್ತಿರುವ ದೃಶ್ಯ ಕ್ಯಾಮೆರಾದಲ್ಲಿ ಸೆರೆಯಾಗಿದೆ.

» ಅಪಘಾತದಲ್ಲಿ ಯಾವುದೇ ಪ್ರಾಣಹಾನಿ ಅಥವಾ ಆಸ್ತಿ-ಪಾಸ್ತಿ ನಷ್ಟವಾಗಿಲ್ಲ?

ಭಾರೀ ಮಳೆಯಿಂದಾಗಿ ಖಾಸಗಿ ಕಂಪನಿ ನಿರ್ವಹಿಸುತ್ತಿದ್ದ ಹೆಲಿಕಾಪ್ಟರ್ ಹಾಳಾಗಿತ್ತು. ಈ ಹೆಲಿಕಾಪ್ಟರ್ ಅನ್ನು ದುರಸ್ತಿಗಾಗಿ ವಾಯುಸೇನೆಯ ಹೆಲಿಕಾಪ್ಟರ್ ಮೂಲಕ ಏರ್ ಲಿಫ್ಟ್ ಮಾಡಿ ತೆಗೆದುಕೊಂಡು ಹೋಗಲಾಗುತ್ತಿತ್ತು.

ಆಗಸ್ಟ್‌ನಲ್ಲಿ ಚಾರಣ ಮಾರ್ಗವನ್ನು ಹೆಚ್ಚಾಗಿ ಸ್ಥಗಿತಗೊಳಿಸಲಾಗಿದ್ದರೂ, ಯಾತ್ರಾರ್ಥಿಗಳು ಹೆಲಿಕಾಪ್ಟರ್‌ಗಳಲ್ಲಿ ಹಿಮಾಲಯ ದೇವಸ್ಥಾನಕ್ಕೆ ಆಗಮಿಸುತ್ತಿದ್ದಾರೆ.

## ಬಿಜೆಪಿಗೆ ಕೋವಿಡ್ ಉರುಳು | ಔಷಧ, ವೈದ್ಯಕೀಯ ಉಪಕರಣ ಹಗರಣ

# ಇಂದು ಸಿಎಂಗೆ ವರದಿ

**ಬೆಂಗಳೂರು:** ಮುಡಾ ಹಗರಣ, ವಾಲ್ಮೀಕಿ ನಿಗಮ ಹಗರಣದ ಬಗ್ಗೆ ದೊಡ್ಡ ಮಟ್ಟದ ಹೋರಾಟ ನಡೆಸುತ್ತಿರುವ ಬಿಜೆಪಿ ನಾಯಕರಿಗೆ ಬಿಗ್ ಶಾಕ್ ಸಿಗುವ ಸಾಧ್ಯತೆಯಿದೆ. ಕೋವಿಡ್ ಸಂದರ್ಭದಲ್ಲಿ 2 ಸಾವಿರ ಕೋಟಿ ರೂ. ಅಕ್ರಮ ನಡೆದಿದೆ ಎಂದು ಆರೋಪಿಸುತ್ತಿದ್ದ ಕಾಂಗ್ರೆಸ್ ನಾಯಕರಿಗೆ ಇಂದು ಪ್ರಬಲವಾದ ಅಸ್ತ್ರ ಸಿಗುವ ಸಾಧ್ಯತೆಯಿದೆ.

ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿದೆ ಎನ್ನಲಾದ ಕೋವಿಡ್ ಅಕ್ರಮಗಳ ತನಿಖೆಯನ್ನು ಪೂರ್ಣಗೊಳಿಸಿರುವ ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಜಾನ್ ಮೈಕಲ್ ಕುನ್ಹಾ ನೇತೃತ್ವದ ವಿಚಾರಣಾ ಆಯೋಗ ಇಂದು ಮಧ್ಯಾಹ್ನ ಸಿಎಂ ಸಿದ್ದರಾಮಯ್ಯನವರಿಗೆ ವರದಿ ಸಲ್ಲಿಸಲಿದೆ.

ಕಳೆದ ಬಿಜೆಪಿ ಸರ್ಕಾರ ಅವಧಿಯಲ್ಲಿ ಆರೋಗ್ಯ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ನಡೆದಿದೆ ಎನ್ನಲಾದ ಕೋವಿಡ್ ಹಗರಣದ ಬಗ್ಗೆ ಆಯೋಗ ತನಿಖೆ ನಡೆಸಿದೆ.

ಕೋವಿಡ್ ವೇಳೆ ಬಿಜೆಪಿ ಸರ್ಕಾರ ಔಷಧ, ವೈದ್ಯಕೀಯ ಉಪಕರಣ ಖರೀದಿಸಿತ್ತು. ಈ ಸಂಬಂಧ ಸಲ್ಲಿಸಲಾಗಿದ್ದ ಲೆಕ್ಕಪತ್ರ ಸಮಿತಿಯ ವರದಿಯಲ್ಲಿ ಅಕ್ರಮ ನಡೆದಿರುವ ಗಂಭೀರ ಆರೋಪ ಕೇಳಿ ಬಂದಿತ್ತು. ಕೋವಿಡ್ ನಿರ್ವಹಣೆ ತಡೆಗಟ್ಟಲು



ಔಷಧ, ಉಪಕರಣಗಳು ಹಾಗೂ ಸಾಮಾಗ್ರಿಗಳ ಖರೀದಿ, ಆಮ್ಲಜನಕ ನಿರ್ವಹಣೆ, ಆಮ್ಲಜನಕ ಕೊರತೆಯಿಂದ ಉಂಟಾದ ಸಾವುಗಳ ಕುರಿತು ಆಯೋಗ ತನಿಖೆ ನಡೆಸಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ವಿರೋಧ ಪಕ್ಷದ ನಾಯಕರಾಗಿದ್ದ ಸಿದ್ದರಾಮಯ್ಯ, ಕೋವಿಡ್ ಭ್ರಷ್ಟಾಚಾರ ಕುರಿತ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ತನಿಖಾ ಆಯೋಗ ರಚಿಸಬೇಕು ಎಂದು ಆಗ್ರಹಿಸಿದ್ದರು. ಆದರೆ ಬಿಜೆಪಿ ಸರ್ಕಾರ ಈ ಆರೋಪವನ್ನು ತಳ್ಳಿ ಹಾಕಿತ್ತು. ಕಾಂಗ್ರೆಸ್ ಸರ್ಕಾರ ಅಧಿಕಾರ ಬಂದ ನಂತರ ಜಾನ್ ಮೈಕಲ್ ಡಿ ಕುನ್ಹಾ ನೇತೃತ್ವದ ವಿಚಾರಣಾ ಆಯೋಗವನ್ನು ರಚಿಸಿತ್ತು.

## ಹಾಸನದಲ್ಲಿ ನಕಲಿ ಆಧಾರ್ ತೋರಿಸಿ ಕೆಲಸ ಗಿಟ್ಟಿಸಿಕೊಳ್ಳುವ ಬಾಂಗ್ಲಾ ಅಕ್ರಮ ವಲಸಿಗರು

**ಹಾಸನ:** ನಕಲಿ ದಾಖಲೆಗಳೊಂದಿಗೆ ಅಸ್ಸಾಂ ಮೂಲದವರೆಂದು ಕಾರ್ಮಿಕರ ರೂಪದಲ್ಲಿ ನೆರೆಯೂರುತ್ತಿರುವ ಬಗ್ಗೆ ಗಂಭೀರ ಆರೋಪ ಹಾಸನ ಜಿಲ್ಲೆಯ ಆಲೂರು, ಬೇಲೂರು, ಸಕಲೇಶಪುರ, ಅರಕಲಗೂಡು ಭಾಗದಲ್ಲಿ ಕೇಳಿಬರುತ್ತಿದೆ.

ಕೂಲಿ ಕೆಲಸಗಾರರ ಸೋಗಿನಲ್ಲಿ ಬಾಂಗ್ಲಾದ ಅಕ್ರಮ ವಲಸಿಗರು ಅಸ್ಸಾಂ ಮೂಲದವರೆಂದು ಹೇಳಿಕೊಂಡು ನಕಲಿ ಆಧಾರ್ ಕಾರ್ಡ್ ಬಳಸಿಕೊಂಡು ವಿವಿಧೆಡೆ ಕೆಲಸದ ನೆಪ ಒಡ್ಡಿ ವಲಸೆ ಬರುತ್ತಿದ್ದರು. ಕಾರ್ಮಿಕರ ಕೊರತೆಯನ್ನು ಅರಿತುಕೊಂಡು ಅದನ್ನೇ ಬಂಡವಾಳ ಮಾಡಿಕೊಂಡ ಕೆಲವು ಏಜೆಂಟ್‌ರಿಂದ ನಕಲೆ ದಾಖಲೆ ಸೃಷ್ಟಿಸಿ ಮೋಸ ಮಾಡುತ್ತಿರುವುದು ಕೇಳಿ ಬಂದಿತ್ತು. ನೂರಾರು ಸಂಖ್ಯೆಯಲ್ಲಿ ಅಪರಿಚಿತರು ರಾತ್ರೋರಾತ್ರಿ ಬಸ್ಸಿನಲ್ಲಿ ಬಂದಿಳಿದು, ನಕಲಿ ಆಧಾರ್ ಕಾರ್ಡ್ ಬಳಸಿಕೊಂಡು ಕೆಲಸ ಹುಡುಕುತ್ತಿದ್ದರು. ಪುಟ 2



## ಪವಿತ್ರಾ, ಗೌಡ ಮನೆಯಲ್ಲಿ ಸೊರಗಿ ಹೋಗಿದ್ದ ಶ್ವಾನಗಳು ದರ್ಶನ್ ಮನೆಗೆ ಶಿಫ್ಟ್

**ಬೆಂಗಳೂರು:** ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ಪವಿತ್ರಾ, ಗೌಡ ಅವರ ಮನೆಯಲ್ಲಿದ್ದ ಶ್ವಾನಗಳನ್ನು ಅಧಿಕಾರಿಗಳು ದರ್ಶನ್ ಮನೆಗೆ ಶಿಫ್ಟ್ ಮಾಡಿದ್ದಾರೆ.

ಪವಿತ್ರ ಗೌಡ ಮನೆಯಲ್ಲಿದ್ದ ಬುಲ್ ಡಾಗ್ ಹಾಗೂ ಬೆಲ್ಜಿಯನ್ ಮಾಲಿನೋಯಿಸ್ ತಳಿಯ ಶ್ವಾನಗಳನ್ನು ದರ್ಶನ್ ಮನೆಗೆ ಶಿಫ್ಟ್ ಮಾಡಲಾಗಿದೆ. ಪವಿತ್ರಾ ಮನೆಯಲ್ಲಿ ಪವನ್ ಈ ಶ್ವಾನಗಳನ್ನ ನೋಡಿಕೊಳ್ಳುತ್ತಿದ್ದ. ಆತ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಕಂಬಿ ಹಿಂದೆ ಸೇರಿದ್ದಾನೆ. ಇದರಿಂದ ಮನೆಯಲ್ಲಿ ಶ್ವಾನವನ್ನ ನೋಡಿಕೊಳ್ಳಲು ಯಾರು ಇಲ್ಲದ ಕಾರಣ ನಾಯಿಗಳು ಸೊರಗಿ ಹೋಗಿದ್ದವು. ಇದೇ ಕಾರಣಕ್ಕೆ ಶ್ವಾನಗಳನ್ನ ಅಧಿಕಾರಿಗಳು ದರ್ಶನ್ ಮನೆಗೆ ಸ್ಥಳಾಂತರಿಸಿದ್ದಾರೆ.

ಶ್ವಾನಗಳು ಸೊರಗಿ ಹೋಗುತ್ತಿರುವ ವಿಚಾರ ಪೀಪಲ್ಸ್ ಫಾರ್ ಅನಿಮಲ್ಸ್ ಸಂಸ್ಥೆಯ ಹರೀಶ್ ಹಾಗೂ ಲೀನಾ ಅವರು ಆರ್.ಆರ್ ನಗರ ಪೊಲೀಸ್ ಠಾಣೆ ಮತ್ತು ಪಶುಸಂಗೋಪನಾ ಇಲಾಖೆಯ



ಗಮನಕ್ಕೆ ತಂದಿದ್ದರು. ಇದೀಗ ಅಧಿಕಾರಿಗಳ ನೆರವಿನಿಂದ ಪವಿತ್ರಾಗೌಡ ಮನೆಯಲ್ಲಿದ್ದ ಎರಡು ಶ್ವಾನಗಳನ್ನ ದರ್ಶನ್ ಮನೆಗೆ ಶಿಫ್ಟ್ ಮಾಡಿದ್ದಾರೆ. ಉಳಿದ ಮತ್ತೊಂದು ಶ್ವಾನವನ್ನ ಪವಿತ್ರಾ ಸ್ನೇಹಿತರು ತೆಗೆದುಕೊಂಡು ಹೋಗಿದ್ದಾರೆ.

ಇದೀಗ ದರ್ಶನ್ ಮನೆಯಲ್ಲಿ 2 ನಾಯಿಗಳ ಪಾಲನೆ ಮಾಡಲಾಗುತ್ತಿದ್ದು, ಅವುಗಳು ಸುರಕ್ಷಿತವಾಗಿವೆ ಎಂದು ತಿಳಿದು ಬಂದಿದೆ.

## ಕಲುಷಿತ ನೀರು ಸೇವಿಸಿ ಅಸ್ವಸ್ಥಗೊಂಡವರ ಸಂಖ್ಯೆ ಹೆಚ್ಚಳ

**ದಾವಣಗೆರೆ:** ಜಿಲ್ಲೆಯ ಚನ್ನಗಿರಿ ತಾಲೂಕಿನ ಜೋಳದಾಳ್ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ ಅಸ್ವಸ್ಥಗೊಂಡವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದೆ. ಇದೀಗ ಮತ್ತೆ ವಾಂತಿ ಭೇದಿಯಿಂದ ವಿವಿಧ ಆಸ್ಪತ್ರೆಗಳಿಗೆ ಜನ ದಾಖಲಾಗಿದ್ದಾರೆ. 52 ಮಂದಿ ಚನ್ನಗಿರಿ ಆಸ್ಪತ್ರೆ, ಭದ್ರಾವತಿ, ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆರೋಗ್ಯ ಇಲಾಖೆ ಸಿಬ್ಬಂದಿ ಜೋಳದಾಳ್‌ನಲ್ಲೇ ಬೀಡು ಬಿಟ್ಟಿದ್ದಾರೆ. ಸದ್ಯ ಯಾವುದೇ ಪ್ರಾಣಾಪಾಯ ಇಲ್ಲ, ಈಗಾಗಲೇ 15 ಜನ ಗುಣಮುಖರಾಗಿದ್ದಾರೆ ಎಂದು ದಾವಣಗೆರೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ ಮಾಹಿತಿ



ನೀಡಿದ್ದಾರೆ. ಪ್ರಾಥಮಿಕ ಮಾಹಿತಿ ಪ್ರಕಾರ ಕಾಲರ ನೆಗೆಟಿವ್ ಬಂದಿದೆ. ಗ್ರಾಮದಲ್ಲಿ ಆಂಬ್ಯುಲೆನ್ಸ್ ನಿಯೋಜನೆ ಮಾಡಲಾಗಿದೆ. ಸಿಬ್ಬಂದಿ ನೇಮಕ ಮಾಡಿ ಮುಂಜಾಗ್ರತ ಕ್ರಮವಾಗಿ ನೀರು ಪೂರೈಕೆ ಮಾಡಲಾಗುತ್ತಿದೆ. ಗ್ರಾಮದ ಪ್ರತಿಯೊಬ್ಬರಿಗೂ ತಪಾಸಣೆ ಮಾಡಲಾಗುತ್ತಿದ್ದಿ ಕಾಯಿಸಿ ಆರಿಸಿದ ನೀರು ಕುಡಿಯುವಂತೆ ಸೂಚನೆ ನೀಡಲಾಗಿದೆ. ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿನ ಜೋಳದಾಳ ಗ್ರಾಮಕ್ಕೆ ಚನ್ನಗಿರಿ ಇಓ ಬಿ.ಕೆ.ಉತ್ತಮ್, ಕುಡಿಯುವ ನೀರು ವಿಭಾಗದ ಎಇಇ ಲೋಹಿತ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ನೀರಿನ ಮಾದರಿ ಸಂಗ್ರಹ ಮಾಡಲಾಗಿದೆ. ಗ್ರಾಮದಲ್ಲಿ ವೈದ್ಯರ ತಂಡ ಠಿಕಾಣಿ ಹೂಡಿದೆ.

ಬುಧವಾರ ರಾತ್ರಿಯಿಂದಲೇ ಕೆಲವರ ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಂಡಿತ್ತು. ತಕ್ಷಣ ಆಸ್ಪತ್ರೆಗೆ ರವಾನಿಸಿ ಚಿಕಿತ್ಸೆ ಕೊಡಿಸಲಾಗಿದೆ. ಮೊದಲು ನಾಲ್ಕು ಜನರರಲ್ಲಿ ವಾಂತಿ ಬೇಧಿ ಕಂಡು ಬಂದಿತ್ತು. ಬಳಿಕ 25 ಜನ, ಇದೀಗ 52 ಜನ ಚಿಕಿತ್ಸೆ ಪಡೆಯುತ್ತಿದ್ದಾರೆ.

## ಯುವತಿಗೆ ಡ್ರಗ್ಸ್ ನೀಡಿ ಅತ್ಯಾಚಾರ



**ಉಡುಪಿ:** ಕಾರ್ಕಳದಲ್ಲಿ ಯುವತಿಗೆ ಡ್ರಗ್ಸ್ ನೀಡಿ ಅತ್ಯಾಚಾರ ನಡೆಸಿದ್ದ ಪ್ರಕರಣಕ್ಕೆ ಸಂಬಂಧಿಸಿ ಯುವತಿಗೆ ನೀಡಲಾಗಿದ್ದ ಡ್ರಗ್ಸ್ ಯಾವುದು ಎಂಬ ಮಾಹಿತಿ ಸಿಕ್ಕಿದೆ. ಪೊಲೀಸ್ ತನಿಖೆ ವೇಳೆ ಆರೋಪಿಗಳು ಸ್ಫೋಟಕ ಮಾಹಿತಿ ಬಾಯಿಬಿಟ್ಟಿದ್ದಾರೆ. ಯುವತಿಗೆ ಸಿಂಥೆಟಿಕ್ ಡ್ರಗ್ಸ್ ನೀಡಿ ಅತ್ಯಾಚಾರವೆಸಗಲಾಗಿತ್ತು ಎಂಬ ಮಾಹಿತಿ ಸಿಕ್ಕಿದೆ.

ಆರೋಪಿ ಅಲ್ತಾಫ್ ಕಾರಿನಲ್ಲಿ ಕರೆದೊಯ್ದು ಯುವತಿ ರೇಪ್ ಮಾಡಿದ್ದ. ಯುವತಿಗೆ ಸಿಂಥೆಟಿಕ್ ಡ್ರಗ್ಸ್ ನೀಡಲಾಗಿತ್ತು. ಆದರೆ ಅಲ್ತಾಫ್ ಡ್ರಗ್ಸ್ ಬಂದಿದ್ದು ಎಲ್ಲಿಂದ ಎಂಬ ಪ್ರಶ್ನೆಗೆ ಇದೀಗ ಉತ್ತರ ಸಿಕ್ಕಿದೆ. ಅಲ್ತಾಫ್ ಟೀಂ ಬೆಂಗಳೂರಿಗೆ ತೆರಳಿ ವ್ಯಕ್ತಿಯೋರ್ವನಿಂದ ಡ್ರಗ್ಸ್ ಖರೀದಿಸಿದ್ದರು. ಅದೇ ಡ್ರಗ್ಸ್ ಅನ್ನು ಮದ್ಯದಲ್ಲಿ ಬರೆಸಿ ಯುವತಿಗೆ ಕುಡಿಸಿ ಅಲ್ತಾಫ್ ಅತ್ಯಾಚಾರ ಎಸಗಿದ್ದ.

### ಪೆಡ್ಲರ್ ಪರಿಚಯವಾಗಿದ್ದು ಹೇಗೆ?

ಬಿಜೆಪಿ ಕಾರ್ಯಕರ್ತ ಅಭಯ್ ಮೂಲಕ ಅಲ್ತಾಫ್‌ಗೆ ಬೆಂಗಳೂರು ಮೂಲದ ಡ್ರಗ್ಸ್ ಸೇಲ್ ಮಾಡುವ ವ್ಯಕ್ತಿಯೋರ್ವ ಪರಿಚಯವಾಗಿದ್ದ. ಆರೋಪಿ ಅಭಯ್ ತನ್ನ ಜೊತೆ ಅಲ್ತಾಫ್ ಇತರರನ್ನು ಬೆಂಗಳೂರಿಗೆ ಕರೆದೊಯ್ದು ಡ್ರಗ್ಸ್ ಖರೀದಿಸಿ ಬಳಿಕ ಖರೀದಿಸಿದ್ದ ಡ್ರಗ್ಸ್ ಅನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡಿದ್ದರು. ಉಳಿದ ಡ್ರಗ್ಸ್ ಅನ್ನ ಅಲ್ತಾಫ್ ಕೃತ್ಯಕ್ಕೆ ಬಳಕೆ ಮಾಡಿದ್ದ. ಇದುವರೆಗೆ ಪ್ರಕರಣ ಸಂಬಂಧ ಐವರನ್ನು ಅರೆಸ್ಟ್ ಮಾಡಲಾಗಿದೆ. ಕಾರ್ಕಳ ನಗರ ಠಾಣಾ ಪೊಲೀಸರು ಕಾರ್ಯಾಚರಣೆ ಮುಂದುವರೆಸಿದ್ದಾರೆ.

## ದರ್ಶನ್ ಬರುತ್ತಿದ್ದಂತೆ ಇತರ ಖೈದಿಗಳಿಗೆ ಸಂಕಷ್ಟ

# ಜೈಲ್ ಕ್ಯಾಂಟೀನ್ ಕ್ಲೋಸ್

**ಬೆಂಗಳೂರು:** ನಟ ದರ್ಶನ್ ಬಂದ ವಿಚಾರ ಕೇಳಿ ಬಳ್ಳಾರಿಯ ಕೆಲ ಖೈದಿಗಳು ಸಂಭ್ರಮಿಸಿದ್ದರು. ದರ್ಶನ್ ಎಲ್ಲಾದರೂ ನೋಡಲು ಸಿಗಬಹುದು ಎಂದು ಅನೇಕರು ಅಂದುಕೊಂಡಿದ್ದರು. ಆದರೆ, ಈಗ ಅವರಿಗೆ ದರ್ಶನ್‌ನಿಂದಲೇ ಸಂಕಷ್ಟ ಎದುರಾಗಿದೆ. ದರ್ಶನ್ ಬರುತ್ತಿದ್ದಂತೆ ಜೈಲ್ ಒಳಭಾಗದಲ್ಲಿದ್ದ ಕ್ಯಾಂಟೀನ್ ಕ್ಲೋಸ್ ಮಾಡಿಸಲಾಗಿದೆ. ಹೀಗಾಗಿ, ಜೈಲಿನಲ್ಲಿ ಏನು ಕೊಡುತ್ತಾರೋ ಅದನ್ನೇ ತಿಂದು ಬದುಕಬೇಕಾದ ಪರಿಸ್ಥಿತಿ ಬಂದೊದಗಿದೆ. ಒಪ್ಪಿಗೆ ಇರುವ ಕೆಲ ವಸ್ತುಗಳನ್ನು ಕ್ಯಾಂಟೀನ್‌ನಲ್ಲಿ ಇಡಲಾಗುತ್ತಿತ್ತು. ಇದನ್ನು ಖೈದಿಗಳು ಖರೀದಿ ಮಾಡುತ್ತಿದ್ದರು. ಈಗ ಕ್ಯಾಂಟೀನ್ ಇಲ್ಲದೆ ಕೇವಲ ಜೈಲು ಊಟ ಮಾಡುವ ಪರಿಸ್ಥಿತಿ ಬಂದೊದಗಿದೆ. ದರ್ಶನ್ ಅವರು ಬೆಂಗಳೂರಿನ ಜೈಲಿನಲ್ಲಿ ಇದ್ದಾಗ ಅವರಿಗೆ ಸಾಕಷ್ಟು ಸೌಕರ್ಯ ಮಾಡಿಕೊಡಲಾಗಿತ್ತು. ಹೀಗಾಗಿ, ದರ್ಶನ್ ಅವರನ್ನು ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡಲಾಗಿದೆ. ಇಲ್ಲಿ ಆ ರೀತಿ ಆಗಬಾರದು ಎನ್ನುವ ಕಾರಣಕ್ಕೆ ಎಚ್ಚರಿಕೆ ವಹಿಸಲಾಗುತ್ತಿದೆ. ಪುಟ 2



### ಖೈದಿಗಳು ಶಿಫ್ಟ್

ದರ್ಶನ್ ಇರುವ ಹೈ ಸೆಕ್ಯುರಿಟಿ ಜೈಲ್ ವಿಭಾಗದಿಂದ ಐದು ಕೈದಿಗಳನ್ನು ಬೇರೆ ವಿಭಾಗಕ್ಕೆ ಸ್ಥಳಾಂತರಿಸಲಾಗಿದೆ. ಹೈ ಸೆಕ್ಯುರಿಟಿ ಸೆಲ್‌ನಲ್ಲಿ ಈಗ ದರ್ಶನ ಸೇರಿ ಕೇವಲ ಮೂವರು ಖೈದಿಗಳು ಮಾತ್ರ ಇದ್ದಾರೆ. ಅವರಿಗೆ ಒಂಟಿತನ ಬಹುವಾಗಿ ಕಾಡುತ್ತಿದೆ. ದರ್ಶನ್ ಅವರನ್ನು ಭೇಟಿ ಮಾಡಲು ಪತ್ನಿ ಪವಿತ್ರಾ, ಗೌಡ ಶೀಘ್ರವೇ ಬಳ್ಳಾರಿಗೆ ಬರಲಿದ್ದಾರೆ.

## ಪಿಯು ಕಬಡ್ಡಿ ಟೂರ್ನಿ ವೇಳೆ ಜಗಳ

# ಮಚ್ಚು ಬೀಸಿದ ವಿದ್ಯಾರ್ಥಿ



**ಹಾಸನ:** ಕಬಡ್ಡಿ ಪಂದ್ಯದ ವೇಳೆ ಪಿಯು ವಿದ್ಯಾರ್ಥಿಗಳ ನಡುವೆ ಗಲಾಟೆ ಶುರುವಾಗಿ ಮಾತಿಗೆ ಮಾತು ಬೆಳೆದು ಜಗಳ ತಾರಕಕ್ಕೇರಿ ವಿದ್ಯಾರ್ಥಿಗಳು ಪರಸ್ಪರ ಬಡಿದಾಡಿಕೊಂಡು ಮಚ್ಚು ಬೀಸಿರುವ ಘಟನೆ ಹಾಸನ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದಿದೆ.

ಆ.30 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಪಿಯುಸಿ ಕಾಲೇಜುಗಳ ಕ್ರೀಡಾಕೂಟದಲ್ಲಿ ಕಬಡ್ಡಿ ಪಂದ್ಯ ನಡೆಯುತ್ತಿದ್ದ ವೇಳೆ ಈ ಘಟನೆ ನಡೆದಿದೆ. ಎರಡು ಕಾಲೇಜು ವಿದ್ಯಾರ್ಥಿಗಳ ಗುಂಪಿನ ನಡುವೆ ಜಗಳ ಶುರುವಾಗಿದೆ. ಈ ವೇಳೆ ಅಪ್ರಾಪ್ತ ವಿದ್ಯಾರ್ಥಿ ಮೇಲೆ ಮತ್ತೋರ್ವ ಅಪ್ರಾಪ್ತ ವಿದ್ಯಾರ್ಥಿ ಬ್ಯಾಗ್‌ನಲ್ಲಿ ಇಟ್ಟುಕೊಂಡಿದ್ದ ಮಚ್ಚು ತೆಗೆದು ಹಲ್ಲೆಗೆ ಮುಂದಾಗಿದ್ದು, ಕೂದಲೆಳೆ ಅಂತರದಲ್ಲಿ ಅಪ್ರಾಪ್ತ ವಿದ್ಯಾರ್ಥಿ ಪಾರಾಗಿದ್ದಾನೆ. ಪುಟ 2

## ದರ್ಶನ್ ಪ್ರಕರಣದಲ್ಲಿ ಸೇರುತ್ತಲೇ ಇವೆ ಹೊಸ ಸಾಕ್ಷಿಗಳು

**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ಪ್ರಕರಣದ ಆರೋಪಿ ನಟ ದರ್ಶನ್ ಹಾಗೂ ಗ್ಯಾಂಗ್ ಜೈಲು ಸೇರಿ ಮೂರು ತಿಂಗಳಾಗುತ್ತಾ ಬಂದಿದೆ. ಪೊಲೀಸರು ಸಹ ತನಿಖೆ ಮುಗಿಸಿ ಚಾರ್ಜ್ ಶೀಟ್ ಸಲ್ಲಿಸಲು ತಯಾರಾಗಿದ್ದಾರೆ. ಇನ್ನು ಕೆಲವೇ ದಿನಗಳಲ್ಲಿ ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಕೆ ಆಗಲಿದೆ. ಪ್ರಕರಣದ ಆಳಕ್ಕಿಳಿದಿರುವ ಪೊಲೀಸರಿಗೆ ಸಾಕ್ಷ್ಯಗಳ ಮೇಲೆ ಸಾಕ್ಷ್ಯ ಸಿಗುತ್ತಲೇ ಸಾಗುತ್ತಿವೆ. ಆ ಸಾಕ್ಷ್ಯಗಳ ಪರಿಶೀಲನೆ, ಮರು ಪರಿಶೀಲನೆಗಳನ್ನು ಪೊಲೀಸರು ಮಾಡುತ್ತಿದ್ದಾರೆ.

ಇದೀಗ ಇನ್ನೂ ಎರಡು ಹೊಸ ಸಾಕ್ಷ್ಯಗಳನ್ನು ಪಟ್ಟಿಗೆ ಸೇರಿಸಿಕೊಂಡಿದ್ದಾರೆ. ಮೂಲಗಳ ಪ್ರಕಾರ ದರ್ಶನ್ ವಿರುದ್ಧ 4500 ಪುಟಗಳ ಸವಿವರವಾದ ಆರೋಪ ಪಟ್ಟಿಯನ್ನು ಪೊಲೀಸರು ಸಿದ್ಧಪಡಿಸಿದ್ದಾರೆ. ಪ್ರಕರಣ ಸಂಬಂಧ 100ಕ್ಕೂ ಹೆಚ್ಚು ಸಾಕ್ಷ್ಯಗಳನ್ನು ಸಂಗ್ರಹಿಸಿದ್ದಾರೆ. ಹಲವಾರು ಮಂದಿಯ ಹೇಳಿಕೆಗಳನ್ನು ಪಡೆದು ದಾಖಲಿಸಿದ್ದಾರೆ.

150ಕ್ಕೂ ಹೆಚ್ಚು ಮಟೀರಿಯಲ್ ಎವಿಡೆನ್ಸ್‌ಗಳನ್ನು ಸಂಗ್ರಹಿಸಿದ್ದಾರೆ. ಡಿಜಿಟಲ್ ಎವಿಡೆನ್ಸ್‌ಗಳು ಸಹ ದೊಡ್ಡ ಸಂಖ್ಯೆಯಲ್ಲಿವೆ. ಹಲವು ವಸ್ತುಗಳನ್ನು ಬೆಂಗಳೂರು ಹಾಗೂ ಹೈದರಾಬಾದ್ ಎಫ್‌ಎಸ್‌ಎಲ್ ಕೇಂದ್ರಕ್ಕೆ ಕಳಿಸಿ ವರದಿ ತರಿಸಿಕೊಳ್ಳಲಾಗಿದೆ. ಇನ್ನು ಎಂಟು ವರದಿಗಳು ಹೈದರಾಬಾದ್ ಎಫ್‌ಎಸ್‌ಎಲ್‌ನಿಂದ ಬರಬೇಕಾಗಿದ್ದು ಆ ಎಂಟು ವರದಿಗಳಿಗಾಗಿ ಪೊಲೀಸರು ಕಾಯುತ್ತಿದ್ದಾರೆ.

**» ಕೆಲವೇ ದಿನಗಳಲ್ಲಿ ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಕೆ**

ಹದಿನೆಂಟು ವರದಿಗಳು ಹೈದರಾಬಾದ್ ಎಫ್‌ಎಸ್‌ಎಲ್ ಕೇಂದ್ರದಿಂದ ಬರಬೇಕಿತ್ತು ಆದರೆ 10 ಮಾತ್ರವೇ ಬಂದಿದ್ದು, ಬಾಕಿ ಇರುವ ವರದಿ ಪಡೆಯಲು ಪೊಲೀಸ್ ಸಿಬ್ಬಂದಿ ಅಲ್ಲಿಯೇ ಬೀಡು ಬಿಟ್ಟಿದ್ದಾರೆ. ಆರೋಪ ಪಟ್ಟಿ ತಯಾರಿಕೆ, ಸಾಕ್ಷ್ಯ ಸಂಗ್ರಹ ಇನ್ನಿತರೆ ವಿಚಾರಗಳ ಬಗ್ಗೆ ಡಿಜಿಪಿ ಅಲೋಕ್ ಮೋಹನ್, ಆಯುಕ್ತ ದಯಾನಂದ್ ಅವರು ತನಿಖಾಧಿಕಾರಿಗಳೊಟ್ಟಿಗೆ ನಿಯಮಿತ ಚರ್ಚೆಯಲ್ಲಿದ್ದಾರೆ. ಈಗ ತಯಾರಾಗಿರುವ ಆರೋಪ ಪಟ್ಟಿಯ ಬಗ್ಗೆ ವಕೀಲರ ಸಲಹೆಗಳನ್ನು ತೆಗೆದುಕೊಂಡಿದ್ದು, ಆರೋಪಿಗಳಿಗೆ ತಪ್ಪಿಸಿಕೊಳ್ಳಲು ಅವಕಾಶಗಳು ಸಿಗದಂತೆ ಶಿಸ್ತಿನ ಕಟ್ಟು-ನಿಟ್ಟಿನ ಆರೋಪ ಪಟ್ಟಿಯನ್ನು ಸಿದ್ಧಗೊಳಿಸಲಾಗುತ್ತಿದೆ.

ಇದರ ನಡುವೆ ಎರಡು ಲಾರಿಗಳನ್ನು ಸಹ ಸಾಕ್ಷ್ಯಗಳ ಪಟ್ಟಿಗೆ ಸೇರಿಸಿಕೊಳ್ಳಲಾಗಿದೆ. ಪಟ್ಟಣಗೆರೆ ಶೆಡ್‌ನಲ್ಲಿದ್ದ ಎರಡು ಲಾರಿಗಳನ್ನು ಮೆಟಿರಿಯಲ್ ಎವಿಡೆನ್ಸ್ ಎಂದು ಪರಿಗಣಿಸಲಾಗಿದ್ದು, ಅವುಗಳ ಮಾಲೀಕರ ಮಾಹಿತಿ ಮತ್ತು ಇತರೆ ಮಾಹಿತಿಗಳನ್ನು ಪಡೆಯಲು ಪೊಲೀಸರು ಆರ್‌ಟಿಓ ಅಧಿಕಾರಿಗಳಿಗೆ ಪತ್ರ ಬರೆದಿದ್ದಾರೆ. ದರ್ಶನ್ ಮತ್ತು ಗ್ಯಾಂಗ್, ರೇಣುಕಾ ಸ್ವಾಮಿಯನ್ನು ಆ ಲಾರಿಗಳಿಗೆ ನೂಕಿ ಹೊಡೆದಿದ್ದರಂತೆ. ಇದೇ ಕಾರಣಕ್ಕೆ ಆ ಲಾರಿಗಳನ್ನು ಸಹ ಸಾಕ್ಷ್ಯಗಳನ್ನಾಗಿ ಪರಿಗಣಿಸಿ ಸೀಜ್ ಮಾಡಲಾಗಿದೆ.



**ರಾಜ್ಯದ ರೈತರಿಗೆ ಗಣೇಶ ಹಬ್ಬಕ್ಕೆ ಕೇಂದ್ರದಿಂದ ಗಿಫ್ಟ್**

# ಉದ್ದು, ಸೋಯಾಬಿನ್ ಬೆಂಬಲ ಬೆಲೆಯಲ್ಲಿ ಖರೀದಿ

**ನವದೆಹಲಿ:** ರಾಜ್ಯದಲ್ಲಿ ಮತ್ತೆರೆಡು ಬೆಳೆಗಳನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ ಎಂದು ಕೇಂದ್ರ ಸಚಿವ ಗ್ರಾಹಕರ ವ್ಯವಹಾರ, ಆಹಾರ ಮತ್ತು ನಾಗರಿಕ ಸರಬರಾಜು ಖಾತೆಯ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ.

ರಾಜ್ಯದಲ್ಲಿ ಹೆಸರು, ಸೂರ್ಯಕಾಂತಿ ಜತೆಗೆ ಈಗ ಉದ್ದು ಮತ್ತು ಸೋಯಾಬಿನ್ ಅನ್ನೂ ಬೆಂಬಲ ಬೆಲೆಯಲ್ಲಿ ಖರೀದಿಸುವಂತೆ ರಾಜ್ಯ ಸರ್ಕಾರಕ್ಕೆ ಕೇಂದ್ರ ನಿರ್ದೇಶಿಸಿದೆ ಎಂದು ಹೇಳಿದ್ದಾರೆ.



ನಾಲ್ಕೈದು ದಿನಗಳ ಹಿಂದಷ್ಟೇ ಹೆಸರು ಮತ್ತು ಸೂರ್ಯಕಾಂತಿ ಬೆಳೆಯನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲು ಅನುಮತಿ ನೀಡಿದ್ದ ಕೇಂದ್ರ ಸರ್ಕಾರ, ಇದೀಗ ಉದ್ದು ಮತ್ತು ಸೋಯಾಬಿನ್ ಅನ್ನೂ ಬೆಂಬಲ ಬೆಲೆಯಲ್ಲಿ ಖರೀದಿಸಲು ಅನುಮೋದನೆ ನೀಡಿದೆ. ಈ ಮೂಲಕ ರಾಜ್ಯದ ರೈತರಿಗೆ ಗಣೇಶ ಹಬ್ಬದ ಗಿಫ್ಟ್ ನೀಡಿದೆ ಎಂದಿದ್ದಾರೆ ಸಚಿವ ಜೋಶಿ.

''ಹೆಸರು ಮತ್ತು ಸೂರ್ಯಕಾಂತಿ''ಗೆ ಬೆಂಬಲ ಬೆಲೆ ಘೋಷಿಸಿ ರಾಜ್ಯದಲ್ಲಿ ಖರೀದಿ ಕೇಂದ್ರ ತೆರೆಯುತ್ತಿದ್ದಂತೆಯೇ ಕೇಂದ್ರ ಕೃಷಿ ಸಚಿವಾಲಯ ಇದೀಗ ''ಉದ್ದು ಮತ್ತು ಸೋಯಾಬೀನ್'' ಗೂ ಬೆಂಬಲ ಬೆಲೆ ಖರೀದಿ ಕೇಂದ್ರ ತೆರೆಯಲು ರಾಜ್ಯ ಸರ್ಕಾರಕ್ಕೆ ಅನುಮತಿ ನೀಡಿದೆ.

ಕರ್ನಾಟಕದಲ್ಲಿ 2024-25 ರ ಮುಂಗಾರು ಹಂಗಾಮಿನಲ್ಲಿ ಬೆಂಬಲ ಬೆಲೆ ಯೋಜನೆಯಡಿ 19,760 ಮೆಟ್ರಿಕ್ ಟನ್ ಉದ್ದು ಹಾಗೂ 1,03,315 ಮೆಟ್ರಿಕ್ ಟನ್ ಸೋಯಾಬಿನ್ ಖರೀದಿಗೆ ಕೇಂದ್ರ ಸರ್ಕಾರ ಅಸ್ತು ಎಂದಿದೆ.

ಮುಕ್ತ ಮಾರುಕಟ್ಟೆಯಲ್ಲಿ ಈ ಬೆಳೆಗಳಿಗೆ ಬೆಲೆ ಕಡಿಮೆ ಇರುವುದರಿಂದ ಒಋಕ ಅಡಿಯಲ್ಲಿ ಖರೀದಿಸಿ ರೈತರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಈ ಕ್ರಮ ಕೈಗೊಂಡಿದೆ ಎಂದು ಸಚಿವ ಜೋಶಿ ತಿಳಿಸಿದ್ದಾರೆ.

ರಾಜ್ಯದಲ್ಲಿ 90 ದಿನಗಳ ಅವಧಿಗೆ ಖರೀದಿ ಕೇಂದ್ರ



ತೆರೆದು ಬೆಂಬಲ ಬೆಲೆ ಯೋಜನೆಯಡಿ ಉದ್ದು ಮತ್ತು ಸೋಯಾಬೀನ್ ಖರೀದಿಸುವಂತೆ ಕೇಂದ್ರ ಕೃಷಿ ಸಚಿವಾಲಯ ರಾಜ್ಯ ಸರ್ಕಾರಕ್ಕೆ ನಿನ್ನೆಯೇ (ಆ.29)ಆದೇಶ ಹೊರಡಿಸಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಉದ್ದಿನ ಕಾಳು 7400 ರೂ. ಮತ್ತು ಸೋಯಾಬಿನ್ ಗೆ 4892 ರೂ.. ಬೆಂಬಲ ಬೆಲೆಯನ್ನು ಕೇಂದ್ರ ಸರ್ಕಾರ ನಿಗದಿಪಡಿಸಿದೆ. ಕಳೆದ ವರ್ಷ 6,950 ರೂ.. ಇದ್ದ ಉದ್ದಿನ ಬೆಂಬಲ ಬೆಲೆ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ 450 ರೂ.. ಹೆಚ್ಚಳ ಕಂಡಿದೆ. 4600 ರೂ. ದರವಿದ್ದ ಸೋಯಾಬಿನ್ ಬೆಂಬಲ ಬೆಲೆ ಈಗ 292 ರೂ. ಹೆಚ್ಚಳವಾಗಿದೆ.

ತಕ್ಷಣ ಖರೀದಿ ಕೇಂದ್ರ ತೆರೆಯಲು ಒತ್ತಾಯ: ರಾಜ್ಯ ಸರ್ಕಾರ ತಕ್ಷಣವೇ ರಾಜ್ಯದ್ಯಂತ ಬೆಂಬಲ ಬೆಲೆ ಖರೀದಿ ಕೇಂದ್ರಗಳನ್ನು ಆರಂಭಿಸಿ ಹೆಸರು, ಸೂರ್ಯಕಾಂತಿ ಜತೆಗೆ ಉದ್ದು ಮತ್ತು ಸೋಯಾಬಿನ್ ಖರೀದಿ ಪ್ರಕ್ರಿಯೆಗೆ ಚಾಲನೆ ನೀಡಬೇಕೆಂದು ಸಚಿವ ಜೋಶಿ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಪ್ರಧಾನಿ ಸ್ಪಂದನೆ: ರಾಜ್ಯದ ರೈತರ ಸಮಸ್ಯೆಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಕೃಷಿ ಸಚಿವ ಶಿವರಾಜ್ ಸಿಂಗ್ ಸಿಂಗ್ ಚೌಹಾಣ್ ನಿರಂತರ ಸ್ಪಂದಿಸುತ್ತಲೇ ಬಂದಿದ್ದಾರೆ. ಇದೀಗ ನಾಲ್ಕು ಬೆಳೆಗಳಿಗೆ ಬೆಂಬಲ ಬೆಳೆ ಖರೀದಿ ಕೇಂದ್ರ ತೆರೆಯಲು ಅನುಮತಿ ನೀಡಿದ್ದಾರೆಂದು ಸಚಿವ ಪ್ರಲ್ಹಾದ ಜೋಶಿ ಧನ್ಯವಾದ ಹೇಳಿದ್ದಾರೆ.



# ಗಣೇಶ ಕೂರಿಸಲು ಅನುಮತಿ ಕಡ್ಡಾಯ

**ಬೆಂಗಳೂರು:** ಗೌರಿ ಗಣೇಶ ಹಬ್ಬದ ಹಿನ್ನೆಲೆ ನಗರದ ಪೊಲೀಸ್ ಆಯುಕ್ತ ಬಿ.ದಯಾನಂದ್ ಅವರು ಹಬ್ಬ ಆಚರಿಸುವವರಿಗೆ ಹಾಗೂ ಸಾರ್ವಜನಿಕರಿಗೆ ನಿಯಮಗಳನ್ನು ಪಾಲಿಸುವಂತೆ ಸೂಚನೆ ನೀಡಿದ್ದಾರೆ. ಈ ಬಗ್ಗೆ ಮಾರ್ಗಸೂಚಿ ಬಿಡುಗಡೆ ಮಾಡಿರುವ ಪೊಲೀಸ್ ಇಲಾಖೆ, ಪ್ರತಿಷ್ಠಾಪನೆಗೂ ಮುನ್ನ ಸಂಬಂಧಪಟ್ಟವರ ಅನುಮತಿ ಪಡೆಯಬೇಕು. ಸಾರ್ವಜನಿಕರಿಗೆ ವಾಹನ ಸವಾರರಿಗೆ ತೊಂದರೆಯಾಗಬಾರದು. 63 ಜನ ನೋಡಲ್ ಅಧಿಕಾರಿಗಳು ನಗರದಾದ್ಯಂತ ಕಾರ್ಯನಿರ್ವಹಿಸಲಿದ್ದಾರೆ. ಬಲವಂತವಾಗಿ ಚಂದ ಎತ್ತುವವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು. ಸಾರ್ವಜನಿಕರ ಗಮನಕ್ಕೆ ಬಂದರೆ ನಮ್ಮ ಗಮನಕ್ಕೆ ತರಬೇಕು.

**63 ಜನ ನೋಡಲ್ ಅಧಿಕಾರಿಗಳ ನೇಮಕ**

## ಮಾರ್ಗಸೂಚಿಯಲ್ಲಿ ಏನಿದೆ?

ಗಣೇಶ ಪ್ರತಿಷ್ಠಾಪನೆಗೆ ಶಾಮಿಯಾನ ಹಾಕಲು ಬಿಬಿಎಂಪಿ ಅನುಮತಿ ಪಡೆಯುವುದು ಕಡ್ಡಾಯ. ವಿವಾದಿತ ಸ್ಥಳದಲ್ಲಿ ಗಣೇಶ ಪ್ರತಿಷ್ಠಾಪನೆ ಮಾಡುವಂತಿಲ್ಲ. ಫ್ಲೆಕ್ಸ್ ಮತ್ತು ಬ್ಯಾನರ್ ಸಂಬಂಧಿಸಿದಂತೆ ಹೈಕೋರ್ಟ್ ಮತ್ತು ಬಿಬಿಎಂಪಿ ನಿಯಮ ಪಾಲಿಸಬೇಕು.

ಪಿಒಪಿ ಗಣೇಶ ಸಂಬಂಧಿಸಿದಂತೆ ನಿಯಮಗಳನ್ನು ಪಾಲಿಸಬೇಕು. ಇದಕ್ಕೆ ಸಂಬಂಧಿಸಿದಂತೆ ಮಾಲಿನ್ಯ ನಿಯಂತ್ರಣ ಮಂಡಳಿಯವರು ಕ್ರಮ ತೆಗೆದುಕೊಳ್ಳುತ್ತಾರೆ. ಇಬ್ಬರು ಆಯೋಜಕರು ಗಣೇಶ ಕೂರಿಸುವ ಸ್ಥಳದಲ್ಲಿ ಇರಬೇಕು.

ಅಗ್ನಿಶಾಮಕ ದಳದವರ ಸಹಾಯ ಪಡೆಯಬೇಕು ಮತ್ತು ಬೆಳಕಿನ ವ್ಯವಸ್ಥೆ ಇರಬೇಕು. ಯಾವುದೇ ರೀತಿಯ ನೂಕು



ನುಗ್ಗಲಿಗೆ ಅವಕಾಶ ಮಾಡಿಕೊಡಬಾರದು. ಮನರಂಜನೆ ಕಾರ್ಯಕ್ರಮಕ್ಕೆ ಮೊದಲೇ ಅನುಮತಿ ಪಡೆಯಬೇಕು. ಮನರಂಜನಾ ಕಾರ್ಯಕ್ರಮಕ್ಕೆ ರಾತ್ರಿ 10ರ ವರೆಗೆ ಮಾತ್ರ ಅವಕಾಶ. ಧ್ವನಿವರ್ಧಕಗಳಿಗೆ ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆವರೆಗೆ ಅವಕಾಶ. ಯಾವುದೇ ಡಿಜೆ ಸೌಂಡ್ ಸಿಸ್ಟಮ್‌ಗೆ ಯಾವ ಸಮಯದಲ್ಲೂ ಅವಕಾಶ ಇಲ್ಲ ಎಂದು ಇಲಾಖೆ ಸ್ಪಷ್ಟಪಡಿಸಿದೆ.

ಸಂಚಾರ ಒತ್ತಡವಿರುವ ರಸ್ತೆಗಳಲ್ಲಿ ಗಣೇಶ ಪ್ರತಿಷ್ಠಾಪಿಸುವಂತಿಲ್ಲ. ನಿಗದಿ ಪಡಿಸಿದ ಮಾರ್ಗದಲ್ಲೇ ಗಣೇಶ ವಿಸರ್ಜನಾ ಮೆರವಣಿಗೆ ತೆರಳಬೇಕು. ಪೂರ್ವನಿಯೋಜಿತ ವಿಸರ್ಜನಾ ಸ್ಥಳದಲ್ಲೇ ಗಣೇಶ ವಿಸರ್ಜಿಸಬೇಕು. 21 ರಂದು ನಡೆದ ಸಭೆಯಲ್ಲಿ ಈ ಎಲ್ಲಾ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಇಲಾಖೆಯ ಗೈಡ್ ಲೈನ್‌ನಲ್ಲಿ ತಿಳಿಸಲಾಗಿದೆ.

## ಮಾಜಿ ಮುಡಾ ಆಯುಕ್ತನಿಗೆ ರಾಜ್ಯ ಸರ್ಕಾರದಿಂದ ಭರ್ಜರಿ ಗಿಫ್ಟ್

**ಮೈಸೂರು:** ಮಾಜಿ ಮುಡಾ ಆಯುಕ್ತನಿಗೆ ರಾಜ್ಯ ಸರ್ಕಾರದಿಂದ ಭರ್ಜರಿ ಗಿಫ್ಟ್ ಸಿಕ್ಕಿದೆ. ಕೆಎಎಸ್ ಅಧಿಕಾರಿ ಜಿ.ಟಿ ದಿನೇಶ್ ಕುಮಾರ್ ಅವರನ್ನು ಹಾವೇರಿ ವಿಶ್ವವಿದ್ಯಾಲಯದ ಕುಲಸಚಿವರಾಗಿ ವರ್ಗಾವಣೆ ಮಾಡಲಾಗಿದೆ.



50:50 ಅನುಪಾತದಡಿ ಮುಡಾದಲ್ಲಿ ನಡೆದಿರುವ ಬ್ರಹ್ಮಾಂಡ ಭ್ರಷ್ಟಾಚಾರದಲ್ಲಿ ಕೆಎಎಸ್ ಅಧಿಕಾರಿ ಜಿ.ಟಿ.ದಿನೇಶ್ ಕುಮಾರ್ ಅವರ ಮೇಲೆ ಗಂಭೀರ ಆರೋಪ ಕೇಳಿ ಬಂದಿತ್ತು. ಈ ಆರೋಪ ಕೇಳಿ ಬಂದ ತಕ್ಷಣ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಮೈಸೂರಿಗೆ ಆಗಮಿಸಿ ಬಳಿಕ ಸಭೆ ನಡೆಸಿದ್ದರು. ಯಾವುದೇ ಸ್ಥಳ ತೋರಿಸದೇ ಮುಡಾ ಆಯುಕ್ತರಾಗಿದ್ದ ಅವರನ್ನು ವರ್ಗಾವಣೆ ಮಾಡಲಾಗಿತ್ತು.

2022ರಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾಗಿ ಜಿ.ಟಿ.ದಿನೇಶ್ ಕುಮಾರ್ ಅಧಿಕಾರ ಸ್ವೀಕರಿಸಿದ್ದರು. ಈಗ ಹಾವೇರಿ ವಿವಿಯ ಕುಲಸಚಿವರಾಗಿ ವರ್ಗಾವಣೆ ಮಾಡಿರುವುದು ಚರ್ಚೆಗೆ ಗ್ರಾಸವಾಗಿದೆ.

## ಕಿತ್ತೂರು ಪಟ್ಟಣ ಪಂಚಾಯಿತಿ ಬಿಜೆಪಿ ಸದಸ್ಯನ ಕಿಡ್ನ್ಯಾಪ್

**ಬೆಳಗಾವಿ:** ಕಿತ್ತೂರು ಪಪಂ ಬಿಜೆಪಿ ಸದಸ್ಯ ನಾಗೇಶ್ ಅಸುಂಡಿ ಅಪಹರಣ ಪ್ರಕರಣ ಸಂಬಂಧ ಸ್ಥಳೀಯ ಕಾಂಗ್ರೆಸ್ ಶಾಸಕರ ಮೂವರು ಆಪ್ತರ ವಿರುದ್ಧ ದೂರು ದಾಖಲಾಗಿದೆ. ನಾಗೇಶ್ ಅಪಹರಣ ಆದ ವಿಚಾರ ತಿಳಿಯುತ್ತಿದ್ದಂತೆ ಬಿಜೆಪಿ ಪ್ರತಿಭಟನೆಯ ಎಚ್ಚರಿಕೆ ನೀಡಿದೆ. ತಡರಾತ್ರಿ ಕಿತ್ತೂರು ಪಟ್ಟಣದ ರಾ.ಹೆದ್ದಾರಿ ಚೌಕಿಮಠ ಕ್ರಾಸ್ ಬಳಿ ನಾಗೇಶ್ ಮೊಬೈಲ್‌ನಲ್ಲಿ ಮಾತನಾಡುತ್ತ ನಿಂತಿದ್ದಾಗ ಅಪಹರಣ ಮಾಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಕಿತ್ತೂರು ಪೊಲೀಸ್ ಠಾಣೆಯಲ್ಲಿ ಮೂವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ನಾಗೇಶ್ ಅಸುಂಡಿ ತಂದೆ ಬಸವರಾಜ್ ಅಸುಂಡಿ ನೀಡಿದ ದೂರಿನ ಮೇರೆಗೆ ಕಿತ್ತೂರು ಶಾಸಕ ಬಾಬಾಸಾಹೇಬ್ ಪಾಟೀಲ್ ಆಪ್ತ ಅಶೋಕ್ ಮಾಳಗಿ, ಬಸವರಾಜ್ ಸಂಗೊಳ್ಳಿ, ಸುರೇಶ್ ಕುದರೇಮನಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ನಾಗೇಶ್ ಅಸುಂಡಿ ಶೋಧಕ್ಕೆ ಬೈಲಹೊಂಗಲ ಡಿವೈಎಸ್‌ಪಿ ರವಿ ಡಿ.ನಾಯಕ ನೇತೃತ್ವದಲ್ಲಿ ಮೂರು ಪ್ರತ್ಯೇಕ ತಂಡ ರಚನೆ ಮಾಡಲಾಗಿದೆ.



## ಸೆ. 1ರಂದು ಗುರುವಂದನೆ ಗೌರವ ಸಮರ್ಪಣೆ

**ಬೆಂಗಳೂರು:** ಕರ್ನಾಟಕ ಪೌರ ರಕ್ಷಣಾ ದಳ,ವಿಭಾಗ 33 ರವರು ಶಿಕ್ಷಕರ ದಿನಾಚರಣೆಯ ಅಂಗವಾಗಿ ಇದೆ ಸೆ. 1,ಭಾನುವಾರ ಬೆಳಿಗ್ಗೆ 10.30 ಕ್ಕೆ ಬೆಂಗಳೂರಿನ ವಿಶ್ವೇಶ್ವಪುರ ವಾಣಿವಿಲಾಸ ರಸ್ತೆಯ ವಾಸವಿ ವಿದ್ಯಾನಿಕೇತನ ಪ್ರೌಢಶಾಲೆಯಲ್ಲಿ ಗುರುವಂದನಾ ಕಾರ್ಯಕ್ರಮವನ್ನು ಆಯೋಜಿಸಿದ್ದಾರೆ. ಮುಗ್ಧ ಮನದಲ್ಲಿ ಅಕ್ಷರವನ್ನು ಬಿತ್ತಿ,ಮಕ್ಕಳ ಭವಿಷ್ಯಕ್ಕೆ ಬೆಳಕನ್ನು ಚೆಲ್ಲಿ,ಸುಂದರ ನಾಡನ್ನು ಕಟ್ಟುವ ಮಹಾಶಿಲ್ಪಿಗಳು ಅಧ್ಯಾಪಕರು. ನಾಡಕಟ್ಟುವ ಮಹತ್ ಕಾರ್ಯದಲ್ಲಿ ತೊಡಗಿರುವ ಮತ್ತು ಸೇವೆ ಸಲ್ಲಿಸಿರುವ ಶಿಕ್ಷಕರನ್ನು ಗೌರವಿಸುವುದು ಸಮಾಜದ ಜವಾಬ್ದಾರಿ. ಈ ಹಿನ್ನೆಲೆಯಲ್ಲಿ ಕರ್ನಾಟಕ ಪೌರ ರಕ್ಷಣಾ ದಳ ವಿಭಾಗ 33 ಬಸವನಗುಡಿ ರವರು ನಿಸ್ವಾರ್ಥ ಸೇವೆ ಸಲ್ಲಿಸಿರುವ ಶಿಕ್ಷಕರನ್ನು ಗುರುತಿಸಿ ಅವರಿಗೆ ಗುರುವಂದನೆ -ಗೌರವ ಸಮರ್ಪಣೆಯನ್ನು ಹಮ್ಮಿಕೊಂಡಿರುತ್ತಾರೆ. ಪ್ರಸಕ್ತ ಸಾಲಿನ ಈ ಕಾರ್ಯಕ್ರಮದಲ್ಲಿ ವಾಣಿಜ್ಯಶಾಸ್ತ್ರ ಪ್ರಾಧ್ಯಾಪಕ ಪ್ರೊ.ಕೆ ವಿ ರಾಮರಾವ್ ಒಳಗೊಂಡಂತೆ ಅನೇಕ ಪ್ರೌಢಶಾಲಾ ಶಿಕ್ಷಕರಿಗೆ ಗೌರವಿಸಲಿದ್ದಾರೆ. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾರತೀಯ ವಿಜ್ಞಾನ ಸಂಸ್ಥೆಯ ಏರೋಸ್ಪೇಸ್ ಇಂಜಿನಿಯರಿಂಗ್ ವಿಭಾಗದ ಮುಖ್ಯ ಸಂಶೋಧನಾ ವಿಜ್ಞಾನಿ ಡಾ. ಎಸ್ ಎನ್ ಓಂಕಾರ್ ಮತ್ತು ಡಿಸಿಜಿ ಹೋಂ ಗಾರ್ಡ್ಸ್ ಮತ್ತು ಕೆ ಸಿ ಡಿ ಹಕ್ಕೆ ಅಕ್ಷಯ್ ಮಚ್ಚೀಂದ್ರ ಐ ಪಿ ಎಸ್ ಆಗಮಿಸಲಿದ್ದಾರೆ. ಕೆ ಸಿ ಡಿ ಎಚ್ ಕ್ಯೂ ಆಫೀಸರ್ ಕಮಾಂಡಿಂಗ್ ನಾಗೇಂದ್ರ ಬಾಬು ಎನ್ ಪಿ ಮತ್ತು ವಿಭಾಗ 33ರ ವಿಭಾಗೀಯ ವಾರ್ಡನ್ ಗುರುದತ್ ಬಿ ಎಸ್ ಅಧ್ಯಕ್ಷತೆ ವಹಿಸುವರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಉಪ ಚುನಾವಣೆ ಚರ್ಚೆಯಿಂದ ಬಿ.ವೈ.ವಿ.ದೂರ

ಆದರೆ, ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ದೆಹಲಿಗೆ ತೆರಳದೆ ಬೆಂಗಳೂರಿನಲ್ಲಿಯೇ ಉಳಿಯುವ ಮೂಲಕ ಅಂತರ ಕಾಪಾಡಿಕೊಂಡಿದ್ದು ಕುತೂಹಲಕ್ಕೆ ಕಾರಣವಾಗಿದೆ. ಈಗ ಕೇಂದ್ರದ ಸಚಿವರಾಗಿರುವ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ.ಕುಮಾರಸ್ವಾಮಿ ಅವರಿಂದ ತೆರವಾದ ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆಗೆ ಸ್ಪರ್ಧಿಸಲು ಸಿ.ಪಿ.ಯೋಗೇಶ್ವರ್‌ಬಯಸಿದ್ದಾರೆ. ಆದರೆ, ಜೆಡಿಎಸ್ ಈ ಕ್ಷೇತ್ರವನ್ನು ಬಿಟ್ಟುಕೊಡುವ ಬಗ್ಗೆ ಮೀನಮೇಷ ಎಣಿಸುತ್ತಿದೆ. ಇನ್ನು ವಿಜಯೇಂದ್ರ ಮತ್ತು ಯೋಗೇಶ್ವರ್ ಅವರ ನಡುವಿನ ರಾಜಕೀಯ ಸಂಬಂಧ ಅಷ್ಟಕಷ್ಟೇ ಎಂಬಂತಿದೆ.

ಇದಕ್ಕೆ ಹಿಂದೆ ಬಿ.ಎಸ್.ಯಡಿಯೂರಪ್ಪ ಅವರು ಚನ್ನಪಟ್ಟಣ ಜೆಡಿಎಸ್ ತೆರವುಗೊಳಿಸಿದ ಕ್ಷೇತ್ರವಾಗಿದ್ದರಿಂದ ವಿಜಯೇಂದ್ರ ಅವರು ಆ ಕ್ಷೇತ್ರದ ಉಪಚುನಾವಣೆಯ ಟಿಕೆಟ್ ಬಗ್ಗೆ ತಟಸ್ಥ ನಿಲುವು ಅನುಸರಿಸುತ್ತಿದ್ದಾರೆ ಎನ್ನಲಾಗಿದೆ. ಇನ್ನು, ಯೋಗೇಶ್ವರ್ ಕೂಡ ಈ ವಿಷಯದಲ್ಲಿ ವಿಜಯೇಂದ್ರ ಅವರನ್ನು ದೂರವಿಡುವ ಪ್ರಯತ್ನ ಮಾಡುತ್ತಿದ್ದಾರೆ. ಪಕ್ಷದ ಇತರ ನಾಯಕರೊಂದಿಗೆ ತಮ್ಮ ಟಿಕೆಟ್ ಬಗ್ಗೆ ಚರ್ಚಿಸಿದರೂ ಉದ್ದೇಶ ಪೂರ್ವಕವಾಗಿಯೇ ವಿಜಯೇಂದ್ರ ಅವರ ಬಳಿ ಈ ವಿಷಯ ಪ್ರಸ್ತಾಪಿಸಿಲ್ಲ.

ಈ ಕಾರಣದಿಂದಲೂ ವಿಜಯೇಂದ್ರ ಅವರು ದೆಹಲಿಗೆ ತೆರಳದೆ ಏನಾದರೂ ಆಗಲಿ ಎಂಬ ಧೋರಣೆ ತಳೆದಿದ್ದಾರೆ ಎಂಬ ಮಾತು ಬಿಜೆಪಿ ಪಾಳೆಯದಿಂದಲೇ ಕೇಳಿಬರುತ್ತಿದೆ. ಆದರೆ, ಪಕ್ಷದ ಇತರ ಹಿರಿಯ ನಾಯಕರು ದೆಹಲಿಗೆ ತೆರಳಿ ವರಿಷ್ಠರೊಂದಿಗೆ ಸರಣಿ ಸಭೆ ನಡೆಸುತ್ತಿರುವಾಗ ರಾಜ್ಯಾಧ್ಯಕ್ಷರಾಗಿರುವ ವಿಜಯೇಂದ್ರ ಅವರು ಇದರಿಂದ ದೂರ ಉಳಿಯದೆ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಭಿನ್ನಾಭಿಪ್ರಾಯ ಸಂದೇಶ ರವಾನೆಯಾಗುವುದನ್ನು ತಡೆಗಟ್ಟಬಹುದಿತ್ತು.

## ಹಾಸನದಲ್ಲಿ ನಕಲಿ ಆಧಾರ್ ತೋರಿಸಿ ಕೆಲಸ ಗಿಟ್ಟಿಸಿಕೊಳ್ಳುವ ಬಾಂಗ್ಲಾ ಅಕ್ರಮ ವಲಸಿಗರು

ಕೆಲ ಮಾಲೀಕರು ಯಾವುದೇ ದಾಖಲೆ ಪರಿಶೀಲನೆ ನಡೆಸದೇ ಕಾರ್ಮಿಕರೆಂಬ ಅನಿವಾರ್ಯತೆಯಿಂದಾಗಿ ಕೆಲಸ ನೀಡುತ್ತಿದ್ದರು. ವಲಸಿಗರು ಸಿಕ್ಕ ಸಿಕ್ಕ ಜಾಗದಲ್ಲಿ ಗುಡಿಸಲು ಹಾಕಿಕೊಂಡು ನೆಲೆಸುತ್ತಿರುವುದನ್ನು ಕಂಡು ಜನರಲ್ಲಿ ಅನುಮಾನ ಹೆಚ್ಚಾಗಿತ್ತು. ಸಾವಿರ ಸಂಖ್ಯೆಯಲ್ಲಿ ವಲಸಿಗರು ಬರುತ್ತಿರುವ ಹಿನ್ನೆಲೆ ಅವರ ಬಗ್ಗೆ ನಿಗಾವಹಿಸುವಂತೆ ಜನರು ಆಗ್ರಹಿಸಿದ್ದರು.

ಈ ಆರೋಪದ ಬೆನ್ನಲ್ಲೇ ಆಧಾರ್ ವಿಭಾಗದ ಅಧಿಕಾರಿಗಳು ಬೃಹತ್ ಜಾಲದ ಮಾಹಿತಿಯೊಂದು ಬಯಲು ಮಾಡಿದ್ದಾರೆ. 5 ರಿಂದ 10 ಸಾವಿರ ರೂ. ಹಣ ಪಡೆದು ನಕಲಿ ಆಧಾರ್ ಕಾರ್ಡ್ ಸೃಷ್ಟಿ ಮಾಡುತ್ತಿರುವ ಕುರಿತು ಮಾಹಿತಿಯು ಹೊರಬಿದ್ದಿದೆ.

ಅಕ್ರಮ ವಲಸಿಗರು ಬರುತ್ತಿರುವ ಆರೋಪದ ಹಿನ್ನೆಲೆ ಬೆಂಗಳೂರು ವಿಭಾಗದ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ಒಂದೇ ದಾಖಲೆ ಬಳಸಿ ದಿನಾಂಕ, ಹೆಸರು ಬಳಸಿ ಹತ್ತಾರು ಆಧಾರ್ ವಿತರಣೆ ಮಾಡಿರುವುದು ಬಯಲು ಮಾಡಿ ಶಾಕಿಂಗ್ ಮಾಹಿತಿ ಬಯಲಿಗೆಳಿದಿದ್ದಾರೆ.

ಹಾಸನದ ಡಿಸಿ ಕಛೇರಿಯ ಆಧಾರ್ ಕೇಂದ್ರದಲ್ಲಿ ಕೆಲಸ ಮಾಡುತ್ತಿದ್ದ ಸಿಬ್ಬಂದಿ ಅನುಶ್ರೀ ಎಂಬಾಕೆಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಡಿಸಿ ಸಿ.ಸತ್ಯಭಾಮ

**ಮೊದಲನೇ ಪುಟದಿಂದ...**

ಎದುರೇ ನಕಲಿ ಆಧಾರ್ ವಿತರಣೆ ಮಾಡಿರುವ ಕುರಿತು ಆಧಾರ್ ವಿತರಣೆ ವಿಭಾಗೀಯ ಅಧಿಕಾರಿ ವಿಜಯ್ ಕುಮಾರ್ ರಿವೀಲ್ ಮಾಡಿದ್ದಾರೆ. ನಕಲಿ ಆಧಾರ್ ನೀಡಿರುವ ಮಹಿಳೆಯ ವಿರುದ್ಧ ಕೇಸ್ ದಾಖಲಿಸಿ, ತನಿಖೆ ನಡೆಸುವಂತೆ ಡಿಸಿ ಸೂಚನೆ ನೀಡಿದ್ದಾರೆ.

### ಜೈಲು ಸಿಬ್ಬಂದಿ ಪ್ರತಿಭಟನೆ

ಇಷ್ಟಿದ್ದರೂ ಜೈಲಿನೊಳಗೆ ಮೊಬೈಲ್ ಸೇರಿದಂತೆ ಇನ್ನಿತರ ವಸ್ತುಗಳ ಹೇಗೆ ಬರುತ್ತಿದೆ. ಅವರ ಕುಮ್ಮಕ್ಕಿನಿಂದ ಇದೆಲ್ಲ ಆಗುತ್ತಿದೆ. ಇಷ್ಟಾದ್ದರೂ ಜೈಲಿನ ಅಧಿಕಾರಿಗಳಿಗೆ ಅಮಾನತ್ತು ಶಿಕ್ಷೆಯಾಗುತ್ತಿದೆ. ಆದರೆ ಕೆಎಸ್‌ಐಎಸ್‌ಎಫ್ (ಏಖಋಖಋಈ) ಅಧಿಕಾರಿ, ಸಿಬ್ಬಂದಿ ವರ್ಗಾವಣೆ ಇರಲಿ, ಒಂದು ರೂಲ್ 7 ನೀಡಿ ತನಿಖೆ ಕೂಡ ನಡೆಸುತ್ತಿಲ್ಲ. ಹೀಗೆಂದು ತಮ್ಮ ಅಳಲು ತೋಡಿಕೊಂಡು ಹಿರಿಯ ಅಧಿಕಾರಿಗಳ ಮುಂದೆ ಪ್ರತಿಭಟಿಸಿದ್ದಾರೆ.

ಪರಪ್ಪನ ಅಗ್ರಹಾರ ಜೈಲಿನಿಂದ ನಟ ದರ್ಶನ್ ಸತ್ಯನಿಗೆ ವಿಡಿಯೋ ಕಾಲ್ ವಿಚಾರವಾಗಿ ಕಾರಾಗೃಹ ಮತ್ತು ಸುಧಾರಣೆ ಇಲಾಖೆ ಡಿಜಿಪಿ ಮಾಲಿನಿ ಕೃಷ್ಣಮೂರ್ತಿ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷರಿಗೆ ಪತ್ರ ಬರೆದಿದ್ದಾರೆ.

ಆಗಸ್ಟ್ 25 ರಂದು ದರ್ಶನ್ ಮತ್ತು ಇತರೆ ಕೆಲವರು ಮಾತನಾಡುತ್ತಿರುವ ದೃಶ್ಯದ ತುಣುಕು ಮಾಧ್ಯಮಗಳಲ್ಲಿ ಪ್ರಸಾರವಾದ ಹಿನ್ನೆಲೆಯಲ್ಲಿ ಪತ್ರ ಬರೆದಿದ್ದಾರೆ. ಕೇಂದ್ರ ಕಾರಾಗೃಹದ ಆವರಣದಲ್ಲಿ 3 ಎಚ್‌ಸಿಬಿಎಸ್ ಟವರ್‌ಗಳಿವೆ. ಮೊಬೈಲ್ ಸಿಗ್ನಲ್‌ಗಳು ಜೈಲಿನ ಯಾವುದೇ ಭಾಗದಲ್ಲಿ ಲಭ್ಯವಿಲ್ಲವೆಂದು ಪತ್ರದಲ್ಲಿ ಉಲ್ಲೇಖ ಮಾಡಲಾಗಿದೆ. ಆದಾಗ್ಯೂ ವಿಡಿಯೋ ಕಾಲ್ ಹಾಗೂ ಫೋಟೊ ವೈರಲ್ ಪ್ರಕರಣ ಗಂಭೀರವಾಗಿ ಪರಿಗಣಿಸಲಾಗಿದೆ.

ಪರಪ್ಪನ ಅಗ್ರಹಾರ ಕಾರಾಗೃಹದಲ್ಲಿಮೊಬೈಲ್ ಸಿಗ್ನಲ್ ದೊರೆಯುತ್ತಿರುವುದು ಧೃಡವಾಗಿದೆ. ಈ ಹಿನ್ನಲೆ ಮೊಬೈಲ್ ಸಿಗ್ನಲ್ ನಿರ್ಬಂಧಿಸುವ ಟವರ್‌ಗಳ ಅಳವಡಿಸಿದ್ದರೂ, ಸಿಗ್ನಲ್ ಲಭ್ಯವಾಗಿದ್ದು ಹೇಗೆ? ಈ ಸಂಬಂಧ ಏರ್ ಟೆಲ್, ಬಿಎಸ್ ಎನ್ ಎಲ್, ಜಿಯೋ ನಿಂದ ಪತ್ರ ಬರೆದು ವಿವರಣೆ ಪಡೆಯಲು ಸೂಚನೆ ನೀಡಲಾಗಿದೆ. ಸೆಪ್ಟೆಂಬರ್ 4 ರ ಒಳಗೆ ತಪ್ಪದೇ ವರದಿ ಸಲ್ಲಿಸಲು ಮುಖ್ಯ ಅಧೀಕ್ಷರಿಗೆ ಕಾರಾಗೃಹ ಮತ್ತು ಸುಧಾರಣೆ ಇಲಾಖೆ ಮಹಾನಿರ್ದೇಶಕಿ, ಮಾಲಿನಿ ಕೃಷ್ಣಮೂರ್ತಿ ಪತ್ರ ಬರೆದು ಸೂಚನೆ ನೀಡಲಾಗಿದೆ.

### ಮಚ್ಚು ಬೀಸಿದ ವಿದ್ಯಾರ್ಥಿ

ಇದರಿಂದ ಸಿಟ್ಟಿಗೆದ್ದ ಇತರೇ ವಿದ್ಯಾರ್ಥಿಗಳು ಮಚ್ಚು ಬೀಸಿದವನಿಗೆ ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಹೊಡೆತ ತಾಳಲಾರದೇ ಅಪ್ರಾಪ್ತ ವಿದ್ಯಾರ್ಥಿ ನೆಲಕ್ಕುರಿಳಿದ್ದಾನೆ ಆದರೂ ಬಿಡದೇ ವಿದ್ಯಾರ್ಥಿಗಳು ಕಾಲಿನಿಂದ ಒದ್ದು ಮನಸ್ಸೋ ಇಚ್ಛೆ ಗೂಸಾ ಕೊಟ್ಟಿದ್ದಾರೆ. ಗಾಯಾಳು ವಿದ್ಯಾರ್ಥಿ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಕೆ.ಆರ್.ಪುರಂ ಬಡಾವಣೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ.

### ಜೈಲ್ ಕ್ಯಾಂಟೀನ್ ಕ್ಲೋಸ್

ಸೊಳ್ಳೆ ಕಾಟ: ಬಳ್ಳಾರಿ ಸೆಂಟ್ರಲ್ ಜೈಲಿನಲ್ಲಿ ದರ್ಶನ ಸೊಳ್ಳೆ ಕಾಟಕ್ಕೆ ಒದ್ದಾಡಿದ್ದಾರೆ. ಆಗಸ್ಟ್ 31ರ ರಾತ್ರಿ ಹೈ ಸೆಕ್ಯುರಿಟಿ ಜೈಲು ವಿಭಾಗದ ಪ್ಯಾಸೇಜ್‌ನಲ್ಲಿ ವಾಕ್ ಮಾಡಿದ್ದಾರೆ. ರಾತ್ರಿ ಅವರಿಗೆ ನಿದ್ದೆ ಬರುತ್ತಿಲ್ಲ. ಸದ್ಯ ಅವರು ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿ ಕೊಳ್ಳುತ್ತಿದ್ದಾರೆ.

**ಪೋಕ್ಸೋ ಪ್ರಕರಣ**

# ಮಾಜಿ ಸಿಎಂ ಬಿಎಸ್‌ವೈಗೆ ತುಸು ರಿಲೀಫ್

**ಬೆಂಗಳೂರು:** ಪೋಕ್ಸೋ ಪ್ರಕರಣದಲ್ಲಿ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪಗೆ ಕರ್ನಾಟಕ ಹೈಕೋರ್ಟ್ ಏಕಸದಸ್ಯ ಪೀಠ ತಾತ್ಕಾಲಿಕ ರಿಲೀಫ್ ನೀಡಿದೆ. ಬಿಎಸ್‌ವೈ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ, ಮುಂದಿನ ವಿಚಾರಣೆಯನ್ನು ಸೆಪ್ಟೆಂಬರ್ 5ಕ್ಕೆ ಮುಂದೂಡಿಕೆ ಮಾಡಿದೆ. ಬಿಎಸ್‌ವೈ ಬಂಧಿಸದಂತೆ ನೀಡಿದ್ದ ಮಧ್ಯಂತರ ಆದೇಶವನ್ನೂ ಮುಂದುವರಿಸಿದೆ.

ಮಂತ್ರಿಗಳು ತಪ್ಪು ತಪ್ಪಾಗಿ ಪೋಕ್ಸೋ ಪೋಕ್ಸೋ ಎನ್ನುತ್ತಿದ್ದಾರೆ. ಬರಲಿ, ಮಾಡಿಬಿಡೋಣ ವಾದಮಂಡನೆ ಎಂದು ಯಡಿಯೂರಪ್ಪ ಪರ ಹಿರಿಯ ವಕೀಲ ಸಿವಿ ನಾಗೇಶ್ ಸವಾಲು ಹಾಕಿದರು. ಇದೇ ವೇಳೆ, ನಾವು ಸಿದ್ಧರಿದ್ದೇವೆ, ಸ್ವಲ್ಪ ಸಮಯ ಬೇಕು ಎಂದು ಎಸ್‌ಪಿಪಿ ಅಶೋಕ್ ನಾಯ್ಕ್ ಹೇಳಿದರು. ನೀವು ರೆಡಿ ಆದ್ರೆ ನಾನು ಈಗಲೇ ರೆಡಿ ಎಂದು ನಾಗೇಶ್ ಹೇಳಿದರು. ನಂತರ ಸಿಐಡಿ ಮನವಿ ಮೇರೆಗೆ ಹೈಕೋರ್ಟ್ ವಿಚಾರಣೆಯನ್ನು ಸೆಪ್ಟೆಂಬರ್ 5ಕ್ಕೆ ಮುಂದೂಡಿಕೆ ಮಾಡಿತು.



ಪ್ರತಿನಿತ್ಯ ಒಬ್ಬರಲ್ಲ ಒಬ್ಬ ಸಚಿವರು ಯಡಿಯೂರಪ್ಪ ವಿರುದ್ಧ ಆರೋಪಿಸುತ್ತಿದ್ದಾರೆ. ಬಿಎಸ್‌ವೈ ಶರಣಾಗಬೇಕು, ಜೈಲಿಗೆ ಕಳುಹಿಸುತ್ತೇವೆ ಎನ್ನುತ್ತಿದ್ದಾರೆ. ಮಧ್ಯಂತರ ಆದೇಶ ತೆರವುಗೊಳಿಸುತ್ತೇವೆ ಎನ್ನುತ್ತಿದ್ದಾರೆ. ಈಗ ನೋಡಿದರೆ ವಿಚಾರಣೆ ಮುಂದೂಡಿಕೆ ಕೇಳುತ್ತಿದ್ದಾರೆ. ಬರಲಿ ವಾದ ಮಂಡಿಸಲಿ, ಹಣೆಯಲ್ಲಿ ಬರೆದಿದ್ದರೆ ಜೈಲಿಗೆ ಹೋಗುತ್ತಾರೆ ಎಂದು ವಕೀಲ ನಾಗೇಶ್ ಸವಾಲು ಹಾಕಿದರು.

ಸಿಐಡಿ ಪರ ವಕೀಲರು, ಬಿಎಸ್‌ವೈ ವಿರುದ್ಧ ಹೆಚ್ಚುವರಿ ಆರೋಪಪಟ್ಟಿ ದಾಖಲಿಸಲಾಗಿದೆ. ಆರೋಪಪಟ್ಟಿಯ ಪ್ರತಿ ಸಲ್ಲಿಸಲು ಕಾಲಾವಕಾಶ ಬೇಕಿದೆ ಎಂದು ಸಿಐಡಿ ಪರ ಎಸ್‌ಪಿಪಿ ಅಶೋಕ್ ನಾಯ್ಕ್ ಮನವಿ ಮಾಡಿದರು. ಅಂತಿಮವಾಗಿ ವಿಚಾರಣೆ ಮುಂದೂಡಿಕೆಯಾಯಿತು.

ಪ್ರಕರಣ ಸಂಬಂಧ ಜೂನ್‌ನಲ್ಲಿ ಯಡಿಯೂರಪ್ಪ ವಿರುದ್ಧ ಆರೋಪಪಟ್ಟಿ ಸಲ್ಲಿಕೆ ಮಾಡಲಾಗಿತ್ತು. ಹಳೇ ಕೇಸ್ ಬಗ್ಗೆ ವಿಚಾರಿಸುತ್ತಾ ರೂಮಿಗೆ ಕರೆದೊಯ್ದು ಅಪ್ರಾಪ್ತ ಬಾಲಕಿಯೊಂದಿಗೆ ಅನುಚಿತವಾಗಿ ವರ್ತಿಸಿರುವುದಾಗಿ ಯಡಿಯೂರಪ್ಪ ವಿರುದ್ಧದ ಆರೋಪಪಟ್ಟಿಯಲ್ಲಿ ಉಲ್ಲೇಖವಾಗಿದೆ. ಬಾಲಕಿ ಪ್ರತಿಭಟಿಸಿದಾಗ ಹಣ ನೀಡಿ ಕಳುಹಿಸಿರುವುದಾಗಿ ಆರೋಪಿಸಲಾಗಿದೆ ಎಂದೂ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಲಾಗಿದೆ.

**ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ಕೇಸ್**

# ರೇವಣ್ಣಗೆ ಮಧ್ಯಂತರ ರಿಲೀಫ್ ನೀಡಿದ ಕೋರ್ಟ್

**ಬೆಂಗಳೂರು:** ಹೊಳೆನರಸೀಪುರ ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರಿಗೆ ಹೈಕೋರ್ಟ್ ಮಧ್ಯಂತರ ರಿಲೀಫ್ ನೀಡಿದೆ. ಪ್ರಕರಣ ರದ್ದು ಕೋರಿದ್ದ ಹೆಚ್.ಡಿ.ರೇವಣ್ಣ ಅರ್ಜಿ ವಿಚಾರಣೆ ನಡೆಸಿದ ನ್ಯಾ.ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಸೆಪ್ಟೆಂಬರ್ 19ರವರೆಗೆ ಯಾವುದೇ ಪ್ರಕ್ರಿಯೆ ನಡೆಸದಂತೆ ವಿಚಾರಣಾ ನ್ಯಾಯಾಲಯಕ್ಕೆ ಸೂಚನೆ ನೀಡಿದ್ದಾರೆ. ಹೆಚ್‌ಡಿ ರೇವಣ್ಣ ಅವರ ಪರ ವಾದ ಮಂಡಿಸಿದ ಹಿರಿಯ ವಕೀಲ ಸಿ.ವಿ.ನಾಗೇಶ್, ಕಲಂ 354ಂ, 354ಆ ಅಡಿ ಹಳೆಯ ದೂರುಗಳಿಗೆ ಎಫ್‌ಐಆರ್ ದಾಖಲಿಸುವಂತಿಲ್ಲ. ನಾಲ್ಕು ವರ್ಷಗಳ ಹಿಂದಿನ ದೂರಿಗೆ ಈಗ ಎಫ್‌ಐಆರ್ ದಾಖಲಿಸಿದ್ದಾರೆ. ಐಪಿಸಿ 506, 509 ಸೆಕ್ಷನ್ ದೂರಿನಲ್ಲಿರುವ ಅಂಶಗಳಿಗೆ ಅನ್ವಯವಾಗುವುದಿಲ್ಲ. ಹೀಗಾಗಿ ಎಫ್‌ಐಆರ್ ರದ್ದುಪಡಿಸುವಂತೆ ಮನವಿ ಮಾಡಿದರು. ಸರ್ಕಾರದ ಪರ ವಾದಿಸಿದ ಎಸ್‌ಪಿಪಿ ರವಿವರ್ಮ ಕುಮಾರ್, ಈಗಾಗಲೇ ಆರೋಪಪಟ್ಟಿ ದಾಖಲಿಸಿರುವುದಾಗಿ ಮಾಹಿತಿ ನೀಡಿದರು. ವಾದ-ಪ್ರತಿವಾದ ಆಲಿಸಿದ ನ್ಯಾ. ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಸೆಪ್ಟೆಂಬರ್ 19ರವರೆಗೆ ಯಾವುದೇ ಪ್ರಕ್ರಿಯೆ ನಡೆಸದಂತೆ ವಿಚಾರಣಾ ನ್ಯಾಯಾಲಯಕ್ಕೆ ಸೂಚನೆ ನೀಡಿದರು.




### ಏನಿದು ಪ್ರಕರಣ?

**ಹೆಚ್.ಡಿ ರೇವಣ್ಣ ಅವರ ವಿರುದ್ಧ ಹೊಳೆನರಸೀಪುರ ಪಟ್ಟಣ ಪೊಲೀಸ್ ಠಾಣೆಯಲ್ಲಿ ಏಪ್ರಿಲ್ 28 ರಂದು ಅವರ ಮನೆಯ ಸಹಾಯಕಿಯು ಲೈಂಗಿಕ ಕಿರುಕುಳ ಪ್ರಕರಣ ದಾಖಲಿಸಿದ್ದರು. ಶಾಸಕರ ನಿವಾಸದಲ್ಲಿ ಹೆಚ್.ಡಿ ರೇವಣ್ಣ ಅವರು ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು ಸಂತ್ರಸ್ತೆ ಹೇಳಿಕೊಂಡಿದ್ದಾರೆ. ಇನ್ನು ಕಿಡ್ನಾಪ್ ಕೇಸ್.ನಲ್ಲಿ ಹೆಚ್.ಡಿ ರೇವಣ್ಣ ಅವರಿಗೆ ಜಾಮೀನು ಮಂಜೂರಾಗಿದೆ. ಈ ಪ್ರಕರಣವನ್ನು ರದ್ದು ಕೋರಿ ಹೆಚ್.ಡಿ ರೇವಣ್ಣ ಅವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ನ್ಯಾಯಾಲಯ ಅರ್ಜಿ ವಿಚಾರಣೆಯನ್ನು ಸೆಪ್ಟೆಂಬರ್ 19ಕ್ಕೆ ಮುಂದೂಡಿದೆ. ಅಲ್ಲಿಯವರೆಗೆ ಹೆಚ್.ಡಿ ರೇವಣ್ಣ ಅವರನ್ನು ವಿಚಾರಣೆ ನಡೆಸದಂತೆ ಆದೇಶಿಸಿದೆ.**

## ಆಹಾರ ಉದ್ದಿಮೆಗಳ ಪರಿಶೀಲನೆ ಹಾಗೂ ಆಹಾರ ಪರವಾನಿಗೆ ನೀಡಲು ಆಂದೋಲನ

**ಬೆಂಗಳೂರು:** ಬಿ.ಬಿ.ಎಂ.ಪಿ ಪೂರ್ವ, ಉತ್ತರ, ದಕ್ಷಿಣ ಮತ್ತು ಪಶ್ಚಿಮ ವಲಯಗಳು ಹಾಗೂ ಬೆಂಗಳೂರು ನಗರ ಜಿಲ್ಲಾ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಧಿಕಾರಿಗಳು ಆಗಸ್ಟ್ 30 ಮತ್ತು 31 ರಂದು ಬಿ.ಬಿ.ಎಂ.ಪಿ ಪೂರ್ವ, ಉತ್ತರ, ದಕ್ಷಿಣ ಮತ್ತು ಪಶ್ಚಿಮ ವಲಯಗಳು ಹಾಗೂ ಬೆಂಗಳೂರು ನಗರ ಜಿಲ್ಲೆಯ ವಿವಿಧ ಆಹಾರ ಉದ್ದಿಮೆಗಳಿಗೆ ಭೇಟಿ ನೀಡಿ ಮಾಂಸ, ಮಾಂಸ ಪದಾರ್ಥಗಳು, ಮೊಟ್ಟೆ, ಬೇರೆ ಪದಾರ್ಥಗಳಾದ ಬ್ರೆಡ್, ಬನ್, ಚೌಚೌ, ಚಕ್ಕುಲಿ, ನಿಪ್ಪಟ್ಟು ಮತ್ತು ನೂಡಲ್ಸ್‌ಗಳ ಆಹಾರ ಮಾದರಿಗಳನ್ನು ಸಂಗ್ರಹಿಸುವುದರೊಂದಿಗೆ ಸ್ವಚ್ಛತೆ ನೈರ್ಮಲ್ಯತೆ ಬಗ್ಗೆ ಪರಿಶೀಲನೆ ಮಾಡಿ ಆಹಾರ ಸುರಕ್ಷತೆಯ ಕ್ರಮಗಳ ಬಗ್ಗೆ ಅರಿವು ಮೂಡಿಸಿ, ಹೆಚ್ಚಿನ ಆಹಾರ ಪರವಾನಿಗೆ ನೀಡಲು ವಿಶೇಷ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಬಿ.ಬಿ.ಎಂ.ಪಿ ಪೂರ್ವ ವಲಯದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಂಕಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆ-ಸೆಟ್ ಮತ್ತು ಯು.ಜಿ.ಸಿ -ನೆಟ್ ತರಬೇತಿ

**ಬೆಂಗಳೂರು:** ಮೈಸೂರಿನ ಮುಕ್ತ ಗಂಗೋತ್ರಿಯ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಕೆ - ಸೆಟ್ ಮತ್ತು ಯುಜಿಸಿ - ನೆಟ್ ಪರೀಕ್ಷೆಗಳ ತರಬೇತಿ ಶಿಬಿರದ ಉದ್ಘಾಟನೆಯನ್ನು 2024ನೇ ಆಗಸ್ಟ್ 31ರಂದು ಬೆಳಿಗ್ಗೆ 11 ಗಂಟೆಗೆ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಬೆಳಗಾವಿ ರಾಣಿ ಚನ್ನಮ್ಮ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಸಿ.ಎಂ. ತ್ಯಾಗರಾಜ ಅವರು ಕಾರ್ಯಕ್ರಮದ ಉದ್ಘಾಟನೆಯನ್ನು ಮಾಡಲಿದ್ದು, ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ.ಎನ್. ಐ.ಪಿ.ಎಸ್., ಅವರು ಮುಖ್ಯ ಅಥಿತಿಗಳಾಗಿ ಆಗಮಿಸಲಿದ್ದಾರೆ.

ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯದ ಶಿಕ್ಷಣಕಾಯ ಡೀನ್ ಪ್ರೊ. ಜಿ.ಆರ್. ಅಂಗಡಿ ಅವರು ಮುಖ್ಯ ಭಾಷಣ ಮಾಡಲಿದ್ದು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಸಚಿವ ಪ್ರೊ.ಕೆ.ಬಿ. ಪ್ರವೀಣ ಅವರ ಉಪಸ್ಥಿತಿಯಲ್ಲಿ ಕುಲಪತಿಗಳಾದ ಪ್ರೊ. ಶರಣಪ್ಪ ವಿ ಹಲಸೆ ಅವರು ಅಧ್ಯಕ್ಷತೆಯನ್ನು ವಹಿಸಲಿರುವರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಡಿಪ್ಲೋಮಾ ಟೆಕ್ಸ್‌ಟೈಲ್ಸ್ ಟೆಕ್ನಾಲಜಿ ಕೋರ್ಸಿಗೆ ಪ್ರವೇಶಾವಧಿ ವಿಸ್ತರಣೆ

**ಬೆಂಗಳೂರು:** 2024-25ನೇ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿಗೆ 2024ನೇ ಸೆಪ್ಟೆಂಬರ್ 6 ವರೆಗೆ ಪ್ರವೇಶ ಪಡೆಯಲು ಪ್ರವೇಶಾವಧಿಯನ್ನು ವಿಸ್ತರಿಸಲಾಗಿದೆ. ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಪಾಸಾದ ಹಾಗೂ ಪಿ.ಯು.ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣ / ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆ, ಬೆಂಗಳೂರು ಇಲ್ಲಿ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿಗೆ ಪ್ರವೇಶ ಲಭ್ಯವಿದ್ದು, ಆಸಕ್ತ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಶ್ರೀಮತಿ ಉಷಾ ಎಸ್. ಪ್ರಾಂಶುಪಾಲರು ಮೊ:9481101049 ಹಾಗೂ ಶ್ರೀನಿವಾಸಯ್ಯ ವಿ, ವಿಭಾಗದ ಮುಖ್ಯಸ್ಥರು ಮೊ:9448705205, ಇವರನ್ನು ಸಂಪರ್ಕಿಸುವಂತೆ, ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಲ್ಲಿಯಾದರು ನೋಂದಣಿ ವ್ಯವಸ್ಥೆ ಜಾರಿ

**ಬೆಂಗಳೂರು ಗ್ರಾಮಾಂತರ:** ಬೆಂಗಳೂರು ಸ್ಥಿರಾಸ್ತಿ ನೋಂದಣಿ ಪ್ರಕ್ರಿಯೆಯನ್ನು ಸರಳೀಕೃತಗೊಳಿಸುವ ಭಾಗವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಯಾವುದೇ ಕಚೇರಿಯಲ್ಲಿ ಸ್ಥಿರಾಸ್ತಿ ನೋಂದಣಿಗೆ ಅವಕಾಶ ಮಾಡಿಕೊಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅವರು ತಿಳಿಸಿದ್ದಾರೆ.

2011ರಲ್ಲಿ ಬೆಂಗಳೂರು ನಗರ ಜಿಲ್ಲೆ ಮತ್ತು 2024 ರಲ್ಲಿ ಮಾರ್ಚ್‌ನಲ್ಲಿ ತುಮಕೂರು ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗಿತ್ತು.

ಇದು ಆ ಜಿಲ್ಲೆಯಲ್ಲಿ ಯಶಸ್ವಿಯಾಗುತ್ತಿರುವ ಕಾರಣ ರಾಜ್ಯಾದ್ಯಂತ ಇದನ್ನು ವಿಸ್ತರಿಸಲಾಗಿದೆ. ಅದರಂತೆ ಜಿಲ್ಲೆಯ ಉಪನೋಂದಣಿ ಕಚೇರಿಯಲ್ಲೂ ನೋಂದಣಿಗ ಅವಕಾಶ ಕಲ್ಪಿಸಲಾಗಿದೆ. ಎಲ್ಲಿಯಾದರು ನೋಂದಣಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಪನೋಂದಣಿ ಕಛೇರಿಗಳಿಗೂ ವಿಸ್ತರಿಸಲಾಗಿದೆ ಎಂದು ತಿಳಿಸಿದ್ದಾರೆ.

ಪ್ರಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪನೋಂದಣಿ ಕಛೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿದ್ದು, ಆದರೆ ಎಲ್ಲಿಯಾದರು ನೋಂದಣಿಯಲ್ಲಿ ದಸ್ತಾವೇಜಿನ ಸ್ಥಿರಾಸ್ತಿ ಇರುವ ಜಿಲ್ಲೆಯ ಯಾವುದಾದರು ಉಪನೋಂದಣಿ ಕಛೇರಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ.

ಈ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ದಸ್ತಾವೇಜಿನ ನೋಂದಣಿಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ. ನೋಂದಣಿಯಲ್ಲಿ ವಿಳಂಬವನ್ನು ತಡೆಗಟ್ಟುತ್ತದೆ. ಸಾರ್ವಜನಿಕರು ಸಮೀಪಲ್ಲಿರುವ ಉಪನೋಂದಣಿ ಕಛೇರಿಯಲ್ಲಿ ದಸ್ತಾವೇಜನ್ನು ನೋಂದಾಯಿಸಬಹುದು. ಸ್ಲಾಟ್ ಲಭ್ಯವಿರುವಂತಹ ಕಛೇರಿಯನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು. ನೋಂದಣಿ ಪ್ರಕ್ರಿಯೆ ಸುಲಭವಾಗುವುದಲ್ಲದೆ ಸಮಯವು ಸಹ ಉಳಿಯುತ್ತದೆ.

ಇದರಿಂದ ಉಪನೋಂದಣಿ ಕಛೇರಿಯಲ್ಲಿ ಜನದಟ್ಟಣೆ ಕಡಿಮೆಯಾಗುತ್ತದೆ. ಕಛೇರಿ ಸಿಬ್ಬಂದಿಗಳ ಮೇಲೆ ಕೆಲಸದ ಒತ್ತಡ ಕಡಿಮೆಯಾಗುತ್ತದೆ ಹಾಗೂ ಕಛೇರಿಗಳಲ್ಲಿ ನೋಂದಣಿ ಕೆಲಸ ಸಮಾನವಾಗಿ ಹಂಚಿಕೆಯಾಗುತ್ತದೆ.

ಆದುದರಿಂದ ಸಾರ್ವಜನಿಕರು ಎಲ್ಲಿಯಾದರು ನೋಂದಣಿಯ ಸೌಲಭ್ಯದ ಸದುಪಯೋಗ ಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವಂತಹ ಕಛೇರಿ ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಿಕೊಳ್ಳ ಬಹುದಾಗಿದೆ. ಉದಾಹರಣೆಗೆ ನೆಲಮಂಗಲ ಉಪನೋಂದಣಿ ಕಛೇರಿ, ವ್ಯಾಪ್ತಿಗೆ ಬರುವ ಸ್ವತ್ತುಗಳನ್ನು ಹೊಸಕೋಟೆ, ದೊಡ್ಡಬಳ್ಳಾಪುರ ಮತ್ತು ದೇವನಹಳ್ಳಿ ಯಾವುದಾದರು ಒಂದು ಉಪನೋಂದಣಿ ಕಛೇರಿಯಲ್ಲಿ ಆಯ್ಕೆ ಮಾಡಿಕೊಂಡು ನೋಂದಣಿ ಪ್ರಕ್ರಿಯೆಯನ್ನು ಮಾಡಿಕೊಳ್ಳಬಹುದಾಗಿರುತ್ತದೆ

ಈ ಸೌಲಭ್ಯವು ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಪಟ್ಟ ತಾಲ್ಲೂಕುಗಳಾದ ದೇವನಹಳ್ಳಿ, ಹೊಸಕೋಟೆ, ನೆಲಮಂಗಲ ಮತ್ತು ದೊಡ್ಡಬಳ್ಳಾಪುರ, ಉಪನೋಂದಣಾಧಿಕಾರಿಗಳ ಕಛೇರಿ ವ್ಯಾಪ್ತಿಗೆ ಒಳಪಡುವ ಆಸ್ತಿಗಳನ್ನು ಜಿಲ್ಲೆಯ ಯಾವುದೇ ಉಪನೋಂದಣಿ ಕಛೇರಿಯಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿರುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.




## ಕ್ರೀಡಾ ಪಟುಗಳಿಗೆ ಅಭಿನಂದನೆ

**ತುಮಕೂರು:** ಇತ್ತೀಚೆಗೆ ನಡೆದ ತುಮಕೂರು ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟದಲ್ಲಿ ಕಾಳಿದಾಸ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳನ್ನು ಕಾಲೇಜಿನ ಆಡಳಿತ ಮಂಡಳಿ ಕಾಳಿದಾಸ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಭೀಮರಾಜು, ಕಾಲೇಜಿನ ಪ್ರಾಚಾರ್ಯ ಕೆ.ಶಿವಶಂಕರ್, ಉಪಪ್ರಾಚಾರ್ಯ ಕೆ.ಚಂದ್ರಶೇಖರ್, ಕ್ರೀಡಾ ಉಸ್ತುವಾರಿ ಉಪನ್ಯಾಸಕ ಜಗದೀಶ್ ಕುರಿಯವರ್, ಮತ್ತು ರಾಕೇಶ್, ಹಾಗು ಉಪನ್ಯಾಸಕರು ಅಭಿನಂದಿಸಿದರು.

**ವಿಜೇತ ಕ್ರೀಡಾಪಟುಗಳು:** ಜೀವನ್ ಜಾರ್ಜ್, ಕ್ರಿಸ್ತ್ ಸಂದೇಶ್, ಅನಿಷ್ ಜಾಯ್ಸನ್, ಜಾಯ್ಸನ್ ಬೆಂಡಿಕ್ಟ್, ಎಡ್ವರ್ಡ್ ಆಂಡ್ರೋ, ಇಮ್ಯಾನುಯಲ್ ರೋಡ್ರಿಗ್ಯಸ್, ಪೆಭಿನ್ ಜೋಷ್, ಲೂಯಿಸ್ ರಾಜ್, ಉಲ್ಲಾಸ್.

# ಜಾಲಿಗೆ ಗ್ರಾಪಂಗೆ ಕೇಂದ್ರ ಹಣಕಾಸು ಆಯೋಗ ತಂಡ ಭೇಟಿ

**ಬೆಂಗಳೂರು ಗ್ರಾಮಾಂತರ:** ಕೇಂದ್ರ ಸರ್ಕಾರದ ಹಣಕಾಸು ಆಯೋಗದ ನಿಯೋಗವು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಜಾಲಿಗೆ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿನ ವಿವಿಧ ಘಟಕಗಳನ್ನು ವೀಕ್ಷಣೆ ನಡೆಸಿ ಮಾಹಿತಿ ಪಡೆದುಕೊಂಡರು.

ಕೇಂದ್ರ ಸರ್ಕಾರದ 16ನೇ ಹಣಕಾಸು ಆಯೋಗದ ಅಧ್ಯಕ್ಷರಾದ ಡಾ.ಅರವಿಂದ ಪನಗಾರಿಯಾ, ಸದಸ್ಯರಾದ ಅಜಯ್ ನಾರಾಯಣ ಝಾ, ಅನ್ನಿ ಜಾರ್ಜ್ ಮ್ಯಾಥ್ಯೂ, ಡಾ.ಮನೋಜ್ ಪಾಂಡಾ ಮತ್ತು ಡಾ.ಸೌಮ್ಯ ಕಾಂತಿ ಘೋಷ್ ತಂಡ ಭೇಟಿ ನೀಡಿ ಕೇಂದ್ರ ಹಾಗೂ ರಾಜ್ಯದ ಅನುದಾನಕ್ಕೆ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಮಾಹಿತಿ ಪಡೆದರು. ಜೊತೆಗೆ ಜಾಲಿಗೆ ಗ್ರಾಮ ಪಂಚಾಯಿತಿಯ ಆಯವ್ಯಯ, ವರಮಾನ, ಪಂಚತಂತ್ರ ಪೋರ್ಟಲ್ ಕಾರ್ಯ ವಿಧಾನದ ಬಗ್ಗೆ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಜೊತೆ ಸಮಾಲೋಚಿಸಿ ಮಾಹಿತಿ ಪಡೆದುಕೊಂಡರು. ನಂತರ ಜಾಲಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿರ್ಮಾಣ ಗೊಂಡಿರುವ ಅತ್ಯಾಧುನಿಕ ಗ್ರಂಥಾಲಯಕ್ಕೆ ಭೇಟಿ ನೀಡಿ ಗ್ರಂಥಾಲಯದಲ್ಲಿನ ಸೌಲಭ್ಯ ದ ಬಗ್ಗೆ ಮಾಹಿತಿ ಪಡೆದುಕೊಂಡರು. ಮೂರು ವರ್ಷ ಮೇಲ್ಪಟ್ಟ ನರೇಗಾ ಕೂಲಿ ಕಾರ್ಮಿಕರ ಮಕ್ಕಳ ಅನುಕೂಲಕ್ಕಾಗಿ ಮತ್ತು ಅವರ ಶೈಕ್ಷಣಿಕ ಪ್ರಗತಿ ಹೊಂದುವ ಉದ್ದೇಶದಿಂದ ಸ್ಥಾಪಿಸಲಾಗಿರುವ ಕೂಸಿನ ಮನೆ ವೀಕ್ಷಣೆ ನಡೆಸಿ ಕೂಸಿನ ಮನೆ ಅನುಕೂಲಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ತ್ಯಾಜ್ಯ ವಿಲೇವಾರಿ ಘಟಕ ಪರಿಶೀಲನೆ ನಡೆಸಿ, ವೈಜ್ಞಾನಿಕವಾಗಿ ತ್ಯಾಜ್ಯ ವಿಲೇವಾರಿ ಮಾಡುವ ವಿಧಾನ ಬಗ್ಗೆ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ಕಾರ್ಯದರ್ಶಿ (ಆಯವ್ಯಯ ಸಂಪನ್ಮೂಲ ಆರ್ಥಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಪಿ ಸಿ ಜಾಫರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಉಮಾ ಮಹಾದೇವನ್, ಜಿಲ್ಲಾಧಿಕಾರಿ ಡಾ. ಎನ್ ಶಿವಶಂಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಕೆ.ಎನ್ ಅನುರಾಧ, ರಾಜ್ಯ ಹಣಕಾಸು ಅಧಿಕಾರಿಗಳ ತಂಡ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೆ ರಮೇಶ್, ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಮಟ್ಟದ ಅಧಿಕಾರಿಗಳು, ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.



## ಸೆಪ್ಟೆಂಬರ್ 02 ರಂದು ದಿಶಾ ಸಮಿತಿ ಸಭೆ

**ಬೆಂಗಳೂರು ಗ್ರಾಮಾಂತರ:** ಚಿಕ್ಕಬಳ್ಳಾಪುರ ಕ್ಷೇತ್ರದ ಲೋಕಸಭಾ ಸದಸ್ಯರಾದ ಡಾ.ಕೆ ಸುಧಾಕರ್ ಅವರ ಅಧ್ಯಕ್ಷತೆಯಲ್ಲಿ ದಿಶಾ ಸಮಿತಿ ಸಭೆಯು ಸೆಪ್ಟೆಂಬರ್ 02(ಸೋಮವಾರ) ರಂದು ಬೆಳಗ್ಗೆ 10.30 ಗಂಟೆಗೆ ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ, ಗ್ರಾಮದ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ.

**ಸಮ್ಮೇಳನ ಯಶಸ್ಸಿನ ದೃಷ್ಟಿಯಿಂದ ಪ್ರಚಾರ ಕಾರ್ಯ ಮಹತ್ವದ್ದು–ದರ್ಶನ್ ಪುಟ್ಟಣ್ಣಯ್ಯ**

# 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ

**ಮಂಡ್ಯ:** ಮುಂಬರುವ ಡಿಸೆಂಬರ್ 20, 21 ಮತ್ತು 22ರಂದು ಮಂಡ್ಯದಲ್ಲಿ ನಡೆಯಲಿರುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಹೆಚ್ಚು ಜನರನ್ನು ಸೇರಿಸಿ ಸಮ್ಮೇಳನ ಯಶಸ್ವಿಗೊಳಿಸಲು ಪ್ರಚಾರ ಕಾರ್ಯ ಮಹತ್ವದ್ದು ಎಂದು ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಗುರುವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಚಾರ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಾವೇರಿಯಲ್ಲಿ 9 ಲಕ್ಷ ಜನ ಸೇರಿದ್ದರು ಎಂಬ ಮಾಹಿತಿ ಹಿನ್ನೆಲೆಯಲ್ಲಿ ಮಂಡ್ಯದಲ್ಲಿ ಅದಕ್ಕಿಂತ ಹೆಚ್ಚು ಜನರನ್ನು ಸೇರಿಸುವ ದೃಷ್ಟಿಯಿಂದ ಪ್ರಚಾರವನ್ನು ವಿವಿಧ ಆಯಾಮಗಳಲ್ಲಿ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಸಮಿತಿಯ ಜವಾಬ್ದಾರಿ ಅತ್ಯಂತ ಹೆಚ್ಚಾಗಿರುತ್ತದೆ. ಉಪಸಮಿತಿಗಳನ್ನು ರಚಿಸಿ ಸದಸ್ಯರಿಗೆ ಕಾರ್ಯಹಂಚಿಕೆ ಮಾಡಲಾಗುವುದು ಎಂದರು.

ವೈವಿಧ್ಯಮಯ ರೀತಿಯಲ್ಲಿ ಪ್ರಚಾರ:ಮುದ್ರಣ ಮಾಧ್ಯಮ, ದೃಶ್ಯ ಮಾಧ್ಯಮ, ಗ್ರಾಫಿಕ್ ಡಿಸೈನ್, ಸಮಾಜಿಕ ಜಾಲತಾಣ ಮತ್ತು ಆಪ್ ತಂತ್ರಜ್ಞಾನಗಳ ಮೂಲಕ ಪ್ರಚಾರ ನಡೆಸಲು ಅನುಕೂಲವಾಗುವಂತೆ ಪರಿಣತ ಕಂಪನಿಗಳಿಗೆ ತಮ್ಮ ಯೋಜನೆ ಮಂಡಿಸಲು ಅವಕಾಶ ನೀಡಿ,ಆಯಾ ಕ್ಷೇತ್ರದ ತಜ್ಞರು ವೀಕ್ಷಿಸಿದ ನಂತರ ಆಯ್ಕೆ ಮಾಡಿ ಕೆಲಸ ಮಾಡಲು ಅವಕಾಶ ನೀಡಲಾಗುವುದು ಎಂದರು.

**ವಿದ್ಯಾರ್ಥಿಗಳಿಗೆ ಚಟುವಟಿಕೆ ನೀಡಿ ಪ್ರಚಾರ:** ನಾಗಮಂಗಲ ತಾಲೂಕು ಕಸಾಪ ಅಧ್ಯಕ್ಷ ಚಂದ್ರಶೇಖರ್ ಮಾತನಾಡಿ ಸಮ್ಮೇಳನದ ಬಗ್ಗೆ ಜಾಗೃತಿ ಮೂಡಿಸಲು ವಿದ್ಯಾರ್ಥಿಗಳಿಗೆ ರಸಪ್ರಶ್ನೆ,ಪ್ರಬಂಧ ಮುಂತಾದ ಸಾಹಿತ್ಯಿಕ ಚಟುವಟಿಕೆ ನಡೆಸಿ ಅವರಲ್ಲಿ ಜಾಗೃತಿ ಮೂಡಿಸಿ ಅವರ ಮೂಲಕ ಹಳ್ಳಿಗಳಿಗೆ ಸಮ್ಮೇಳನದ ವಿಷಯ ಮುಟ್ಟಿಸುವ ಕಾರ್ಯ ಮಾಡಬೇಕು ಎಂದರು.

ಜಿಲ್ಲಾ ಕಸಾಪ ಗೌ.ಕಾರ್ಯದರ್ಶಿ ಡಾ.ಕೃಷ್ಣೇಗೌಡ ಹುಸ್ಕೂರು ಮಾತನಾಡಿ ಗ್ರಾಮ ಮಟ್ಟದಲ್ಲಿ ಸೈಕಲ್ ಮತ್ತು ಬೈಕ್ ಜಾಥಾಗಳನ್ನು ಹಮ್ಮಿಕೊಳ್ಳಬೇಕು. ಡಿಸೆಂಬರ್ ಮಾಹೆಯಲ್ಲಿ ಮನೆಯ ಮುಂದೆ ಕನ್ನಡ ಸಾಹಿತ್ಯ ಕುರಿತು ರಂಗೋಲಿಗಳು ಹಾಗೂ ಸಂಜೆ ಕನ್ನಡ ದೀಪ ಹಚ್ಚುವ ರೀತಿ ಕಾರ್ಯಕ್ರಮಗಳನ್ನು ಸಂಘಟಿಸಬೇಕು ಎಂದರು.

ಮಂಡ್ಯ ಜಿಲ್ಲೆ ಮಾತ್ರವಲ್ಲ ಬೇರೆ ಜಿಲ್ಲೆಗಳಲ್ಲಿ ಪ್ರಚಾರ ಕಾರ್ಯಕ್ರಮವನ್ನು ಆಯೋಜಿಸಿ ಹೆಚ್ಚು ಜನರನ್ನು ಸಮ್ಮೇಳನದಲ್ಲಿ ಭಾಗವಹಿಸುವಂತೆ ಮಾಡಬೇಕು ಮೈಸೂರು ದಸರಾ ಕಾರ್ಯಕ್ರಮದಲ್ಲಿ ಸಮ್ಮೇಳನದ ವಿಶೇಷತೆ ಇತುವ ಸ್ಥಬ್ದಚಿತ್ರವನ್ನು ಸಿದ್ಧಪಡಿಸಿ ಭಾಗವಹಿಸಲು ಕಳುಹಿಸಬೇಕು. ದಸರಾ ಕಾರ್ಯಕ್ರಮ ನಡೆಯುವ ಎಲ್ಲಾ ಜಿಲ್ಲೆಗಳಲ್ಲಿ ಸಮ್ಮೇಳನದ ಪ್ರಚಾರ ನೀಡಬೇಕು ಎಂದು ಸಮಿತಿಯ ಸದಸ್ಯ ಹಾಗೂ ಮಾಧ್ಯಮ ಪ್ರತಿನಿಧಿ ರೋಹಿತ್ ತಿಳಿಸಿದರು.

ಪತ್ರಕರ್ತ ಕೆ.ಶಂಭು ಕಬ್ಬನಹಳ್ಳಿ ಮಾತನಾಡಿ ಹೊರ



ರಾಜ್ಯ ಹಾಗೂ ವಿದೇಶಗಳಲ್ಲಿ ಕನ್ನಡ ಬಗ್ಗೆ ಆಸಕ್ತಿ ಹೊಂದಿರುವ ಆನೇಕ ಜನರು ಇದ್ದರೆ. ಸಮ್ಮೇಳನದಲ್ಲಿ ದೇಶ-ವಿದೇಶದಲ್ಲಿ ನೆಲೆಸಿರುವ ಕನ್ನಡಿಗರು ಪಾಲ್ಗೊಳ್ಳಲು ಪ್ರಚೋದಿಸಬೇಕು ಎಂದರು.

ಸಮಿತಿ ಸದಸ್ಯರಾದ ಯತೀಶ್ ಮಾತನಾಡಿ ಪ್ರಚಾರ ಕನ್ನಡದ ಕಂಪನ್ನು ಬೀರುವ ಜೊತೆಗೆ ಮಂಡ್ಯ ಜಿಲ್ಲೆಯ ಸೊಗಡನ್ನು ಪಸರಿಸಬೇಕು. ಕೃಷಿ ಆಧಾರಿತ ಜಿಲ್ಲೆ ಆಗಿರುವುದರಿಂದ ಮುಖ್ಯವಾಗಿ ರೈತ ಕೇಂದ್ರಿತ ವಿಷಯಗಳನ್ನು ಮುನ್ನೆಲೆಗೆ ತಂದು ಪ್ರಚಾರ ರೂಪಿಸಬೇಕು. ಜಿಲ್ಲೆಯ ಪ್ರವಾಸಿ ತಾಣ, ಜನಪದ ವಿಷಯಗಳನ್ನು ಬಳಸಿಕೊಳ್ಳಬೇಕು ಎಂದರು.

ಪಾಂಡವಪುರ ತಾಲೂಕು ಕಸಾಪ ಅಧ್ಯಕ್ಷ ಪ್ರಕಾಶ್ ಮೇಣಾಗರ ಮಾತನಾಡಿ 'ಸಾಹಿತ್ಯ ಪರಿಷತ್ತಿನ ನಡೆ ಶಾಲೆಗಳ ಕಡೆ' ಎಂಬ ಪರಿಕಲ್ಪನೆಯಲ್ಲಿ ಸಾಹಿತ್ಯ, ಸಂಸ್ಕೃತಿ, ಸಾಹಿತಿಗಳ ಪರಿಚಯ ಮಾಡಿಸುವ ಸಾಹಿತ್ಯ ಅಭಿಯಾನ ಕಾರ್ಯಕ್ರಮ ನಡೆಸಬೇಕು ಎಂದು ತಿಳಿಸಿದರು

ಕೃಷಿ ಮೂಲ ಜಿಲ್ಲೆ ಆಗಿರುವುದರಿಂದ ಕಬ್ಬು ಕಡಿಯುವುದು, ನಾಟಿ ಮಾಡುವುದು ಮುಂತಾದ ಕೃಷಿ ಚಟುವಟಿಕೆಗಳ ಸ್ಪರ್ಧೆ ಏರ್ಪಡಿಸಿ ಜಾಗೃತಿ ಮೂಡಿಸಬಹುದು ಮಂಡ್ಯ ನಗರದಿಂದ ಹೆಚ್ಚು ಜನ ಸಮ್ಮೇಳನಕ್ಕೆ ಬರುವಂತೆ ಮಾಡಲು 35 ವಾರ್ಡ್ಗಳ ನಗರಸಭಾ ಸದಸ್ಯರಿಗೆ ಹೆಚ್ಚಿನ ಜವಾಬ್ದಾರಿ ವಹಿಸಬೇಕು. ಸಾಹಿತ್ಯ ಸಮ್ಮೇಳನಕ್ಕೆ ಪೂರಕವಾಗಿ ಮದ್ದೂರು ಮತ್ತು ಮಳವಳ್ಳಿ ತಾಲೂಕುಗಳಲ್ಲಿ ಮ್ಯಾರಥಾನ್ ಓಟ ಹಾಗೂ ಕಬ್ಬು ಕಡಿಯುವ ಸ್ಪರ್ಧೆಗಳನ್ನು ಹಮ್ಮಿಕೊಳ್ಳುವುದಾಗಿ ಸಮಿತಿ ಸದಸ್ಯ ಶಿವಪ್ರಸಾದ್ ತಿಳಿಸಿದರು.

ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕ,ಪ್ರಚಾರ ಸಮಿತಿ ಸದಸ್ಯ ಕಾರ್ಯದರ್ಶಿ ರಾಘವೇಂದ್ರ ಮಾತನಾಡಿ ರಾಜ್ಯಾದ್ಯಂತ ಇರುವ ಸರ್ಕಾರಿ ಹೋರ್ಡಿಂಗ್ಸ್ ಗಳನ್ನು ಪ್ರಚಾರ ಕಾರ್ಯಕ್ಕೆ ಬಳಸಿಕೊಳ್ಳಲಾಗುವುದು ಎಂದರು.

ಶನಿವಾರ ಬೆಳಿಗ್ಗೆ 9 ಗಂಟೆಗೆ ನಡೆಯುವ ಮತ್ತೊಂದು ಸುತ್ತಿನ ಸಭೆಗೆ ಪ್ರಚಾರ ಸಮಿತಿಯ ಎಲ್ಲಾ ಸದಸ್ಯರು ಭಾಗವಹಿಸಬೇಕೆಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ಸೂಚಿಸಿದರು.

ಪ್ರಚಾರ ಸಮಿತಿ ಸಭೆಯಲ್ಲಿ ಕಸಾಪ ಸಮ್ಮೇಳನ ಸಂಚಾಲಕಿ ಮೀರಾ ಶಿವಲಿಂಗಯ್ಯ, ರಾಘವೇಂದ್ರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಎಸ್.ಹೆಚ್.ನಿರ್ಮಲಾ, ಜಿಲ್ಲಾ ಕಸಾಪ ಕಾರ್ಯದರ್ಶಿ ಹರ್ಷ ವಿ ಪಣ್ಣೆ ದೊಡ್ಡಿ, ಕೋಶಾಧ್ಯಕ್ಷ ಬಿ.ಎಂ.ಅಪ್ಪಾಜಪ್ಪ ಪದಾಧಿಕಾರಿಗಳಾದ ಧನಂಜಯ, ಚಂದ್ರಲಿಂಗು,ಗುರುಪ್ರಸಾದ್, ಶಿವಪ್ರಸಾದ್.ಕೆ.ಎಂ, ಬಲ್ಲೇನಹಳ್ಳಿ ಮಂಜುನಾಥ್, ಹೊಳಲು ಶ್ರೀಧರ್ ಮುಂತಾದವರು ಭಾಗವಹಿಸಿದ್ದರು.

ಮೈಸೂರುವಿಭಾಗಕ್ಕೆರಥಯಾತ್ರೆಯಲ್ಲಿಆದ್ಯತೆಇರಲಿ ಕನ್ನಡ ಜ್ಯೋತಿ ರಥಯಾತ್ರೆ ಸಮಿತಿ ಸಭೆಯಲ್ಲಿ ಮಾತನಾಡಿದ ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ ಸೆ.22 ರಿಂದ ಉತ್ತರಕನ್ನಡ ಜಿಲ್ಲೆ ಶಿರಸಿಯ ಭುವನಗಿರಿಯಿಂದ ಹೊರಡುವ ಕನ್ನಡ ಜ್ಯೋತಿ ರಥಯಾತ್ರೆ ರಾಜ್ಯಾದ್ಯಂತ 87 ದಿನಗಳ ಕಾಲ ಸಂಚರಿಸುತ್ತದೆ. ಮಂಡ್ಯದಲ್ಲಿ ಸಾಹಿತ್ಯ ಸಮ್ಮೇಳನ ನಡೆಯುತ್ತಿರುವುದರಿಂದ ಮೈಸೂರು ವಿಭಾಗಕ್ಕೆ ಸೇರಿದ ಮಂಡ್ಯ,ಮೈಸೂರು, ಹಾಸನ, ಚಾಮರಾಜನಗರ, ಕೊಡಗು, ರಾಮನಗರ ಮುಂತಾದ ಜಿಲ್ಲೆಗಳಲ್ಲಿ ರಥಯಾತ್ರೆಗೆ ಆದ್ಯತೆ ನೀಡಬೇಕು. ಜಿಲ್ಲೆಯಲ್ಲಿ ಸಂಚರಿಸುವ ರಥಕ್ಕೂ ಚಾಲನೆ ನೀಡಲಾಗುವುದು.ನಿರ್ಮಾಣವಾಗುವ ರಥ ಸುಸಜ್ಜಿತವಾಗಿರಬೇಕು ಎಂದರು.

ಉತ್ತರ ಕನ್ನಡ ಜಿಲ್ಲೆಯ ಶಿರಸಿಯಿಂದ ಹೊರಡುವ ರಥಯಾತ್ರೆ ಸಂಚರಿಸುವ ಜಿಲ್ಲೆಯ ತಾಲೂಕಿಗೆ ಅನುಗುಣವಾಗಿ ದಿನಗಳನ್ನು ನಿಗದಿಪಡಿಸಿ ತಹಶೀಲ್ದಾರ್ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸಮಿತಿಯ ಸದಸ್ಯರಿಗೆ ವಿವಿಧ ಜಿಲ್ಲೆಗಳ ಜವಾಬ್ದಾರಿ ವಹಿಸಲಾಯಿತು. ಜವಾಬ್ದಾರಿ ವಹಿಸಿಕೊಂಡಿರುವ ಸದಸ್ಯರು ಮತ್ತು ಅಧಿಕಾರಿಗಳು ಆಯಾ ಜಿಲ್ಲೆಯ ಮುಖ್ಯ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್‌ನ ಸಿಇಒ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರನ್ನು ಸಂಪರ್ಕಿಸಿ ಸಂಚರಿಸುವ ಮಾರ್ಗ, ಪ್ರಯಾಣ ದೂರ, ದಿನ, ತಂಗುವ ಸ್ಥಳಗಳನ್ನು ನಿರ್ಧರಿಸಬೇಕು ಎಂದರು. ರಥಯಾತ್ರೆ ಸಭೆಯಲ್ಲಿ ಉಪವಿಭಾಗಾಧಿಕಾರಿ ಶಿವಮೂರ್ತಿ ಸೇರಿದಂತೆ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಶಿಕ್ಷಣ ಕ್ಷೇತ್ರದಲ್ಲಿ ಅಂದಿಗೂ ಇಂದಿಗೂ ಸಾಕಷ್ಟು ವ್ಯತ್ಯಾಸವಾಗಿದೆ

**ವಿಜಯಪುರ:** 75 ವರ್ಷಗಳ ಹಿಂದಿನ ವಿಜಯಪುರ ಪ್ರೌಢಶಾಲೆಯಲ್ಲಿನ ಪರಿಸ್ಥಿತಿಗೂ ಇಂದಿನ ಪರಿಸ್ಥಿತಿಗೂ ಸಾಕಷ್ಟು ವ್ಯತ್ಯಾಸಗಳಿದ್ದು, ಶೈಕ್ಷಣಿಕವಾಗಿ ವಿದ್ಯಾರ್ಥಿಗಳು ಕಲಿಯಲು ಸಾಕಷ್ಟು ಅನುಕೂಲಗಳು, ಉತ್ತಮ ಕಟ್ಟಡಗಳಿದ್ದು, ಲೈಬ್ರರಿ, ಪ್ರಯೋಗಾಲಯ, ಸಾಕಷ್ಟ್ ಶಿಕ್ಷಕರು, ಸ್ಕಾಲರ್ಶಿಪ್ ಗಳು, ಅದರೊಂದಿಗೆ ಪ್ರತಿಭಾ ಪುರಸ್ಕಾರಗಳು ಹೀಗೆಲ್ಲಾ ಇದ್ದು ಅಂದಿನ ಸಂದರ್ಭದಲ್ಲಿ ಇವಾವುದೇ ಸರಿಯಾದ ಸೌಲಭ್ಯಗಳು ಇರುತ್ತಿರಲಿಲ್ಲವೆಂದು ನಿವೃತ್ತ ಹಿರಿಯ ಶಿಕ್ಷಕ ಹಾಗೂ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿ ಅಚ್ಚಣ್ಣ ರವರು ತಿಳಿಸಿದರು. ಶುಕ್ರವಾರದಂದು ಇಲ್ಲಿನ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಪ್ರೌಢಶಾಲಾ ವಿಭಾಗದ 2024-25ನೇ ಸಾಲಿನ ಚನ್ನರಾಯಪಟ್ಟಣ-ವಿಜಯಪುರ ಹೋಬಳಿ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಹಾಗೂ ಮೆಟ್ರಿಕ್ ಮೇಳ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡುತ್ತಿದ್ದರು.

ಮತ್ತೊಬ್ಬ ಸನ್ಮಾನಿತರಾದ ಶಾಲೆಯ ನಿವೃತ್ತ ಶಿಕ್ಷಕಿ ಆರ್ ಜಯಂತಿ ರವರು ಮಾತನಾಡಿ ಎಲ್ಲಿಂದಲೋ ಬಂದ ನಮಗೆ ವಿಜಯಪುರ ಜನತೆ ಹಾಗೂ ವಿದ್ಯಾರ್ಥಿಗಳು ನೀಡಿದ ಪ್ರೀತಿ ಗೌರವ ಅಪ್ಯಾಯಮಾನತೆಯನ್ನು ಎಂದಿಗೂ ಮರೆಯಲಾಗುವುದಿಲ್ಲವೆಂದು ದಶಕಗಳ ಹಿಂದೆ ಶಿಕ್ಷಕಿಯಾಗಿ ಕೆಲಸ ಮಾಡಿ ಬೇರೆಡೆ ಹೋಗಿ ನೆಲೆಸಿದ್ದರೂ ಸಹ ನಮ್ಮನ್ನು ಗುರುತಿಸಿ ಕರೆಸಿ ಸನ್ಮಾನಿಸುತ್ತಿರುವುದು ನಮ್ಮ ಹಳೆಯ ವಿದ್ಯಾರ್ಥಿಗಳ ಪ್ರೀತಿಗೆ ಸಾಕ್ಷಿ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲಾ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಹನೀಫುಲ್ಲ ಮಾತನಾಡಿ ಶಾಲೆಯಲ್ಲಿ ದೊರೆಯುತ್ತಿರುವ ಅನುಕೂಲಗಳನ್ನು ಬಳಸಿ ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ಉತ್ತಮ ಅಂಕಗಳನ್ನು ಗಳಿಸಿ ಗುರು ಹಿರಿಯರಲ್ಲಿ ಭಕ್ತಿ ಇರಿಸಿಕೊಳ್ಳಬೇಕೆಂದು ತಿಳಿಸಿದರು.

ಹಿರಿಯ ವಿದ್ಯಾರ್ಥಿಗಳ ಸಂಘದ ಕಾಳಪ್ಪ ರವರು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಗದು ಬಹುಮಾನ ವಿತರಿಸಿ ಸನ್ಮಾನಿಸಿದರು.ಇದೇ ಸಂದರ್ಭದಲ್ಲಿ ಕಳೆದ 15 ವರ್ಷಗಳ ಕಾಲ ವಿಜಯಪುರದಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸಿ ಹೊಸಕೋಟೆಯ ಬೇಗೂರಿಗೆ ವರ್ಗಾವಣೆಗೊಂಡ ರೋಹಿಣಿ ಮೇಡಂ ರವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಟೌನ್ ಅಧ್ಯಕ್ಷರಾದ ಜೆಎನ್ ಶ್ರೀನಿವಾಸ್, ಪುರಸಭಾ ಸದಸ್ಯರಾದ ಬೈರೇಗೌಡ, ರಾಜಣ್ಣ, ನಾರಾಯಣಸ್ವಾಮಿ, ಉಪ ಪ್ರಾಂಶುಪಾಲರಾದ ವೆಂಕಟೇಶ್, ಶಿಕ್ಷಕರುಗಳಾದ ನಾರಾಯಣ್, ಕರಗಪ್ಪ, ಜೆ ಸಿ ಐನ ವಲಯ ತರಬೇತುದಾರರಾದ ಎಸ್ ರಮೇಶ್, ಮಂಡಿಬೆಲೆ ದೇವರಾಜು, ಲಕ್ಷ್ಮೀನಾರಾಯಣ್ ಹಾಗೂ ಚನ್ನರಾಯಪಟ್ಟಣ ಹೋಬಳಿಯ ವಿಜಯಪುರ ಹೋಬಳಿಯ ಅನುದಾನಿತ, ಅನುದಾನ ರಹಿತ ಶಾಲೆಗಳ ಶಿಕ್ಷಕವೃಂದದವರು ಉಪಸ್ಥಿತರಿದ್ದರು.



# ಕಂದಾಯ ಇಲಾಖೆ ಪಾಳುಬಿದ್ದ ಕಟ್ಟಡದ ಗಿಡಗೆಂಟೆಗಳು ಪುರಸಭೆಯಿಂದ ತೆರವು

**ಅನಂತರಾಜೇಅರಸು ಬೇಲೂರು**

ಇಲ್ಲಿನ ಪುರಸಭೆಯ ಅಧ್ಯಕ್ಷ ಎ.ಆರ್. ಅಶೋಕ್ ಅವರ ದೂರಾಲೋಚನೆ, ವಕೀಲ ದೇವರಾಜ್ ಅವರ ಆಸಕ್ತಿ ಇದರಿಂದಾಗಿ ಪಟ್ಟಣದ ಹೃದಯ ಭಾಗದಲ್ಲಿ ಇದ್ದ ಕಂದಾಯ ಇಲಾಖೆಗೆ ಸೇರಿದ ರಾಜಸ್ವ ನಿರೀಕ್ಷಕರ ಪಾಳುಬಿದ್ದ ಕಟ್ಟಡದ ಮೇಲಿನ ಗಿಡಗೆಂಟೆಗಳಿಗೆ ಮೋಕ್ಷ ದೊರೆತಿದೆ.

ರಾಜ್ಯ ಸರಕಾರಿ ನೌಕರರ ಭವನದ ಮುಂಭಾಗವಿರುವ ಕಂದಾಯ ಇಲಾಖೆಯ ಪಾಳು ಬಿದ್ದ ಈ ಕಟ್ಟಡದ ಮೇಲೆ ಗಿಡಗೆಂಟೆಗಳು ಬೆಳೆದು ಇದೇನು ಕಾಡು ಪ್ರಾಣಿಗಳ ಗುಹೆಯೋ ಎಂಬಂತೆ ಭಾಸವಾಗುತ್ತಿತ್ತು. ಇದರ ಮುಂಭಾಗದ ರಸ್ತೆಯಲ್ಲೆ ಪ್ರತಿನಿತ್ಯ ಈ ಭಾಗದ 3 ಶಾಲಾ ಕಾಲೇಜು ವಿದ್ಯಾರ್ಥಿಗಳು, ನಿವಾಸಿಗಳು ಓಡಾಡುತ್ತಿದ್ದರು. ಈ ಕಟ್ಟಡದ ಪಕ್ಕದಲ್ಲೆ ಇರುವ ಪಾಳುಬಿದ್ದ ಸ್ಥಳದಲ್ಲಿ



ಸಾರ್ವಜನಿಕವಾಗಿ ಅಂಜಿಕೆ, ಅಳಲು ಇಲ್ಲದೆ ಮೂತ್ರ ವಿಸರ್ಜನೆ ಮಾಡುವುದು ಮಾಮೂಲಾಗಿತ್ತು. ಈ ಬಗ್ಗೆ ಪತ್ರಿಕೆ ಸಚಿತ್ರ ವರದಿ ಪ್ರಕಟಿಸಿತ್ತಾದರೂ ಕ್ರಮಕ್ಕೆ ಕಂದಾಯ ಇಲಾಖೆ ಅಧಿಕಾರಿಗಳು ಯೋಚಿಸಲಿಲ್ಲ. ಪರಿಸರದ ಬಗ್ಗೆ ಮಾರುದ್ದ ಮಾತನಾಡುವ ಯಾವೊಬ್ಬ ಅಧಿಕಾರಿಗಳು ತಮ್ಮ ಕಣ್ಣೆದುರಿಗೇ ಪರಿಸರ ಹೇಗಿದೆ ಎಂಬುದನ್ನು ಕಂಡರೂ ಕ್ರಮ ಕೈಗೊಳ್ಳಲಿಲ್ಲ. ಶುಕ್ರವಾರ ಈ ರಸ್ತೆಯಲ್ಲಿನ ಫುಟ್‌ಪಾತ್ ಮೇಲಿನ ವಸ್ತುಗಳ ತೆರವಿಗೆ ಆಗಮಿಸಿದ ವೇಳೆ ವಕೀಲ ದೇವರಾಜ್ ಅವರು, ಪಾಳುಬಿದ್ದ ಕಟ್ಟಡದ ಮೇಲಿನ ಗಿಡಗೆಂಟೆಗಳ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿ, ತೆರವುಗೊಳಿಸುವಂತೆ ಒತ್ತಾಯಿಸಿದ್ದಾರೆ. ವಾಸ್ತವ ಸಂಗತಿ ಅರಿತ ಪುರಸಭ ಅಧ್ಯಕ್ಷ ಎ.ಆರ್. ಅಶೋಕ್, ಕಟ್ಟಡ ಕಂದಾಯ ಇಲಾಖೆಗೆ ಸೇರಿದ್ದು ಅದರ ಸ್ವಚ್ಚತೆ ಆ ಇಲಾಖೆ ಅಧಿಕಾರಿಗಳ ಜವಾಬ್ದಾರಿಯಾಗಿದ್ದರೂ ಸ್ವಚ್ಚತೆ ದೃಷ್ಟಿಯಿಂದ ತಾವೇ ತೆರವಿಗೆ ಆಲೋಚಿಸಿದ್ದಲ್ಲದೆ ತಕ್ಷಣವೇ ಕ್ರಮಕ್ಕೆ ಮುಂದಾಗಿ ಸಿಬ್ಬಂದಿಗೆ ಸ್ವಚ್ಚಗೊಳಿಸುವಂತೆ ಸೂಚಿಸಿದ್ದರ ಫಲವಾಗಿ ಇಂದು ಕಟ್ಟಡ ಒಂದಿಷ್ಟು ಸ್ವಚ್ಚಗೊಂಡಿದೆ. ಇದರ ಜೊತೆಗೆ ಈ ಕಟ್ಟಡದ ಪಕ್ಕದಲ್ಲಿರುವ ಪಾಳುಬಿದ್ದ ಸ್ಥಳಕ್ಕೆ ಬೇಲಿ ಹಾಕಿಸುವ ಮೂಲಕ ಪರಿಸರ ಸ್ವಚ್ಚತೆಗೆ ಮುಂದಾಗಬೇಕೆಂದು ಸಾರ್ವಜನಿಕರು ಮನವಿ ಮಾಡಿದ್ದಾರೆ.

## ಹುಳಿಯಾರು ಕನಕ ಬ್ಯಾಂಕ್ ಅಧ್ಯಕ್ಷರಾಗಿ ಗುಜರಿನಾಗಣ್ಣ, ಉಪಾಧ್ಯಕ್ಷರಾಗಿ ಪತ್ರಕರ್ತ ಯೋಗೀಶ್

**ಹುಳಿಯಾರು:** ಹುಳಿಯಾರಿನ ಕನಕ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಗುಜರಿನಾಗಣ್ಣ ಹಾಗೂ ಉಪಾಧ್ಯಕ್ಷರಾಗಿ ಪತ್ರಕರ್ತ ಯೋಗೀಶ್ ಅವರು ಶುಕ್ರವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ನಿರ್ದೇಶಕರುಗಳಾದ ಸೀಗೇಬಾಗಿ ಸಿದ್ಧರಾಮಯ್ಯ, ಸಿಂಗಾಪುರ ಗಂಗಾಧರಯ್ಯ, ಯಳನಾಡು ಶಿವರಾಮು, ಲಿಂಗಪ್ಪನಪಾಳ್ಯ ರಾಘವೇಂದ್ರ, ನಂದಿಹಳ್ಳಿ ಬೋರಲಿಂಗಯ್ಯ, ವಾಣಿಶ್ರೀ, ಯಳನಾಡು ಇಂದ್ರಮ್ಮ, ಕಾರ್ಯದರ್ಶಿ ದೇವಿಪ್ರಸಾದ್ ಉಪಸ್ಥಿತರಿದ್ದರು.



**ಹುಳಿಯಾರಿನ ಕನಕ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಗುಜರಿನಾಗಣ್ಣ ಹಾಗೂ ಉಪಾಧ್ಯಕ್ಷರಾಗಿ ಪತ್ರಕರ್ತ ಯೋಗೀಶ್ ಅವರು ಶುಕ್ರವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.**

## ಹುಳಿಯಾರಿನಲ್ಲಿ ಭಾನುವಾರ ವಿದ್ಯುತ್ ವ್ಯತ್ಯಯ

**ಹುಳಿಯಾರು:** ಹುಳಿಯಾರು ಪಟ್ಟಣದ ಎಪಿಎಂಸಿ ಹತ್ತಿರ ಎಲ್‌ಟಿ ಕೇಬಲ್ ಕಾಮಗಾರಿ ನಿರ್ವಹಿಸಬೇಕಾಗಿರುವುದರಿಂದ ಹುಳಿಯಾರು 110/11 ಕೆವಿ ಉಪಸ್ಥಾವರದ ಎಫ್ 11 ಬೈರಪುರ ಪೂರಕ, ಕಂಪನಹಳ್ಳಿ, ಹುಳಿಯಾರು ಪಟ್ಟಣದ ಆಜಾದ್ ನಗರ, ಬಸವೇಶ್ವರ ನಗರ, ಎಪಿಎಂಸಿ ಮಾರ್ಕೆಟ್, ಸಿರಾ ಗೇಟ್‌ಗಳಿಗೆ ಸೆ.1 ರ ಬೆಳಗ್ಗೆ 10 ರಿಂದ 5 ರವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ.

## ಕಾಣೆಯಾದವರ ಪತ್ತೆಗಾಗಿ ಮನವಿ

**ಮಂಡ್ಯ:** ನಗರದ ಕಲ್ಲಹಳ್ಳಿ ಹಳೆವೂರಿನ ಜ್ಯೋತಿ ಎಸ್ (27) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ಮಹಿಳೆಯು 5.3 ಅಡಿ ಎತ್ತರ, ಕೋಲುಮುಖ, ಸಾಧಾರಣ ಮೈಕಟ್ಟು, ಬಿಳಿ ಮೈಬಣ್ಣ, ಬಲಗೈಯಲ್ಲಿ ಶೇಖರ್ ಎಂದು ಹಚ್ಚೆ ಇದ್ದು ಕಾಣೆಯಾದ ದಿನ ಕೇಸರಿ ಬಣ್ಣದ ಟೀಶರ್ಟ್, ಕೆಂಪು ಮತ್ತು ಬಿಳಿ ಬಣ್ಣದ ಲಂಗ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 08232-22466/224500 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಪಶ್ಚಿಮ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ತಿಳಿಸಿದ್ದಾರೆ.

## ವಾರಸುದಾರರ ಪತ್ತೆಗಾಗಿ ಮನವಿ

**ಮಂಡ್ಯ:** ಮಂಡ್ಯ-ಹನಕೆರೆ ನಡುವಿನ ಮಾರ್ಗದ ಉಮ್ಮಡಹಳ್ಳಿ ಗೇಟ್ ಬಳಿ ರೈಲಿಗೆ ಸಿಲುಕಿ ಅಪರಿಚಿತ ವ್ಯಕ್ತಿಯೊಬ್ಬರು ಸಾವನ್ನಪ್ಪಿದ್ದಾರೆ. ಮೃತನ ಜೇಬಿನಲ್ಲಿ ಅಸ್ಪತ್ರೆ ಚೀಟಿಯೊಂದು ಪತ್ತೆಯಾಗಿದ್ದು ಚಂದ್ರಶೇಖರ್ ಬೆಳಗುಂಬ ತುಮಕೂರು ಎಂದು ಬರೆದಿದೆ. ಈ ಕುರಿತು ಮಂಡ್ಯ ರೈಲ್ವೇ ಪೊಲೀಸ್ ಉಪಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಮೃತ ವ್ಯಕ್ತಿಗೆ ಸುಮಾರು 50 ವರ್ಷ ಸಾಧಾರಣ ಮೈಕಟ್ಟು, ಕಪ್ಪು ಮೈಬಣ್ಣ, ದುಂಡನೆಯ ಮುಖ ಚಪ್ಪಟೆ ಮೂಗು ತಲೆಯಲ್ಲಿ ಒಂದು ಇಂಚು ಕಪ್ಪು ಕೂದಲು ಬಿಳಿ ಬಣ್ಣದ ಮೀಸೆ ಮೃತನ ಬಲಗೈಯಲ್ಲಿ ಎಸ್.ಎಲ್.ವಿ ಎಂಬ ಹಸಿರು ಅಚ್ಚೆ ಇರುತ್ತದೆ.ವಾರಸುದಾರರಿದ್ದಲ್ಲಿ ದೂ.ಸಂ: 08212-516579/ 9480802122 ಅನ್ನು ಸಂಪರ್ಕಿಸಬಹುದು.

## ಹನಿ ನೀರಾವರಿ ಸೌಲಭ್ಯ ಅರ್ಜಿ

**ಪಿರಿಯಾಪಟ್ಟಣ:** 2024-25 ನೇ ಸಾಲಿಗಾಗಿ ತೋಟಗಾರಿಕೆ ಇಲಾಖೆಯಿಂದ ಹನಿ ನೀರಾವರಿ ಅಳವಡಿಸಿಕೊಳ್ಳಲು ಆಸಕ್ತ ತೋಟಗಾರಿಕೆ ಬೆಳೆ ಬೆಳೆಯುವ ರೈತರಿಂದ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಅರ್ಜಿ ಅಹ್ವಾನಿಸಲಾಗಿದೆ. ಈ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ರೈತರಿಗೆ ಗರಿಷ್ಟ 2 ಹೆಕ್ಟೇರ್ ವರೆಗೆ ಶೇ.90 ರಷ್ಟು ಸಹಾಯಧನ ನೀಡಲಾಗುತ್ತದ್ದು, 2 ಹೆಕ್ಟೇರ್ ಮೇಲ್ಪಟ್ಟು 5 ಹೆಕ್ಟೇರ್ ವರೆಗೂ ಶೇ.45 ರಷ್ಟು ಸಹಾಯಧನ ನೀಡಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ರೈತರು ಕಂದಾಯ ಇಲಾಖೆಯಿಂದ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸುವುದು ಕಡ್ಡಾಯವಾಗಿದ್ದು, ಸಾಮಾನ್ಯ ವರ್ಗಕ್ಕೆ ಜಾತಿ ಪ್ರಮಾಣಪತ್ರ ಅಗತ್ಯವಿರುವುದಿಲ್ಲ. ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಅಳವಡಿಸುವ ಮೊದಲು, ತಾಲೂಕಾ ತೋಟಗಾರಿಕೆ ಕಛೇರಿಯಲ್ಲಿ ಹೆಸರು ನೊಂದಾಯಿಸಿ ಕಾರ್ಯದೇಶ ಪಡೆಯಬೇಕು. ಕಾರ್ಯದೇಶ ಪಡೆಯದೇ ಅಳವಡಿಸಿಕೊಂಡಲ್ಲಿ ಸಹಾಯಧನಕ್ಕೆ ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಸಂಪರ್ಕಿಸುವಂತೆ ತಿಳಿಸಿದ್ದಾರೆ

## ಡಿಪ್ಲೋಮಾ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿಗೆ ಪ್ರವೇಶಾವಧಿ ವಿಸ್ತರಣೆ

**ಬೆಂಗಳೂರು:** 2024-25ನೇ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿಗೆ ಸೆಪ್ಟೆಂಬರ್ 06, 2024ರ ವರೆಗೆ ಪ್ರವೇಶ ಪಡೆಯಲು ಪ್ರವೇಶಾವಧಿಯನ್ನು ವಿಸ್ತರಿಸಲಾಗಿದೆ. ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಪಾಸಾದ ಹಾಗೂ ಪಿ.ಯು.ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣ / ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆ, ಬೆಂಗಳೂರು ಇಲ್ಲಿ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿಗೆ ಪ್ರವೇಶ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ:9481101049 ಹಾಗೂ ಮೊ:9448705205ನ್ನು ಸಂಪರ್ಕಿಸಬಹುದು.

## ಉಪ ನೋಂದಣಾಧಿಕಾರಿಗಳ ಕಚೇರಿಗಳಲ್ಲಿ ಎನಿವೇರ್ ನೋಂದಣಿ

**ಬೆಂಗಳೂರು:** ನೋಂದಣಿ ಮತ್ತು ಮುದ್ರಣ ಇಲಾಖೆಯ, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ 2024 ನೇ ಸೆಪ್ಟೆಂಬರ್:02 ರಿಂದ ಎನಿವೇರ್ ನೋಂದಣಿ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ. ಸಾರ್ವಜನಿಕರು ದಸ್ತಾವೇಜನ್ನು ಸ್ಥಿರಾಸ್ತಿ ಇರುವ ಜಿಲ್ಲೆಯ ಯಾವುದಾದರೂ ಉಪನೋಂದಣಿ ಕಛೇರಿಯಲ್ಲಿ ನೋಂದಣಿ ಮಾಡಬಹುದಾಗಿದೆ. ಈ ನೂತನ ವ್ಯವಸ್ಥೆಯನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ.

## ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು (ಡಿಎಸ್‌ಟಿ) ವಿಜ್ಞಾನ ಮತ್ತು ಇಂಜಿನಿಯರಿಂಗ್ನಲ್ಲಿ ಪಿ.ಹೆಚ್.ಡಿ. ಸಂಶೋಧನೆಗೆ ಕರ್ನಾಟಕ ಡಿ.ಎಸ್.ಟಿ.ಪಿಹೆಚ್.ಡಿ ಶಿಷ್ಯವೇತನ ಎಂಬ ಕಾರ್ಯಕ್ರಮವನ್ನು ಇಲಾಖೆಯ ಸ್ವಾಯತ್ತ ಸಂಸ್ಥೆಯಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೊ?ರೀತ್ಸಾಹಕ ಸೊಸೈಟಿಯ ಮುಖಾಂತರ ಅನುಷ್ಠಾನಗೊಳಿಸುತ್ತಿದೆ.2024-25ನೇ ಸಾಲಿನಲ್ಲಿ ಸದರಿ ಯೋಜನೆಯಡಿ ಶಿಷ್ಯವೇತನ ಪಡೆಯಲು ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಷಯಗಳಲ್ಲಿ ಕರ್ನಾಟಕದಲ್ಲಿರುವ ಮಾನ್ಯತೆ ಪಡೆದ ವಿಶ್ವವಿದ್ಯಾಲಯ / ಸಂಸ್ಥೆ/ ಕಾಲೇಜುಗಳಲ್ಲಿ ಈಗಾಗಲೇ ಪಿಹೆಚ್.ಡಿ. ಪದವಿಗೆ ನೋಂದಾಯಿತರಾಗಿರುವ ಅರ್ಹ ಸಂಶೋಧನಾ ವಿದ್ಯಾರ್ಥಿಗಳಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆನ್ಲೈನ್ ಮೂಲಕ ಅರ್ಜಿಗಳನ್ನು ದಿನಾಂಕ ಸೆಪ್ಟೆಂಬರ್ 30ರೊಳಗಾಗಿ ಸಲ್ಲಿಸಬಹುದಾಗಿದೆ.

## ಪರೀಕ್ಷಾ ಕೇಂದ್ರದ ಸುತ್ತ ನಿಷೇಧ

**ಮಂಡ್ಯ:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಕಂಡಕ್ಟರ್ ಹುದ್ದೆಗಳ ಪರೀಕೆಯು ಸೆಪ್ಟೆಂಬರ್ 1 ರಂದು ನಡೆಯಲಿದೆ. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಕಂಡಕ್ಟರ್‌ಹುದ್ದೆಗಳ ಪರೀಕ್ಷೆಯು ಸುಗಮವಾಗಿ ನಡೆಯಲು ಮಂಡ್ಯ ತಾಲ್ಲೂಕಿನ 6 ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಪರೀಕ್ಷಾ ದಿನಗಳಂದು 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಕಂಪ್ಯೂಟರ್/ ಸೈಬರ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಆದೇಶ ಹೊರಡಿಸಿದ್ದಾರೆ.

**ಲೋಕೋಪಯೋಗಿ ಇಲಾಖೆ**
ಕಾರ್ಯಪಾಲಕ ಅಭಿಯಂತರರ ಕಛೇರಿ. ರಾಮನಗರ ವಿಭಾಗ, ರಾಮನಗರ.

ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ : 02/2024-25 ದಿನಾಂಕ : 28-08-2024

**ಅಲ್ಪಾವಧಿ ಟೆಂಡರ್ ಪ್ರಕಟಣೆ**

2024-25 ನೇ ಸಾಲಿನಲ್ಲಿ ರಾಮನಗರ ವಿಭಾಗ, ವ್ಯಾಪ್ತಿಯಲ್ಲಿ 01 ರಸ್ತೆ ನಿರ್ವಹಣೆ ಕಾಮಗಾರಿಗೆ ಸಂಬಂಧಿಸಿದಂತೆ ಟೆಂಡರ್ ಪ್ರಕಟಣೆ ಹೊರಡಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿವೆ. (ಅಂದಾಜು ಮೊತ್ತ ರೂ. 14.16 ಲಕ್ಷಗಳು).

1) ಕರ್ನಾಟಕ ಸರ್ಕಾರದ https://kppp.karnataka.gov.in ಪೋರ್ಟಲ್‌ನಿಂದ ಟೆಂಡರ್ ಡಾಕ್ಯೂಮೆಂಟ್ ಅನ್ನು ದಿನಾಂಕ : 29-08-2024 ರಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ, 2) ಕರ್ನಾಟಕ ಸರ್ಕಾರದ ಕೆ.ಪಿ.ಪಿ.ಪಿ. ಪೋರ್ಟಲ್ ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ದಿನಾಂಕ : 05-09-2024 ವೇಳೆ 16.00 ಗಂಟೆಯೊಳಗೆ ಸಲ್ಲಿಸುವುದು, 3) ಟೆಂಡರ್‌ಗಳನ್ನು ತೆರೆಯುವ ದಿನಾಂಕ : 06-09-2024 ವೇಳೆ 16.30 ಗಂಟೆ (ಸಾಧ್ಯವಾದಲ್ಲಿ).

ಹೆಚ್ಚಿನ ವಿವರಗಳಿಗಾಗಿ ಈ ಕಛೇರಿಯನ್ನು ಸಂಪರ್ಕಿಸುವುದು.

**Note** : Here after any changes with reference to this Notification will be Notified in **https://kppp.karnataka.gov.in** Portal only.

ಸಹಿ/- ಕಾರ್ಯಪಾಲಕ ಅಭಿಯಂತರರು,
ಲೋಕೋಪಯೋಗಿ ಇಲಾಖೆ, ರಾಮನಗರ ವಿಭಾಗ,
ರಾಮನಗರ.

ಡಿಐಪಿಆರ್/ರಾಮನಗರ/286/ಮಣಿಪಾಲ್/2024-25

## ಅಂಗವಿಕಲ ಫಲಾನುಭವಿಗಳ ಪಿಂಚಣಿ ಸ್ಥಗಿತ

**ಮಂಡ್ಯ:** ಸಾಮಾಜಿಕ ಭದ್ರತಾ ಯೋಜನೆಗಳಲ್ಲಿ ಒಂದಾದ ಅಂಗವಿಕಲ ವೇತನ ಯೋಜನೆಯಡಿ ಪಿಂಚಣಿ ಪಡೆಯುತ್ತಿರುವ ಕೆಲವೊಂದು ಫಲಾನುಭವಿಗಳ ಪಿಂಚಣಿಗೆ ಆಧಾರ್ ಜೋಡಣೆಯಾಗಿರುವುದಿಲ್ಲ ಅಂತಹ ಫಲಾನುಭವಿಗಳ ವಿವರಗಳನ್ನು ಮಂಡ್ಯ ತಹಸೀಲ್ದಾರ್ ಅವರ ಕಚೇರಿಯ ಸೂಚನಾಫಲಕದಲ್ಲಿ ಪ್ರಕಟಿಸಲಾಗಿದ್ದು ಇನ್ನೂ 5 ದಿವಸದೊಳಗಾಗಿ ಸಂಬಂಧಪಟ್ಟ ಫಲಾನುಭವಿಯೂ ತಮ್ಮ ವೃತ್ತದ ಗ್ರಾಮ ಆಡಳಿತಾಧಿಕಾರಿಗಳಿಗೆ ಮತ್ತು ನಾಡ ಕಚೇರಿಗಳಿಗೆ ಹಾಗೂ ತಾಲ್ಲೂಕು ಕಚೇರಿಗಳಿಗೆ ತಮ್ಮ ಆಧಾರ್ ಕಾರ್ಡ್, ಪಿಂಚಣಿ ಮಂಜೂರಾತಿ ಆದೇಶ ಪ್ರತಿ, ಬ್ಯಾಂಕ್ ಖಾತೆ ಪುಸ್ತಕ ನಕಲು ಪ್ರತಿಯನ್ನು ನೀಡಲು ಕೋರಿದೆ.

## ಕಾಣೆಯಾದವರ ಪತ್ತೆಗಾಗಿ

**ಮಂಡ್ಯ:** ಶ್ರೀರಂಗಪಟ್ಟಣ ತಾಲ್ಲೂಕು ಕಡತನಾಳು ಗ್ರಾಮದ ಸಚಿನ್ (14) ಎಂಬುವವರು ಕಾಣೆಯಾಗಿದ್ದಾರೆ ಎಂದು ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆಯಲಲಿ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5.4 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಬೆಕ್ಕಿನ ಕಣ್ಣು ಇರುತ್ತದೆ, ಬಲಗೈ ಮೇಲೆ ಮೇಲೆ ಸುಟ್ಟಿರುವ ಹಳೆ ಗಾಯದ ಗುರುತುಹೊಂದಿದ್ದು ಕಾಣೆಯಾದ ದಿನ ಬಿಳಿ ಬಣ್ಣದ ಶರ್ಟ್, ಮಿಲ್ಟ್ರಿ ಬಟ್ಟೆಯ ಡಿಸೈನ್ ಪ್ಯಾಂಟ್ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 9480804875/8277956036 ಅನ್ನು ಸಂಪರ್ಕಿಸಬಹುದು ಎಂದು ಶ್ರೀರಂಗಪಟ್ಟಣ ಗ್ರಾ/ಅಮಾಂತರ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

**ಮಂಡ್ಯ:** ಶ್ರೀರಂಗಪಟ್ಟಣ ತಾಲ್ಲೂಕು ಬೆಳವಾಡಿ ಗ್ರಾಮದ ನಾಗೇಶ (41) ಎಂಬುವವರು ಕಾಣೆಯಾಗಿದ್ದಾರೆ ಎಂದು ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆಯಲಲಿ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು ಕೈ ಮೇಲೆ ರೇಖಾ ಹಚ್ಚೆ ಇರುತ್ತದೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 9480804875/8277956036 ಅನ್ನು ಸಂಪರ್ಕಿಸಬಹುದು ಎಂದು ಶ್ರೀರಂಗಪಟ್ಟಣ ಗ್ರಾ/ಅಮಾಂತರ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

**ಮಂಡ್ಯ:** ಮಂಡ್ಯ ನಗರದ ಅರಕೇಶ್ವರನಗರ ಗುತ್ತಲು ಕಾಲೋನಿಯ ಪ್ರಭಾಕರ್ (59) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಪೂರ್ವ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5.6 ಅಡಿ ಎತ್ತರ, ಗೋದಿ ಮೈಬಣ್ಣ, ದುಂಡುಮುಖ, ಸಾಧಾರಣ ಮೈಕಟ್ಟು ಹೊಂದಿದ್ದು ಕಾಣೆಯಾದ ದಿನ ಕ್ರೀಮ್ ಕಲರ್ ಅರ್ಧ ತೋಳಿನ ಶರ್ಟ್, ಬ್ಲಾಕ್ ಕಲರ್ ಪ್ಯಾಂಟ್ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 08232-224500/ 9480804846 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಪೂರ್ವ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನಲ್ಲಿ ತಾಲ್ಲೂಕು ಅಲೆಮಾರಿ, ಅರೆಅಲೆಮಾರಿ ಜನಾಂಗದವರ ಸಲಹಾ ಸಮಿತಿ ಮತ್ತು ಪ್ರಗತಿ ಪರಿಶೀಲನಾ ಸಮಿತಿಗೆ ತಾಲ್ಲೂಕು ಮಟ್ಟದಲ್ಲಿ ಒಬ್ಬರು ಅಲೆಮಾರಿ ಅಥವಾ ಅರೆಅಲೆಮಾರಿ ಅಭಿವೃದ್ಧಿ ಸಂಸ್ಥೆಯ ಪ್ರತಿನಿಧಿಯನ್ನು ನೇಮಕ ಮಾಡಬೇಕಾಗಿದ್ದು ಈ ಸಂಬಂಧ ತಾಲ್ಲೂಕು ಮಟ್ಟದಲ್ಲಿ ಅಲೆಮಾರಿ, ಅರೆಅಲೆಮಾರಿ ಜನಾಂಗದ ಪ್ರತಿನಿಧಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಪ್ರತಿನಿಧಿಗಳು, ಸಮುದಾಯದ ಮುಖಂಡರುಗಳು ತಮ್ಮ ಜಾತಿ ಪ್ರಮಾಣ ಪ್ರತ, ಸದರಿ ಸಮುದಾಯಗಳಿಗೆ ಸೇವೆ ಸಲ್ಲಿಸಿರುವ ಸೇವಾ ಅನುಭವ ಪ್ರಮಾಣ ಪತ್ರ, ಹಾಗೂ ಸಂಘ ಸಂಸ್ಥೆಗಳಲ್ಲಿ ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕೃತ ದಾಖಲಾತಿಗಳನ್ನು ಅರ್ಜಿಯೊಂದಿಗೆ ಸೆಪ್ಟೆಂಬರ್ 5 ರೊಳಗೆ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ,ಗುಡಿಬಂಡೆ ತಾಲ್ಲೂಕು ಇಲ್ಲಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ದೇವರಾಜು ಅರಸು ಭವನ, ಕೋರ್ಟ್ ಮುಂಭಾಗ ಗುಡಿಬಂಡೆ ತಾಲ್ಲೂಕು. ದೂರವಾಣಿ ಸಂಖ್ಯೆ: 08156-261097 ಮೊಬೈಲ್ ಸಂಖ್ಯೆ: 7204121196, 8884236073 ಗೆ ಸಂಪರ್ಕಿಸಬಹುದೆಂದು ಗುಡಿಬಂಡೆ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ಮೃತಳ ವಾರಸುದಾರರ ಪತ್ತೆಗೆ ಮನವಿ

**ಚಿಕ್ಕಬಳ್ಳಾಪುರ:** ಶಿಡ್ಲಘಟ್ಟ ತಾಲ್ಲೂಕಿನ ನಲ್ಲೋಜನಹಳ್ಳಿ ಗ್ರಾಮದ ಕೊಂಡಪ್ಪ ಎಂಬುವವರ ಜಮೀನಿನಲ್ಲಿ ಇರುವ ಕೃಷಿ ಹೊಂಡದಲ್ಲಿ ಸುಮಾರು 20 ರಿಂದ 25 ವರ್ಷದ ಯಾರೋ ಅಪರಿಚಿತ ಮಹಿಳೆ ಶವ ತೇಲಿರುವುದು ಕಂಡು ದಿಬ್ಬೂರಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿರುತ್ತಾರೆ. ಈ ದೂರಿನ ಮೇರೆಗೆ ಮೃತಳ ವಾರಸುದಾರರನ್ನು ಪತ್ತೆ ಹಚ್ಚಲು ಮನವಿ ಮಾಡಿದ್ದಾರೆ. ಚಹರೆ: ವಯಸ್ಸು ಸುಮಾರು 20 ರಿಂದ 25 ವರ್ಷ ಯುಳ್ಳ ಅಪರಿಚಿತ ಮಹಿಳೆ, ಮೃತಳ ಎಡಕೈ ಮೇಲೆ ಇಂಗ್ಲಿಷ್ ನಲ್ಲಿ ಕಂಒ ಎಂದು ಟ್ಯಾಟೋ ಗುರುತು ಇದ್ದು, ಗೋಧಿ ಮೈ ಬಣ್ಣ, ದಪ್ಪ ಮೈ ಕಟ್ಟು, ಗುಂಡು ಮುಖ, 5.2 ಅಡಿ ಎತ್ತರವಿದ್ದು, ಗುಲಾಬಿ ಬಣ್ಣದ ಪ್ಯಾಂಟ್ ಮತ್ತು ಗುಲಾಬಿ ಹೂವುಗಳಿರುವ ಟಾಪ್ ಧರಿಸಿರುತ್ತಾರೆ. ಆದರೆ ಮಹಿಳೆಯ ಹೆಸರು, ವಿಳಾಸ ಮತ್ತು ವಾರಸುದಾರರು ಬಗ್ಗೆ ಇದು ವರೆಗೂ ಯಾವುದೇ ಸುಳಿವು ಸಿಕ್ಕಿರುವುದಿಲ್ಲ, ಈ ಮೃತಳ ಬಗ್ಗೆ ಮಾಹಿತಿ ಸಿಕ್ಕರೆ ದಿಬ್ಬೂರಹಳ್ಳಿ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದೆಂದು ಪೊಲೀಸ್ ಸಬ್ ಇನ್ಸ್‌ಪೇಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತಾಲೂಕು ಪಂಚಾಯತ್‌ನ ಅಧಿಕಾರಿಗಳ ಸಭೆಯಲ್ಲಿ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ್ ರೆಡ್ಡಿ ಮಾಹಿತಿ

# ಶೀಘ್ರದಲ್ಲೇ ಮಸಣಿಕಮ್ಮ ದೇವಾಲಯದ ಜೀರ್ಣೋದ್ಧಾರ ಕೆಲಸ

**ಪಿರಿಯಾಪಟ್ಟಣ:** ಇತಿಹಾಸ ಪ್ರಸಿದ್ಧ ಶ್ರೀ ಮಸಣಿಕಮ್ಮ ದೇವಾಲಯದ ಜೀರ್ಣೋದ್ಧಾರ ಕಾರ್ಯ ಆಂರಭಿಸಲು ಸರ್ಕಾರದಿಂದ ಅನುದಾನ ಬಿಡುಗಡೆಯಾಗಿದ್ದು ಶೀಘ್ರದಲ್ಲೇ ಕಾಮಗಾರಿ ಆರಂಭಿಸಲಾಗುವುದು ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ್ ರೆಡ್ಡಿ ತಿಳಿಸಿದರು

ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಸಚಿವ ಕೆ.ವೆಂಕಟೇಶ್ ನೇತೃತ್ವದಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು.

ಐತಿಹಾಸಿಕ ಹಿನ್ನೆಲೆಯುಳ್ಳ ಪಿರಿಯಾಪಟ್ಟಣದ ಶ್ರೀ ಮಸಣಿಕಮ್ಮ ದೇವಾಲಯದ ಜೀರ್ಣೋದ್ಧಾರ ನಡೆಸಲು ಸರ್ಕಾರದಿಂದ 6 ಕೋಟಿ ಹಣ ಮಂಜೂರಾಗಿದ್ದು, ಇನ್ನುಳಿದ 3 ಕೋಟಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಬೇಕಾಗಿದ್ದು, ಶೀಘ್ರದಲ್ಲೇ ದೇವಾಲಯದ ಜೀರ್ಣೋದ್ಧಾರ ಕೆಲಸ ಆರಂಭಿಸಲಾಗುವುದು ದೇವಾಲಯಕ್ಕೆ ನಿರ್ಮಾಣಕ್ಕೆ ಅಗತ್ಯವಾದ ಹಣವು ಈಗಾಗಲೇ ಮುಜರಾಯಿ ಇಲಾಖೆ ಖಾತೆಯಲ್ಲಿದ್ದು ದೇವಾಲಯದ ಜೀರ್ಣೋದ್ಧಾರದ ಆರಂಭಿಸಿ ಸಾರ್ವಜನಿಕರಿಂದ ಸಂಗ್ರಹವಾಗುವ ವಂತಿಕೆ ಹಣದ ಜೊತೆಗೆ ಉಳಿಕೆ ಹಣವನ್ನು ದೇವಾಲಯದ ನಿಧಿಯಿಂದ ಬಳಸಿಕೊಳ್ಳಲಾಗುವುದು ಎಂದರು.



ಸಚಿವ ಕೆ.ವೆಂಕಟೇಶ್ ಮಾತನಾಡಿ ತಾಲೂಕಿನಲ್ಲಿ ಕುಸುಮ್ ಯೋಜನೆ ಸೇರಿದಂತೆ ವಿವಿಧ ಅಭಿವೃದ್ಧಿ ಕೆಲಸಗಳಿಗೆ ಜಾಗದ ಅವಶ್ಯಕತೆ ಇದ್ದು, ಅರಣ್ಯ ಪ್ರದೇಶವಲ್ಲದ, ಜನ ಬಿಡದಿ ಪ್ರದೇಶದಿಂದ ದೂರವಿರುವ ಪ್ರದೇಶದಲ್ಲಿ ಜಾಗವನ್ನು ಗುರುತಿಸಿಕೊಡಲು ಅರಣ್ಯ ಹಾಗೂ ಕಂದಾಯ ಇಲಾಖೆಗಳು ಒಟ್ಟಿಗೆ ಸೇರಿ ಸರ್ವೆ ನಡೆಸಿ ಜಾಗವನ್ನು ಗುರುತಿಸಿ ಕೊಡುವಂತೆ ಸೂಚನೆ ನೀಡಿದ ಅವರು, ಸರ್ಕಾರದ ಬೆಂಬಲ ಬೆಲೆಯಲ್ಲಿ ಖರೀದಿ ಮಾಡುತ್ತಿರುವ ರಾಗಿ ಖರೀದಿ ಕೇಂದ್ರಗಳಲ್ಲಿ ವ್ಯಾಪಕವಾಗಿ ಭ್ರಷ್ಟಾಚಾರ ನಡೆಯುತ್ತಿದೆ, ಈ ಬಗ್ಗೆ ಜಿಲ್ಲಾಧಿಕಾರಿಗಳು ಗಮನ ಹರಿಬೇಕು, ರೈತರು ತಮ್ಮ ಜಮೀನಿನಲ್ಲಿ ಬೆಳೆದಿರುವ ಬೆಳೆಗಳ ವಿವರವನ್ನು ಫ್ರೂಟ್ ಐಡಿಯಲ್ಲಿ ನಮೂದಿಸಿರುತ್ತಾರೆ ಹಾಗಾಗಿ ಅವರು ಎಷ್ಟು ಎಕರೆ ಪ್ರದೇಶದಲ್ಲಿ ರಾಗಿ ಬೆಳೆದಿದ್ದಾರೆಯೋ ಅಷ್ಟು ರಾಗಿಯನ್ನು ಖರೀದಿ ಮಾಡಲು ಅವರಿಗೆ ಅವಕಾಶ ನೀಡಬೇಕು ಅಲ್ಲದೆ ದಲ್ಲಾಳಿಗಳು, ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸುವ ಮೂಲಕ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು ಸೂಚಿಸಿದರು .

ತಾಲ್ಲೂಕಿನಲ್ಲಿ ಹಲವಾರು ಕೆರೆಗಳು ಒತ್ತುವರಿಯಾಗಿರುವ ಬಗ್ಗೆ ದೂರುಗಳು ಬರುತ್ತಿವೆ, ಜಮೀನಿಗೆ ತೆರಳುವ ರಸ್ತೆ ವಿದ್ಯುತ್ ಸಮಸ್ಯೆ ಸೇರಿದಂತೆ ಮತ್ತಿತರರು ಹಲವು ಸಮಸ್ಯೆಗಳಿಗೆ ಅಧಿಕಾರಿಗಳು ಸ್ಪಂದಿಸುವ ಕೆಲಸ ಮಾಡಬೇಕು ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ, ಚೆಸ್ಕಾಂ ಎಂಡಿ ಶೋಭಾ, ಉಪ ವಿಭಾಗಾಧಿಕಾರಿ ವಿಜಯಕುಮಾರ್, ತಹಶೀಲ್ದಾರ್ ನಿಸರ್ಗ ಪ್ರಿಯಾ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಸುನೀಲ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾದಕ ವಸ್ತುಗಳ ಜಾಲಕ್ಕೆ ಜಿಲ್ಲೆಯಲ್ಲಿ ಕಡಿವಾಣ ಹಾಕಲೇಬೇಕು: ಸಚಿವ ಸುಧಾಕರ್

**ಚಿಕ್ಕಬಳ್ಳಾಪುರ:** ಶಾಲಾ ಕಾಲೇಜು ವಿದ್ಯಾರ್ಥಿಗಳ ಆರೋಗ್ಯ ಮತ್ತು ಭವಿಷ್ಯಕ್ಕೆ ಮಾರಕವಾಗಿರುವ ಗಾಂಜಾ ಮತ್ತಿತರ ಮಾದಕ ವಸ್ತುಗಳಿಗೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಸಂಪೂರ್ಣ ಕಡಿವಾಣ ಹಾಕುವಂತೆ ಪೊಲೀಸ್ ಇಲಾಖೆಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಉನ್ನತ ಶಿಕ್ಷಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ತಿಳಿಸಿದರು.



ಶುಕ್ರವಾರ ಜಿಲ್ಲಾ ಪಂಚಾಯತ್ ನ ಸಭಾಂಗಣದಲ್ಲಿ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿ ಅಗತ್ಯ ಸೂಚನೆಗಳನ್ನು ನೀಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಜಿಲ್ಲೆಯಲ್ಲಿ ಮಾತ್ರವಲ್ಲದೇ ರಾಜ್ಯದಲ್ಲಿ ಗಾಂಜಾ ಅವ್ಯಾಹತವಾಗಿ ಬಳಕೆಯಾಗುತ್ತಿರುವ ಬಗ್ಗೆ ಸಾಕಷ್ಟು ದೂರುಗಳಿದ್ದು, ಇದರ ವಿಚಾರದಲ್ಲಿ ದೊಡ್ಡ ಮಟ್ಟದಲ್ಲಿ ನಾನಾ ಜಾಲಗಳು ಕೆಲಸ ಮಾಡುತ್ತಿವೆ ಎನ್ನಲಾಗಿದೆ. ಗಾಂಜಾ ಮಾರಾಟ ಜಾಲಗಳಿಗೆ ಹೆಚ್ಚಾಗಿ ಕಾಲೇಜು ವಿದ್ಯಾರ್ಥಿಗಳೇ ಆಕರ್ಷಿತರಾಗಿ ಅದಕ್ಕೆ ಬಲಿಯಾಗುತ್ತಿರುವುದು ದುರದೃಷ್ಟಕರ. ಯುವಜನರ ಮೇಲೆ ಗಾಂಜಾ ಮತ್ತಿತರ ಮಾದಕ ವಸ್ತುಗಳು ದುಷ್ಪರಿಣಾಮ ಬೀರುತ್ತಿರುವ ಕಾರಣ ಅದಕ್ಕೆ ಸಂಪೂರ್ಣ ಕಡಿವಾಣ ಹಾಕುವಂತೆ ಜಿಲ್ಲಾ ಪೊಲೀಸ್ ಇಲಾಖೆಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಈ ಕೃತ್ಯದಲ್ಲಿ ಪೊಲೀಸರೂ ಶಾಮೀಲಾಗಿರುವುದು ಕಂಡುಬಂದಲ್ಲಿ ಅಂತವರ ವಿರುದ್ಧವೂ ಕಠಿಣ ಕ್ರಮ ಜರುಗಿಸಲಾಗುವುದು. ಜಿಲ್ಲೆಯ ಕಾರಾಗೃಹಗಳಲ್ಲಿ ಅಕ್ರಮ ಚಟುವಟಿಕೆಗಳು ನಡೆಯದಂತೆ ಕಡಿವಾಣ ಹಾಕಲು ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಮಟ್ಕಾ, ಜೂಜಾಟ, ಕ್ರಿಕೆಟ್ ಬೆಟ್ಟಿಂಗ್, ಕೋಳಿ ಪಂದ್ಯ ಮತ್ತಿತರ ಅಕ್ರಮಗಳು ಜಿಲ್ಲೆಯಲ್ಲಿ ಎಲ್ಲೂ ನಡೆಯಬಾರದು, ಸೈಬರ್ ಅಪರಾಧಗಳ ಜಾಲಕ್ಕೆ ನಮ್ಮ ಜನರು ಸಿಲುಕದಂತೆ ಅರಿವು ಮೂಡಿಸಬೇಕು. ಮಹಿಳೆ ಮತ್ತು ಮಕ್ಕಳ ಮೇಲೆ ದೌರ್ಜನ್ಯ ಪ್ರಕರಣಗಳು ಕಡಿಮೆ ಆಗಬೇಕು,ಬಾಲ್ಯ ವಿವಾಹ ಪ್ರಕರಣಗಳು ಜಿಲ್ಲೆಯಲ್ಲಿ ಹೆಚ್ಚಾಗಿ ಬೆಳಕಿಗೆ ಬರುತ್ತಿರುವುದು ಗಮನಕ್ಕೆ ಬಂದಿದೆ.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳನ್ನು ಮತ್ತು ಇತರ ಇಲಾಖೆ ಅಧಿಕಾರಿಗಳ ಸಹಕಾರ ಪಡೆದು ಸಂಪೂರ್ಣವಾಗಿ ತಡೆಗಟ್ಟುವ ಕೆಲಸ ಆಗಬೇಕು, ಒಟ್ಟಾರೆಯಾಗಿ ಕಾನೂನು ವ್ಯವಸ್ಥೆಯನ್ನು ಸಮರ್ಪಕವಾಗಿ ಕಾಪಾಡಬೇಕು. ಸಂಚಾರಿ ನಿಯಮಗಳನ್ನು ಉಲ್ಲಂಘಿಸುವವರ ಮೇಲೆ ದಿನನಿತ್ಯ ನಿಗಾ ಇಟ್ಟು ದಂಡ ವಸೂಲಿ ಮಾಡುವ ಮತ್ತು ಪ್ರಕರಣ ದಾಖಲಿಸುವ ಕೆಲಸ ದಿನನಿತ್ಯ ನಡೆಯಬೇಕು. ಪ್ರತಿಯೊಬ್ಬ ಸವಾರರು ಶಿರಸ್ತ್ರಾಣವನ್ನು ಧರಿಸಿ ವಾಹನ ಚಲಾಯಿಸುವಂತೆ ನೋಡಿಕೊಳ್ಳಬೇಕು ಮೊದಲು ಸರ್ಕಾರಿ ನೌಕರರು ಅಧಿಕಾರಿಗಳು ಹೆಲ್ಮೆಟ್ ಧರಿಸಿ ವಾಹನ ಚಲಾಯಿಸುವ ಮೂಲಕ ಜನರಲ್ಲಿ ಅರಿವು ಮೂಡಿಸಲು ಮುಂದಾಗಬೇಕು. ಆಗ ಮಾತ್ರ ಅಮಾಯಕರ ಪ್ರಾಣಗಳನ್ನು ರಕ್ಷಿಸಲು ಸಾಧ್ಯವಾಗುತ್ತದೆ. ಜಿಲ್ಲೆಯಲ್ಲಿ ಹೆಚ್ಚು ಅಪಘಾತಗಳು ಸಂಭವಿಸುವ ಬ್ಲಾಕ್ ಸ್ಪಾಟ್ ಗಳನ್ನು ಗುರುತಿಸಿ ಅಪಘಾತಗಳ ತಡೆಗಟ್ಟಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತುರ್ತಾಗಿ ಕೈಗೊಳ್ಳಬೇಕು.ಯಾವುದೇ ರೀತಿಯ ಕಾನೂನು ಉಲ್ಲಂಘನೆ ಪ್ರಕರಣಗಳು ಕಂಡು ಬಂದಲ್ಲಿ ತ್ವರಿತವಾಗಿ ಭೇದಿಸಿ ತಪ್ಪಿತಸ್ತರನ್ನು ಕಾನೂನು ಕ್ರಮಕ್ಕೆ ಒಳಪಡಿಸಬೇಕು. ಎಂದು ಜಿಲ್ಲಾ ಉಸ್ತುವಾರಿ ಸಚಿವರು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿರುವುದಾಗಿ ತಿಳಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಅಪರ ಜಿಲ್ಲಾಧಿಕಾರಿ ಡಾ.ಎನ್. ಭಾಸ್ಕರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಆರ್ .ಐ.ಕಾಸಿಂ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ 4 ಕುಷ್ಠರೋಗ ಪ್ರಕರಣಗಳು ಪತ್ತೆ

**ಚಿಕ್ಕಬಳ್ಳಾಪುರ:** ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಜಿಲ್ಲೆಯಾದ್ಯಂತ ಕಳೆದ ಜುಲೈ 29 ರಿಂದ ಆಗಸ್ಟ್ 14 ರವರೆಗೆ ನಡೆದ ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನದಲ್ಲಿ ಜಿಲ್ಲೆಯಲ್ಲಿ 1040 ತಂಡಗಳು ಸಮೀಕ್ಷೆಯಲ್ಲಿ ಭಾಗವಹಿಸಿದ್ದು, 104 ಮೇಲ್ವಿಚಾರಕರು ಕಾರ್ಯನಿರ್ವಹಿಸಿರುತ್ತಾರೆ. ಜೊತೆಗೆ ಕಾರ್ಯಕ್ರಮದ ಸಂಪೂರ್ಣ ಮೇಲುಸ್ತುವಾರಿಯನ್ನು ಎಲ್ಲಾ ಪ್ರಾಥಮಿಕ ಹಾಗೂ ನಗರ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು ವಹಿಸಿದ್ದು, 14 ದಿನಗಳ ಸಮೀಕ್ಷೆಯಲ್ಲಿ ಒಟ್ಟು 2,91,175 ಮನೆಗಳ ಸಮೀಕ್ಷೆ ನಡೆಸಿ 12,99503 ಜನರನ್ನು ತಪಾಸಣೆಗೆ ಒಳಪಡಿಸಲಾಗಿದ್ದು, 3141 ಶಂಕಿತ ಪ್ರಕರಣಗಳನ್ನು ಗುರುತಿಸಲಾಗಿದೆ. ಅದರಲ್ಲಿ 3048 ಪ್ರಕರಣಗಳು ಮೌಲ್ಯಮಾಪನ ನಡೆಸಿ 4 ಕುಷ್ಠರೋಗ ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ. ಬಾಗೇಪಲ್ಲಿ ತಾಲ್ಲೂಕಿನಲ್ಲಿ 1 ಪಿ.ಬಿ ಮತ್ತು 1 ಎಂ.ಬಿ ಪ್ರಕರಣಗಳು, ಚಿಂತಾಮಣಿ ತಾಲ್ಲೂಕಿನಲ್ಲಿ 1 ಎಂ.ಬಿ ಪ್ರಕರಣ ಮತ್ತು ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ 1 ಎಂ.ಬಿ ಪ್ರಕರಣ ವರದಿಯಾಗಿದ್ದು, ಈ ಪ್ರಕರಣಗಳಿಗೆ ಎಂ.ಡಿ.ಟಿ ಚಿಕಿತ್ಸೆ ಪ್ರಾರಂಭಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೆರಿಗೆ ಹಂಚಿಕೆ, ಆದಾಯ ವರ್ಧನೆಗೆ ಅಗತ್ಯ ಕ್ರಮ ಕೈಗೊಳ್ಳಿ

**ಬೆಂಗಳೂರು:** ಹಣಕಾಸು ಆಯೋಗವು ಕೇಂದ್ರ ಮತ್ತು ರಾಜ್ಯಗಳ ನಡುವೆ ತೆರಿಗೆ ಹಂಚಿಕೆ ಮತ್ತು ಆದಾಯ ವರ್ಧನೆಗೆ ಕ್ರಮಗಳನ್ನು ಕೈಗೊಂಡಿರುವುದರ ಜೊತೆಗೆ ವಿಪತ್ತು ನಿರ್ವಹಣ ಕಾಯ್ದೆ ಅಡಿಯಲ್ಲಿ ಸಹ ಹಣ ಬಿಡುಗಡೆ ಮಾಡುತ್ತದೆ ಎಂದು 16ನೇ ಹಣಕಾಸು ಆಯೋಗದ ಅಧ್ಯಕ್ಷರಾದ ಡಾ.ಅರವಿಂದ ಪನಗಾರಿಯಾ ತಿಳಿಸಿದರು

16ನೇ ಹಣಕಾಸು ಆಯೋಗವು ಆಗಸ್ಟ್ 29 ಮತ್ತು 30ರಂದು ರಾಜ್ಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಇಂದು ನಗರದ ಖಾಸಗಿ ಹೋಟೆಲ್ನಲ್ಲಿ ಹಮ್ಮಿಕೊಳ್ಳಲಾದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯವನ್ನು ತಿಳಿಸಿದರು.

16ನೇ ಹಣಕಾಸು ಆಯೋಗವು ಈಗಾಗಲೇ ಹಿಮಾಚಲ ಪ್ರದೇಶ, ಚತ್ತೀಸ್ಗಡ, ಪಂಜಾಬ್ ಮತ್ತು ರಾಜಸ್ಥಾನ ರಾಜ್ಯಗಳಿಗೆ ಭೇಟಿ ನೀಡಿದ್ದು, ಕರ್ನಾಟಕ 5ನೇ ರಾಜ್ಯವಾಗಿದೆ. ಅಲ್ಲದೆ ರಾಜ್ಯದ ಹಣಕಾಸು ಆಯೋಗ ಮಾಡುವ ಶಿಫಾರಸ್ಸುಗಳ ಆಧಾರದ ಮೇಲೆ ರಾಜ್ಯದ ಪಂಚಾಯತ್ ಮತ್ತು ಪುರಸಭೆಗಳ ಸಂಪನ್ಮೂಲಗಳಿಗೆ ಪೂರಕವಾಗಿ ರಾಜ್ಯದ ಕ್ರೋಢೀಕೃತ ಅನುದಾನವನ್ನು ಹೆಚ್ಚಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದರು.

ಇದಕ್ಕೂ ಮೊದಲು 16ನೇ ಹಣಕಾಸು ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರೊಂದಿಗೆ ಸಭೆ ನಡೆಸಿದ ಮುಖ್ಯಮಂತ್ರಿಗಳು ಕರ್ನಾಟಕದ ಜನಸಂಖ್ಯೆ ಒಟ್ಟು ಜನಸಂಖ್ಯೆಯ ಶೇಕಡ 5ರಷ್ಟಿದ್ದರು, ರಾಷ್ಟ್ರೀಯ ಜಿ.ಡಿ.ಪಿ ರಾಜ್ಯಕ್ಕೆ ಶೇಕಡ 8.4ರಷ್ಟು ಮಾತ್ರ ಪಾಲು ನೀಡುತ್ತಿದೆ. ಇಡೀ ದೇಶದಲ್ಲಿ ಜಿ.ಡಿ.ಪಿ. ದೇಣಿಗೆಯಲ್ಲಿ ಕರ್ನಾಟಕ ರಾಜ್ಯವು ಎರಡನೇ ಸ್ಥಾನದಲ್ಲಿದೆ. ದೇಶದ ಒಟ್ಟು ತೆರಿಗೆ ಆದಾಯದಲ್ಲಿ ಕರ್ನಾಟಕ ಸುಮಾರು 4 ಲಕ್ಷ ಕೋಟಿ ರೂ ಪಾಲು ನೀಡುತ್ತಿದ್ದರು ರಾಜ್ಯಕ್ಕೆ ತೆರಿಗೆ ಪಾಲಿನ ರೂಪದಲ್ಲಿ 45 ಸಾವಿರ ಕೋಟಿ ರೂ ಹಾಗೂ ಅನುದಾನದ ರೂಪದಲ್ಲಿ ರೂ 15 ಸಾವಿರ ಕೋಟಿ ದೊರಕುತ್ತಿದೆ. ಆದರೆ ಕರ್ನಾಟಕ ನೀಡುವ ಪ್ರತಿ ಒಂದು ರೂಪಾಯಿಗೆ ರಾಜ್ಯ ಕೇವಲ 15 ಪೈಸೆ ಮಾತ್ರ ಹಿಂಪಡೆಯುತ್ತಿದೆ. ಸೆಸ್ ಮತ್ತು ಸರ್ಚಾರ್ಜ್ ಕೇಂದ್ರ ಮತ್ತು ರಾಜ್ಯಗಳ ನಡುವೆ ಹಂಚಿಕೊಳ್ಳುವ ಬಾಬ್ತಿನಲ್ಲಿ ಬರುವುದಿಲ್ಲ. ಇದರಿಂದ ರಾಜ್ಯ ನಷ್ಟ ಅನುಭವಿಸುತ್ತಿದೆ. ಬಂಡವಾಳ ವೆಚ್ಚದ ಮೊತ್ತವನ್ನು ರಾಜ್ಯ ತನ್ನ ಜಿ.ಎಸ್.ಡಿ.ಪಿಯ ಶೇಕಡ 2ರ ಮಿತಿಯಲ್ಲಿಯೇ ನಿರ್ವಹಿಸುತ್ತಿದ್ದು, ದೇಶದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ ಎಂದರು.

ಮುಂದಿನ 5 ವರ್ಷಗಳ ಅವಧಿಯಲ್ಲಿ ಬೆಂಗಳೂರು ಅಭಿವೃದ್ಧಿಗೆ 55,586 ಕೋಟಿ ರೂಗಳ ಬಂಡವಾಳದ ಅಗತ್ಯವಿದ್ದು, ಕೇಂದ್ರದಿಂದ 27,793 ಕೋಟಿ ರೂ ಅನುದಾನವನ್ನು ರಾಜ್ಯ ಮನವಿ ಮಾಡಿದೆ. ಪಶ್ಚಿಮಘಟ್ಟ ವಲಯಗಳ ವಿಪತ್ತು ನಿರ್ವಹಣೆಗೆ ಪರಿಹಾರ ಮತ್ತು ಪುನರ್ವಸತಿಗೆ 10 ಸಾವಿರ ಕೋಟಿ ರೂ ಅನುದಾನ ಒದಗಿಲು ಮನವಿ ಮಾಡಿದೆ. ಸಾಲಿನ ಹಂಚಿಕೆ ಸಂದರ್ಭದಲ್ಲಿ ಹಂಚಿಕೊಳ್ಳುವ ಬಾಬ್ತಿನಲ್ಲಿ ರಾಜ್ಯಗಳಿಗೆ ತಮ್ಮ ದೇಣಿಗೆಯ ಶೇಕಡ 60 ರಷ್ಟನ್ನು ನೀಡಬೇಕೆಂದು ರಾಜ್ಯವು ಶಿಫಾರಸ್ಸು ಮಾಡಿದೆ.

ಈ ನಿಟ್ಟಿನಲ್ಲಿ 16ನೇ ಹಣಕಾಸು ಆಯೋಗ ಮಾಡುವ ಶಿಫಾರಸ್ಸುಗಳು ಸುಸ್ಥಿರ ಮತ್ತು ಸಮಗ್ರ ಅಭಿವೃದ್ಧಿ ಸಾಧಿಸುವ ನಿಟ್ಟಿನಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಕಲ್ಯಾಣ ಕರ್ನಾಟಕ ಅಸಮತೋಲನ ನಿವಾರಣೆಗೆ ರಾಜ್ಯವು ರೂ 25 ಸಾವಿರ ಕೋಟಿ ಹೂಡಿಕೆ ಮಾಡುತ್ತಿದ್ದು, ಮುಂದಿನ 5 ವರ್ಷಗಳ ಅವಧಿಗೆ 16ನೇ ಹಣಕಾಸು ಆಯೋಗ ರೂ 25 ಸಾವಿರ ಕೋಟಿ ಹೊಂದಾಣಿಕೆ ಅನುದಾನ ಒದಗಿಸಲು ಮನವಿ ಮಾಡಿದೆ. ಒಟ್ಟಿನಲ್ಲಿ ರಾಜ್ಯಕ್ಕೆ ಆಶಾದಾಯಕ ನ್ಯಾಯ ಸಮ್ಮತ ನಿರ್ಣಯಗಳನ್ನು ಹಣಕಾಸು ಆಯೋಗವು ಶಿಫಾರಸ್ಸು ಮಾಡಬೇಕು ಎಂದು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ 16ನೇ ಹಣಕಾಸು ಆಯೋಗದ ಸದಸ್ಯರಾದ ಅಜಯ್ ನಾರಾಯಣ ಝಾ, ಶ್ರೀಮತಿ ಅನ್ನಿ ಜಾರ್ಜ್ ಮ್ಯಾಥ್ಯೂ, ಡಾ. ಮನೋಜ್ ಪಾಂಡಾ ಮತ್ತು ಡಾ. ಸೌಮ್ಯ ಕಾಂತಿ ಘೋಷ್ ಕಾರ್ಯದರ್ಶಿಗಳಾದ ರಿತ್ವಿಕ್ ಪಾಂಡೆ ಉಪಸ್ಥಿತರಿದ್ದರು.

## ತೋಟಗಾರಿಕೆ ಇಲಾಖೆ ವಿವಿಧ ಯೋಜನೆಗಳಿಗೆ ಅರ್ಜಿ

**ಮಂಡ್ಯ:** ಮಂಡ್ಯ ತೋಟಗಾರಿಕಾ ಇಲಾಖೆಯ ವತಿಯಿಂದ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಕೃಷಿ ಯಂತ್ರೋಪರಕಣ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ತಾಳೆಬೆಳೆ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ; ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಕಾಫಿ, ಟೀ ರಬ್ಬರ್, ಅಡಿಕೆ ಬೆಳೆ ಹೊರತುಪಡಿಸಿ ಉಳಿದ ಎಲಾ, ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಘಟಕ ಅಳವಡಿಕೆಗೆ ಒಂದು ಕುಟುಂಬಕ್ಕೆ ಒಮ್ಮಾನ 5 ಹೆಕ್ಟೇರ್ ಪ್ರದೇಶಕ್ಕೆ ಮಿತಿಗೊಳಿಸಿ ಸಹಾಯಧನ ಕಲ್ಪಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಮೊದಲ 2 ಹೆಕ್ಟೇರ್ ಗೆ ಎಲ್ಲಾ ವರ್ಗದ ರೈತರಿಗೆ ಶೇ.90 ರಷ್ಟು ಸಹಾಯಧನ ಕಲ್ಪಿಸಲಾಗುವುದು ಹಾಗೂ ಉಳಿದ 3 ಪೆಕ್ಟೇರ್ ಗೆ ಶೇ. 45 ರಷ್ಟು ಸಹಾಯಧನ ಕಲ್ಪಿಸಲಾಗುವುದು.

**ಕೃಷಿ ಯಂತ್ರೋಪರಕಣ;** ಕೃಷಿ ಯಾಂತ್ರೀಕರಣ ಉಪ ಅಭಿಯಾನ ( ಖಒಂಒ ) ರಡಿ ಕರ್ನಾಟಕ ರಾಜ್ಯದಲಿ, ತೋಟಗಾರಿಕೆಯಲಿ ಯಾಂತ್ರೀಕರಣ ಕಾರ್ಯಕ್ರಮದಡಿ ಇಲಾಖೆಯಿಂದ ಅನುಮೋದನೆಗೊಂಡ ಸಂಸ್ಥೆಗಳಿಂದ ರೈತರು ಖರೀದಿಸುವ ಉತ್ಕೃ ಗುಣಮಟ್ಟದ ಉಪಕರಣಗಳಿಗೆ ಸಹಾಯಧನ ಕಲ್ಪಿಸಲಾಗುತ್ತಿದ್ದು, ಇದರಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಸಣ್ಣ ಮತ್ತು ಅತೀ ಸಣ್ಣ ಹಾಗೂ ಮಹಿಳಾ ಫಲಾನುಭವಿಗಳಿಗೆ ಶೇ.50 ರಷ್ಟು ಮತ್ತು ಇತರೆ ವರ್ಗದ ರೈತರಿಗೆ ಶೇ.40 ರಷ್ಟು ಸಹಾಯಧನವನ್ನು ಕಲ್ಪಿಸಲಾಗುವುದು. ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ತಾಳೆಬೆಳೆ ಯೋಜನೆ; ಈ ಯೋಜನೆಯಡಿ ತಾಳೆಬೆಳೆ ಹೊಸ ಪ್ರದೇಶ ವಿಸ್ತರಣೆ ಕೈಗೊಳ್ಳುವ ರೈತರಿಗೆ ಪ್ರದೇಶ ವಿಸ್ತರಣೆಗೆ, ಕೊಳವೆ ಬಾವಿ ಕೊರೆಸಲು, ಟ್ಯಾಕ್ಟರ್ ಟ್ರಾಲಿ ಖರೀದಿಸಲು ಮತ್ತು ಡೀಸಲ್ ಪಂಪ್ ಸೆಟ್ ಖರೀದಿಸಲು ಸಹಾಯಧನವನ್ನು ಎಲಾ ವರ್ಗದ ರೈತರಿಗೆ ಕಲ್ಪಿಸಲಾಗುವುದು. ಈ ಎಲ್ಲಾ ಯೋಜನೆಗಳಿಗೆ ಆಸಕ್ತ ರೈತರು ಅರ್ಜಿಯನ್ನು ಮಂಡ್ಯ ತಾಲೂಕು ಕಛೇರಿಗಳಿಗೆ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಜಿಲ್ಲೆಯ ತಾಲ್ಲೂಕುಗಳಾದ ಕೆ.ಆರ್.ಪೇಟೆ 08237-262540, ಮದ್ದೂರು 08232-233450, ಮಳವಳ್ಳಿ 08230-242301, ಮಂಡ್ಯ 08232-225735, ನಾಗಮಂಗಲ 08234-286160, ಪಾಂಡವಪುರ 08236-255055, ಶ್ರೀರಂಗಪಟ್ಟಣ 08236-253205 ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಪಂಚಾಯತ್ ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆ ಜಾರಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಆಯಾವ್ಯಯ ಭಾಷಣದಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗುವುದೆಂದು ಸರ್ಕಾರ ಘೋಷಿಸಲಾಗಿರುತ್ತದೆ. ಈ ವ್ಯವಸ್ಥೆಯನ್ನು 2011ರಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ, ಮಾರ್ಚ್ 2024ರಲ್ಲಿ ತುಮಕೂರು ಮತ್ತು ಬೆಳಗಾವಿ ಜಿಲ್ಲೆಯಲ್ಲಿ ನೋಂದಣಿ ಕಾಯ್ದೆ-1908ರ ಕಲಂ (5) ಹಾಗೂ ಕಲಂ (6) ರಡಿಯಲ್ಲಿ ಅನುಷ್ಟಾನಗೊಳಿಸಲಾಗಿದೆ. ಎನಿವೇರ್ ನೋಂದಣಿ ವ್ಯವಸ್ಥೆಯು ಈ ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ. ಈ ಕಾರಣದಿಂದ ಎನಿವೇರ್ ನೋಂದಣಿಯನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ಉಪನೋಂದಣಿ ಕಚೇರಿಗೂ ವಿಸ್ತರಿಸಲು ನಿರ್ಧರಿಸಲಾಗಿದೆ.

ಪ್ರಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪನೋಂದಣಿ ಕಚೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿರುತ್ತದೆ. ಆದರೆ ಎನಿವೇರ್ ನೋಂದಣಿಯಲ್ಲಿ ದಸ್ತಾವೇಜನ್ನು ಸ್ಥಿರಾಸ್ತಿ ಇರುವ ಜಿಲ್ಲೆಯ ಯಾವುದಾದರೂ ಉಪನೋಂದಣಿ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ.

ಎನಿವೇರ್ ನೋಂದಣಿ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ದಸ್ತಾವೇಜಿನ ನೋಂದಣಿಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ. ನೋಂದಣಿಯಲ್ಲಿ ವಿಳಂಬವನ್ನು ತಡೆಗಟ್ಟುತ್ತದೆ. ಸಾರ್ವಜನಿಕರು ಸಮೀಪದಲ್ಲಿರುವ ಉಪನೋಂದಣಿ ಕಚೇರಿಯಲ್ಲಿ ದಸ್ತಾವೇಜನ್ನು ನೋಂದಾಯಿಸಬಹುದು. ಸ್ಲಾಟ್ ಲಭ್ಯವಿರುವಂತಹ ಕಚೇರಿಯನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು. ನೋಂದಣಿ ಪ್ರಕ್ರಿಯೆ ಸುಲಭವಾಗುವುದಲ್ಲದೆ ಸಮಯವು ಸಹ ಉಳಿಯುತ್ತದೆ. ಉಪನೋಂದಣಿ ಕಚೇರಿಗಳಲ್ಲಿ ಜನದಟ್ಟಣೆ ಕಡಿಮೆಯಾಗುತ್ತದೆ. ಕಚೇರಿ ಸಿಬ್ಬಂದಿಗಳ ಮೇಲೆ ಕೆಲಸದ ಒತ್ತಡ ಕಡಿಮೆಯಾಗುತ್ತದೆ ಹಾಗೂ ಕಚೇರಿಗಳಲ್ಲಿ ನೋಂದಣಿ ಕೆಲಸ ಸಮಾನವಾಗಿ ಹಂಚಿಕೆಯಾಗುತ್ತದೆ. ಆದ್ದರಿಂದ ಸಾರ್ವಜನಿಕರು ಎನಿವೇರ್ ನೋಂದಣಿಯ ಸದುಪಯೋಗಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವಂತಹ ಕಚೇರಿ ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಿಕೊಳ್ಳಬಹುದೆಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ಸ್ಮಶಾನಕ್ಕಾಗಿ ಸ್ಥಳದ ಸಮಸ್ಯೆ ಇಲ್ಲ: ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್

**ರಾಮನಗರ:** ಜಿಲ್ಲೆಯಲ್ಲಿ ಜಾತಿ ಆಧಾರದ ಮೇಲೆ ಸ್ಮಶಾನಕ್ಕಾಗಿ ಭೂಮಿಯನ್ನು ಒದಗಿಸುವುದಿಲ್ಲ ಬದಲಿಗೆ ಸಾರ್ವಜನಿಕ ಸ್ಮಶಾನವನ್ನು ಒದಗಿಸಲಾಗಿದೆ ಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ತಿಳಿಸಿದರು.

ಅವರು ಆ. 29ರ ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ (ದೌರ್ಜನ್ಯ ಪ್ರತಿಬಂಧ) ತಿದ್ದುಪಡಿ ಕಾಯ್ದೆ-2015ರ ಅನುಷ್ಠಾನ ಸಂಬಂಧ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿ 1000 ಜನಸಂಖ್ಯೆಗೆ 18 ಗುಂಟೆ ಜಾಗವಷ್ಟೇ ಸಾರ್ವಜನಿಕ ಸ್ಮಶಾನಕ್ಕಾಗಿ ಪ್ರತಿ ಗ್ರಾಮಕ್ಕೆ ಒದಗಿಸಲಾಗುತ್ತಿದೆ. ಜಿಲ್ಲೆಯಲ್ಲಿ ಸ್ಮಶಾನಕ್ಕಾಗಿ ಸ್ಥಳದ ಸಮಸ್ಯೆ ಇರುವುದಿಲ್ಲ. ಯಾವುದಾದರು ಸಮಸ್ಯೆಗಳಿದ್ದಲ್ಲಿ ಅದನ್ನು ಪರಿಹರಿಸಲಾಗುವುದು ಹಾಗೂ ಒಂದು ವೇಳೆ ಸಾರ್ವಜನಿಕವಾಗಿ ಗುರುತಿಸಲಾದ ಸ್ಮಶಾನ ಜಾಗದಲ್ಲಿ ಅನ್ಯ ಜಾತಿಯರಿಗೆ ಜಾಗ ನೀಡಲು ನಿರಾಕರಿಸಿದರೆ ಅಂತಹವರ ವಿರುದ್ಧ ಕಾನೂನಾತ್ಮಕ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು. ಜಿಲ್ಲೆಯಲ್ಲಿರುವ ಎಲ್ಲಾ ಸ್ಮಶಾನಗಳಿಗೆ ಸರ್ವೆ ಮಾಡಿಸಬೇಕು, ಗಡಿ ಗುರುತುಹಾಕಬೇಕು, ಸ್ಮಶಾನವನ್ನು ಸಂಪರ್ಕಿಸುವ ಹಾಗೂ ಸಾರ್ವಜನಿಕರು ಓಡಾಡುವ ರಸ್ತೆ ಇರಬೇಕು ಮತ್ತು ''ಸಾರ್ವಜನಿಕ ಸ್ಮಶಾನ'' ಎಂಬ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಲು ತಹಶೀಲ್ದಾರು ಕ್ರಮವಹಿಸುವಂತೆ ಅವರು ಸೂಚಿಸಿದರು.

ದೌರ್ಜನ್ಯದಲ್ಲಿ ಕೊಲೆ/ಮರಣ ಹೊಂದಿದ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದವರ ಕುಟುಂಬದ ಅವಲಂಬಿತರುಗಳಿಗೆ ಪರಿಹಾರ, ಅನುಕಂಪದ ಆಧಾರದ ಮೇಲೆ ಸರ್ಕಾರಿ ಉದ್ಯೋಗ, ಪಿಂಚಣಿ, ನೊಂದ ಸಂತ್ರಸ್ತರುಗಳ ಮಕ್ಕಳಿಗೆ ವಸತಿ ಶಾಲೆಯ ಸೌಕರ್ಯಗಳನ್ನು ಒದಗಿಸುವುದರ ಜೊತೆಗೆ ಕೃಷಿ ಭೂಮಿ ಮಂಜೂರು ಮಾಡಲಾಗುವುದು. ಈ ನಿಯಮದಲ್ಲಿ ಯಾವುದೇ ವಿಳಂಬ ಇರುವುದಿಲ್ಲವೆಂದು, ಮರಣ ಹೊಂದಿದ ಅವಲಂಬಿತರಿಗೆ 24 ಗಂಟೆಯೊಳಗೆ ಪರಿಹಾರ ನೀಡಲಾಗುವುದು.

ಜಾತಿ ಪ್ರಮಾಣ ಪತ್ರವನ್ನು ಅಗತ್ಯ ದಾಖಲಾತಿಗಳನ್ನು ಸಂಗ್ರಹಿಸಿ ಗ್ರಾಮಲೆಕ್ಕಾಧಿಕಾರಿಗಳು ನಿಗದಿತ ಸಮಯದೊಳಗೆ ವಿತರಿಸಬೇಕು ಎಂದು ತಿಳಿಸಿದರು. ಸಮಿತಿಯ ಸದಸ್ಯರಾದ ಚೆಲುವರಾಜು ಅವರು ಮಾತನಾಡಿ, ದೊಡ್ಡಮಣ್ಣುಗುಡ್ಡೆ ಮತ್ತು ಚಿಕ್ಕಮಣ್ಣುಗುಡ್ಡೆ ಹಳ್ಳಿಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಜನರಿದ್ದು ಅವರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಅವರ ಜಮೀನಿಗೆ ಪೌತಿ ಖಾತೆ ಆಗುತ್ತಿಲ್ಲ. ಆದುದರಿಂದ ಆ ಸಮಸ್ಯೆಯನ್ನು ಪರಿಹರಿಸುವಂತೆ ಕೋರಿದರು.

# ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಪ್ರತಿಭಾ ಕಾರಂಜಿ ಸಹಕಾರಿ: ಕ್ಷೇತ್ರ ಸಮನ್ವಯಾಅಧಿಕಾರಿ ಶಿವರಾಜ್

**ಪಿರಿಯಾಪಟ್ಟಣ:** ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಅನಾವರಣಗೊಳಿಸಲು ಪ್ರತಿಭಾ ಕಾರಂಜಿಯಂತ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದು ಕ್ಷೇತ್ರ ಸಮನ್ವಯಾಧಿಕಾರಿ ಶಿವರಾಜ್ ತಿಳಿಸಿದರು.

ತಾಲ್ಲೂಕಿನ ಹುಣಸೆಕುಪ್ಪೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಆಯೋಜಿಸಿದ್ದ 2024?25ನೇ ಸಾಲಿನ ಮಾಲಂಗಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ಮಕ್ಕಳಿಗೆ ಅಗತ್ಯವಾದ ಪ್ರೋತ್ಸಾಹ ನೀಡುವ ಮೂಲಕ ಅವರಲ್ಲಿರುವ ಜನಪದ ನೃತ್ಯ ಮತ್ತು ಗಾಯನ, ಚಿತ್ರಕಲೆ, ಪ್ರಬಂಧ, ಚರ್ಚಾಸ್ಪರ್ಧೆ, ಏಕಾಪಾತ್ರಾ ಅಭಿನಯ, ಸಾಮಾಜಿಕ ಮತ್ತು ಪೌರಾಣಿಕ ನಾಟಕಗಳು ಅನೇಕ ಕಲಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳನ್ನು ಅನಾವರಣಗೊಳಿಸಲು ಪ್ರತಿಭಾ ಕಾರಂಜಿ ಕಾರ್ಯಕ್ರಮಗಳು ಸಹಕಾರಿಯಾಗಿವೆ, ಜೊತೆಗೆ ವಿದ್ಯಾರ್ಥಿಗಳಲ್ಲಿ ಕಲಾಭಿರುಚಿಯ ಸಾಮರ್ಥ್ಯವನ್ನು ಸಾಬೀತು ಮಾಡಲು ಇದೊಂದು ಉತ್ತಮ ವೇದಿಕೆ ಎಂದರು.

ಹುಣಸೆ ಕುಪ್ಪೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಹೆಚ್.ಟಿ.ಗಣೇಶ್ ಮಾತನಾಡಿ ಪ್ರತಿಭಾ ಕಾರಂಜಿ ಎಂಬುದು ಕಲಾ ಪ್ರತಿಭೆಗಳ ಚಿಣ್ಣರ ಹಬ್ಬ, ಪೋಷಕರಿಗಲ್ಲದೆ ಸಾರ್ವಜನಿಕರು ಖುಷಿ ಪಡುವ ಹಬ್ಬ. ಮಕ್ಕಳ ಪ್ರತಿಭೆಯನ್ನು ತಂದೆ ತಾಯಿಗಳು ಹತ್ತಿರದಿಂದ ಕಣ್ತುಂಬಿಕೊಳ್ಳುವ ವೇದಿಕೆಯಾಗಿದೆ. ತಾಲ್ಲೂಕು, ಜಿಲ್ಲಾ ಮತ್ತು ರಾಜ್ಯ ಮಟ್ಟದವರೆಗೆ ಸ್ಪರ್ಧೆ ಇರುವುದರಿಂದ ಮಕ್ಕಳಿಗೆ ಉತ್ತಮ ತರಬೇತಿ ನೀಡಿ ಸಜ್ಜುಗೊಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಸರ್ಕಾರ ಬಿಸಿಯೂಟ, ಮೊಟ್ಟೆ ವಿತರಣೆ, ಉಚಿತ ಸೈಕಲ್ ಸೇರಿದಂತೆ ಆನೇಕ ಯೋಜನೆಗಳನ್ನು ಜಾರಿ ಮಾಡಿ ಗುಣಮಟ್ಟದ ಶಿಕ್ಷಣಕ್ಕೆ ಪ್ರಯತ್ನಿಸುತ್ತಿದ್ದು ಇದರ ಪ್ರಯೋಜನ ಪಡೆದುಕೊಳ್ಳಬೇಕು. 18 ವರ್ಷಗಳಿಂದ ಸರ್ಕಾರವು ಶಿಕ್ಷಣ ಇಲಾಖೆ ಮೂಲಕ ಸರ್ಕಾರಿ ಮತ್ತು ಖಾಸಗಿ ಶಾಲೆಗಳ ಒಂದರಿಂದ 10ನೇ ತರಗತಿ ಮಕ್ಕಳಿಗೆ ಪ್ರತಿಭಾ ಕಾರಂಜಿ ಕಾರ್ಯಕ್ರಮದ ಮೂಲಕ ಅವರ ಪ್ರತಿಭೆ ಗುರುತಿಸುತ್ತಿದೆ. ಇದರ ಮೂಲಕ ಗ್ರಾಮೀಣ ಸೊಗಡಿನ ಸಾಂಸ್ಕೃತಿಕ ಅನಾವರಣಗೊಳಿಸಲು ಸಹಕಾರಿಯಾಗಿದೆ ಎಂದರು. ಈ ಸಂದರ್ಭದಲ್ಲಿ ವಿವಿಧ ಶಾಲೆಗಳ ಮಕ್ಕಳು ವಿವಿಧ ಸಾಂಸ್ಕೃತಿಕ ಹಾಗೂ ಪ್ರಯೋಗಾತ್ಮಕ ಕಾರ್ಯಕ್ರಮಗಳ ಮೂಲಕ ನೋಡುಗರ ಕಣ್ಮನ ಸೆಳೆದರು. ಕಾರ್ಯಕ್ರಮದಲ್ಲಿ ಸಿಆರ್ಪಿ ಕೆ.ಪಿ.ಸುರೇಶ್, ಎಸ್ಡಿಎಂಸಿ ಅಧ್ಯಕ್ಷ ಶ್ರೀನಿವಾಸ್, ಪ್ರಾಥಮಿಕ ಶಾಲಾ ಶಿಕ್ಷಕರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಹೆಚ್.ಕೆ ಶಿವಮೂರ್ತಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಹದೇವಪ್ಪ, ಉಪಾಧ್ಯಕ್ಷ ಅಶೋಕ್, ಸಾವಿತ್ರಿ ಬಾಯಿ ಫುಲೆ ಶಿಕ್ಷಕರ ಸಂಘದ ಅಧ್ಯಕ್ಷೆ ಗಾಯತ್ರಿ, ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರಾದ ಶ್ರೀನಿವಾಸ್, ಬಡ್ತಿ ಮುಖ್ಯ ಶಿಕ್ಷಕ ಪ್ರಕಾಶ್, ಕಂದಾಯ ಇಲಾಖೆ ನಿವೃತ್ತ ಅಧಿಕಾರಿ ಸೋಮಶೇಖರ್, ಗ್ರಾಮದ ಯಜಮಾನರಾದ ಚಂದ್ರೇಗೌಡ, ವಿವಿಧ ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ಶಿಕ್ಷಕರಾದ ಸಾಕಮ್ಮ, ಮೇರಿ , ಕುಮಾರ್, ಚಂದ್ರೇಗೌಡ, ರಮೇಶ್ ಅಣ್ಣಯ್ಯ, ಪೂರ್ಣಿಮಾ, ರಾಮಣ್ಣ, ಮಹೇಶ್, ಬಸವರಾಜು, ಮಂಜುನಾಥ್, ಶಿಲ್ಪಾ ಹಿರಿಯ ವಿದ್ಯಾರ್ಥಿಗಳು ಸೇರಿದಂತೆ ವಿವಿಧ ಶಾಲೆಗಳಿಂದ ಆಗಮಿಸಿದ ಶಿಕ್ಷಕರು ಉಪಸ್ಥಿತರಿದ್ದರು.



# ಸೆ.04 ರಂದು ಬಾಪೂಜಿ ಪ್ರಬಂಧ ಸ್ಪರ್ಧೆ: ಶೇಖ್ ತನ್ವೀರ್ ಆಸಿಫ್

**ಮಂಡ್ಯ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಹಾತ್ಮ ಗಾಂಧೀಜಿಯವರ 155 ನೇ ಜಯಂತಿ ಸಂದರ್ಭದಲ್ಲಿ ವಿದ್ಯಾರ್ಥಿ, ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಮೊದಲಾದ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ಪ್ರತ್ಯೇಕ ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಸೆಪ್ಟೆಂಬರ್ 04 ರಂದು ಶಾಲಾ ಕಾಲೇಜುಗಳಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ರವರು ತಿಳಿಸಿದರು. ಜಿಲ್ಲಾ ಮಟ್ಟದಲ್ಲಿ ವಿಜೇತರಾದವರಿಗೆ ಪ್ರತಿ ವಿಭಾಗದಲ್ಲಿ ಪ್ರತ್ಯೇಕವಾಗಿ ಹಾಗೂ ಕ್ರಮವಾಗಿ ತಲಾ 3 ಸಾವಿರ ರೂ, 2 ಸಾವಿರ ರೂ. ಹಾಗೂ 1 ಸಾವಿರ ರೂ. ಹಾಗೂ ರಾಜ್ಯ ಮಟ್ಟದಲ್ಲಿ ವಿಜೇತರಾದವರಿಗೆ ಪ್ರತಿ ವಿಭಾಗದಲ್ಲಿ ಪ್ರತ್ಯೇಕವಾಗಿ ಹಾಗೂ ಕ್ರಮವಾಗಿ ತಲಾ 31 ಸಾವಿರ ರೂ, 21 ಸಾವಿರ ರೂ. ಹಾಗೂ 11 ಸಾವಿರ ರೂ. ನಗದು ಬಹುಮಾನ ನೀಡಲಾಗುವುದು ಎಂದರು.

**ಪ್ರೌಢ ಶಾಲಾ ವಿಭಾಗ:** 1) ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ 2) ಗಾಂಧೀಜಿಯವರ ವಿಚಾರದಲ್ಲಿ ಸತ್ಯಾಗ್ರಹ 3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. 4) ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ. ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 900 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು. ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು ಎಂದರು.

**ಪದವಿ ಪೂರ್ವ ಶಿಕ್ಷಣ ವಿಭಾಗ:** 1) ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ. 2) ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು. 3) ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ. 4) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ. ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 1500 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು ಎಂದರು.

**ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ:** 1) ಇಂದಿನ ಪ್ರಜಾಪ್ರಭುತ್ವದಲ್ಲಿ ಸತ್ಯಾಗ್ರಹದ ಮಹತ್ವ. 2) ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯತೀತ ನಿಲುವುಗಳು 3) ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು. 4) ಗಾಂಧೀಜಿಯವರ ವಿಚಾರದಲ್ಲಿ ಸತ್ಯದ ಪರಿಕಲ್ಪನೆ. 5) ಗಾಂಧೀಯುವರ ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು. ಈ ಐದು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ರಚಿಸಬೇಕು ಎಂದರು.

ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು. ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಆಕರವಾಗಿ ಬಳಸಿದ ಪರಾಮರ್ಶನ/ ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಆದರೆ, ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ/ ಆಧಾರ ಗ್ರಂಥಗಳು/ ಮೊಬೈಲ್‌ಗಳ ಬಳಕೆಗೆ ಅವಕಾಶವಿರುವುದಿಲ್ಲ, ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕಿ ಎಸ್.ಹೆಚ್ ನಿರ್ಮಲ ತಿಳಿಸಿದರು.

## ಉಪನೋಂದಣಿಧಿಕಾರಿ ಕಚೇರಿಯಲ್ಲಿ ನೋಂದಣಿ ವ್ಯವಸ್ಥೆ ಜಾರಿಗೊಳಿಸಿ

**ಮಂಡ್ಯ:** 2024-25 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಉಪನೋಂದಣಿ ವ್ಯವಸ್ಥೆಯನ್ನು 'ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗುವುದೆಂದು ಸರ್ಕಾರದಿಂದ ಘೋಷಿಸಲಾಗಿರುತ್ತದೆ. ಈ ವ್ಯವಸ್ಥೆಯನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ 2011 ರಲ್ಲಿ ತುಮಕೂರು ಹಾಗೂ ಬೆಳಗಾವಿ' ಜಿಲ್ಲೆಗಳಲ್ಲಿ ಮಾರ್ಚ್ 2024 ರಲ್ಲಿ ನೋಂದಣಿ ಕಾಯ್ದೆ - 1908 ರ ಕಲಂ (5) ಹಾಗೂ (6) ರನ್ವಯ ಜಾರಿಗೆ ತರಲಾಗಿರುತ್ತದೆ. ನೋಂದಣಿ ವ್ಯವಸ್ಥೆಯು ಈ ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ. ಈ ಕಾರಣದಿಂದಾಗಿ ನೋಂದಣಿಯನ್ನು ಮಂಡ್ಯ ಜಿಲ್ಲೆಯ ಉಪನೋಂದಣಿ ಕಛೇರಿಗಳಿಗೂ ವಿಸ್ತರಿಸಲು ನಿರ್ಧರಿಸಲಾಗಿದೆ. ಪ್ರಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪನೋಂದಣಾಧಿಕಾರಿ ಕಛೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿದ್ದು ಆದರೆ ನೋಂದಣಿಯಲ್ಲಿ ದಸ್ತಾವೇಜನ್ನು ಸ್ಥಿರಾಸ್ತಿ ಇರುವ ಮಂಡ್ಯ ಜಿಲ್ಲೆಯ ಯಾವುದಾದರೂ ಉಪ ನೋಂದಣಾಧಿಕಾರಿ ಕಛೇರಿಯಲ್ಲಿ ಸೆಪ್ಟೆಂಬರ್ 02 ರಿಂದ ನೋಂದಾಯಿಸಿಕೊಳ್ಳಬಹುದಾಗಿದೆ. ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ದಸ್ತಾವೇಜಿನ ನೋಂದಣಿಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ. ನೋಂದಣಿಯಲ್ಲಿ ವಿಳಂಬವನ್ನು ತಡೆಗಟ್ಟುತ್ತದೆ. ಸಾರ್ವಜನಿಕರು ಸಮೀಪದಲ್ಲಿರುವ ಉಪನೋಂದಣಾಧಿಕಾರಿ ಕಛೇರಿಯಲ್ಲಿ ದಸ್ತಾವೇಜನ್ನು ನೋಂದಾಯಿಸಬಹುದು. ಸ್ಲಾಟ್ ಲಭ್ಯವಿರುವಂತಹ ಕಛೇರಿಯನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು, ನೋಂದಣಿ ಪ್ರಕ್ರಿಯೆ ಸುಲಭವಾಗುವುದಲ್ಲದೆ ಸಮಯವು ಸಹ ಉಳಿಯುತ್ತದೆ, ಉಪನೋಂದಣಾಧಿಕಾರಿ ಕಛೇರಿಗಳಲ್ಲಿ ಜನದಟ್ಟಣೆ ಕಡಿಮೆಯಾಗುತ್ತದೆ, ಕಛೇರಿ ಸಿಬ್ಬಂದಿಗಳ ಮೇಲೆ ಕೆಲಸದ ಒತ್ತಡ ಕಡಿಮೆಯಾಗುತ್ತದೆ ಹಾಗೂ ಕಛೇರಿಗಳಲ್ಲಿ ನೋಂದಣಿ ಕೆಲಸ ಸಮಾನವಾಗಿ ಹಂಚಿಕೆಯಾಗುತ್ತದೆ. ಆದ್ದರಿಂದ ಸಾರ್ವಜನಿಕರು ನೋಂದಣಿಯ ಸದುಪಯೋಗಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವಂತಹ ಕಛೇರಿಯನ್ನು ಆಯ್ಕೆಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಿಕೊಳ್ಳಿ ಎಂದು ಮಂಡ್ಯ ಜಿಲ್ಲಾ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

## ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಿಂದ ಗ್ರಾಹಕರ ಪರ ಆದೇಶ

**ಚಿಕ್ಕಬಳ್ಳಾಪುರ:** ಚಿಂತಾಮಣಿ ತಾಲ್ಲೂಕು, ವಂಗಿಮಾಲು ಗ್ರಾಮದ ನಿವಾಸಿಯಾದ ಆಂಜಿನಪ್ಪ ಬಿನ್ ಲೇಟ್ ಕೊಂಡಪ್ಪ ಇವರ ಮಗ ಕುಮಾರ್ ವಿ.ಎ ಇವರು 2020ರ ಅಕ್ಟೋಬರ್ 2 ರಂದು ಆಕಸ್ಮಿಕವಾಗಿ ವಿದ್ಯುತ್ ಸ್ಪರ್ಶಿಸಿ ವಿದ್ಯುತ್ ಅಪಘಾತದಿಂದ ಮರಣಹೊಂದಿರುತ್ತಾರೆ. ಕುಮಾರ್ ವಿ.ಎ ರವರು ಜೀವಿತ ಅವಧಿಯಲ್ಲಿ ಕರ್ನಾಟಕ ಬ್ಯಾಂಕ್ ನಲ್ಲಿ ಉಳಿತಾಯ ಖಾತೆ ತೆರೆದಿರುತ್ತಾರೆ. ಕರ್ನಾಟಕ ಬ್ಯಾಂಕ್ ಮುಖಾಂತರ ದೂರುದಾರರಾದ ಯುನಿವರ್ಸಲ್ ಸೊಂಪು ಜನರಲ್ ಇನ್ಸೂರೆನ್ಸ್ ಕಂಪನಿಯ ಗ್ರೌಪ್ ಆಕ್ಸಿಡೆಂಟ್ ವಿಮಾ ಪಾಲಿಸಿ ತೆಗೆದುಕೊಂಡಿದ್ದು, ತಮ್ಮ ಮಗನಾದ ಕುಮಾರ್ ವಿ.ಎ ವಿದ್ಯುತ್ ಅಪಘಾತದಿಂತ ನಿಧನ ಹೊಂದಿದ ನಂತರ ಅವರ ತಂದೆ ಆಂಜಿನಪ್ಪ ರವರು ವಿಮೆ ಕಂಪನಿಗೆ ತಮ್ಮ ಮಗನ ಅಪಘಾತ ವಿಮೆ ಮೊತ್ತ ನೀಡಲು ಕೋರಿದ್ದು, ವಿಮಾ ಕಂಪನಿ ನಿರಾಕರಿಸಿರುತ್ತಾರೆ. ಆ ಮೇರೆಗೆ ಪ್ರಕರಣವನ್ನು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಪರಿಶೀಲಿಸಿ, ವಿಚಾರಣೆ ಕೈಗೊಂಡು ವಿಮಾ ಕಂಪನಿಯವರು ಸೇವಾ ನ್ಯೂನ್ಯತೆ ಎಸಗಿರುವುದು ಕಂಡುಬಂದಿದ್ದು, ವಿಮಾ ಕಂಪನಿಗೆ ನಿಯಮಾನುಸಾರವಾಗಿ ವಿಮಾ ಮೊತ್ತ ರೂ. 10 ಲಕ್ಷಗಳನ್ನು ಪರಿಹಾರಕ್ಕಾಗಿ ದೂರುದಾರರಿಗೆ ಶೇ. 8ರ ಬಡ್ಡಿ ದರದಲ್ಲಿ ಸೇರಿಸಿ 2020ರ ಅ.2 ರಿಂದ ಅನ್ವಯವಾಗುವಂತೆ ನೀಡಲುಗ್ರಾಹಕರ ಪರ ಆಯೋಗವು ನ್ಯಾಯ ದೊರಕಿಸಿ ಕೊಟ್ಟಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುಲಿಕೆರೆ ಗ್ರಾ.ಪಂನಲ್ಲಿ ಕುಂದು ಕೊರತೆ ಸಭೆ



**ಮಂಡ್ಯ:** ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ಅವರು ಆಗಸ್ಟ್ 29 ರಂದು ಬುಧವಾರ ನಾಗಮಂಗಲ ತಾಲ್ಲೂಕು ಹುಲಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆವರಣದಲ್ಲಿ ಸಾರ್ವಜನಿಕರೊಂದಿಗೆ ಸಭೆ ನಡೆಸಿ ನಡೆಸಿದರು.

ಸಭೆಯಲ್ಲಿ ಸಾರ್ವಜನಿಕರಿಂದ ಲಿಖಿತವಾಗಿ ಒಟ್ಟು 18 ಕುಂದು ಕೊರತೆ ಅಹವಾಲುಗಳು ಸ್ವೀಕೃತಗೊಂಡಿದ್ದು, 18 ಅರ್ಜಿಗಳನ್ನು ಸ್ಥಳದಲ್ಲಿ ಇತ್ಯರ್ಥಗೊಳಿಸಲಾಯಿತು. ಇನ್ನುಳಿದ ಅರ್ಜಿಗಳಿಗೆ ಸಂಬಂಧಿಸಿದಂತೆ ನಿಯಮಾನುಸಾರ ತುರ್ತಾಗಿ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ, ಗ್ರಾಮ ಪಂಚಾಯತ್ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದರು.

ಪ್ರಾಥಮಿಕ ಆರೋಗ್ಯ ಕೇಂದ್ರ ಭೇಟಿ : ಹುಲಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಕೆಲಗೆರೆ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿಕೊಡಬೇಕೆಂದು ಮನವಿ ಸಲ್ಲಿಸಿದ್ದ ಮೇರೆಗೆ ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ಮಾಡಿ ಪರಿಶೀಲಿಸಿ, ವೈದ್ಯರು ಹಾಗೂ ಸಿಬ್ಬಂದಿಗಳ ಹಾಜರಾತಿಯನ್ನು ಪರಿಶೀಲಿಸಿದರು.

**ಕಾಮಗಾರಿ ಪರಿಶೀಲನೆ:** ಜೆ.ಜೆ.ಎಂ. ಯೋಜನೆಯಲ್ಲಿ ಕಳಪೆ ಕಾಮಗಾರಿ ನಡೆದಿರುತ್ತದೆ ಹಾಗೂ ಕಾಮಗಾರಿಗೆ ಅಳವಡಿಸಿರುವ ಪೈಪ್ ಕಡಿಮೆ ಗುಣಮಟ್ಟದಿಂದ ಕೂಡಿದ್ದು ಅದನ್ನು ಸರಿಪಡಿಸಿಕೊಡಬೇಕೆಂದು ಗ್ರಾಮಸ್ಥರು ಮನವಿ ಸಲ್ಲಿಸಿದ್ದ ಮೇರೆಗೆ ಗ್ರಾಮದಲ್ಲಿ ಜೆ.ಜೆ.ಎಂ. ಯೋಜನೆಯಡಿ ಅನುಷ್ಠಾನಗೊಂಡಿರುವ ಕಾಮಗಾರಿಗಳ ಸ್ಥಳಕ್ಕೆ ಭೇಟಿ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳುವಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ನಾಗಮಂಗಲ ಉಪವಿಭಾಗ ಗ್ರಾ.ಕು.ನೀ. ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಸೂಚಿಸಿದರು.

ಹುಲಿಕೆರೆ ಗ್ರಾ.ಪಂ. ವ್ಯಾಪ್ತಿಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಅಭಿವೃದ್ಧಿಪಡಿಸಿರುವ ಕಲ್ಯಾಣಿ ಕಾಮಗಾರಿಯನ್ನು ಪರಿಶೀಲಿಸಿದರು ಮತ್ತು ಸದರಿ ಯೋಜನೆಯಡಿ ಕೂಲಿಕಾರರ ಮಕ್ಕಳ ಆರೈಕೆಗಾಗಿ ಸ್ಥಾಪಿಸಲಾಗಿರುವ ಕೂಸಿನ ಮನೆ ಕೇಂದ್ರದಲ್ಲಿ ಕೂಸಿನ ಮನೆಗೆ ಬರುವ ಮಕ್ಕಳಿಗೆ ಸರ್ಕಾರದ ವೇಳಾಪಟ್ಟಿಯಂತೆ ಪ್ರತಿನಿತ್ಯ ಕಡ್ಡಾಯವಾಗಿ ಆಹಾರವನ್ನು ನೀಡುವಂತೆ ಮತ್ತು ಮಕ್ಕಳ ಆರೋಗ್ಯ ಮತ್ತು ಸ್ವಚ್ಛತೆ ಕಾಪಾಡುವಂತೆ ಕೇರ್ ಟೇಕರ್ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ತಿಳಿಸಿದರು.

**ಶಾಲಾ ಭೇಟಿ:** ಕೆಲಗೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಮಕ್ಕಳ ಹಾಜರಾತಿ ಮತ್ತು ಬೋಧನೆ ವಿಚಾರ, ಸ್ವಚ್ಛತೆ, ಹಾಗೂ ಮಕ್ಕಳಿಗೆ ಗುಣಮಟ್ಟದ ಬಿಸಿಯೂಟ ನೀಡುತ್ತಿರುವ ಬಗ್ಗೆ ಪರಿಶೀಲಿಸಿ, ಶಾಲಾ ಶಿಕ್ಷಕರಿಗೆ ಶೈಕ್ಷಣಿಕ ಚಟುವಟಿಕೆ ಹಾಗೂ ಶುಚಿತ್ವ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು. ನಂತರ ಕಟ್ಟಡ ನವೀಕರಣಕ್ಕೆ ಸಂಬಂಧಿಸಿದಂತೆ ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳುವಂತೆ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ತಿಳಿಸಿದರು.

ನಂತರ ಶಾಲಾ ಆವರಣದಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ನಿರ್ಮಾಣಗೊಂಡಿರುವ ಶಾಲಾ ಕಾಂಪೌಂಡ್ ಕಾಮಗಾರಿ ಪರಿಶೀಲಿಸಿದರು.

ಹುಲಿಕೆರೆ ಗ್ರಾಮದ ಅನುದಾನಿತ ಆದಿಶಕ್ತಿ ಪ್ರೌಢಶಾಲೆಗೆ ಭೇಟಿ ನೀಡಿ ಎಸ್.ಎಸ್.ಎಲ್.ಸಿ. ಮಕ್ಕಳ ಜೊತೆ ಸಂವಾದ ನಡೆಸಿ, ಶಾಲಾ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಪರಿಶೀಲಿಸಲಾಯಿತು. ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವಂತೆ ಹಾಗೂ ಎಸ್.ಎಸ್. ಎಲ್.ಸಿ ಪರೀಕ್ಷೆಯಲ್ಲಿ ಶೇಕಡ 100% ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಸಂಬಂಧ ಅಗತ್ಯ ಕ್ರಮವಹಿಸುವಂತೆ ಶಿಕ್ಷಕರಿಗೆ ಸೂಚಿಸಿದರು.

ತದನಂತರ ಹುಲಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬುಡುಬುಡುಕೆ ಕಾಲೋನಿ ಗ್ರಾಮದ ಗ್ರಾಮಸ್ಥರು ಸುಮಾರು 10 ವರ್ಷಗಳಿಂದ ಗುಡಿಸಲಿನಲ್ಲಿ 20 ಕುಟುಂಬಗಳು ವಾಸಿಸುತ್ತಿದ್ದು, ಸದರಿರವರ ಜಾಗಕ್ಕೆ ಹಕ್ಕುಪತ್ರ ವಿತರಿಸಬೇಕೆಂದು ಅರ್ಜಿ ನೀಡಿದ್ದು, ಅರ್ಜಿಯ ಬಗ್ಗೆ ಪರಿಶೀಲಿಸಿ, ಸದರಿ ವಿಷಯದ ಕುರಿತು ವಸತಿ ನಿಗಮ ಹಾಗೂ ಕಂದಾಯ ಇಲಾಖೆಯ ಮಾರ್ಗಸೂಚಿಗಳನ್ವಯ ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ ಸಂಬಂಧ ನಿಯಮಾನುಸಾರ ತುರ್ತಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದರು.

# ರಂಗಶಿಕ್ಷಣಕ್ಕೆ ಆಸಕ್ತ ಕಲಾವಿದರಿಂದ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಮೈಸೂರು ರಂಗಾಯಣವು ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ಅಧಿಕೃತ ರೆಪರ್ಟರಿಯಾಗಿದ್ದು, ಕಲಾಮಂದಿರದ ಆವರಣದಲ್ಲಿ ಕಚೇರಿಯನ್ನು ಹೊಂದಿದ್ದು, ರಂಗಶಿಕ್ಷಣ, ರಂಗತರಬೇತಿ, ನಾಟಕಗಳ ಸಿದ್ಧತೆ, ಪ್ರದರ್ಶನ, ರಂಗಶಿಬಿರಗಳು ಹೀಗೆ ಸಂಪೂರ್ಣ ರಂಗಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದೆ. 35 ವರ್ಷಗಳಿಂದ ನಿರಂತರವಾಗಿ ರಂಗಚಟುವಟಿಕೆಗಳು ನಡೆಯುತ್ತಿವೆ. ರಂಗಾಯಣವು ಸಿದ್ಧಪಡಿಸುವ ನಾಟಕಗಳಿಗೆ ಹಾಗೂ ರಂಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ರಂಗಭೂಮಿಯಲ್ಲಿ ಅನುಭವವಿರುವ ಆಸಕ್ತ ಕಲಾವಿದರು ಅರ್ಜಿ ಸಲ್ಲಿಸಬಹುದು. ರಾಷ್ಟ್ರೀಯ ನಾಟಕಶಾಲೆಯ ಪದವಿ/ರಾಜ್ಯದ ಯಾವುದೇ ರಂಗಶಿಕ್ಷಣ ಕೇಂದ್ರದಿಂದ ರಂಗಶಿಕ್ಷಣ ಪದವಿ/ಡಿಪ್ಲೊಮೋ/ರಾಜ್ಯ ಸರ್ಕಾರ ಅಂಗೀಕೃತ ವಿಶ್ವವಿದ್ಯಾಲಯದಿಂದ ನಾಟಕ ವಿಭಾಗದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು. ರಂಗಭೂಮಿ ಅನುಭವ ಅಪೇಕ್ಷಣೀಯ. ಅರ್ಹತೆಯುಳ್ಳ 22 ರಿಂದ 35 ವರ್ಷದೊಳಗಿನ ವಯೋಮಿತಿಯುಳ್ಳ ಆಸಕ್ತ ಕಲಾವಿದರನ್ನು ರಂಗಾಯಣದ ನಿಯಮಾನುಸಾರ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ.

ಅರ್ಜಿ ಸಲ್ಲಿಸುವುದಕ್ಕೆ ಸೆಪ್ಟೆಂಬರ್ 05 ವರೆಗೆ ದಿನ ವಿಸ್ತರಿಸಲಾಗಿದೆ. ಆಸಕ್ತರು ಅರ್ಜಿಯನ್ನು ನಿರ್ದೇಶಕರು, ರಂಗಾಯಣ, ವಿನೋಬಾ ರಸ್ತೆ, ಮೈಸೂರು-05 ಈ ವಿಳಾಸಕ್ಕೆ ಸಲ್ಲಿಸುವುದು. ಈ ಸಂಬಂಧ ಸಂದರ್ಶನವನ್ನು ಸೆಪ್ಟೆಂಬರ್ 10 ರಂದು ನಡೆಸಲಾಗುವುದು. ಅರ್ಜಿ ನಮೂನೆಯನ್ನು ರಂಗಾಯಣದ ವೆಬ್ಸೈಟ್‌ನಿಂದ ಡೌನ್ಲೋಡ್ ಮಾಡಿಕೊಳ್ಳಬಹುದಾಗಿದೆ.

## ಬೆಟ್ಟಕೋಟೆಯಲ್ಲಿ ಹಾಕಿ ಪಂದ್ಯಾವಳಿ



**ಬೆಂಗಳೂರು ಗ್ರಾಮಾಂತರ:** ಮೇಜರ್ ಧ್ಯಾನ್ ಚಂದ್ ರವರ ಜನ್ಮ ದಿನಾಚರಣೆಯ ಪ್ರಯುಕ್ತ ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಟ್ಟಕೋಟೆ ಗ್ರಾಮ ಪಂಚಾಯತಿ, ಕೆಂಪೇಗೌಡ ಇಂಟರ್ ನ್ಯಾಶನಲ್ ಏರ್ಪೋರ್ಟ್, ಲಯನ್ಸ್ ಕ್ಲಬ್ ಮತ್ತು ಶ್ರೀ ರಾಮಕೃಷ್ಣ ಗ್ರಾಮಾಂತರ ಪ್ರೌಢ ಶಾಲೆ ವತಿಯಿಂದ ದೇವನಹಳ್ಳಿ ತಾಲ್ಲೂಕಿನ ಬೆಟ್ಟಕೋಟೆ ಗ್ರಾಮದ ಧ್ಯಾನ್ ಚಂದ್ ಕ್ರೀಡಾಂಗಣದಲ್ಲಿ ಪುರುಷ ಮತ್ತು ಮಹಿಳೆಯರ ಹಾಕಿ ಪಂದ್ಯಾವಳಿ ಏರ್ಪಡಿಸಲಾಗಿತ್ತು. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಹಾಗೂ ಅರೋಗ್ಯ ಮತ್ತು ಶಿಕ್ಷಣ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷರಾದ ಲಕ್ಷ್ಮಿ ನಾರಾಯಣಪ್ಪ ರವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಜಯಲಕ್ಷ್ಮಿ, ಸ್ಥಳೀಯ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕೆಂಪರಾಜು, ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಅಶ್ವಥ್ ನಾರಾಯಣ್, ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕರು, ಶಾಲೆಯ ಮುಖ್ಯ ಶಿಕ್ಷಕರಾದ ಪ್ರಕಾಶ್ ಸೇರಿದಂತೆ ಇತರೆ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ರಾಷ್ಟ್ರೀಯ ಕ್ರೀಡಾ ದಿನಾಚರಣೆ - 2024: ಮ್ಯಾರಥಾನ್ ಸ್ಪರ್ಧೆಗೆ ಚಾಲನೆ



**ಮಂಡ್ಯ:** ಪ್ರತಿಯೊಬ್ಬರೂ ಮ್ಯಾರಥಾನ್ ಸ್ಪರ್ಧೆಯಲ್ಲಿ ಭಾಗವಹಿಸುವುದು ಮುಖ್ಯವಾಗಿದೆಯೇ ಹೊರತು ಸೋಲು, ಗೆಲುವು ಮುಖ್ಯವಲ್ಲ. ಭಾಗವಹಿಸಿರುವ ಎಲ್ಲರಿಗೂ ಒಳ್ಳೆಯದಾಗಲಿ ಎಂದು ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ತಿಮ್ಮಯ್ಯ ಅವರು ಶುಭ ಹಾರೈಸಿದರು.

ಅವರು ಇಂದು ಮಂಡ್ಯ ನಗರದ ಸರ್ ಎಂ ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ ನಡೆದ ಹಾಕಿ ಮಾಂತ್ರಿಕ ಮೇಜರ್ ಧ್ಯಾನ್ಚಂದ್ರವರ ಹುಟ್ಟುಹಬ್ಬದ ಪ್ರಯುಕ್ತ ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಕ್ರೀಡಾಕೂಟ-2024 ರ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಮ್ಯಾರಥಾನ್ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಪ್ರಯುಕ್ತ ಮ್ಯಾರಥಾನ್ ಓಟವನ್ನು ಹಮ್ಮಿಕೊಳ್ಳಲಾಗಿದೆ. ಕ್ರೀಡೆಗಳು ಭಾವೈಕ್ಯತೆಯ ಪ್ರತೀಕ ಹೆಚ್ಚು ಜನರು ಪಾಲ್ಗೊಳ್ಳುವ ಉದ್ದೇಶದಿಂದ ಮ್ಯಾರಥಾನ್ ಓಟವನ್ನು ಆಯೋಜಿಸಲಾಗಿದೆ ಎಂದರು. 100 ಕ್ಕೂ ಹೆಚ್ಚು ಮಂದಿಗಳು ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಓಂಪ್ರಕಾಶ್ ಅವರು ಉಪಸ್ಥಿತರಿದ್ದರು.

## ವಿವಿಧ ಕಾರ್ಯಕ್ರಮಗಳಿಗೆ ಹೆಸರು ನೋಂದಣಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಚಿಕ್ಕಬಳ್ಳಾಪುರ ಜಿಲ್ಲೆಯ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಸೆಪ್ಟೆಂಬರ್ ಎರಡನೇ ವಾರದಲ್ಲಿ ಚಿಕ್ಕಬಳ್ಳಾಪುರ ನಗರದ ಸರ್.ಎಂ.ವಿ.ಜಿಲ್ಲಾ ಕ್ರೀಡಾಂಗಣದಲ್ಲಿ ಜಾನಪದ ನೃತ್ಯ (ಗ್ರೂಪ್), ಜಾನಪದ ನೃತ್ಯ (ಏಕವ್ಯಕ್ತಿ, ವೈಯಕ್ತಿಕ), ಜಾನಪದ ಸಂಗೀತ (ಗ್ರೂಪ್), ಜಾನಪದ ಸಂಗೀತ (ಏಕವ್ಯಕ್ತಿ, ವೈಯಕ್ತಿಕ), ಕಥೆ ಬರವಣಿಗೆ, ಪೋಸ್ಟರ್ ತಯಾರಿಕೆ, ಛಾಯಾಗ್ರಹಣ ಕಾರ್ಯಕ್ರಮವನ್ನು ಸಂಘಟಿಸಲಾಗುತ್ತಿದೆ.15 ರಿಂದ 30 ವರ್ಷ ವಯೋಮಾನದವರು ಭಾಗವಹಿಸಬಹುದಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ಸಂಘ ಸಂಸ್ಥೆಗಳ ಯುವಕ/ಯುವತಿಯರು, ಶಾಲಾ ಕಾಲೇಜಿನ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಗೆ ಭೇಟಿ ನೀಡಿ ಅಥವಾ ದೂರವಾಣಿ ಸಂಖ್ಯೆ: 08156-270054 ರ ಮೂಲಕ ಹೆಸರುಗಳನ್ನು ನೊಂದಾಯಿಸಿಕೊಳ್ಳುವಂತೆ ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಧಾರ್ ಕಾರ್ಡ್ ಕಡ್ಡಾಯವಾಗಿರುತ್ತದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಗಾಯಿತ್ರಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗೆ (ಒಂದು ವರ್ಷದ ಅವಧಿಗೆ) ನೇಮಕಾತಿ ಮಾಡಿಕೊಳ್ಳಲು ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹುದ್ದೆಯು ತಾತ್ಕಾಲಿಕವಾಗಿದ್ದು, ಸರ್ಕಾರ ನಿಗಧಿಪಡಿಸಿರುವ ಅವಧಿಗೆ ಸೀಮಿತವಾಗಿರುತ್ತದೆ. ಆಸಕ್ತರು ಸ್ವಲಿಖಿತ ಅರ್ಜಿಗಳನ್ನು ಪೂರ್ಣ ವಿವರಗಳೊಂದಿಗೆ ಆಗಸ್ಟ್ 31 ಸಂಜೆ 5:30 ರ ಒಳಗಾಗಿ ವಿದ್ಯಾರ್ಹತೆ, ಅನುಭವ ಹಾಗೂ ಇತ್ಯಾದಿಗಳ ಬಗ್ಗೆ ಸಮರ್ಥನೀಯ ದಾಖಲೆಗಳೊಂದಿಗೆ ಮೊಹರು ಮಾಡಿದ ಲಕೋಟೆಗಳಲ್ಲಿ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರಿಗೆ ತಲುಪುವಂತೆ ಸಲ್ಲಿಸಬಹುದಾಗಿದೆ. ನಿಗಧಿತ ಕಾಲಾವಧಿಯ ನಂತರ ಸ್ವೀಕೃತವಾಗುವ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಗಳು ಕರ್ನಾಟಕ ಲೀಗಲ್ ಆಫೀಸರ್ ಅಪಾಯಿಂಟ್ ಮೆಂಟ್ 1977 ರಲ್ಲಿ ನಿಗಧಿಪಡಿಸಿರುವ ಎಲ್ಲಾ ಅರ್ಹತೆಗಳು ಹಾಗೂ ಷರತ್ತುಗಳಿಗೆ ಬದ್ದರಾಗಿರತಕ್ಕದ್ದು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.3ಕ್ಕೆ ಪ್ರಗತಿ ಪರಿಶೀಲನಾ ಸಭೆ

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಕೆ. ನಾಗಣ್ಣ ಗೌಡರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 3 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲೆಯ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ತಿಳಿಸಿದ್ದಾರೆ.

## ಆಹಾರ ಉದಿಮೆಗಳ ಪರಿಶೀಲನೆ ಕುರಿತು ವಿಶೇಷ ಆಂದೋಲನ

**ಚಿಕ್ಕಬಳ್ಳಾಪುರ,:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ವತಿಯಿಂದ ಆಗಸ್ಟ್ 31 ರಂದು ಜಿಲ್ಲೆಯ ವಿವಿಧ ಆಹಾರ ಉದ್ದಿಮೆಗಳಿಗೆ ಭೇಟಿ ನೀಡಿ ಸ್ವಚ್ಛತೆ ಹಾಗೂ ನೈರ್ಮಲ್ಯತೆ ಬಗ್ಗೆ ಪರಿಶೀಲನೆ ಮಾಡಿ ಆಹಾರ ಸುರಕ್ಷತೆಯ ಕ್ರಮಗಳ ಬಗ್ಗೆ ಅರಿವು ಮೂಡಿಸಿ, ಹೆಚ್ಚಿನ ಆಹಾರ ಪರವಾನಿಗೆ ನೀಡಲು ವಿಶೇಷ ಆಂದೋಲನವನ್ನು ಮಾನ್ಯ ಆರೋಗ್ಯ ಸಚಿವರ ಆದೇಶದ ಮೇರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಂಕಿತಾಧಿಕಾರಿ ಡಾ. ಧರ್ಮೇಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತ್ಸ್ಯಸಂಪದ ಯೋಜನೆಯಡಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯನ್ನು ಜಿಲ್ಲೆಯ್ಲಲಿ ಅನುಷ್ಠಾನಗೊಳಿಸಲಾಗುತ್ತಿದೆ. 2020-21, 2021-22, 2022-23 ಮತ್ತು 2023-24ನೇ ಸಾಲುಗಳಲ್ಲಿ ಉಳಿಕೆಯಾಗಿರುವ ಅನುದಾನದಲ್ಲಿ ಮೀನು ಕೃಷಿ ಕೊಳಗಳ ನಿರ್ಮಾಣ-8, ಮಧ್ಯಮ ಆರ್.ಎ.ಎಸ್, ಬಯೋಫ್ಲಾಕ್-1, ಐಸ್ ಬಾಕ್ಸ್ ನೊಂದಿಗೆ ಮೋಟಾರ್ ಸೈಕಲ್-1 ಮತ್ತು ಅಕ್ವೇರಿಯಂ, ಅಲಂಕಾರಿಕ ಮೀನುಗಳ ಕಿಯೋಸ್ಕ್ ಸೇರಿದಂತೆ ಮೀನು ಕಿಯೋಸ್ಕ್ ಗಳ ನಿರ್ಮಾಣ-2 ಗುರಿಗಳ ಹಂಚಿಕೆ ಮಾಡಲಾಗಿದೆ. 2024-25ನೇ ಸಾಲಿನಲ್ಲಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ 40 ರಷ್ಟು ಸಹಾಯಧನ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಮಹಿಳಾ ಫಲಾನುಭವಿಗಳಿಗೆ ಘಟಕ ವೆಚ್ಚದ 60 ರಷ್ಟು ಸಹಾಯಧನ ನೀಡಲಾಗುವುದು. ಅರ್ಜಿಯನ್ನು ಸಂಬಂಧಪಟ್ಟ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆದು ಸೆಪ್ಟೆಂಬರ್ 15 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪನಿರ್ದೇಶಕರು, ಚಿಕ್ಕಬಳ್ಳಾಪುರ ಮೊ.ನಂ-9844466228, ಮೀನುಗಾರಿಕೆ ಸಹಾಯಕ ನಿರ್ದೇಶಕರು, ಬಾಗೇಪಲ್ಲಿ ಮತ್ತು ಚಿಕ್ಕಬಳ್ಳಾಪುರ-7676759249, ಚಿಂತಾಮಣಿ ಮತ್ತು ಗೌರಿಬಿದನೂರು-9740909438 ಗೆ ಸಂಪರ್ಕಿಸಬಹುದೆಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯಾದ್ಯಂತ ಸೆ.14ರಂದು ರಾಷ್ಟ್ರೀಯ ಲೋಕ ಅದಾಲತ್: ನ್ಯಾ. ನೇರಳೆ ವೀರಭದ್ರಯ್ಯ ಭವಾನಿ

**ಚಿಕ್ಕಬಳ್ಳಾಪುರ:** ಜಿಲ್ಲೆಯ ವಿವಿಧ ಹಂತದ ನ್ಯಾಯಾಲಯಗಳಲ್ಲಿ ಬಾಕಿ ಇದ್ದು ಇತ್ಯರ್ಥಪಡಿಸಲು ಅವಕಾಶವಿರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ವಕೀಲರು ಮತ್ತು ಕಕ್ಷಿದಾರರ ಪರಸ್ಪರ ಸಹಕಾರದೊಂದಿಗೆ ಸೆಪ್ಟೆಂಬರ್ 14 ರಂದು ನಡೆಯಲಿರುವ ರಾಷ್ಟ್ರೀಯ ಮೆಗಾ ಅದಾಲತ್‌ನಲ್ಲಿ ರಾಜಿ ಮೂಲಕ ಇತ್ಯರ್ಥ ಪಡಿಸಲಾಗುತ್ತಿದ್ದು, ಸಾರ್ವಜನಿಕರು ಅದಾಲತ್‌ನ ಪ್ರಯೋಜನ ಪಡೆದುಕೊಳ್ಳಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಆದ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ನೇರಳೆ ವೀರಭದ್ರಯ್ಯ ಭವಾನಿ ಅವರು ತಿಳಿಸಿದ್ದಾರೆ. ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಸೆಪ್ಟೆಂಬರ್ 14 ರಂದು ನಡೆಯಲಿರುವ ರಾಷ್ಟ್ರೀಯ ಲೋಕ ಅದಾಲತ್ ಕುರಿತು ಮಾತನಾಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಮೂಲಕ ನಿರಂತರವಾಗಿ ರಾಜಿ ಪಂಚಾಯಿತಿ ಮೂಲಕ ವ್ಯಾಜ್ಯ ಪೂರ್ವ ಮತ್ತು ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸುತ್ತಾ ಬರಲಾಗುತ್ತಿದೆ, ಇದರ ಹೊರತಾಗಿಯೂ ವಿಶೇಷವಾಗಿ ರಾಷ್ಟ್ರೀಯ 3ನೇ ಲೋಕ ಅದಾಲತ್ ಕಾರ್ಯಕ್ರಮಗಳನ್ನು ಆಯೋಜಿಸಿ ಸಾವಿರಾರು ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುತ್ತದೆ.

ಈ ಬಾರಿ ಅದಾಲತ್‌ನಲ್ಲಿ ಜಿಲ್ಲಾ ನ್ಯಾಯಾಲಯವೂ ಸೇರಿದಂತೆ ವಿವಿಧ ಹಂತದ ನ್ಯಾಯಾಲಯಗಳಲ್ಲಿ ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ಜಿಲ್ಲಾ ಗ್ರಾಹಕರ ಪರಿಹಾರ ಆಯೋಗದಲ್ಲಿನ ಪ್ರಕರಣಗಳು, ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರಕ್ಕೆ ಸಂಬಂಧಿಸಿದ ಪ್ರಕರಣಗಳು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ಪ್ರಕರಣಗಳು, ವಿಚ್ಛೇದನವನ್ನು ಹೊರತುಪಡಿಸಿ ವೈವಾಹಿಕ ಕುಟುಂಬ ನ್ಯಾಯಾಲಯದ ಪ್ರಕರಣಗಳನ್ನು ಕಕ್ಷಿದಾರರು ಹಾಗೂ ವಕೀಲರ ಸಹಕಾರದೊಂದಿಗೆ ಇತ್ಯರ್ಥಪಡಿಸಲಾಗುವುದು ಎಂದರು. ಅಲ್ಲದೇ, ಚೆಕ್ಕು ಅಮಾನ್ಯ ಪ್ರಕರಣಗಳು, ಸಾಲ ವಸೂಲಾತಿ ನ್ಯಾಯಾಧಿಕರಣದ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಕಾರ್ಮಿಕರ ವಿವಾದಗಳು, ಭೂಸ್ವಾಧೀನ ಪ್ರಕರಣಗಳು ಹಾಗೂ ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಸಿವಿಲ್ ಪಿಂಚಣಿ ಪ್ರಕರಣಗಳನ್ನು ರಾಜಿ ಮೂಲಕ ಇಬ್ಬರೂ ಕಕ್ಷಿದಾರರ ಮನವೊಲಿಸಿ ಇತ್ಯರ್ಥ ಪಡಿಸಲಾಗುವುದು. ಜೊತೆಗೆ ರಾಜಿಯಾಗಬಲ್ಲ ಸಿವಿಲ್ ಹಾಗೂ ಖಾಯಂ ಜನತಾ ನ್ಯಾಯಾಲಯದಲ್ಲಿನ ಪ್ರಕರಣಗಳನ್ನೂ ಇತ್ಯರ್ಥ ಪಡಿಸಲಾಗುವುದು. ನ್ಯಾಯಾಲಯಗಳಲ್ಲಿನ ಪ್ರಕರಣಗಳನ್ನು ಉಭಯ ಕಕ್ಷಿದಾರರು ರಾಜಿ ಮಾಡಿಕೊಳ್ಳಲು ಸೂಕ್ತ ಕಾನೂನು ಸಲಹೆ ಮತ್ತು ಮಾರ್ಗದರ್ಶನವನ್ನು ನೀಡಲಾಗುವುದು ಎಂದರು. ಲೋಕ ಅದಾಲತ್ ನಲ್ಲಿ ಪ್ರಕರಣಗಳನ್ನು ಸ್ವಯಂಪ್ರೇರಿತರಾಗಿ ಇತ್ಯರ್ಥಪಡಿಸಿಕೊಳ್ಳಲು ಮುಂದಾಗುವುದರಿಂದ ಎರಡೂ ಕಡೆಯವರಿಗೂ ಒಪ್ಪಿಗೆಯಾಗುವಂತೆ ಪ್ರಕರಣ ತೀರ್ಮಾನವಾಗುವುದರಿಂದ ಇಬ್ಬರ ನಡುವಿನ ಬಾಂಧವ್ಯ ಉಳಿದು ವಿವಾದವು ಸುಖಾಂತ್ಯಗೊಳ್ಳುತ್ತದೆ. ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನೂ ಸಹ ರಾಜಿ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶವಿರುತ್ತದೆ. ಪ್ರಕರಣಗಳು ರಾಜಿ ಸಂಧಾನದ ಮೂಲಕ ಇತ್ಯರ್ಥಗೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಸಂಪೂರ್ಣವಾಗಿ ಮರುಪಾವತಿ ಮಾಡಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಸಮ್ಮತಿಯಾದಲ್ಲಿ ಮಾತ್ರ ರಾಜಿ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಲೋಕ ಅದಾಲತ್ ವಿಶೇಷ ಅವಕಾಶವಾಗಿರುತ್ತದೆ ಎಂದರು.

# ನಗರದ ಅಭಿವೃದ್ಧಿಗೆ ಸಹಕಾರ ಮತ್ತು ಮಾರ್ಗದರ್ಶನ: ಕೊತ್ತೂರು ಮಂಜುನಾಥ್



**ಕೋಲಾರ:** ನಗರದ ಅಭಿವೃದ್ಧಿಗೆ ನೂತನ ಅಧ್ಯಕ್ಷರಿಗೆ ಉಪಾಧ್ಯಕ್ಷರಿಗೆ ಎಲ್ಲಾ ರೀತಿಯ ಸಹಕಾರ ಮತ್ತು ಮಾರ್ಗದರ್ಶನ ಮಾಡಲಿದ್ದು ಎಲ್ಲಾ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಮಾದರಿ ನಗರಸಭೆ ಯಾಗಿಸುವಂತೆ ಶಾಸಕ ಕೊತ್ತೂರು ಜಿ ಮಂಜುನಾಥ್ ತಿಳಿಸಿದರು ಬುಧವಾರ ಕೋಲಾರ ನಗರಸಭೆಯಲ್ಲಿ ನೂತನ ಅಧ್ಯಕ್ಷೆ ಲಕ್ಷ್ಮೀದೇವಮ್ಮ ಹಾಗೂ ಉಪಾಧ್ಯಕ್ಷೆ ಸಂಗೀತಾ ಅವರ ಅಧಿಕಾರ ಸ್ವೀಕಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಕೋಲಾರ ನಗರಸಭೆಯ ಆಡಳಿತ ಮಂಡಳಿಯ ಚುಕ್ಕಾಣಿಯನ್ನು ಹೆಣ್ಣು ಮಕ್ಕಳೇ ವಹಿಸಿದ್ದಾರೆ ಮನೆಯ ಜವಾಬ್ದಾರಿಯನ್ನು ವಹಿಸಿ ಹೇಗೆ ನಿಭಾಯಿಸುತ್ತಾರೆ ಅದೇ ರೀತಿ ಸಹ ನಗರಸಭೆಯನ್ನು ಅಭಿವೃದ್ಧಿಯ ಕಡೆಗೆ ತರಲಿದ್ದಾರೆ ನಗರಸಭೆಯಲ್ಲಿನ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸವನ್ನು ನೂತನ ಅಧ್ಯಕ್ಷರು ಉಪಾಧ್ಯಕ್ಷರು ಮಾಡಬೇಕಾಗಿದೆ ಎಂದರು. ನಗರಸಭೆ ನೂತನ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಕಛೇರಿಗೆ ಮಾತ್ರ ಸೀಮಿತವಾಗದೇ ನಗರವನ್ನು ಸಂಚರಿಸಿ ಸಮಸ್ಯೆಗಳನ್ನು ಪಟ್ಟಿ ಮಾಡಿ ಅಧಿಕಾರಿಗಳಿಂದ ಪರಿಹಾರವನ್ನು ಕಂಡುಕೊಳ್ಳುವ ಕೆಲಸ ಮಾಡಬೇಕು ತಮಗೆ ಸಿಕ್ಕಿರುವ ಅಧಿಕಾರದಿಂದ ಮಾದರಿ ನಗರಸಭೆಯಾಗಿ ಮಾಡಬೇಕು ಯಾವುದೇ ಕಾರಣಕ್ಕೂ ಅಧಿಕಾರದ ದುರುಪಯೋಗ ವಾಗದಂತೆ ಕ್ರಮ ವಹಿಸಬೇಕು ನಗರಸಭೆಯಲ್ಲಿ ಇವತ್ತಿನ ಪರಿಸ್ಥಿತಿಯನ್ನು ಸರಿಪಡಿಸಬೇಕು ಮುಂದೆ ಹಂತಹಂತವಾಗಿ ನಗರದಲ್ಲಿ ಸಮಸ್ಯೆಗಳನ್ನು ಬಗೆಹರಿಸಬೇಕು ಸಮಸ್ಯೆಗಳ ಪರಿಹಾರಕ್ಕೆ ನಾನು ಎಂಎಲ್ಸಿಗಳು ಮಾರ್ಗದರ್ಶನ ನೀಡಲಾಗುವುದು ಎಂದು ಹೇಳಿದರು.

ನಗರದಲ್ಲಿನ ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ನೀರಿನ ಸಮಸ್ಯೆ ಬಗೆಹರಿಸಬೇಕು. ಈಗಾಗಲೇ ನಗರಕ್ಕೆ ಯರಗೋಳ್ ನೀರು ಹರಿಯುತ್ತಿದ್ದು, ಎಲ್ಲ ಹಾಸ್ಟೆಲ್‌ಗಳಿಗೂ ಬಾಕಿ ಕೆಲಸಗಳಿಗೆ ವೇಗ ನೀಡಿ ಪ್ರತಿಯೊಂದು ಮನೆಗೂ ನೀರು ಹರಿಸುವ ಕೆಲಸ ಮಾಡಬೇಕು ಅಧ್ಯಕ್ಷರಾಗಿ ಅವರ ಕೆಲಸ ಅವರೇ ಮಾಡಿಕೊಂಡು ಹೋಗುತ್ತಾರೆ ನಗರಸಭೆಯಲ್ಲಿ ಹಣ ನೀಡದೆ ಯಾವುದೇ ಕೆಲಸ ಆಗದಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಈ ಎಲ್ಲ ಅವ್ಯವಸ್ಥೆಯನ್ನು ಸರಿಪಡಿಸಿ ಜನರಿಗೆ ಉತ್ತಮ ಸೇವೆ ನೀಡಲು ಕ್ರಮಕೈಗೊಳ್ಳುವುದಾಗಿ ಹೇಳಿದ ಅವರು, ಸದ್ಯಕ್ಕೆ ಪೌರಾಯುಕ್ತರ ಹುದ್ದೆ ಖಾಲಿಯಿದ್ದು, ಒಳ್ಳೆಯವರನ್ನು ನೇಮಕ ಮಾಡಲು ಇಲಾಖೆಯ ಸಚಿವರಿಗೆ ಮನವಿ ಮಾಡಲಾಗಿದೆ. 2-3 ದಿನಗಳಲ್ಲಿ ಜನಪರ ಕಾಳಜಿಯುಳ್ಳ ವ್ಯಕ್ತಿಯನ್ನೇ ನೇಮಕ ಮಾಡಲಿದ್ದಾರೆ. ಎಂದರು. ಈ ಸಂದರ್ಭದಲ್ಲಿ ಎಂಎಲ್ಸಿ ಅನಿಲ್‌ಕುಮಾರ್, ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ವೈ ಶಿವಕುಮಾರ್, ಮುಖಂಡರಾದ ಸೀಸಂದ್ರ, ಗೋಪಾಲಗೌಡ, ಮೈಲಾಂಡಹಳ್ಳಿ ಮುರಳಿ ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್



## ಮೊಟೊ G55 ಮತ್ತು ಮೊಟೊ G35 ಬಿಡುಗಡೆ

ಸ್ಮಾರ್ಟ್‌ಫೋನ್ ಮಾರುಕಟ್ಟೆಯಲ್ಲಿ ಮೊಟೊ ಮೊಬೈಲ್ ಸಂಸ್ಥೆಯು ಹಲವು ಶ್ರೇಣಿಯ ಫೋನ್ಗಳ ಮೂಲಕ ಗುರುತಿಸಿಕೊಂಡಿದೆ. ಇದೀಗ ಸಂಸ್ಥೆಯು ನೂತನವಾಗಿ ಮೊಟೊ ಜಿ55 ಹಾಗೂ ಮೊಟೊ ಜಿ35 ಸ್ಮಾರ್ಟ್‌ಫೋನ್ಗಳನ್ನು ಬಿಡುಗಡೆ ಮಾಡಿದೆ. ಈ ಎರಡು ಫೋನ್‌ಗಳು 50 ಮೆಗಾ ಪಿಕ್ಸಲ್ ಸೆನ್ಸಾರ್ ಕ್ಯಾಮೆರಾ ರಚನೆ ಅನ್ನು ಪಡೆದಿದ್ದು, 5000mAh ಬ್ಯಾಟರಿ ಸೌಲಭ್ಯ ಸಹ ಪಡೆದಿವೆ. ಹೌದು, ಮೊಟೊ ಸಂಸ್ಥೆಯು ಹೊಸದಾಗಿ ಮೊಟೊ ಜಿ55 ಹಾಗೂ ಮೊಟೊ ಉ35 ಫೋನ್‌ಗಳನ್ನು ಮಾರುಕಟ್ಟೆಗೆ ಪರಿಚಯಿಸಿದೆ. ಈ ಹೊಸ ಫೋನ್‌ಗಳಲ್ಲಿ ಮೊಟೊ ಜಿ55 ಮೀಡಿಯಾಟೆಕ್ ಡೈಮನಸಿಟಿ 7025 ಪ್ರೊಸೆಸರ್ ಪಡೆದಿದೆ. ಹಾಗೆಯೇ ಮೊಟೊ G35 unisoc T760 ಪ್ರೊಸೆಸರ್ ಬಲ ಪಡೆದಿದೆ. ಮೊಟೊ ಉ55 ಫೋನ್ ಫೀಚರ್ಸ್. ಹೊಸ ಮೊಟೊ G55 5G ಫೋನಿನ 6.49 ಇಂಚಿನ ಡಿಸ್ಪ್ಲೇ ಅನ್ನು ಪಡೆದಿದೆ. ಈ ಫೋನ್ ಈ ಫೋನ್ 50MP ಮುಖ್ಯ ಕ್ಯಾಮೆರಾ ಮತ್ತು 16MP ಸೆಲ್ಫಿ ಕ್ಯಾಮೆರಾ ಹೊಂದಿರಲಿದೆ. ಇದು 256GB ಸ್ಟೋರೇಜ್ನೊಂದಿಗೆ ಬರಲಿದೆ. 5,000mAh ಬ್ಯಾಟರಿ, 30W ವೈರ್ಡ್ ಫಾಸ್ಟ್ ಚಾರ್ಜಿಂಗ್ ಸೇರಿದಂತೆ ಹಲವು ವಿಶೇಷತೆಗಳೊಂದಿಗೆ ಮಾರುಕಟ್ಟೆಗೆ ಲಗ್ಗೆ ಇಡಲಿದೆ. ಮೊಟೊ ಜಿ55 5ಉ ಫೋನ್ ಬೂದು ಮತ್ತು ನೇರಳೆ ಬಣ್ಣಗಳ ಆಯ್ಕೆಯಲ್ಲಿ ಬಿಡುಗಡೆ ಆಗಿದೆ. ಇತ್ತೀಚೆಗೆ ಬಿಡುಗಡೆಯಾದ ಮೊಟೊ ಜಿ45 ಫೋನಿನಂತೆಯೇ ಮೊಟೊ ಜಿ55 ಮೊಬೈಲ್ನ ವಿನ್ಯಾಸ ಇರುತ್ತದೆ. ಇದು ಡ್ಯುಯಲ್ ಹಿಂಬದಿಯ ಕ್ಯಾಮೆರಾ ಸೆಟಪ್ ಮತ್ತು ಎಲ್ಇಡಿ ಫ್ಲ್ಯಾಷ್ ಹೊಂದಿರುವ ಸಾಧ್ಯತೆಯಿದೆ. ಫೋನಿನ ಹಿಂಭಾಗದಲ್ಲಿ ಮೊಟೊರೊಲಾ ಲೋಗೋವನ್ನು ಕಾಣಬಹುದು.

## ಪೀನಟ್ ಬಟರ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಶೇಂಗಾ ಬೀಜ – 1 ಕಪ್, ಜೇನುತುಪ್ಪ – 1 ಚಮಚ, ಉಪ್ಪು – ಒಂದು ಚಿಟಿಕೆ, ಕಡಲೆಕಾಯಿ ಎಣ್ಣೆ – 1 ಚಮಚ

### ಮಾಡುವ ವಿಧಾನ

ಮೊದಲಿಗೆ ಒಂದು ಪ್ಯಾನ್ ಬಿಸಿಗಿಟ್ಟು ಅದಕ್ಕೆ ಶೇಂಗಾ ಬೀಜ ಹಾಕಿಕೊಂಡು ಕೆಂಪಗಾಗುವವರೆಗೆ ಹುರಿದುಕೊಳ್ಳಿ. ಬಳಿಕ ತಣ್ಣಾಗಗಲು ಬಿಡಿ.

ಈಗ ಹುರಿದ ಶೇಂಗಾ ಬೀಜವನ್ನು ಒಂದು ಟವಲ್ ಅಥವಾ ಬಟ್ಟೆಯ ಮೇಲೆ ಹಾಕಿಕೊಂಡು ಅದರ ಸಿಪ್ಪೆ ಹೋಗುವವರೆಗೆ ಚನ್ನಾಗಿ ಉಜ್ಜಿಕೊಂಡು ಒಂದು ಬೌಲ್ನಲ್ಲಿ ಹಾಕಿಕೊಳ್ಳಿ.

ಬಳಿಕ ಒಂದು ಮಿಕ್ಸಿ ಜಾರಿಗೆ ಶೇಂಗಾ ಬೀಜವನ್ನು ಹಾಕಿಕೊಂಡು ಚನ್ನಾಗಿ ರುಬ್ಬಿಕೊಂಡು ಪುಡಿ ಮಾಡಿಕೊಳ್ಳಿ.

ನಂತರ ಇದಕ್ಕೆ 1 ಚಮಚ ಜೇನುತುಪ್ಪವನ್ನು ಹಾಕಿಕೊಂಡು ಅದಕ್ಕೆ ಒಮದು ಚಿಟಿಕೆ ಉಪ್ಪನ್ನು ಹಾಕಿಕೊಳ್ಳಿ. ಬಳಿಕ ಮತ್ತೊಂದು ಬಾರಿ ರುಬ್ಬಿಕೊಳ್ಳಿ.

ಈಗ ಈ ಮಿಶ್ರಣಕ್ಕೆ ಒಂದು ಚಮಚ ಕಡಲೆಕಾಯಿ ಎಣ್ಣೆ ಹಾಕಿಕೊಳ್ಳಿ. ಬಳಿಕ ಇನ್ನೊಂದು ಬಾರಿ ರುಬ್ಬಿಕೊಳ್ಳಿ.

ಮಿಕ್ಸಿ ಜಾರಿನಲ್ಲಿದ್ದ ಮಿಶ್ರಣವನ್ನು ಒಂದು ಬೌಲ್ಗೆ ತೆಗೆದಿಟ್ಟುಕೊಳ್ಳಿ. ಈ ಪೀನಟ್ ಬಟರ್ ಅನ್ನು ಚಪಾತಿ, ಬ್ರೆಡ್ ಅಥವಾ ನಿಮಗಿಷ್ಟವಾದ ಆಹಾರದೊಂದಿಗೆ ಸೇವಿಸಬಹುದು.

## ಎಮರ್ಜೆನ್ಸಿ ಚಿತ್ರಕ್ಕೆ ಸೆನ್ಸಾರ್ ಸಂಕಷ್ಟ: ಕಂಗನಾ ಸ್ಪಷ್ಟನೆ



ಇತ್ತೀಚಿನ ದಿನಗಳಲ್ಲಿ ಬಾಲಿವುಡ್ ನಟಿ ಕಂಗನಾ ರಣಾವತ್ ಅವರು ತಮ್ಮ ಮುಂಬರುವ ಚಿತ್ರ ಎಮರ್ಜೆನ್ಸಿ ವಿಚಾರವಾಗಿ ಸುದ್ದಿಯಲ್ಲಿದ್ದಾರೆ. ಈ ಚಿತ್ರ ಸಾಕಷ್ಟು ವಿವಾದಗಳಲ್ಲಿ ಸಿಲುಕಿದೆ. ಇದಕ್ಕೆ ಜನ ತೀವ್ರ ವಿರೋಧ ಕೂಡ ವ್ಯಕ್ತಪಡಿಸುತ್ತಿದ್ದಾರೆ.

ಹೀಗಿರುವಾಗ ಚಿತ್ರ ಬಿಡುಗಡೆ ಮೇಲೆ ಸೆನ್ಸಾರ್ನ ತೂಗುಗತ್ತಿ ನೇತಾಡುತ್ತಿದೆ ಎಂದು ಸ್ವತಃ ಕಂಗನಾ ಅವರೇ ಬಹಿರಂಗಪಡಿಸಿದ್ದಾರೆ.'ಎಮರ್ಜೆನ್ಸಿ' ಚಿತ್ರದ ಸೆನ್ಸಾರ್ ಪ್ರಮಾಣಪತ್ರದ ಕುರಿತು ವೀಡಿಯೋ ಮಾಡಿರುವ ಕಂಗನಾ ಅವರು ಅದನ್ನು ತಮ್ಮ ಎಕ್ಸ್ ಖಾತೆಯಲ್ಲಿ ಶೇರ್ ಮಾಡಿಕೊಂಡಿದ್ದಾರೆ. ವೀಡಿಯೋದಲ್ಲಿ, ಎಮರ್ಜೆನ್ಸಿ ಚಿತ್ರಕ್ಕೆ ಸೆನ್ಸಾರ್ ಪ್ರಮಾಣಪತ್ರ ಸಿಕ್ಕಿದೆ ಎಂದು ಹಲವು ವದಂತಿಗಳು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿವೆ. ಆದರೆ ಅದು ನಿಜವಲ್ಲ ಎಂದು ಹೇಳಿದ್ದಾರೆ.ಚಿತ್ರದ ಸರ್ಟಿಫಿಕೇಟ್ ನಿಲ್ಲಿಸುವ ಬಗ್ಗೆ ಮಾತನಾಡುತ್ತಾ, ಕೊಲೆ ಬೆದರಿಕೆ ಸೇರಿದಂತೆ ಹಲವು ರೀತಿಯಲ್ಲಿ ಬೆದರಿಕೆಗಳು ಬರುತ್ತಿವೆ. ಇಂದಿರಾ ಗಾಂಧಿಯವರ ಬಗ್ಗೆ ತೋರಿಸದಂತೆ ನಮ್ಮ ಮೇಲೆ ಒತ್ತಡ ಹೇರಲಾಗುತ್ತಿದೆ ಎಂದು ತಿಳಿಸಿದ್ದಾರೆ. ಸದ್ಯ ನಟಿಯ ಈ ವಿಡಿಯೋ ವೈರಲ್ ಆಗಿದ್ದು, ಜನರು ಇದಕ್ಕೆ ತೀವ್ರ ಪ್ರತಿಕ್ರಿಯೆ ನೀಡುತ್ತಿದ್ದಾರೆ.ಒಟ್ಟಿನಲ್ಲಿ ಸೆನ್ಸಾರ್ ಪ್ರಮಾಣಪತ್ರವಿಲ್ಲದೆ ಯಾವುದೇ ಚಿತ್ರ ಬಿಡುಗಡೆಯಾಗುವುದು ಕಷ್ಟ. ಅಂತಹ ಪರಿಸ್ಥಿತಿಯಲ್ಲಿ, ಬಿಡುಗಡೆ ದಿನಾಂಕವನ್ನು ಮುಂದೂಡಲಾಗುತ್ತದೆ ಅಥವಾ ಚಿತ್ರವು ಶಾಶ್ವತವಾಗಿ ಬಿಡುಗಡೆಯಾಗದೆ ಉಳಿಯುತ್ತದೆ. ಹೀಗಿರುವಾಗ ಬಾಲಿವುಡ್ನ ಈ ಚಿತ್ರಕ್ಕೆ ಯಾವಾಗ ಸರ್ಟಿಫಿಕೇಟ್ ಸಿಗುತ್ತೋ ಕಾದು ನೋಡಬೇಕು.

ಸೆಪ್ಟೆಂಬರ್ 6 ರಂದು ಬಿಡುಗಡೆಯಾಗಬೇಕಿದ್ದ ಚಿತ್ರದಲ್ಲಿ ಕಂಗನಾ ರಣಾವತ್ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಪಾತ್ರದಲ್ಲಿ ನಟಿಸಿದ್ದಾರೆ. ಶಿರೋಮಣಿ ಅಕಾಲಿದಳ ಶುಕ್ರವಾರ ಸಿಬಿಎಫ್ಸಿಗೆ ಲೀಗಲ್ ನೋಟಿಸ್ ಕಳುಹಿಸಿದ್ದು, ರಣಾವತ್ ಅವರ ಚಲನಚಿತ್ರ 'ಕೋಮು ಉದ್ವಿಗ್ನತೆಯನ್ನು ಪ್ರಚೋದಿಸುತ್ತದೆ' ಮತ್ತು 'ತಪ್ಪು ಮಾಹಿತಿ ಹರಡಬಹುದು' ಎಂದು ಆರೋಪಿಸಿ ಬಿಡುಗಡೆಯನ್ನು ತಡೆಯುವಂತೆ ಕೋರಿದೆ. ಹಲವು ಸಿಖ್ ಸಂಘಟನೆಗಳೂ ಆಕ್ಷೇಪ ವ್ಯಕ್ತಪಡಿಸಿವೆ.

## ಮಧುಮೇಹದ ಆರಂಭಿಕ ಲಕ್ಷಣಗಳು

### ಹೆಲ್ತ್ ಟಿಪ್ಸ್



ಮಧುಮೇಹ ಹೊಂದಿರುವ ಜನರ ಬಾಯಿ ಹೆಚ್ಚಾಗಿ ಒಣಗುತ್ತದೆ. ಬಾಯಿಯಲ್ಲಿ ಲಾಲಾರಸ ಉತ್ಪಾದನೆ ಕಡಿಮೆಯಾಗುವುದು ಇದಕ್ಕೆ ಕಾರಣ. ರಕ್ತದಲ್ಲಿನ ಸಕ್ಕರೆ ಮಟ್ಟ ಹೆಚ್ಚಾಗಿರುವುದು ಇದಕ್ಕೆ ಕಾರಣವಾಗಿರಬಹುದು ಎಂದು ತಜ್ಞರು ಹೇಳುತ್ತಾರೆ. ಒಣ ಬಾಯಿ ಮಧುಮೇಹಕ್ಕೆ ಎಚ್ಚರಿಕೆಯ ಸಂಕೇತವಾಗಿದೆ. ಹೆಚ್ಚುವರಿಯಾಗಿ, ಬಾಯಿಯಲ್ಲಿ ಕಡಿಮೆ ಲಾಲಾರಸವು ನಿಮ್ಮ ಹಲ್ಲುಗಳು ಮತ್ತು ಒಸಡುಗಳಲ್ಲಿ ಸಮಸ್ಯೆಗಳಿಗೆ ಕಾರಣವಾಗಬಹುದು. ಮಧುಮೇಹವು ಆರಂಭಿಕ ಹಂತದಲ್ಲಿದ್ದಾಗ ಕೆಲವು ರೋಗಲಕ್ಷಣಗಳು ಕಾಣಿಸಿಕೊಳ್ಳುತ್ತವೆ. ಅವುಗಳನ್ನು ಸಕಾಲದಲ್ಲಿ ಗುರುತಿಸಿ ಚಿಕಿತ್ಸೆ ಪಡೆಯುವುದು ಸೂಕ್ತ. ನಿರ್ಲಕ್ಷಿಸುವುದು ಮತ್ತು ಬಿಡುವುದು ಗಂಭೀರ ಆರೋಗ್ಯ ಸಮಸ್ಯೆಗಳನ್ನು ಉಂಟುಮಾಡಬಹುದು. ಯುವಜನರಲ್ಲಿ ಸಕ್ಕರೆ ಕೊರತೆಯ ಮೊದಲ ಲಕ್ಷಣವೆಂದರೆ ಅತಿಯಾದ ಬಾಯಾರಿಕೆ. ಅತಿಯಾದ ಮೂತ್ರವಿಸರ್ಜನೆ. ಅಲ್ಲದೆ, ಸಕ್ಕರೆ ಹೊಂದಿರುವ ಜನರು ಹೆಚ್ಚಿನ ಹಸಿವನ್ನು ಹೊಂದಿರುತ್ತಾರೆ. ಮಧುಮೇಹದಿಂದ ಬಳಲುತ್ತಿರುವ ಜನರು ಇದ್ದಕ್ಕಿದ್ದಂತೆ ತೂಕವನ್ನು ಕಳೆದುಕೊಳ್ಳುತ್ತಾರೆ. ಕಣ್ಣಿನ ದೃಷ್ಟಿಯ ಸ್ಪಷ್ಟತೆ ಕಡಿಮೆಯಾದರೆ, ಸಕ್ಕರೆ ಬರುತ್ತದೆ ಎಂದು ತಜ್ಞರು ಹೇಳುತ್ತಾರೆ. ಸಣ್ಣ ಕೆಲಸಗಳನ್ನು ಮಾಡುವುದರಿಂದ ನೀವು ಆಯಾಸಗೊಳ್ಳುತ್ತೀರಿ. ಮಧುಮೇಹದಿಂದ ಬಳಲುತ್ತಿರುವ ಜನರು ಮಾನಸಿಕವಾಗಿ ಆತಂಕಕ್ಕೊಳಗಾಗುತ್ತಾರೆ. ಈ ರೋಗಲಕ್ಷಣಗಳು ನಿಮ್ಮಲ್ಲಿ ಕಾಣಿಸಿಕೊಂಡರೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ. ಉಸಿರಾಡುವಾಗ ಯಾವುದೇ ಮಾಗಿದ ವಾಸನೆಯನ್ನು ಉಸಿರಾಡುವ ಭಾವನೆ ಇದ್ದರೆ, ಅದು ಮಧುಮೇಹಕ್ಕೆ ಸಂಬಂಧಿಸಿದ ಅಡ್ಡಪರಿಣಾಮವಾಗಿದೆ ಎಂದು ತಜ್ಞರು ಹೇಳುತ್ತಾರೆ. ವಾಕರಿಕೆ ಮತ್ತು ತಲೆತಿರುಗುವಿಕೆ ಸಹ ಮಧುಮೇಹದ ಸಂಕೇತವೆಂದು ಹೇಳಲಾಗುತ್ತದೆ. ಕಾಲುಗಳಲ್ಲಿ ತೀವ್ರವಾದ ನೋವು ಅಧಿಕ ರಕ್ತದ ಸಕ್ಕರೆ ಮಟ್ಟವನ್ನು ಉಂಟುಮಾಡುತ್ತದೆ ಮತ್ತು ನರಗಳನ್ನು ಹಾನಿಗೊಳಿಸುತ್ತದೆ. ಅಲ್ಲದೆ, ಗಾಯ ಸಂಭವಿಸಿದಾಗ, ಅದು ಗುಣವಾಗಲು ಹೆಚ್ಚು ಸಮಯ ತೆಗೆದುಕೊಂಡರೆ ಅದು ಮಧುಮೇಹದ ಸಂಕೇತವೂ ಆಗಿರಬಹುದು.

## ಡಿಸಿಎಂ ಶ್ರೀರಾಮ್ ಅಗ್ವಾಟರ್ ಚಾಲೆಂಜ್ ಸ್ಪರ್ಧೆಯ ಅಂತಿಮ ಹಂತಕ್ಕೆ ತಲುಪಿರುವ 4 ಸ್ಪರ್ಧಿಗಳ ಹೆಸರು ಘೋಷಣೆ

ದಿ/ನಡ್ಜ್ ಇನ್‌ಸ್ಟಿಟ್ಯೂಟ್‌ನ ಸೆಂಟರ್ ಫಾರ್ ಸೋಷಿಯಲ್ ಇನ್ನೋವೇಶನ್ ಮತ್ತು ಪ್ರಧಾನ ವೈಜ್ಞಾನಿಕ ಸಲಹೆಗಾರರ ಕಚೇರಿ (ಭಾರತ ಸರ್ಕಾರ) ಸಹಯೋಗದಲ್ಲಿ ಡಿಸಿಎಂ ಶ್ರೀರಾಮ್ ಫೌಂಡೇಶನ್ ಸಂಸ್ಥೆಯು ಆಯೋಜಿಸಿರುವ ಡಿಸಿಎಂ ಶ್ರೀರಾಮ್ ಅಗ್ವಾಟರ್ ಚಾಲೆಂಜ್ ಸ್ಪರ್ಧೆಯ ಮಧ್ಯಂತರ ಫಲಿತಾಂಶವನ್ನು ಪ್ರಕಟಿಸಲಾಗಿದೆ. ಈ ಪ್ರಕಟಣೆಯಲ್ಲಿ ಅಂತಿಮ ಹಂತಕ್ಕೆ ಪ್ರವೇಶಿಸಿರುವ ನಾಲ್ವರು ಸ್ಪರ್ಧಿಗಳ ಹೆಸರನ್ನು ಬಹಿರಂಗಗೊಳಿಸಲಾಗಿದೆ. ಇಎಫ್ ಪಾಲಿಮರ್, ಕಲ್ಟಿವೇಟ್, ಇಂಡಸ್ಟಿಲ್ ಮತ್ತು ಫೈಫಾರ್ಮ್ ಎಂಬ ನಾಲ್ಕು ಸಂಸ್ಥೆಗಳು ಅಂತಿಮ ಹಂತದ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲಿವೆ.

ಜೂನ್ 2023ರಲ್ಲಿ ಆರಂಭವಾದ ಈ ಸ್ಪರ್ಧೆಯು ಭಾರತದ ಸಣ್ಣ ಹಿಡುವಳಿದಾರ ರೈತರಿಗೆ ಅದರಲ್ಲೂ ವಿಶೇಷವಾಗಿ ಭತ್ತ, ಗೋಧಿ, ಕಬ್ಬು ಮತ್ತು ಹತ್ತಿಯನ್ನು ಬೆಳೆಯುವ ರೈತರಿಗೆ ನೀರಿನ ಬಳಕೆಯ ದಕ್ಷತೆಯನ್ನು ಹೆಚ್ಚಿಸುವ ಮತ್ತು ಉತ್ಪಾದಕತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದ್ದು, ಈ ಸ್ಪರ್ಧೆಯ ಮೂಲಕ 14 ಸಂಸ್ಥೆಗಳು ಸಿದ್ಧಪಡಿಸಿರುವ ಪ್ರವರ್ತಕ ತಂತ್ರಜ್ಞಾನಗಳನ್ನು ಪರೀಕ್ಷೆಗೆ ಒಡ್ಡಲಾಗಿದೆ.

ಕಳೆದ ಹತ್ತು ತಿಂಗಳುಗಳಲ್ಲಿ, ಈ ಪ್ರತಿಯೊಂದು ತಂತ್ರಜ್ಞಾನಗಳನ್ನು ಭಾರತದಲ್ಲಿನ ಹಲವಾರು ರೀತಿಯ ಕೃಷಿ-ಹವಾಮಾನ ವಲಯಗಳಲ್ಲಿ ನಿಯೋಜಿಸಲಾಗಿತ್ತು. ಆ ಮೂಲಕ ದೇಶದ ರೈತರು ಎದುರಿಸುತ್ತಿರುವ ಪ್ರಮುಖ ಕೃಷಿ ಸಮಸ್ಯೆಗಳಿಗೆ ಈ ತಂತ್ರಜ್ಞಾನಗಳು ಸಮರ್ಪಕ ಪರಿಹಾರ ಒದಗಿಸುತ್ತವೆಯೇ ಎಂಬುದನ್ನು ಪರೀಕ್ಷಿಸಲಾಯಿತು. ಸ್ವತಂತ್ರ ಥರ್ಡ್ ಪಾರ್ಟಿ ಮೌಲ್ಯಮಾಪಕರಾದ ಇಕೋಸಿಯೇಟ್ ಕನ್ಸಲ್ಟೆಂಟ್ ಜೊತೆಗಿನ ಸಹಭಾಗಿತ್ವದಲ್ಲಿ ದಿ/ನಡ್ಜ್ ಪ್ರೈಜ್ ತಂಡವು ಈ 14 ತಂತ್ರಜ್ಞಾನಗಳನ್ನು ಸಮಗ್ರವಾಗಿ ಮೌಲ್ಯಮಾಪನವು ನಡೆಸಿತು. ತೀರ್ಪುಗಾರರು ಕಠಿಣ ಪ್ರಕ್ರಿಯೆಯನ್ನು ನಡೆಸುವ ಮೂಲಕ ಅಂತಿಮವಾಗಿ ಮಧ್ಯಂತರ ಫಲಿತಾಂಶ ಪ್ರಕಟಿಸಿದರು. ಈ ಹಂತದಲ್ಲಿ ತೀರ್ಪುಗಾರರು ನಾಲ್ಕು ಸಂಸ್ಥೆಗಳನ್ನು ಗುರುತಿಸಿದ್ದು, ಅವರು ಈ ಸ್ಪರ್ಧೆಯ. ಅಂತಿಮ ಘಟ್ಟಕ್ಕೆ ಪ್ರವೇಶಿಸಿದ್ದಾರೆ.

ಈ ಸ್ಪರ್ಧೆಯ ಅಂತಿಮ ಘಟ್ಟಕ್ಕೆ ಪ್ರವೇಶಿಸಿರುವ ನಾಲ್ಕು ಸಂಸ್ಥೆಗಳಿಗೆ ತಲಾ 15 ಲಕ್ಷ ರೂಪಾಯಿ ಅನುದಾನ ನೀಡಲಾಗುತ್ತದೆ. ಹಾಗೆ ಈ ದೊಡ್ಡ ಮಟ್ಟದ ಅನುದಾನ ಗೆದ್ದ ಸಂಸ್ಥೆಗಳ ಹೆಸರುಗಳು ಹೀಗಿವೆ: ಮಣ್ಣಿನ ತೇವಾಂಶದ ಧಾರಣ ಶಕ್ತಿಯನ್ನು ಹೆಚ್ಚಿಸುವ



ಜೈವಿಕ- ಇನ್ಪುಟ್ಗಳಲ್ಲಿ ಪರಿಣತಿ ಸಾಧಿಸಿರುವ ಇಎಫ್ ಪಾಲಿಮರ್, ಕೃಷಿ ಪದ್ಧತಿಯಲ್ಲಿ ನೀರಿನ ಬಳಕೆಯನ್ನು ಅತ್ಯುತ್ತಮವಾಗಿಸಲು ಸುಧಾರಿತ ಸಲಹಾ ಸೇವೆಗಳನ್ನು ಒದಗಿಸುವ ಕಲ್ಟಿವೇಟ್, ಕೃಷಿಯಲ್ಲಿ ಅತ್ಯುತ್ತಮ ನೀರಿನ ನಿರ್ವಹಣೆಗಾಗಿ ನೀರಾವರಿ ವ್ಯವಸ್ಥೆಗಳನ್ನು ಯಾಂತ್ರೀಕೃತಗೊಳಿಸುವ ಇಂಡಸ್ಟಿಲ್ ಮತ್ತು ಕೃಷಿಯಲ್ಲಿ ನೀರಿನ ದಕ್ಷತೆಯನ್ನು ಹೆಚ್ಚಿಸುವ ಉತ್ಪನ್ನಗಳನ್ನು ಅಭಿವೃದ್ಧಿಪಡಿಸುತ್ತಿರುವ ಫೈಫಾರ್ಮ್. ಈ ನಾಲ್ಕು ಫೈನಲಿಸ್ಟ್ ಗಳಿಗೆ ಒಟ್ಟು ರೂ. 60 ಲಕ್ಷ ಅನುದಾನವನ್ನು ನೀಡಲಾಗುತ್ತದೆ. ಮುಂದೆ ಈ ಪ್ರತಿಯೊಂದು ಸಂಸ್ಥೆಗಳು ಸಣ್ಣ ಹಿಡುವಳಿದಾರ ರೈತರಿಗೆ ನೀರಿನ ಬಳಕೆಯ ದಕ್ಷತೆ ಹೆಚ್ಚಿಸುವ ಮತ್ತು ಅವರ ಲಾಭ ಹೆಚ್ಚಿಸುವ ತಮ್ಮ ತಂತ್ರಜ್ಞಾನಗಳನ್ನು ಕೈಗೆಟುಕುವ ಬೆಲೆಯಲ್ಲಿ ಒದಗಿಸುವ ಕಡೆಗೆ ಗಮನ ಹರಿಸಲಿದ್ದಾರೆ.

ಈ ಸ್ಪರ್ಧೆಯ ಅಂತಿಮ ಹಂತ 2024ರ ಸೆಪ್ಟೆಂಬರ್ ನಲ್ಲಿ ಪ್ರಾರಂಭವಾಗುತ್ತದೆ ಮತ್ತು ವಿಜೇತರನ್ನು ಫೆಬ್ರವರಿ 2025 ರಲ್ಲಿ ಘೋಷಿಸಲಾಗುತ್ತದೆ. ಅಂತಿಮವಾಗಿ ಆಯ್ಕೆಯಾಗುವ ಅತ್ಯಂತ ಪರಿಣಾಮಕಾರಿ ಮತ್ತು ಅತ್ಯುತ್ತಮ ತಂತ್ರಜ್ಞಾನಕ್ಕೆ ರೂ. 2 ಕೋಟಿಗಳ ಬಹುಮಾನವನ್ನು ನೀಡಲಾಗುತ್ತದೆ. ಈ ಮೂಲಕ ಸುಸ್ಥಿರ ಕೃಷಿ ಆವಿಷ್ಕಾರಗಳಿಗೆ ಮಹತ್ವದ ಅನುದಾನವನ್ನು ಒದಗಿಸುವ ಹೆಗ್ಗಳಿಕೆಗೆ ಸಂಸ್ಥೆ ಪಾತ್ರವಾಗಲಿದೆ.

ಈ ಸ್ಪರ್ಧೆಯ ಕುರಿತು ಮಾತನಾಡಿರುವ ಡಿಸಿಎಂ ಶ್ರೀರಾಮ್ ಫೌಂಡೇಶನ್ ಅಧ್ಯಕ್ಷ ಅಮನ್ ಪನ್ನು ಅವರು, ''ಡಿಸಿಎಂ ಶ್ರೀರಾಮ್ ವಾಟರ್ ಚಾಲೆಂಜ್ ಸ್ಪರ್ಧೆಯು ಕೃಷಿ ಪದ್ಧತಿಯು ಎದುರಿಸುವ ನೀರಿನ ಸಮಸ್ಯೆಗಳನ್ನು ನಿವಾರಿಸುವ ಉದ್ದೇಶವನ್ನು ಹೊಂದಿರುವ ಒಂದು ಮಹೋನ್ನತ ಯೋಜನೆಯಾಗಿದೆ. ವಿಶೇಷವಾಗಿ ಭಾರತದ ಕೃಷಿ ಆರ್ಥಿಕತೆಯ ಬೆನ್ನೆಲುಬಾಗಿರುವ ಸಣ್ಣ ಹಿಡುವಳಿದಾರ ರೈತರಿಗೆ ನೆರವಾಗುವ ಗುರಿ ಹೊಂದಿದೆ. ಮಧ್ಯಂತ ಮೌಲ್ಯಮಾಪನದ ಮೂಲಕ ನೀರಿನ ಸಂರಕ್ಷಣೆ ಮತ್ತು ಹೆಚ್ಚಿನ ಉತ್ಪಾದಕತೆಗೆ ಕಾರಣವಾಗುವ ಹಲವಾರು ಅತ್ಯುನ್ನತ ತಂತ್ರಜ್ಞಾನಗಳು ಅಥವಾ ಆವಿಷ್ಕಾರಗಳನ್ನು ಗುರುತಿಸಲಾಗಿದೆ. ಅಂತಿಮ ಹಂತದ ಮೌಲ್ಯಮಾಪನ ಪ್ರಕ್ರಿಯೆಯು ಎರಡು ತಿಂಗಳ ಕಾಲ ನಡೆಯಲಿದೆ. ಈ ಪ್ರಕ್ರಿಯೆಯಲ್ಲಿ ಎಂಟು ರಾಜ್ಯಗಳಾದ್ಯಂತ ಕ್ಷೇತ್ರ ಭೇಟಿಗಳನ್ನು ಮಾಡಲಾಗುತ್ತದೆ. ಹೀಗೆ ವಿವಿಧ ಕಡೆಗಳಿಗೆ ಭೇಟಿ ನೀಡುವ ಮತ್ತು ಅಲ್ಲಿನ ನೂರಾರು ರೈತರನ್ನು ಸಂದರ್ಶನ ನಡೆಸುವ ಮೂಲಕ ಅಂತಿಮ ಹಂತಕ್ಕೆ ಆಯ್ಕೆಯಾದ ಈ ಆವಿಷ್ಕಾರಗಳ ಅಥವಾ ತಂತ್ರಜ್ಞಾನಗಳ ಪ್ರಭಾವ ಮತ್ತು ಪರಿಣಾಮವನ್ನು ಅಳೆಯಲಾಗುತ್ತದೆ. ಜೊತೆಗೆ ಮೌಲ್ಯ ಮಾಪನ ಮಾಡಲಾಗುತ್ತದೆ. ಸಣ್ಣ ರೈತರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಉತ್ಪನ್ನಗಳ ರೂಪಿಸಿ ಅದಕ್ಕಾಗಿ ಮಹತ್ವದ ಅನುದಾನವನ್ನು ಪಡೆದ ನಾಲ್ಕು ಸಂಸ್ಥೆಗಳಿಗೆ ನಾನು ಅಭಿನಂದನೆ ಸಲ್ಲಿಸುತ್ತಿದ್ದೇನೆ. ಸ್ಪರ್ಧೆಯ ಅಂತಿಮ ಹಂತಕ್ಕೆ ಹೋಗುತ್ತಿರುವ ಸಂದರ್ಭದಲ್ಲಿ ಈ ತಂತ್ರಜ್ಞಾನಗಳನ್ನು ಅಳೆಯಲು ಮತ್ತು ಆ ಮೂಲಕ ದೇಶಾದ್ಯಂತ ಇರುವ ಲಕ್ಷಾಂತರ ರೈತರ ಜೀವನದ ಮೇಲೆ ಪರಿಣಾಮ ಉಂಟುಮಾಡುವ ಆವಿಷ್ಕಾರವನ್ನು ಕಂಡುಹಿಡಿಯಲು ನಾವು ಉತ್ಸುಕರಾಗಿದ್ದೇವೆ'' ಎಂದು ಹೇಳಿದರು.

## ಬಿಳಿ ಕೂದಲ ಸಮಸ್ಯೆಗೆ ಪರಿಹಾರ.!

### ಬ್ಯೂಟಿ ಟಿಪ್ಸ್



ತಲೆಕೂದಲು ಬೆಳ್ಳಗಾಗೋದು ನಲ್ವತ್ತು ದಾಟಿದ ಮೇಲೆ. ಆದ್ರೆ ಬಿಡುವಿಲ್ಲದ ಜೀವನಶೈಲಿ ಮತ್ತು ಅನಾರೋಗ್ಯಕರ ಆಹಾರ ಪದ್ಧತಿಯಿಂದಾಗಿ 25ರ ಯುವಕ ಯುವತಿಯರಿಗೂ ಕೂದಲು ಬೆಳ್ಳಗಾಗ್ತಾ ಇದೆ. ಕೆಲವೊಮ್ಮೆ ಇದಕ್ಕೆ ಆನುವಂಶಿಕ ಕಾರಣಗಳೂ ಇರಬಹುದು. ಅದೇನೇ ಆದ್ರೂ, ಅಕಾಲಿಕವಾಗಿ ಕೂದಲು ಬೆಳ್ಳಗಾಗುವುದರಿಂದ ಯುವಕರು ಮತ್ತು ಯುವತಿಯರು ಮುಜುಗರ ಅನುಭವಿಸ್ತಾರೆ.ಅವರ ಆತ್ಮವಿಶ್ವಾಸವನ್ನೇ ಇದು ಕುಗ್ಗಿಸುತ್ತದೆ. ಚಿಕ್ಕ ವಯಸ್ಸಿನಲ್ಲೇ ಕೂದಲು ಬೆಳ್ಳಗಾಗಲು ಪ್ರಾರಂಭಿಸಿದ್ರೆ ರಾಸಾಯನಿಕಯುಕ್ತ ಹೇರ್ ಡೈ ಬಳಸಬಾರದು. ಇದರಿಂದ ಕೂದಲು ಶುಷ್ಕವಾಗುತ್ತದೆ ಮತ್ತು ಅಸ್ವಾಭಾವಿಕವಾಗಿ ಕಾಣಲು ಪ್ರಾರಂಭಿಸುತ್ತದೆ. ನೀವು ಮನೆಯಲ್ಲೇ ಕೆಲವೊಂದು ವಸ್ತುಗಳನ್ನು ಬಳಸಿ ಬಿಳಿ ಕೂದಲ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದು. ಆರೋಗ್ಯ ತಜ್ಞರ ಪ್ರಕಾರ ಬೆಲ್ಲ ಮತ್ತು ಮೆಂತ್ಯವನ್ನು ನಿಯಮಿತವಾಗಿ ಸೇವಿಸಿದರೆ ಬಿಳಿ ಕೂದಲು ನೈಸರ್ಗಿಕವಾಗಿ ಕಪ್ಪಾಗುತ್ತದೆ. ಮೆಂತ್ಯದ ಬೀಜಗಳು ಕೂದಲಿನ ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ, ಇದನ್ನು ಬೆಲ್ಲದೊಂದಿಗೆ ತಿಂದರೆ ಅದರ ಪರಿಣಾಮವನ್ನು ದ್ವಿಗುಣಗೊಳಿಸಬಹುದು. ಮೆಂತ್ಯವನ್ನು ಪುಡಿಮಾಡಿ ಇಟ್ಟುಕೊಳ್ಳಿ. ಆ ಪುಡಿಯನ್ನು ಪ್ರತಿದಿನ ಬೆಳಗ್ಗೆ ಬೆಲ್ಲದೊಂದಿಗೆ ಸೇವಿಸಿ. ಇದನ್ನು ನಿಯಮಿತವಾಗಿ ಮಾಡಿದರೆ ಕೂದಲು ಅಕಾಲಿಕವಾಗಿ ಬಿಳಿಯಾಗುವುದು ನಿಲ್ಲುತ್ತದೆ ಜೊತೆಗೆ ಬಿಳಿಕೂದಲು ಮತ್ತೆ ಕಪ್ಪಾಗುತ್ತದೆ.ಮೆಂತ್ಯ ಮತ್ತು ಬೆಲ್ಲವನ್ನು ತಿನ್ನುವುದರಿಂದ ಕೂದಲು ಉದುರುವಿಕೆ ನಿಲ್ಲುತ್ತದೆ. ಕೂದಲು ಮೊದಲಿಗಿಂತ ಬಲವಾಗಿ ಹೊಳೆಯಲಾರಂಭಿಸುತ್ತದೆ.



**ಜಯಶ್ರೀ.ಬಿ.ಆರ್**

ಖ್ಯಾತ ಜ್ಯೋತಿಷಿ

ದೂರವಾಣಿ–9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸ್ಥಿರಾಸ್ತಿಯಿಂದ ಅನುಕೂಲ, ಪಾಲುದಾರಿಕೆ ವ್ಯವಹಾರದ ಒಲವು, ತಾಯಿ ಯಿಂದ ಲಾಭ, ವಿದ್ಯಾಭ್ಯಾಸದಲ್ಲಿ ಪ್ರಗತಿ

**ವೃಷಭ:** ದೂರದಲ್ಲಿ ಉದ್ಯೋಗ ಲಾಭ, ಪ್ರಯಾಣದಲ್ಲಿ ಅನುಕೂಲ, ಗುಪ್ತ ಶತ್ರು ಕಾಟ, ಸಾಲದ ಚಿಂತೆ, ಅನಾರೋಗ್ಯ

**ಮಿಥುನ:** ಪ್ರಯಾಣದಲ್ಲಿ ಅನುಕೂಲ, ಯತ್ನ ಕಾರ್ಯಗಳಲ್ಲಿ ಯಶಸ್ಸು , ತಂದೆಯಿಂದ ಲಾಭ, ಮಕ್ಕಳ ಭವಿಷ್ಯದ ಚಿಂತೆ

**ಕಟಕ:** ಉದ್ಯೋಗದಲ್ಲಿ ನಿರಾಸಕ್ತಿ, ಅವಮಾನ ಅಪವಾದ ಅಪನಿಂದನೆಗಳು, ದೃಷ್ಟಿದೋಷ, ಅಧಿಕ ಒತ್ತಡ, ವಿದ್ಯಾಭ್ಯಾಸದಲ್ಲಿ ನಿರಾಸಕ್ತಿ

**ಸಿಂಹ:** ವ್ಯಾಪಾರ ವ್ಯವಹಾರದಲ್ಲಿ ಎಳೆದಾಟ, ಅಧಿಕ ಖರ್ಚು, ಸ್ಥಳ ಬದಲಾವಣೆಯಿಂದ ಸಮಸ್ಯೆ, ವಿದ್ಯಾಭ್ಯಾಸದಲ್ಲಿ ಅನುಕೂಲ

**ಕನ್ಯಾ:** ಕೆಲಸಗಾರರೊಂದಿಗೆ ಕಲಹ, ಕೌಟುಂಬಿಕ ಕಿರಿಕಿರಿ, ಮಾಟ ಮಂತ್ರ ತಂತ್ರದ ಭೀತಿ, ಅನಾರೋಗ್ಯ ಸಮಸ್ಯೆ ಕಾಡುವುದು,

**ತುಲಾ:** ಮಕ್ಕಳ ಭವಿಷ್ಯದ ಚಿಂತೆ, ಪ್ರೀತಿ ವಿಶ್ವಾಸ ಭಾವನೆಗಳಿಗೆ ಪೆಟ್ಟು, ಕೆಲಸ ಕಾರ್ಯಗಳಲ್ಲಿ ಅನಾನುಕೂಲ, ಉದ್ಯೋಗದಲ್ಲಿ ನಿರಾಸಕ್ತಿ

**ವೃಶ್ಚಿಕ:** ಅನಿರೀಕ್ಷಿತ ಖರ್ಚು, ಅನಾರೋಗ್ಯದಿಂದ ನಿದ್ರಾಭಂಗ, ಉದ್ಯೋಗ ಪ್ರಗತಿಯಲ್ಲಿ ಹಿನ್ನಡೆ, ಕೆಳಹಂತದ ಅಧಿಕಾರಿಗಳಿಂದ ನಷ್ಟ

**ಧನಸ್ಸು:** ಅಧಿಕ ಧೈರ್ಯ ಮತ್ತು ಉತ್ಸಾಹ, ಮಕ್ಕಳ ಭವಿಷ್ಯದಲ್ಲಿ ಅನಿರೀಕ್ಷಿತ ಬದಲಾವಣೆ, ಆರ್ಥಿಕ ಚೇತರಿಕೆ, ಗುಪ್ತ ಧನಾಗಮನ

**ಮಕರ:** ತಾಯಿಯಿಂದ ಧನಾಗಮನ, ಕೌಟುಂಬಿಕ ವಿಷಯಗಳ ಚಿಂತೆ, ಉದ್ಯೋಗದಲ್ಲಿ ನಿರಾಸಕ್ತಿ, ದುಡುಕಿನ ಮಾತಿನಿಂದ ಸಮಸ್ಯೆ,

**ಕುಂಭ:** ವ್ಯಾಪಾರ ವ್ಯವಹಾರದಲ್ಲಿ ತಪ್ಪು ನಿರ್ಧಾರ, ವಾಹನದಿಂದ ನಷ್ಟ, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ, ದೃಷ್ಟಿ ದೋಷ, ಶತ್ರು ಉಪಟಳ

**ಮೀನ:** ಆರ್ಥಿಕ ಚೇತರಿಕೆ, ಕಾನೂನು ಬಾಹಿರ ಚಟುವಟಿಕೆಯಿಂದ ಸಮಸ್ಯೆ, ಕೋರ್ಟ್ ಕೇಸುಗಳಲ್ಲಿ ಹಿನ್ನಡೆ, ಗೌರವಕ್ಕೆ ಧಕ್ಕೆ, ಪ್ರಯಾಣದಲ್ಲಿ ಅಡೆತಡೆ

## ವಿಶ್ವದೂರ ಕಲಿಕೆ ದಿನ

ಆಗಸ್ಟ್ 31 ರಂದು ವಿಶ್ವ ದೂರಶಿಕ್ಷಣ ದಿನವು ಭೌತಿಕ ತರಗತಿಯ ಹೊರಗೆ ನಡೆಯುವ ಕಲಿಕೆಯನ್ನು ಅಳವಡಿಸಿಕೊಳ್ಳುವ ದಿನವಾಗಿದೆ. ಇದು ಸಂಪೂರ್ಣವಾಗಿ ದೂರದಲ್ಲಿ ತಲುಪಿಸುವ ದೂರಸ್ಥ ಕಲಿಕೆಯ ಕಾರ್ಯಕ್ರಮವಾಗಲಿ, ಅಥವಾ ತರಗತಿಯ ಮತ್ತು ಮನೆಯಲ್ಲೇ ಕಲಿಕೆಯ ಹೈಬ್ರಿಡ್ ಮಿಶ್ರಣವಾಗಲಿ, ಸೇರಿಸಿದ ನಮ್ಯತೆ ಮತ್ತು ದೂರಶಿಕ್ಷಣದ ಹೆಚ್ಚು ವೆಚ್ಚ-ಪರಿಣಾಮಕಾರಿ ಆಯ್ಕೆಯು ಪ್ರಪಂಚದಾದ್ಯಂತ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರಯೋಜನವನ್ನು ನೀಡುತ್ತಿದೆ. ಹಿಂದೆಂದೂ. ಇತ್ತೀಚಿನ ದಿನಗಳಲ್ಲಿ, ಇಂಟರ್ನೆಟ್ ಮತ್ತು ಉತ್ತಮ ಗುಣಮಟ್ಟದ ಆನ್ಲೈನ್ ಪಠ್ಯಕ್ರಮ ಮತ್ತು ಕೋರ್ಸ್‌ಗಳ ಉಲ್ಬಣವು ಸಾಂಪ್ರದಾಯಿಕ ಶಿಕ್ಷಣ ವಿಧಾನಗಳನ್ನು ಸಂಪೂರ್ಣವಾಗಿ ಮಾರ್ಪಡಿಸಿದೆ ಮತ್ತು ಜನಪ್ರಿಯ ದೂರಶಿಕ್ಷಣ ಚಳುವಳಿಗೆ ಜನ್ಮ ನೀಡಿದೆ. ಅದನ್ನು ಮನಸ್ಸಿನಲ್ಲಿಟ್ಟುಕೊಂಡು, ನಮ್ಮಲ್ಲಿರುವ ದೂರಶಿಕ್ಷಣದ ಅವಕಾಶಗಳು ಮತ್ತು ಬಳಸಲು ಲಭ್ಯವಿರುವ ಅಸಂಖ್ಯಾತ ಸಂಪನ್ಮೂಲಗಳಿಗಾಗಿ ಇಂದು ಕೃತಜ್ಞರಾಗಿರುವ ದಿನವಾಗಿದೆ. ಕಲಿಕೆಯ ಸೌಲಭ್ಯಗಳು ಯಾವಾಗಲೂ ಕೆಲವು ಕ್ಲಿಕ್ಗಳ ದೂರದಲ್ಲಿರುವುದಿಲ್ಲ. 1728 ರಲ್ಲಿ, ಕ್ಯಾಲೆಬ್ ಫಿಲಿಪ್ಸ್ ತನ್ನ ಬೋಧನೆಗಳನ್ನು ಬೋಸ್ಟನ್ ಗೆಜೆಟ್ನಲ್ಲಿ ಶಾರ್ಟ್‌ಹ್ಯಾಂಡ್ನ ಹೊಸ ವಿಧಾನದ ಕುರಿತು ಜಾಹೀರಾತು ಮಾಡುತ್ತಿದ್ದನು, ಪಾಠಗಳನ್ನು ವಾರಕ್ಕೊಮ್ಮೆ ಅಂಚೆ ಮೂಲಕ ತಲುಪಿಸಬೇಕಾಗಿತ್ತು. 1840 ರ ದಶಕದಲ್ಲಿ ಇಂಗ್ಲೆಂಡ್ನಲ್ಲಿ ಸರ್ ಐಸಾಕ್ ಪಿಟ್ಮ್ಯಾನ್ ಈ ಕಲ್ಪನೆಯನ್ನು ಒಂದು ಹೆಜ್ಜೆ ಮುಂದೆ ತೆಗೆದುಕೊಂಡರು. ಅವರು ಅಂಚೆಯ ಮೂಲಕ ಶಾರ್ಟ್‌ಹ್ಯಾಂಡ್ ಅನ್ನು ಸಹ ಕಲಿಸುತ್ತಿದ್ದರು, ಆದರೆ ಅವರ ವಿದ್ಯಾರ್ಥಿಗಳು ತಮ್ಮ ಸ್ವಂತ ಪ್ರಯತ್ನಗಳನ್ನು ಒಳಗೊಂಡ ಪೋಸ್ಟ್‌ಕಾರ್ಡ್ ಅನ್ನು ಅವರಿಗೆ ಕಳುಹಿಸುತ್ತಿದ್ದರು, ಅದನ್ನು ಅವರು ಸರಿಪಡಿಸಿ ಅವರಿಗೆ ಕಳುಹಿಸುತ್ತಿದ್ದರು. ಪಿಟ್ಮ್ಯಾನ್ನ ಕೋರ್ಸ್ ಜನಪ್ರಿಯತೆ ಗಳಿಸಿತು ಮತ್ತು ಕೆಲವೇ ವರ್ಷಗಳಲ್ಲಿ, ಆಫರ್ನಲ್ಲಿರುವ ಕೋರ್ಸ್ಗಳನ್ನು ಔಪಚಾರಿಕಗೊಳಿಸಲು ಫೋನೋಗ್ರಾಫಿಕ್ ಕರೆಸ್ಪಾಂಡೆನ್ಸ್ ಸೊಸೈಟಿಯನ್ನು ಸ್ಥಾಪಿಸಲಾಯಿತು. ಈ ಸಮಾಜವು ಕಾಲೇಜುಗಳಿಗೆ ಕಾರಣವಾಯಿತು ಮತ್ತು 1873 ರ ಹೊತ್ತಿಗೆ US ನಲ್ಲಿ ಕಾರ್ಯನಿರ್ವಹಿಸಲು ಮೊದಲ ಪತ್ರವ್ಯವಹಾರ ಶಾಲೆಯನ್ನು ಸ್ಥಾಪಿಸಲಾಯಿತು. ವಿಶ್ವವಿದ್ಯಾನಿಲಯಗಳು ದೂರಶಿಕ್ಷಣದ ಆಯ್ಕೆಗಳನ್ನು ನೀಡಲು ಪ್ರಾರಂಭಿಸಿದವು ಮತ್ತು ಈ ಕಲ್ಪನೆಯನ್ನು 1960 ರ ದಶಕದಲ್ಲಿ ಮುಕ್ತ ವಿಶ್ವವಿದ್ಯಾನಿಲಯವು ಮುಂದಕ್ಕೆ ನಡೆಸಿತು. ಅವರು ಸಾಂಪ್ರದಾಯಿಕ ಕಲಿಕೆಯ ವಿಧಾನಗಳಿಗೆ ಗೌರವಾನ್ವಿತ ಪರ್ಯಾಯವನ್ನು ನೀಡಿದರು ಮತ್ತು ಅವರ ಪ್ರಾರಂಭದಿಂದಲೂ ಹೊಸ ತಂತ್ರಜ್ಞಾನಗಳು ಮತ್ತು ಬೋಧನಾ ವಿಧಾನಗಳನ್ನು ಅಭಿವೃದ್ಧಿಪಡಿಸುವಲ್ಲಿ ಮುಂಚೂಣಿಯಲ್ಲಿದ್ದಾರೆ.

# 2029ರಲ್ಲೂ ಮತ್ತೆ ಬರುತ್ತೇನೆ: ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ



**ನವದೆಹಲಿ:** 2029ರಲ್ಲಿ ದಾಖಲೆಯ ನಾಲ್ಕನೇ ಅವಧಿಗೆ ಅಧಿಕಾರಕ್ಕೆ ಮರಳುವುದಾಗಿ ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಇತ್ತೀಚೆಗಷ್ಟೇ ನಡೆದ ಲೋಕಸಭೆ ಚುನಾವಣೆಯಲ್ಲಿ ಃಏಕ ಪಕ್ಷವು ಬಹುಮತ ಗಳಿಸದಿರುವುದರಿಂದ ನರೇಂದ್ರ ಮೋದಿ ಅವರ ಪ್ರಾಬಲ್ಯ ಕುಂದುತ್ತಿದೆ ಎಂಬ ಚರ್ಚೆಗಳ ನಡುವೆಯೇ ಪ್ರಧಾನಿ ಮೋದಿ ತಾವು ಮತ್ತೆ 2029ರಲ್ಲಿ ಸತತ ನಾಲ್ಕನೇ ಬಾರಿಗೆ ಪ್ರಧಾನಿಯಾಗಿ ಆಯ್ಕೆಯಾಗಿ ಬರುತ್ತೇನೆ ಎಂದು ಹೇಳಿದ್ದಾರೆ.

ದೆಹಲಿಯಲ್ಲಿ ನಡೆದ 5ನೇ ಉಟಠಥಚಿಟ ಈಟಿಣಜಛಿ ಈಜಣನಲ್ಲಿ ಪಾಲ್ಗೊಂಡು ಮಾತನಾಡಿದ ಪ್ರಧಾನಿ ಮೋದಿ, ಸಂಸ್ಥೆಯ 10ನೇ ಗ್ಲೋಬಲ್ ಫಿನ್ ಟೆಕ್ ಫೆಸ್ಟ್ ಕಾರ್ಯಕ್ರಮಕ್ಕೂ ತಾವು ಬರುತ್ತೇವೆ ಎಂದು ಫಿನ್‌ಟೆಕ್ ಉದ್ಯಮದ ನಾಯಕರ ಸಭೆಗೆ ತಿಳಿಸಿದರು.

ಇದು ಗ್ಲೋಬಲ್ ಫಿನ್‌ಟೆಕ್ ಫೆಸ್ಟ್‌ನ 5 ನೇ ಆವೃತ್ತಿಯಾಗಿದೆ. ನಾನು 10 ನೇ ಆವೃತ್ತಿಯಲ್ಲಿಯೂ ಬರುತ್ತೇನೆ. ಭಾರತದ ಫಿನ್ ಟೆಕ್ ಪರಿಸರ ವ್ಯವಸ್ಥೆಯು ಇಡೀ ಪ್ರಪಂಚದ ಜೀವನವನ್ನು ಸುಗಮಗೊಳಿಸುತ್ತದೆ ಎಂದು ನನಗೆ ವಿಶ್ವಾಸವಿದೆ. ನಮ್ಮ ಅತ್ಯುತ್ತಮವಾದವು ಇನ್ನೂ ಬರಬೇಕಿದೆ... ನಾನು ಇಲ್ಲಿ ಕೆಲವು ಸ್ಟಾರ್ಟ್‌ಅಪ್‌ಗಳನ್ನು ಭೇಟಿ ಮಾಡಿದ್ದೇನೆ ಮತ್ತು ಫಿನ್‌ಟೆಕ್ ಅತ್ಯಂತ ಭರವಸೆಯ ಕ್ಷೇತ್ರವಾಗಿರುವುದರಿಂದ ಅವರಿಗೆ 10 ಕಾರ್ಯಗಳನ್ನು ವಹಿಸಿದ್ದೇನೆ ಎಂದು ಮೋದಿ ಹೇಳಿದರು.

ಅಂತೆಯೇ ಭಾರತದ ಫಿನ್‌ಟೆಕ್ ಆವಿಷ್ಕಾರವನ್ನು ಶ್ಲಾಘಿಸಿದ ಮೋದಿ, 'ಈ ಹಿಂದೆ ಭಾರತಕ್ಕೆ ಭೇಟಿ ನೀಡುವ ವಿದೇಶಿ ಅತಿಥಿಗಳು ಇಲ್ಲಿನ ಸಾಂಸ್ಕೃತಿಕ ವೈವಿಧ್ಯತೆಯನ್ನು ಕಂಡು ಬೆರಗಾಗುತ್ತಿದ್ದರು. ಈಗ ಅವರು ನಮ್ಮ ಫಿನ್‌ಟೆಕ್ ವೈವಿಧ್ಯತೆಯಿಂದ ಆಶ್ಚರ್ಯಚಕಿತರಾಗಿದ್ದಾರೆ.

ಭಾರತದ ಫಿನ್‌ಟೆಕ್ ಕ್ರಾಂತಿಯು ವ್ಯಾಪಕವಾಗಿದೆ ಮತ್ತು ಒಬ್ಬರು ವಿಮಾನ ನಿಲ್ದಾಣಕ್ಕೆ ಬಂದ ಕ್ಷಣದಿಂದ ಬೀದಿ ಆಹಾರ ಮತ್ತು ಶಾಪಿಂಗ್ ಕೇಂದ್ರಗಳವರೆಗೆ ಅದನ್ನು ವೀಕ್ಷಿಸಬಹುದು. ಕಳೆದ 10 ವರ್ಷಗಳಲ್ಲಿ ಉದ್ಯಮವು 500 ಪ್ರತಿಶತದಷ್ಟು ಆರಂಭಿಕ ಬೆಳವಣಿಗೆಗೆ ಸಾಕ್ಷಿಯಾಗಿ 31 ಶತಕೋಟಿ ಡಾಲರ್ ಗಿಂತ ಹೆಚ್ಚಿನ ದಾಖಲೆಯ ಹೂಡಿಕೆಯನ್ನು ಸ್ವೀಕರಿಸಿದೆ. ಕೈಗೆಟುಕುವ ಮೊಬೈಲ್ ಫೋನ್‌ಗಳು, ಅಗ್ಗದ ಡೇಟಾ ಮತ್ತು ಶೂನ್ಯ ಬ್ಯಾಲೆನ್ಸ್‌ನಿಂದ ಪ್ರಾರಂಭವಾಗುವ ಜನ್ ಧನ್ ಬ್ಯಾಂಕ್ ಖಾತೆಗಳು ಈ ಕ್ರಾಂತಿಗೆ ಕಾರಣವಾಗಿವೆ ಎಂದರು.

ಅಲ್ಲದೆ ಇದೇ ವೇಳೆ ಪ್ರತಿಪಕ್ಷಗಳನ್ನು ಪ್ರಮುಖವಾಗಿ ಮಾಜಿ ಕೇಂದ್ರ ಸಚಿವ ಚಿದಂಬರಂರ ಅವರ ಹೆಸರು ಹೇಳದೇ ತರಾಟೆಗೆ ತೆಗೆದುಕೊಂಡ ಪ್ರಧಾನಿ ಮೋದಿ, 'ಭಾರತದ ಫಿನ್‌ಟೆಕ್ ಪ್ರಗತಿಯ ಬಗ್ಗೆ ಅನೇಕರು ಆತಂಕ ವ್ಯಕ್ತಪಡಿಸಿದ್ದರು. ಹಳ್ಳಿಗಳಿಗೆ ಇಂಟರ್ನೆಟ್ ಸಂಪರ್ಕ ಮತ್ತು ವಿದ್ಯುತ್ ಸಂಪರ್ಕವಿಲ್ಲ. ಅಲ್ಲಿ ಹೇಗೆ ಪಿಒಎಸ್ ಗಳನ್ನು ಬಳಸಲು ಸಾಧ್ಯ ಎಂದು ವ್ಯಂಗ್ಯ ಮಾಡಿದ್ದರು.

ಆದರೆ ಅವರಿಗೆ ಈಗ ಉತ್ತರ ಸಿಕ್ಕಿದೆ. ಜ್ಞಾನದ ದೇವತೆಯಾದ 'ಸರಸ್ವತಿ ಮಾತೆ' ಬುದ್ಧಿವಂತಿಕೆಯನ್ನು ನೀಡುತ್ತಿರುವಾಗ, ಕೆಲವು ಸ್ವಯಂಘೋಷಿತ ತಜ್ಞರು ಅನುಮಾನಗಳನ್ನು ವ್ಯಕ್ತಪಡಿಸುತ್ತಿದ್ದರು. ಅವರು ಫಿನ್ಟೆಕ್ ಕ್ರಾಂತಿ ಹೇಗೆ ಸಂಭವಿಸಬಹುದು ಎಂದು ಅವರು ಪ್ರಶ್ನಿಸುತ್ತಾರೆ. ಆದರೆ, ಕೇವಲ ಒಂದು ದಶಕದಲ್ಲಿ, ಭಾರತವು ಗಮನಾರ್ಹವಾದ ಪರಿವರ್ತನೆಯನ್ನು ಕಂಡಿದೆ ಎಂದು ಮೋದಿ ಹೇಳಿದರು.

2014 ಮತ್ತು 2019ರ ಲೋಕಸಭೆ ಚುನಾವಣೆಗಳಲ್ಲಿ ಬಿಜೆಪಿ ಸ್ವಂತ ಬಲದಿಂದ ಬಹುಮತ ಗಳಿಸಿತ್ತು, ಆದರೆ 2024ರಲ್ಲಿ ಅದಕ್ಕೆ ಅಗತ್ಯವಿರುವ 272 ಸಂಸದರನ್ನು ಪಡೆಯುವಲ್ಲಿ ವಿಫಲವಾಗಿತ್ತು. ಹೀಗಾಗಿ ಈ ಬಾರಿ ಸರ್ಕಾರ ರಚನೆಗೆ ಮೈತ್ರಿ ಪಕ್ಷಗಳ ಬೆಂಬಲ ಪಡೆದಿತ್ತು. ಮುಂದಿನ ಸಾರ್ವತ್ರಿಕ ಚುನಾವಣೆ ಏಪ್ರಿಲ್-ಮೇ 2029ರಲ್ಲಿ ನಡೆಯಲಿವೆ. ಅಂದಹಾಗೆ Global Fintech ವಾರ್ಷಿಕ ಉತ್ಸವವು 2020 ರಲ್ಲಿ ಪ್ರಾರಂಭವಾಗಿದ್ದು, 10ನೇ ಆವೃತ್ತಿಯು 2029 ರಲ್ಲಿ ನಡೆಯಲಿದೆ.

## ಪದಚ್ಯುತ ಪ್ರಧಾನಿ ಶೇಖ್ ಹಸೀನಾ, ಕುಟುಂಬಕ್ಕೆ ನೀಡಿದ್ದ ವಿಶೇಷ ಭದ್ರತೆ ರದ್ದು

**ಢಾಕಾ:** ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಹಾಗೂ ಅವರ ನಿಕಟ ಸಂಬಂದಿಗಳಿಗೆ ಒದಗಿಸಲಾಗಿದ್ದ ವಿಶೇಷ ಭದ್ರತೆಯನ್ನು ಬಾಂಗ್ಲಾದೇಶದ ಮಧ್ಯಂತರ ಸರಕಾರ ಹಿಂಪಡೆದಿದೆ.ವಿಶೇಷ ಭದ್ರತಾ ಪಡೆ ಕಾಯ್ದೆ 2021ಕ್ಕೆ ತಿದ್ದುಪಡಿ ತಂದು ಮಾಜಿ ಪ್ರಧಾನಿ ಹಸೀನಾ ಹಾಗೂ ಅವರ ನಿಕಟವರ್ತಿಗಳ ವಿಶೇಷ ಭದ್ರತೆಯನ್ನು ರದ್ದುಗೊಳಿಸಲು ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ನೇತೃತ್ವದ ಸಲಹಾ ಸಮಿತಿ ನಿರ್ಧರಿಸಿದೆ ಎಂದು ಬಿಎಸ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಈ ಕಾಯ್ದೆಯನ್ನು ಹಿಂದಿನ ಸರಕಾರದ ನಿರ್ಧಾರದಂತೆ ಜಾರಿಗೊಳಿಸಿದ್ದು ಒಂದು ಕುಟುಂಬಕ್ಕೆ ಮಾತ್ರ ವಿಶೇಷ ಭದ್ರತೆ ಮತ್ತು ಸೌಲಭ್ಯ ಒದಗಿಸುವ ಉದ್ದೇಶ ಹೊಂದಿದ್ದು ಇದು ಸ್ಪಷ್ಟವಾಗಿ ತಾರತಮ್ಯದ ನಿರ್ಧಾರವಾಗಿದೆ. ಎಲ್ಲಾ ರೀತಿಯ ತಾರತಮ್ಯವನ್ನು ತೊಡೆದು ಹಾಕಲು ದೃಢವಾಗಿ ಬದ್ಧವಾಗಿದೆ. ಬದಲಾದ ಪರಿಸ್ಥಿತಿಯಲ್ಲಿ ಅಸ್ತಿತ್ವದಲ್ಲಿರುವ ಕಾನೂನಿಗೆ ಅನುಗುಣವಾಗಿ ರಾಷ್ಟ್ರಪಿತ ಶೇಖ್ ಮುಜಿಬುರ್ ರೆಹ್ಮಾನ್ ಅವರ ಕುಟುಂಬಕ್ಕೆ ಸಂಬಂಧಿಸಿದ ನಿಬಂಧನೆಗಳನ್ನು ಆಡಳಿತಾತ್ಮಕ ನಿರ್ವಹಣೆಯ ಅಡಿಯಲ್ಲಿ ಕಾರ್ಯಗತಗೊಳಿಸಲು ಸಾಧ್ಯವಿಲ್ಲ ಎಂದು ಮಧ್ಯಂತರ ಸರಕಾರದ ಹೇಳಿಕೆ ತಿಳಿಸಿದೆ.



## ತಾಲಿಬಾನ್ ಉಗ್ರರ' ಅಡಗುತಾಣಗಳ ಮೇಲೆ ದಾಳಿ ನಡೆಸಿದ ಪಾಕ್ ಪಡೆಗಳು

# ಭಯೋತ್ಪಾದಕರ ಹತ್ಯೆ

**ಇಸ್ಲಾಮಾಬಾದ್:** ಪಾಕಿಸ್ತಾನದ ತಾಲಿಬಾನ್ ನ ಮಾಜಿ ಭದ್ರಕೋಟೆಯಾದ ಉಗ್ರಗಾಮಿಗಳ ಅಡಗುತಾಣಗಳ ಮೇಲೆ ಒಂದು ವಾರಕ್ಕೂ ಹೆಚ್ಚು ಕಾಲ ನಡೆದ ಅನೇಕ ದಾಳಿಗಳಲ್ಲಿ ಪಾಕಿಸ್ತಾನದ ಭದ್ರತಾ ಪಡೆಗಳು 37 ದಂಗೆಕೋರರನ್ನು ಕೊಂದಿವೆ ಎಂದು ಮಿಲಿಟರಿ ಶುಕ್ರವಾರ ತಿಳಿಸಿದೆ.

ದೇಶದ ಪ್ರಕ್ಷುಬ್ಧ ನೈಋತ್ಯದಲ್ಲಿ ಪಡೆಗಳು ಐದು ದಂಗೆಕೋರರನ್ನು ಕೊಂದಿವೆ. ಬಲೂಚಿಸ್ತಾನ ಪ್ರಾಂತ್ಯದಲ್ಲಿ ಪೊಲೀಸರು, ಭದ್ರತಾ ಪಡೆಗಳು ಮತ್ತು ನಾಗರಿಕರ ಮೇಲೆ ನಡೆದ ಅನೇಕ ದಾಳಿಗಳಲ್ಲಿ ದಂಗೆಕೋರರು 50 ಕ್ಕೂ ಹೆಚ್ಚು ಜನರನ್ನು ಕೊಂದ ನಂತರ ಪಾಕಿಸ್ತಾನವು ಇಸ್ಲಾಮಿಕ್ ಉಗ್ರಗಾಮಿಗಳು ಮತ್ತು ಸಣ್ಣ ಪ್ರತ್ಯೇಕತಾವಾದಿ ಗುಂಪಿನ ವಿರುದ್ಧ ಕಾರ್ಯಾಚರಣೆಯನ್ನು ಹೆಚ್ಚಿಸಿದೆ.

ಅಫ್ಘಾನಿಸ್ತಾನದ ಗಡಿಯಲ್ಲಿರುವ ಖೈಬರ್ ಪಖ್ತುನ್ಖ್ವಾ ಪ್ರಾಂತ್ಯದ ತಿರಾ ಕಣಿವೆಯಲ್ಲಿ ರಾತ್ರೋರಾತ್ರಿ ಒಂದು ಡಜನ್ ಭಯೋತ್ಪಾದಕರು ಸಾವನ್ನಪ್ಪಿದ್ದಾರೆ ಎಂದು ಮಿಲಿಟರಿ ಹೇಳಿಕೆಯಲ್ಲಿ ತಿಳಿಸಿದೆ.



ಇದು ಆಗಸ್ಟ್ 20 ರಿಂದ ಅಲ್ಲಿ ಕೊಲ್ಲಲ್ಪಟ್ಟ ದಂಗೆಕೋರರ ಸಂಖ್ಯೆಯನ್ನು 37 ಕ್ಕೆ ತರುತ್ತದೆ ಎಂದು ಅದು ಹೇಳಿದೆ.

ಬಲೂಚಿಸ್ತಾನದಲ್ಲಿ ಇತ್ತೀಚೆಗೆ ನಡೆದ ಮಾರಣಾಂತಿಕ ದಾಳಿಯಲ್ಲಿ ಭಾಗಿಯಾಗಿದ್ದಾರೆ ಎಂದು ಹೇಳಲಾದ ಐದು ದಂಗೆಕೋರರನ್ನು ಭದ್ರತಾ ಪಡೆಗಳು ಮೂರು ಕಾರ್ಯಾಚರಣೆಗಳಲ್ಲಿ ಕೊಂದಿವೆ ಎಂದು ಮಿಲಿಟರಿ ಪ್ರತ್ಯೇಕ ಹೇಳಿಕೆಯಲ್ಲಿ ತಿಳಿಸಿದೆ.

# ಬಸ್ ಆ್ಯಂಡ್ ಕಾರ್ ಆಪರೇಸ್ಟ್ ಕಾನ್ಫೆಡರೇಶನ್ ಆಫ್ ಇಂಡಿಯಾದ ಪ್ರವಾಸ್ 4.0 ಉದ್ಘಾಟನೆ

**ಬೆಂಗಳೂರು:** ಬಹುನಿರೀಕ್ಷಿತ ನಮ್ಮ ಬೆಂಗಳೂರಿನ ಆತಿಥ್ಯದ ಪ್ರವಾಸ್ 4.0 ಗೆ ಕರ್ನಾಟಕ ಸರ್ಕಾರದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಚಾಲನೆ ನೀಡಿದರು. ಇದು ಭಾರತದ ಫ್ಲಾಯಗ್ಶಿಪ್ನ ಬಹುಮಾದರಿಯ ಕಾರ್ಯಕ್ರಮವಾಗಿದ್ದು, ಬಸ್ ಅಂಡ್ ಕಾರ್ ಆಪರೇಸ್ಟ್ ಕಾನ್ಫೆಡರೇಶನ್ ಆಫ್ ಇಂಡಿಯಾ ಇದನ್ನು ಆಯೋಜಿಸಿದೆ. ಆಗಸ್ಟ್ 29 ರಿಂದ 31 ರವರೆಗೆ ಬೆಂಗಳೂರಿನ ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮಕ್ಕೆ ಭಾರತ ಸರ್ಕಾರದ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳು, ಭಾರೀ ಕೈಗಾರಿಕೆಗಳು, ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯಗಳು ಬೆಂಬಲ ನೀಡಿವೆ.



ಈ ಕಾರ್ಯಕ್ರಮದಲ್ಲಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಖಾತೆ ಸಚಿವರಾದ ನಿತಿನ್ ಗಡ್ಕರಿ ಅವರು ವರ್ಚುವಲ್ಲಾಗಿ ಪಾಲ್ಗೊಂಡು ವೀಡಿಯೋ ಕಾನ್ಫರೆನ್ಸ್ ಮೂಲಕ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿ, ಇಡೀ ಸಾರಿಗೆ ಕಾರ್ಯಾಚರಣೆ ಕ್ಷೇತ್ರಕ್ಕೆ ಸರ್ಕಾರ ಉತ್ತೇಜನ ಮತ್ತು ಬೆಂಬಲವನ್ನು ನೀಡಲಿದೆ ಎಂದು ಭರವಸೆ ನೀಡಿದರು.ಉದ್ಘಾಟನಾ ಸಮಾರಂಭದಲ್ಲಿ ಉತ್ತರ ಪ್ರದೇಶ ಸರ್ಕಾರದ ಸಾರಿಗೆ ಸಚಿವ ದಯಾಶಂಕರ್ ಸಿಂಗ್, ಅರುಣಾಚಲ ಪ್ರದೇಶ ಸರ್ಕಾರದ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್, ಸಹಕಾರ ಮತ್ತು ಸಾರಿಗೆ ಸಚಿವ ಓಜಿಂಗ್ ಟೇಸಿಂಗ್, ರಾಜಸ್ಥಾನದ ಮಾಜಿ ಸಾರಿಗೆ ಸಚಿವ ಯೂನಸ್ ಖಾನ್, ಟಾಟಾ ಮೋಟರ್ಸ್ ಲಿಮಿಟೆಡ್ನ ಕಾರ್ಯಕಾರಿ ನಿರ್ದೇಶಕ ಗಿರೀಶ್ ವಾಘ್, ವಿಇ ಕಮರ್ಷಿಯಲ್ ವೆಹಿಕಲ್ಸ್ ಲಿಮಿಟೆಡ್ನ ಮುಖ್ಯ ವಾಣಿಜ್ಯ ಅಧಿಕಾರಿ ಎಸ್.ಎಸ್.ಗಿಲ್ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡಿದ್ದರು. ಮುಂದಿನ ದಿನಗಳಲ್ಲಿ ವಿವಿಧ ರಾಜ್ಯಗಳ ಸಚಿವರು, ಕೇಂದ್ರ ಮತ್ತು ರಾಜ್ಯ ಸರ್ಕಾರದ ಅಧಿಕಾರಿಗಳು, ಸಾರಿಗೆ ಇಲಾಖೆಗಳು ಮತ್ತು ರಾಜ್ಯ ಸಾರಿಗೆ ಸಂಸ್ಥೆಗಳ ಪ್ರತಿನಿಧಿಗಳೂ ಪಾಲ್ಗೊಳ್ಳಲಿದ್ದಾರೆ.

ಬಿಒಸಿಐ ಆಯೋಜನೆ ಮಾಡಿರುವ ಪ್ರವಾಸ್ 4.0 ಗೆ ಆತಿಥೇಯ ಕರ್ನಾಟಕದ 6 ಸಂಘಟನೆಗಳಾದ ಕರ್ನಾಟಕ ಸ್ಟೇಟ್ ಟೂರಿಸ್ಟ್ ಪ್ರೈವೇಟ್ ಟ್ರಾನ್ಸ್ಪೋರ್ಟ್ ಓನರ್ಸ್ ಅಸೋಸಿಯೇಶನ್, ಕರ್ನಾಟಕ ಸ್ಟೇಟ್ ಟ್ರಾವೆಲ್ ಆಪರೇಟರ್ಸ್ ಅಸೋಸಿಯೇಶನ್, ಕರ್ನಾಟಕ ಟೂರಿಸ್ಟ್ ಮೋಟರ್ ಕ್ಯಾಬ್ ಮ್ಯಾಕ್ಸಿ ಕ್ಯಾಬ್ ಓನರ್ಸ್ ವೆಲ್ಫೇರ್ ಅಸೋಸಿಯೇಶನ್ (ಕೆಟಿಒಎ), ಬೆಂಗಳೂರು ಟೂರಿಸ್ಟ್ ಟ್ಯಾಕ್ಸಿ ಓನರ್ಸ್ ಅಸೋಸಿಯೇಶನ್(ಬಿಟಿಟಿಒಎ), ಕರ್ನಾಟಕ ಸಟೇಟ್ ಟೂರಿಸ್ಟ್ ಬಸ್ ಆಪರೇಟರ್ಸ್ ಅಸೋಸಿಯೇಶನ್, ಕರ್ನಾಟಕ ಸ್ಟೇಟ್ ಬಸ್ ಓನರ್ಸ್ ಫೆಡರೇಶನ್ ಸೇರಿದಂತೆ ಇನ್ನೂ ಹಲವು ಸ್ಥಳೀಯ ಸಂಘಟನೆಗಳು ಬೆಂಬಲ ನೀಡಿವೆ. ಈ ಸಮ್ಮೇಳನವನ್ನು ಎಂಎಂ ಆಕ್ಟೀವ್ ಸೈ-ಟೆಕ್ ಕಮ್ಯುನಿಕೇಶನ್ಸ್ ನಿರೂಪಿಸಿದೆ.

ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಬಿಒಸಿಐ ಅಧ್ಯಕ್ಷ ಪ್ರಸನ್ನ ಪಟವರ್ಧನ್ ಅವರು, ''ಪ್ರವಾಸ್ನ 4 ನೇ ಆವೃತ್ತಿಯನ್ನು ಉದ್ಘಾಟಿಸುವುದರೊಂದಿಗೆ ನಾವು ಭಾರತದ ಸಾರಿಗೆ ಲ್ಯಾಂಡ್ಸ್ಕೇಪ್ ಅನ್ನು ಪರಿವರ್ತಿಸುವ ನಿಟ್ಟನಲ್ಲಿ ಅನ್ವೇಷಣೆಯಲ್ಲಿ ಒಂದು ಪ್ರಮುಖ ಮೈಲಿಗಲ್ಲನ್ನು ಸ್ಥಾಪಿಸಿದಂತಾಗಿದೆ. ಬಸ್ ಮತ್ತು ಕಾರ್ ಆಪರೇಟರ್ಸ್ ಕಾನ್ಫೆಡರೇಶನ್ ಆಫ್ ಇಂಡಿಯಾ (ಬಿಒಸಿಐ)ನಲ್ಲಿ ನಾವು ಕೇವಲ ಭವಿಷ್ಯವನ್ನು ರೂಪಿಸುತ್ತಿಲ್ಲ, ನಾವೀನ್ಯತೆಯನ್ನು ಚಾಲನೆ ಮಾಡುವ ನಿಟ್ಟಿನಲ್ಲಿ ಸಹಯೋಗಗಳನ್ನು ಬೆಳೆಸುವ ಮೂಲಕ ಮತ್ತು ಎಲ್ಲಾ ಸಾರಿಗೆ ವಿಧಾನಗಳಲ್ಲಿ ಸುಸ್ಥಿರ ಅಭ್ಯಾಸಗಳನ್ನು ಚಾಂಪಿಯನ್ ಮಾಡುವುದರೊಂದಿಗೆ ನಾವು ಅದನ್ನು ಸಕ್ರಿಯವಾಗಿ ರೂಪಿಸುತ್ತಿದ್ದೇವೆ. ಪ್ರವಾಸ್ 4.0 ಉದ್ಯಮವು ಎದುರಿಸುತ್ತಿರುವ ಪರಿಸರದ ಮೇಲೆ ಉಂಟಾಗುತ್ತಿರುವ ಒತ್ತಡ ತಪ್ಪಿಸುವುದು ಮತ್ತು ಸಾಮಾಜಿಕ-ಆರ್ಥಿಕ ಸವಾಲುಗಳನ್ನು ಪರಿಹರಿಸುವ ನಮ್ಮ ಬದ್ಧತೆಯನ್ನು ಸಾಕಾರಗೊಳಿಸುತ್ತದೆ. ಹೆಚ್ಚಿನ ಮಾಹಿತಿಗಾಗಿ www.prawaas.comಗೆ ಭೇಟಿ ನೀಡಿ.

## ದುರ್ಬಲ ಮುಂಗಾರು: ಬಿಂದು ಬಿಳಿಗುಂಡ್ಲುವಿನಲ್ಲಿ ಕಡಿಮೆಯಾದ ಕಾವೇರಿ ಹರಿವು

**ನವದೆಹಲಿ:** ಕರ್ನಾಟಕದಿಂದ ಅಂತಾರಾಜ್ಯ ಬಿಂದು ಬಿಳಿಗುಂಡ್ಲುವಿಗೆ ಹರಿಯುತ್ತಿರುವ ಕಾವೇರಿ ನೀರಿನ ಬಗ್ಗೆ ಕಾವೇರಿ ನೀರು ನಿಯಂತ್ರಣ ಸಮಿತಿ ತೃಪ್ತಿ ವ್ಯಕ್ತಪಡಿಸಿದೆ.

ಆದಾಗ್ಯೂ ದುರ್ಬಲ ಮಾನ್ಸೂನ್ ಕಳೆದ ವಾರದಿಂದ ದಿನದ ನಿಗದಿತ ಹರಿವನ್ನು 1.5 ಟಿಎಂಸಿಯಿಂದ 0.5 ಟಿಎಂಸಿಗೆ ಕಡಿಮೆ ಮಾಡಿದೆ. ಇದು ಮೆಟ್ಟೂರು ಜಲಾಶಯದ ನೀರಿನ ಮಟ್ಟವನ್ನು ಪೂರ್ಣ ಜಲಾಶಯದ ಮಟ್ಟದಿಂದ ಸ್ವಲ್ಪ ಕಡಿಮೆ ಮಾಡಿದೆ. ಪ್ರಸ್ತುತ ಮೆಟ್ಟೂರು ಅಣೆಕಟ್ಟಿನ ನೀರಿನ ಮಟ್ಟ ಅದರ ಸಾಮಾನ್ಯ ಈಖಐ 93 ಟಿಎಂಸಿಯಿಂದ ಸುಮಾರು 89 ಟಿಎಂಸಿಗೆ ಇಳಿದಿದೆ. ಈ ವರ್ಷದ ಜೂನ್ 1 ಮತ್ತು ಆಗಸ್ಟ್ 29 ರ ನಡುವೆ ಅಂತರರಾಜ್ಯ ಬಿಂದು ಬಿಳಿಗುಂಡ್ಲುವಿನಲ್ಲಿ ಕರ್ನಾಟಕ ಸುಮಾರು 177 ಟಿಎಂಸಿ ನೀರಿನ ಹರಿವನ್ನು ಬಿಡುಗಡೆ ಮಾಡಿದೆ ಎಂದು ಅಘಾಖಅ ನಿರ್ಣಯಿಸಿದೆ. ಇದು ಇಡೀ ಮುಂಗಾರು ಋತುವಿನ ಅಗತ್ಯ 123 ಟಿಎಂಸಿಗಿಂತ ಹೆಚ್ಚಿದೆ,. ಮುಂದಿನ 8-10 ದಿನಗಳಲ್ಲಿ ಮಾನ್ಸೂನ್ ಬಲಗೊಳ್ಳಲಿದೆ ಎಂದು ಖಒಆ ಭವಿಷ್ಯ ನುಡಿದಿದೆ ಎಂದು ಅಘಾಖಅ ಅಧ್ಯಕ್ಷ ವಿನೀತ್ ಗುಪ್ತಾ ಖಿಓಋಇ ಗೆ ತಿಳಿಸಿದ್ದಾರೆ. ಅಂತಾರಾಜ್ಯ ಬಿಂದುವಿನಲ್ಲಿ ನೀರಿನ ಹರಿವು ಕಡಿಮೆಯಾದ ಬಗ್ಗೆ ಪ್ರತಿಕ್ರಿಯಿಸಿದ ಟಿಎನ್ ಅಧಿಕಾರಿಗಳು ಕರ್ನಾಟಕವು ತನ್ನ ಜಲಾಶಯಗಳು ತುಂಬಿದಾಗ ಮಾತ್ರ ನೀರು ಬಿಡುತ್ತದೆ ಎಂದು ಹೇಳಿದರು.

## 48 ಗಂಟೆಗಳ ತುರ್ತು ಪರಿಸ್ಥಿತಿ ಘೋಷಿಸಿದ ಇಸ್ರೇಲ್!

**ಜೆರುಸಲೇಂ:** ಹೆಜ್ಬುಲ್ಲಾ ಉಗ್ರರು-ಇಸ್ರೇಲ್ ಪರಸ್ಪರ ನೂರಾರು ರಾಕೆಟ್ ಗಳಿಂದ ದಾಳಿ ನಡೆಸಿದ್ದು, ಮೂವರು ಸಾವನ್ನಪ್ಪಿದ್ದಾರೆ. ಕಳೆದ ತಿಂಗಳು ಇಸ್ರೇಲ್ ಡ್ರೋಣ್ ದಾಳಿಯಲ್ಲಿ ಹೆಜ್ಬುಲ್ಲಾ ಕಮಾಂಡರ್ ಗಳನ್ನು ಹತ್ಯೆ ಮಾಡಿತ್ತು. ಇಸ್ರೇಲ್ ಸರಣಿ ರಾಕೆಟ್ ದಾಳಿ ನಡೆಸಿದ್ದು, ಹೆಜ್ಬುಲ್ಲಾ ವಿರುದ್ಧದ ಪೂರ್ವಾಪೇಕ್ಷಿತ ದಾಳಿ ಇದಾಗಿದೆ ಎಂದು ಹೇಳಿದೆ. ದಾಳಿಯಲ್ಲಿ ಮೂವರು ಸಾವನ್ನಪ್ಪಿದ್ದಾರೆ ಎಂದು ಲೆಬನಾನ್‌ನ ರಾಷ್ಟ್ರೀಯ ಸುದ್ದಿ ಸಂಸ್ಥೆ ತಿಳಿಸಿದೆ. ಇಸ್ರೇಲ್ ಕಡೆಯಿಂದ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಪರಸ್ಪರ ನಡೆಯುತ್ತಿರುವ ಭಾರೀ ಗುಂಡಿನ ದಾಳಿಗಳು ಅಮೇರಿಕಾ, ಇರಾನ್ ಮತ್ತು ಪ್ರದೇಶದಾದ್ಯಂತ ಉಗ್ರಗಾಮಿ ಗುಂಪುಗಳನ್ನು ಸಂಪೂರ್ಣ ಯುದ್ಧದಲ್ಲಿ ತೊಡಗುವಂತೆ ಪ್ರಚೋದಿಸುತ್ತಿದೆ. ಇದರಿಂದ ಗಾಜಾದಲ್ಲಿ ಕದನ ವಿರಾಮ ಪ್ರಯತ್ನಗಳಿಗೆ ಅಡ್ಡಿ ಉಂಟಾಗಬಹುದು ಎಂದು ವಿಶ್ಲೇಷಿಸಲಾಗುತ್ತಿದೆ. ಇಸ್ರೇಲಿ ಮಿಲಿಟರಿಯು ಲೆಬನಾನ್‌ನಲ್ಲಿ ಪೂರ್ವಭಾವಿ ದಾಳಿಗಳನ್ನು ಪ್ರಾರಂಭಿಸಿದ ನಂತರ ಇಸ್ರೇಲ್ ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ಭಾನುವಾರ ಬೆಳಿಗ್ಗೆ 06:00 ರಿಂದ 48 ಗಂಟೆಗಳ ರಾಷ್ಟ್ರವ್ಯಾಪಿ ತುರ್ತು ಪರಿಸ್ಥಿತಿಯನ್ನು ಘೋಷಿಸಿದ್ದಾರೆ.

## ಶಸ್ತ್ರಾಸ್ತ್ರ ಕಳ್ಳಸಾಗಣೆ ಆರೋಪಿ: ಹಸ್ತಾಂತರಿಸಲು ಡೆನ್ಮಾರ್ಕ್ ನಕಾರ

**ಕೋಪನ್ ಹ್ಯಾಗನ್:** ಶಸ್ತ್ರಾಸ್ತ್ರ ಕಳ್ಳಸಾಗಣೆ ಪ್ರಕರಣದ ಆರೋಪಿ, ಡೆನ್ಮಾರ್ಕ್ನ ಪ್ರಜೆ ನೀಲ್ಸ್ ಹಾಲ್ಕ್ ನನ್ನು ಹಸ್ತಾಂತರಿಸುವಂತೆ ಭಾರತ ಸಲ್ಲಿಸಿದ್ದ ಮನವಿಯನ್ನು ಡೆನ್ಮಾರ್ಕ್ನ ನ್ಯಾಯಾಲಯ ಗುರುವಾರ ತಳ್ಳಿಹಾಕಿದೆ. 1995ರಲ್ಲಿ ಪೂರ್ವ ಭಾರತದಲ್ಲಿ ಸರಕು ವಿಮಾನದಿಂದ ರೈಫಲ್ಸ್‌ಗಳು, ರಾಕೆಟ್ ಲಾಂಚರ್ಗಳು ಮತ್ತು ಕ್ಷಿಪಣಿಗಳನ್ನು ಕೆಳಗೆ ಉದುರಿಸಿದ ಪ್ರಕರಣದಲ್ಲಿ ಭಾಗಿಯಾಗಿರುವುದನ್ನು ಹಾಲ್ಕ್ ಒಪ್ಪಿಕೊಂಡಿದ್ದ. ಈ ಶಸ್ತ್ರಾಸ್ತ್ರಗಳನ್ನು ದೇಶದಲ್ಲಿನ ಕ್ರಾಂತಿಕಾರಿ ಗುಂಪೊಂದಕ್ಕೆ ತಲುಪಿಸಲು ಉದ್ದೇಶಿಸಲಾಗಿತ್ತು ಎಂದು ಪೊಲೀಸರು ಹೇಳಿದ್ದರು. ಭಾರತಕ್ಕೆ ಹಸ್ತಾಂತರಿಸಿದರೆ ಜೀವಕ್ಕೆ ಅಪಾಯದ ಭಯವಿದೆ ಎಂದು 62 ವರ್ಷದ ಹಾಲ್ಕ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದ. ಭಾರತ ನೀಡಿದ ಹೆಚ್ಚುವರಿ ರಾಜತಾಂತ್ರಿಕ ಖಾತರಿಗಳ ಹೊರತಾಗಿಯೂ ಹಾಲ್ಕ್ ಭಾರತದಲ್ಲಿ ಚಿತ್ರಹಿಂಸೆ ಅಥವಾ ಇತರ ಅಮಾನವೀಯ ಪ್ರಕ್ರಿಯೆಯನ್ನು ಎದುರಿಸುವ ನಿಜವಾದ ಅಪಾಯವಿದೆ ಎಂದು ಹಿಲ್ಲೆರೋಡ್ ನ್ಯಾಯಾಲಯ ಹೇಳಿದೆ.



## ಜರ್ಮನಿಯಲ್ಲಿ ಬಸ್ಸಿನಲ್ಲಿ ಆರು ಜನರಿಗೆ ಚೂರಿಯಿಂದ ಇರಿದ ಮಹಿಳೆ

**ಜರ್ಮನಿ:** ಜರ್ಮನಿಯಲ್ಲಿ ಶುಕ್ರವಾರ 32 ವರ್ಷದ ಮಹಿಳೆ ಬಸ್ನಲ್ಲಿ ಆರು ಜನರನ್ನು ಇರಿದು ಗಾಯಗೊಳಿಸಿದ್ದಾರೆ, ಸೋಲಿಂಗೆನ್ನಲ್ಲಿ ಮೂರು ಜನರನ್ನು ಕೊಂದು ಎಂಟು ಜನರನ್ನು ಗಾಯಗೊಳಿಸಿದ ಕೆಲವೇ ದಿನಗಳ ನಂತರ ನಡೆದಿದೆ.



ಅಧಿಕಾರಿಗಳನ್ನು ಉಲ್ಲೇಖಿಸಿ, ಸಿಜೆನ್ ಪಟ್ಟಣದಲ್ಲಿ ನಡೆದ ದಾಳಿಯ ನಂತರ ಜರ್ಮನ್ ಪ್ರಜೆಯಾದ ಮಹಿಳೆಯನ್ನು ಬಂಧಿಸಲಾಗಿದೆ ಎಂದು ಡಿಡಬ್ಲ್ಯೂ ವರದಿ ಮಾಡಿದೆ.ಘಟನೆಯ ಸಮಯದಲ್ಲಿ ಬಸ್ ನಲ್ಲಿ ಕನಿಷ್ಠ 40 ಜನರು ನಗರ ಉತ್ಸವಕ್ಕೆ ಪ್ರಯಾಣಿಸುತ್ತಿದ್ದರು ಎಂದು ವರದಿ ತಿಳಿಸಿದೆ.ಮೂವರ ಸ್ಥಿತಿ ಗಂಭೀರ: ಗಾಯಗೊಂಡ ಆರು ಜನರಲ್ಲಿ ಮೂವರ ಸ್ಥಿತಿ ಗಂಭೀರವಾಗಿದೆ ಎಂದು ವರದಿಯಾಗಿದೆ. ತನಿಖೆಯನ್ನು ಪ್ರಾರಂಭಿಸಲಾಯಿತು ಮತ್ತು ಇದು ಭಯೋತ್ಪಾದಕ ದಾಳಿಯ ಯಾವುದೇ ಸೂಚನೆಗಳಿಲ್ಲ ಎಂದು ಪೊಲೀಸರು ಸೂಚಿಸಿದರು. ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ, ದಾಳಿಯ ಬಗ್ಗೆ ಸುಳ್ಳು ವರದಿಗಳನ್ನು ಹರಡದಂತೆ ಪೊಲೀಸರು ಜನರಿಗೆ ಮನವಿ ಮಾಡಿದರು.ದಾಳಿಕೋರಳು ಮಾನಸಿಕ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರಬಹುದು ಚಾಕು ದಾಳಿಯ ಉದ್ದೇಶ ಇನ್ನೂ ದೃಢಪಟ್ಟಿಲ್ಲವಾದರೂ, 32 ವರ್ಷದ ಮಹಿಳೆ ಮಾನಸಿಕ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದಿರಬಹುದು ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

## ಇರಾಕ್‌ನಲ್ಲಿ ಹತ್ಯೆಗೀಡಾದ 15 ಐಸಿಸ್ ಭಯೋತ್ಪಾದಕರು ಧರಿಸಿದ್ದರು ಆತ್ಮಹತ್ಯಾ ಬೆಲ್ಟ್

**ಪಶ್ಚಿಮ ಇರಾಕ್:** ಪಶ್ಚಿಮ ಇರಾಕ್‌ನಲ್ಲಿ ಅಮೆರಿಕ ಮತ್ತು ಇರಾಕ್ ಪಡೆಗಳು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ 15 ಇಸ್ಲಾಮಿಕ್ ಸ್ಟೇಟ್ (ಐಸಿಸ್) ಭಯೋತ್ಪಾದಕರನ್ನು ನಿರ್ಮೂಲನೆ ಮಾಡಲಾಗಿದೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ (ಸೆಂಟ್ಕಾಮ್) ಘೋಷಿಸಿದೆ. ಗುರುವಾರ ಮುಂಜಾನೆ ನಡೆಸಿದ ಈ ದಾಳಿಯಲ್ಲಿ ಐಸಿಸ್ ನಾಯಕರನ್ನು ಗುರಿಯಾಗಿಸಿಕೊಂಡು ಯಾವುದೇ ನಾಗರಿಕ ಸಾವುನೋವುಗಳು ಸಂಭವಿಸಿಲ್ಲ. ಐಸಿಸ್ ಸದಸ್ಯರು ವಿವಿಧ ಶಸ್ತ್ರಾಸ್ತ್ರಗಳು, ಗ್ರೆನೇಡ್ಗಳು ಮತ್ತು ಸ್ಫೋಟಕ ''ಆತ್ಮಹತ್ಯಾ'' ಬೆಲ್ಟ್ಗಳನ್ನು ಹೊಂದಿದ್ದರು ಎಂದು ಸೆಂಟ್ಕಾಮ್ ಸಾಮಾಜಿಕ ಮಾಧ್ಯಮ ಪ್ಲಾಟ್ಫಾರ್ಮ್ ಎಕ್ಸ್ನಲ್ಲಿ ವರದಿ ಮಾಡಿದೆ. ದಾಳಿ ನಡೆಸಿದ ಸ್ಥಳಗಳ ಬಗ್ಗೆ ಇರಾಕಿ ಪಡೆಗಳು ತನಿಖೆ ಮುಂದುವರಿಸಿದ್ದು, ಐಸಿಸ್ ಈ ಪ್ರದೇಶ, ಮಿತ್ರರಾಷ್ಟ್ರಗಳು ಮತ್ತು ಯುಎಸ್ ತಾಯ್ನಾಡಿಗೆ ಬೆದರಿಕೆಯಾಗಿ ಉಳಿದಿದೆ ಎಂದು ಸೆಂಟ್ಕಾಮ್ ಒತ್ತಿಹೇಳಿದೆ.ಇರಾಕ್ನಲ್ಲಿ ಜಿಹಾದಿ ವಿರೋಧಿ ಸಮ್ಮಿಶ್ರ ಪಡೆಗಳ ಉಪಸ್ಥಿತಿಗೆ ಸಂಬಂಧಿಸಿದಂತೆ ಬಾಗ್ದಾದ್ ಮತ್ತು ವಾಷಿಂಗ್ಟನ್ ನಡುವೆ ನಡೆಯುತ್ತಿರುವ ಚರ್ಚೆಗಳ ಮಧ್ಯೆ ಈ ಕಾರ್ಯಾಚರಣೆ ನಡೆದಿದೆ.



# ಮಾನವೀಯ ವಿರಾಮಕ್ಕೆ ಇಸ್ರೇಲ್ ಒಪ್ಪಿಗೆ

**ಜೆರುಸಲೇಂ:** ಗಾಝಾ ಪ್ರದೇಶದ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಿಸಲು ಅನುವು ಮಾಡಿಕೊಡುವ ಉದ್ದೇಶದಿಂದ ಗಾಝಾದಲ್ಲಿ ಮೂರು ದಿನಗಳ ಮಾನವೀಯ ವಿರಾಮಕ್ಕೆ ಇಸ್ರೇಲ್ ಸಮ್ಮತಿಸಿದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಹೇಳಿದೆ.



ನಾವು ಚರ್ಚಿಸಿದಂತೆ ಹಾಗೂ ಒಪ್ಪಿಗೆ ನೀಡಿದಂತೆ, ಕೇಂದ್ರ ಗಾಝಾದಲ್ಲಿ 3 ದಿನಗಳ ಪೋಲಿಯೊ ಲಸಿಕೆ ಅಭಿಯಾನ ಸೆಪ್ಟಂಬರ್ 1ರಿಂದ ಆರಂಭವಾಗಲಿದೆ.

ಲಸಿಕೆಅಭಿಯಾನದಸಂದರ್ಭಮಾನವೀಯ ವಿರಾಮ ಜಾರಿಯಲ್ಲಿರುತ್ತದೆ ಎಂದು ವಿಶ್ವ ಆರೋಗ್ಯ ಸಂಸ್ಥೆಯ ಫೆಲೆಸ್ತೀನ್ ಪ್ರಾಂತಗಳ ಪ್ರತಿನಿಧಿ ರಿಕ್ ಪೀಪರ್ಕಾರ್ನ್ ಹೇಳಿದ್ದಾರೆ. ದಕ್ಷಿಣ ಮತ್ತು ಉತ್ತರ ಗಾಝಾ ಪ್ರದೇಶದಲ್ಲಿ ಪೋಲಿಯೊ ಲಸಿಕೆ ಹಾಕಲಾಗುವುದು ಮತ್ತು ಇವು ಕೂಡಾ ಮಾನವೀಯ ವಿರಾಮದ ವ್ಯಾಪ್ತಿಯಡಿ ಬರಲಿದೆ. ಅಗತ್ಯ ಬಿದ್ದರೆ ಹೆಚ್ಚುವರಿ ದಿನವನ್ನೂ ಬಳಸಿಕೊಳ್ಳಲು ಇಸ್ರೇಲ್ ಒಪ್ಪಿದೆ. 10 ವರ್ಷದೊಳಗಿನ 6,40,000ಕ್ಕೂ ಅಧಿಕ ಮಕ್ಕಳಿಗೆ ಲಸಿಕೆ ಹಾಕಿಸುವ ಗುರಿ ಹೊಂದಲಾಗಿದೆ. ಸಂಬಂಧಿತ ಎಲ್ಲಾ ಪಕ್ಷಗಳೂ ತಾವು ನೀಡಿರುವ ವಾಗ್ದಾನಕ್ಕೆ ಬದ್ಧವಾಗಿರುವ ಅಗತ್ಯವಿದೆ. ಪೋಲಿಯೊ ಪ್ರಕರಣ ಉಲ್ಬಣಗೊಳ್ಳುವುದನ್ನು ತಡೆಯಲು ಮತ್ತು ಅಂತರಾಷ್ಟ್ರೀಯ ಹರಡುವಿಕೆಯನ್ನು ತಡೆಯಲು ಪ್ರತೀ ಸುತ್ತಿನಲ್ಲೂ ಕನಿಷ್ಟ 90%ದಷ್ಟು ಕವರೇಜ್ ಅಗತ್ಯವಿದೆ ಎಂದು ವಿಶ್ವ ಆರೋಗ್ಯ ಸಂಘಟನೆಯ ಸಹಾಯಕ ಪ್ರಧಾನ ನಿರ್ದೇಶಕ ಮೈಕಲ್ ರಿಯಾನ್ ವಿಶ್ವಸಂಸ್ಥೆ ಭದ್ರತಾ ಮಂಡಳಿಯಲ್ಲಿ ಹೇಳಿದ್ದಾರೆ.

# ಜಪಾನ್‌ನಲ್ಲಿ ಚಂಡಮಾರುತ: 5 ಮಂದಿ ಸಾವು

**ಟೋಕಿಯೊ:** ಗಂಟೆಗೆ 126 ಕಿ.ಮೀ ವೇಗದ ಗಾಳಿಯೊಂದಿಗೆ ಜಪಾನ್ಗೆ ಅಪ್ಪಳಿಸಿರುವ ಚಂಡಮಾರುತ ಶುಕ್ರವಾರ ಬೆಳಗ್ಗಿನ ವೇಳೆಗೆ ದುರ್ಬಲಗೊಂಡರೂ ವ್ಯಾಪಕ ನಾಶ-ನಷ್ಟಕ್ಕೆ ಕಾರಣವಾಗಿದ್ದು ಮೃತರ ಸಂಖ್ಯೆ 5ಕ್ಕೆ ಏರಿಕೆಯಾಗಿದೆ. ಇತರ 81 ಮಂದಿ ಗಾಯಗೊಂಡಿರುವುದಾಗಿ ಅಧಿಕಾರಿಗಳು ಹೇಳಿದ್ದಾರೆ.ಕ್ಯುಷು ದ್ವೀಪಕ್ಕೆ ಅಪ್ಪಳಿಸುವುದಕ್ಕೂ ಮುನ್ನ ಶಿಕೊಕು ದ್ವೀಪದಲ್ಲಿ ಸುರಿದ ನಿರಂತರ ಧಾರಾಕಾರ ಮಳೆಯಿಂದಾಗಿ ಭೂಕುಸಿತ ಸಂಭವಿಸಿ ಒಂದೇ ಕುಟುಂಬದ ಮೂವರು ಮೃತಪಟ್ಟಿದ್ದಾರೆ. ಸಣ್ಣ ದೋಣಿಯೊಂದು ಮುಳುಗಿ ಓರ್ವ ವ್ಯಕ್ತಿ ಹಾಗೂ ತೊಕುಷಿಮಾ ಪ್ರಾಂತದಲ್ಲಿ ಎರಡು ಮಹಡಿಗಳ ಕಟ್ಟಡ ಭಾಗಶಃ ಕುಸಿದುಬಿದ್ದು ಓರ್ವ ಮೃತಪಟ್ಟಿದ್ದಾನೆ. ಕ್ಯುಷು ದ್ವೀಪದಲ್ಲಿ ಬೀಸಿದ ಬಿರುಗಾಳಿಯಿಂದ ಕಿಟಕಿಯ ಗಾಜು ಒಡೆದು 81 ಮಂದಿ ಗಾಯಗೊಂಡಿದ್ದಾರೆ. 5 ಲಕ್ಷಕ್ಕೂ ಅಧಿಕ ಜನರಿಗೆ ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಗೊಳ್ಳಲು ಸಲಹೆ ನೀಡಲಾಗಿದೆ. ಕ್ಯುಷು ಪ್ರದೇಶದಲ್ಲಿ 2,50,000ಕ್ಕೂ ಹೆಚ್ಚು ಕುಟುಂಬಗಳಿಗೆ ವಿದ್ಯುತ್ ಪೂರೈಕೆ ಮೊಟಕುಗೊಂಡಿದೆ. ಟೋಕಿಯೊ ಮತ್ತು ಒಸಾಕಾ ನಡುವಿನ ಬುಲೆಟ್ ಟ್ರೈನ್ಗಳನ್ನು ಸ್ಥಗಿತಗೊಳಿಸಲಾಗಿದ್ದು ಜಪಾನ್ ಏರ್ಲೈನ್ಸ್ ಹಾಗೂ ಎಎನ್‌ಎ ಸಂಸ್ಥೆಯ ಹಲವು ವಿಮಾನಗಳನ್ನು ರದ್ದುಗೊಳಿಸಲಾಗಿದೆ ಎಂದು ವರದಿಯಾಗಿದೆ.



# ಪಾಕಿಸ್ತಾನದಲ್ಲಿ ಮನೆ ಕುಸಿತ: 12 ಮಂದಿ ಸಾವು

**ಇಸ್ಲಮಾಬಾದ್:** ಖೈಬರ್ ಪಖ್ತೂಂಕ್ವಾ ಪ್ರಾಂತದಲ್ಲಿ ಧಾರಾಕಾರ ಮಳೆಯಿಂದಾಗಿ ಜಲಾವೃತಗೊಂಡ ಮನೆಯೊಂದು ಕುಸಿದು ಬಿದ್ದು ಮಗು, ಮೂವರು ಮಹಿಳೆಯರ ಸಹಿತ 12 ಮಂದಿ ಮೃತಪಟ್ಟಿರುವುದಾಗಿ ಅಧಿಕಾರಿಗಳು ಹೇಳಿದ್ದಾರೆ.

ಖೈಬರ್ ಪಖ್ತೂಂಕ್ವಾದ ಪತ್ರಕ್ ಪ್ರಾಂತದಲ್ಲಿ ಮನೆಯೊಂದು ಸಂಪೂರ್ಣ ಕುಸಿದುಬಿದ್ದು ಮನೆಯಲ್ಲಿದ್ದ 12 ಮಂದಿ ಸಾವನ್ನಪ್ಪಿದ್ದಾರೆ ಎಂದು ರಕ್ಷಣಾ ತಂಡದ ವಕ್ತಾರ ಬಿಲಾಲ್ ಫೈಜಿಯನ್ನು ಉಲ್ಲೇಖಿಸಿ ಎಎಫ್ಪಿ ಸುದ್ದಿಸಂಸ್ಥೆ ವರದಿ ಮಾಡಿದೆ.

ಗುರುವಾರ ರಾತ್ರಿಯಿಂದ ದೇಶದ ಹಲವೆಡೆ ಧಾರಕಾರಾ ಮಳೆಯಾಗುತ್ತಿದ್ದು ಶುಕ್ರವಾರ ಗುಡುಗು, ಸಿಡಿಲಿನ ಸಹಿತ ಮಳೆಯಾಗಿದೆ. ದಕ್ಷಿಣ ಕರಾವಳಿಗೆ ಚಂಡ ಮಾರುತ ಅಪ್ಪಳಿಸುವ ಸೂಚನೆಯಿದ್ದು ಗುಡುಗು ಸಹಿತ ಧಾರಾಕಾರ ಮಳೆ ಮತ್ತು ಪ್ರವಾಹದ ಸಾಧ್ಯತೆಯಿದೆ ಎಂದು ಸಿಂಧ್ ಪ್ರಾಂತದ ವಿಪತ್ತು ನಿರ್ವಹಣಾ ಪ್ರಾಧಿಕಾರ ಹೇಳಿದೆ.

ಜುಲೈ ತಿಂಗಳಿನಲ್ಲಿ ಪಾಕಿಸ್ತಾನದಲ್ಲಿ ಮುಂಗಾರು ಆರಂಭವಾದಂದಿನಿಂದ ಮಳೆ, ಪ್ರವಾಹದಿಂದಾಗಿ 300ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.



ಶನಿವಾರ
31.8.2024
ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಸೆ.2ರಂದು ಮ್ಯಾಕ್ಸ್ ಅಪ್‌ಡೇಟ್

ಕಿಚ್ಚ ಸುದೀಪ್ ನಟನೆಯ ಬಹುನಿರೀಕ್ಷಿತ 'ಮ್ಯಾಕ್ಸ್' ಚಿತ್ರಕ್ಕಾಗಿ ಅಭಿಮಾನಿಗಳು ಎದುರು ನೋಡ್ತಿದ್ದಾರೆ. ಸುದೀಪ್ ಹುಟ್ಟುಹಬ್ಬದಂದು (ಸೆ.2) ಸಿನಿಮಾ ಬಗ್ಗೆ ಇಂಟರೆಸ್ಟಿಂಗ್ ಅಪ್‌ಡೇಟ್‌ವೊಂದು ಹೊರಬೀಳಲಿದೆ. ಅಭಿಮಾನಿಗಳ ಕಾತರಕ್ಕೆ ಸಿಹಿಸುದ್ದಿ ಸಿಗಲಿದೆ. 'ವಿಕ್ರಾಂತ್ ರೋಣ' ಸಿನಿಮಾ ರಿಲೀಸ್ ಆಗಿ 3 ವರ್ಷಗಳ ನಂತರ ಮ್ಯಾಕ್ಸ್ ಚಿತ್ರದ ಮೂಲಕ ಸುದೀಪ್ ಬೆಳ್ಳಿಪರದೆಯಲ್ಲಿ ಮಿಂಚಲು ರೆಡಿಯಾಗಿದ್ದಾರೆ. ಸದ್ಯ 'ಮ್ಯಾಕ್ಸ್' ಸಿನಿಮಾದ ಮೊದಲ ಮಾಸ್ ಸಾಂಗ್ ಅನ್ನು ಸೆ.2ರಂದು ಬೆಳಗ್ಗೆ 6:56ಕ್ಕೆ ರಿಲೀಸ್ ಮಾಡೋದಾಗಿ ಚಿತ್ರತಂಡ ತಿಳಿಸಿದೆ.

ಸದ್ಯ ಟೀಸರ್‌ನಿಂದ ಧೂಳೆಬ್ಬಿಸಿರುವ 'ಮ್ಯಾಕ್ಸ್' ಚಿತ್ರ ಮಾಸ್ ಸಾಂಗ್‌ನಿಂದ ಕಿಚ್ಚನ ಫ್ಯಾನ್ಸ್ ಜೋಶ್ ತುಂಬಲು ಕೌಂಟ್‌ಡೌನ್ ಶುರುವಾಗಿದೆ. ಸುದೀಪ್ ಸಿನಿಮಾದಲ್ಲಿ ಸಂಯುಕ್ತಾ ಹೊರನಾಡ್, ಸುಕೃತಾ ವಾಗ್ಲೆ, ತಮಿಳು ನಟಿ ವರಲಕ್ಷ್ಮಿ ಸೇರಿದಂತೆ ಅನೇಕರು ನಟಿಸಿದ್ದಾರೆ. ಅದಷ್ಟೇ ಅಲ್ಲ, ಸುದೀಪ್ ಹುಟ್ಟುಹಬ್ಬದಂದೇ (ಸೆ.2) ಅನೂಪ್ ಭಂಡಾರಿ ಜೊತೆಗಿನ ಸಿನಿಮಾ ಬಗ್ಗೆ ಅಧಿಕೃತ ಅಪ್‌ಡೇಟ್ ಸಿಗಲಿದೆ. 'ವಿಕ್ರಾಂತ್ ರೋಣ' ಬಳಿಕ ಮತ್ತೊಮ್ಮೆ ಅನೂಪ್ ಜೊತೆ ಸುದೀಪ್ ಕೈಜೋಡಿಸಲಿದ್ದಾರೆ.




'ಸರ್ವೇ ನಂಬರ್ 45' ಚಿತ್ರಕ್ಕೆ ಮುಹೂರ್ತ

# ಇದು ಗಿಲ್ಲಿ ನಟನ ಸಿನಿಮಾ



ಹೊಸಬರೇ ಸೇರಿಕೊಂಡು ಸಿದ್ಧಪಡಿಸುತ್ತಿರುವ 'ಸರ್ವೇ ನಂಬರ್ 45' ಚಿತ್ರದ ಮುಹೂರ್ತ ಸಮಾರಂಭವು ಶ್ರೀ ಬಂಡಿ ಮಹಾಂಕಾಳಿ ಅಮ್ಮನ ಸನ್ನಿಧಿಯಲ್ಲಿ ಅದ್ದೂರಿಯಾಗಿ ನಡೆಯಿತು. ಪ್ರಥಮ ದೃಶ್ಯಕ್ಕೆ ಹಿರಿಯ ನಿರ್ದೇಶಕ ಹೆಚ್.ವಾಸು ಕ್ಲಾಪ್ ಮಾಡಿದರೆ, ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್ ಕ್ಯಾಮಾರ ಆನ್ ಮಾಡಿ ತಂಡಕ್ಕೆ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಶರವಣ ಉಪಸ್ಥಿತರಿದ್ದರು. ವರನಂದಿ ಸಿನಿ ಸಂಸ್ಥೆಯು ನಿರ್ಮಾಣದ ಜವಬ್ದಾರಿಯನ್ನು ಹೊತ್ತುಕೊಂಡಿದೆ. ಹಿರಿಯ ನಿರ್ದೇಶಕರುಗಳಾದ ಹೆಚ್. ವಾಸು ಮತ್ತು ಕೆ.ರಾಘವ ಅವರಲ್ಲಿ ಕೆಲಸ ಕಲಿತಿರುವ ಪಿರಿಯಾಪಟ್ಟಣದ ಶಿವಕುಮಾರ್.ಎಂ.ಶೆಟ್ಟಿಹಳ್ಳಿ ಈ ಹಿಂದೆ ಮಹದೇಶ್ವರ ಭಕ್ತಿ ಗೀತೆಗಳಿಗೆ ಸಾಹಿತ್ಯ ಬರೆದಿದ್ದಾರೆ. ಇದರ ಅನುಭವದಿಂದಲೇ ಸಿನಿಮಾಕ್ಕೆ ರಚನೆ,ಚಿತ್ರಕಥೆ, ಮೂರು ಹಾಡುಗಳನ್ನು ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಗ್ರಾಮೀಣ ಭಾಗದಲ್ಲಿ ಅದರಲ್ಲೂ ರೈತ ತನ್ನ ಜಮೀನಿನಲ್ಲಿ ಕೃಷಿ ಮಾಡುವ ಜಾಗಕ್ಕೆ ಸರ್ವೇ ನಂಬರ್ ಎಂದು ಸರ್ಕಾರವು ನೀಡಿರುತ್ತದೆ.



ಇದರ ಮಧ್ಯೆ ಆತನಿಗೆ ಒಂದಲ್ಲ ಒಂದು ಕಷ್ಟ ಬರುತ್ತಲೇ ಇರುತ್ತದೆ. ಅದನ್ನು ಚಾಣಾಕ್ಷತನದಿಂದ ಒಳ್ಳೆತನದಲ್ಲಿ ಹೇಗೆ ಬಗೆ ಹರಿಸಿಕೊಳ್ಳುತ್ತಾನೆ. ಕೆಟ್ಟದ್ದನ್ನು ಮಾಡಲು ಮುಂದಾದರೆ ಅನಾಹುತಗಳು ಕಟ್ಟಿಟ್ಟ ಬುತ್ತಿ. ನಿರ್ದೇಶಕರು ತಾವು ನೋಡಿದಂತ ಒಂದಷ್ಟು ಘಟನೆಗಳು ಜತೆಗೆ ಕಾಲ್ಪನಿಕ ಟಚ್ ಕೊಟ್ಟು ಸನ್ನಿವೇಶಗಳನ್ನು ಸೃಷ್ಟಿಸಿದ್ದಾರೆ. 'ನಾವುಗಳು ಒಳಿತನ್ನು ಬಯಸಿದರೆ ಒಳ್ಳೆಯದೇ ನಡೆಯುತ್ರದೆ. ಕೆಟ್ಟತನವನ್ನು ಆಯ್ಕೆ ಮಾಡಿಕೊಂಡರೆ ಅದೇ ಆಗುತ್ತದೆ' ಎಂಬ ತೂಕದ ಸಂದೇಶವನ್ನು ಹೇಳಲಾಗುತ್ತಿದೆ.

'ಕಾಮಿಡಿ ಕಿಲಾಡಿಗಳು' ಖ್ಯಾತಿಯ ಗಿಲ್ಲಿನಟ, ಸಂತೋಷ್ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಬಾಲನಟಿಯಾಗಿದ್ದ ರೀಯಾಭಾಸ್ಕರ್ ಗೌಡರ ಮಗಳ ಪಾತ್ರದಲ್ಲಿ ನಾಲ್ಕನೇ ಚಿತ್ರಕ್ಕೆ ನಾಯಕಿ. ಇವರೊಂದಿಗೆ ಮುನಿ, ಜಗದೀಶ್ ಕೊಪ್ಪ, ಸಂಜಯ್ ಪಾಟೀಲ್, ಮೈತ್ರಿ, ಟೋನಿತಾ, ರಾಜವ್ ಬಾಲೆ, ಪ್ರಕಾಶ್ ಬಾನಾಳು, ತೇಜು ಮೈಸೂರು, ಸುರೇಶ್ ಕೋಲಾರ, ರಂಗರಾಜು ಹುಲಿದುರ್ಗ ಮುಂತಾದವರು ನಟಿಸುತ್ತಿದ್ದಾರೆ. ಸಂಭಾಷಣೆ ಚಕ್ರಿ ಕಿರಿಸಾವೆ, ಸಂಗೀತ ವಿಶಾಲ್ ಅಲಾಪ್, ಛಾಯಾಗ್ರಹಣ ದೀಪಕ್ ಕುಮಾರ್ .ಜಿ.ಕೆ ಅವರದಾಗಿದೆ. ಮೈಸೂರು, ಹಾಸನ, ಮಂಡ್ಯ ಸುಂದರ ತಾಣಗಳಲ್ಲಿ ಎರಡು ಹಂತಗಳಂತೆ ಸೆಪ್ಟಂಬರ್ ಮೊದಲ ವಾರದಿಂದ ಚಿತ್ರೀಕರಣ ನಡೆಸಲು ತಂಡವು ಯೋಜನೆ ರೂಪಿಸಿಕೊಂಡಿದೆ.

# ನಿವಿ ಈಗ ಚಂದನ್‌ನ ಮುದ್ದು ರಾಕ್ಷಸಿ

ರಿಯಲ್ ಲೈಫ್ ಜೋಡಿಯಾಗಿದ್ದ ಚಂದನ್ ಶೆಟ್ಟಿ ಮತ್ತು ನಿವೇದಿತಾ ಗೌಡ ಮೊದಲ ಬಾರಿಗೆ ಜೊತೆಯಾಗಿ ಅಭಿನಯಿಸಿದ್ದ ಚಿತ್ರಕ್ಕೆ ಇಟ್ಟಿದ್ದ 'ಕ್ಯಾಂಡಿ ಕ್ರಶ್' ಟೈಟಲ್ ಇದೀಗ ಬದಲಾಗಿದೆ. ಪುನೀತ್ ಶ್ರೀನಿವಾಸ್ ಅವರ ನಿರ್ದೇಶನದಲ್ಲಿ ಮೂಡಿಬಂದಿರುವ ಸೈಕೋ ಥ್ರಿಲ್ಲರ್ ಕಥಾಹಂದರ ಹೊಂದಿದ ಚಿತ್ರದ ತಾತ್ಕಾಲಿಕ ಟೈಟಲ್ ಆಗಿದ್ದ 'ಕ್ಯಾಂಡಿ ಕ್ರಶ್' ಇದೀಗ ಮುದ್ದು ರಾಕ್ಷಸಿ ಎಂದು ಬದಲಾಯಿಸಲಾಗಿದೆ.

ಶ್ರೀಚೌಡೇಶ್ವರಿ ಸಿನಿ ಕಂಬೈನ್ಸ್ ಮೂಲಕ ಮೋಹನ್ ಕುಮಾರ್ ಅವರು ಈ ಚಿತ್ರವನ್ನು ಬಿಗ್ ಬಜೆಟ್‌ನಲ್ಲಿ ನಿರ್ಮಾಣ ಮಾಡುತ್ತಿದ್ದಾರೆ. ಈ ಚಿತ್ರದಲ್ಲಿ 'ಬಿಗ್ ಬಾಸ್' ಖ್ಯಾತಿಯ ಚಂದನ್ ಶೆಟ್ಟಿ ಮತ್ತು ನಿವೇದಿತಾ ಗೌಡ ಮೊದಲ ಬಾರಿಗೆ ಒಟ್ಟಿಗೆ ನಟಿಸಿದ್ದಾರೆ.

ಪುನೀತ್ ಶ್ರೀನಿವಾಸ್ ಅವರೇ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿರುವ ಈ ಚಿತ್ರಕ್ಕೆ ಬೆಂಗಳೂರು ಸುತ್ತಮುತ್ತ ಬಹುತೇಕ ಶೂಟಿಂಗ್ ನಡೆಸಲಾಗಿದೆ. ಮುದ್ದುರಾಕ್ಷಸಿ ಒಂದು ವಿಭಿನ್ನ ರೊಮ್ಯಾಂಟಿಕ್ ಲವ್ ಸ್ಟೋರಿ ಜೊತೆಗೆ ಸೈಕೋ ಥ್ರಿಲ್ಲರ್ ಕಥಾಹಂದರ ಹೊಂದಿರುವ ಚಿತ್ರವಾಗಿದ್ದು, ಚಿತ್ರದ ಈ ಶೀರ್ಷಿಕೆಯೇ ವಿಶೇಷವಾಗಿದೆ. ಮುದ್ದು ರಾಕ್ಷಸಿ ಚಿತ್ರದ ಹಾಡುಗಳಿಗೆ ಎಂ.ಎಸ್.ತ್ಯಾಗರಾಜ್ ಅವರು ಸಂಗೀತ ಸಂಯೋಜನೆ ಮಾಡಿದ್ದಾರೆ. ಅಲ್ಲದೆ ಎ.ಕರುಣಾಕರ್ ಅವರು ಛಾಯಾಗ್ರಾಹಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.



2025ರ ಐಪಿಎಲ್‌ನಲ್ಲೂ ಮಹಿ ಅಖಾಡಕ್ಕಿಳಿಯೋದು ಫಿಕ್ಸ್

# ಸುಳಿವು ಕೊಟ್ಟ ರೈನಾ

2025ರ ಇಂಡಿಯನ್ ಪ್ರೀಮಿಯರ್ ಲೀಗ್ ಆವೃತ್ತಿಯು ಮೆಗಾ ಹರಾಜಿಗೂ ಮುನ್ನವೇ ಭಾರೀ ಕುತೂಹಲ ಹೆಚ್ಚಿಸಿದೆ. ಏಕೆಂದರೆ ಮೂರು ವರ್ಷಗಳ ಬಳಿಕ ಮೆಗಾ ಹರಾಜು ನಡೆಯುತ್ತಿದ್ದು, ಬಲಿಷ್ಠ ಆಟಗಾರರು ಯಾವ ತಂಡವನ್ನು ಸೇರಲಿದ್ದಾರೆ ಅನ್ನೋ ಬಗ್ಗೆ ಎಲ್ಲರ ಚಿತ್ತ ನೆಟ್ಟಿದೆ. ಈ ನಡುವೆ 2025ರ ಐಪಿಎಲ್‌ನಲ್ಲಿ ಎಂ.ಎಸ್ ಧೋನಿ ಕಣಕ್ಕಿಳಿಯುವ ಬಗ್ಗೆ ಮಾಜಿ ಕ್ರಿಕೆಟಿಗ ಸುರೇಶ್ ರೈನಾ ಸುಳಿವು ಕೊಟ್ಟಿದ್ದಾರೆ.

ಹೌದು. ಸಿಎಸ್‌ಕೆ ತಂಡದ ನಾಯಕ ರುತುರಾಜ್ ಗಾಯಕ್ವಾಡ್, ಮಹಿ ಮತ್ತೊಂದು ಆವೃತ್ತಿಗೆ ಚೆನ್ನೈ ತಂಡದ ಕೈ ಹಿಡಿಯಬೇಕೆಂದು ಬಯಸಿದ್ದಾರೆ. ಜೊತೆಗೆ ರುತುರಾಜ್‌ಗೆ ಇನ್ನಷ್ಟು ನಾಯಕತ್ವದ ಗುಣಗಳನ್ನು ಕಲಿಸಬೇಕಿದೆ ಆದ್ದರಿಂದ ಧೋನಿ ಮುಂದಿನ ಆವೃತ್ತಿಯಲ್ಲೂ ಸಿಎಸ್‌ಕೆ ತಂಡದ ಪರ ಆಡಲಿದ್ದಾರೆ ಎಂದು ಸಿಎಸ್‌ಕೆ ತಂಡದ ಮಾಜಿ ಬ್ಯಾಟರ್ ಸುರೇಶ್ ರೈನಾ ಹೇಳಿದ್ದಾರೆ.

ಸ್ಪೋರ್ಟ್ಸ್ ಟಾಕ್ ಜೊತೆಗೆ ಮಾತನಾಡಿದ ಸುರೇಶ್ ರೈನಾ, ಐಪಿಎಲ್‌ನಲ್ಲಿ ಧೋನಿ ಅವರ ಪಾಲಿಗೆ ಮತ್ತೊಂದು ಸೀಸನ್ ಉಳಿದಿರುವಂತೆ ಕಾಣುತ್ತಿದೆ. ಕಳೆದ ವರ್ಷ ಅವರು ಹೇಗೆ ಬ್ಯಾಟಿಂಗ್ ಮಾಡಿದ್ದಾರೆ ಎಂಬುದನ್ನು ಪರಿಗಣಿಸಿ 2025ರ ಐಪಿಎಲ್‌ನಲ್ಲಿ ಆಡಬೇಕೆಂದು ಬಯಸುತ್ತೇನೆ ಎಂದಿದ್ದಾರೆ.

ಕಳೆದ ವರ್ಷ ಆರ್‌ಸಿಬಿ ವಿರುದ್ಧ ನಾಕೌಟ್ ಪಂದ್ಯದಲ್ಲಿ ಸೋತ ನಂತರ ರುತುರಾಜ್ ಮತ್ತೊಂದು ವರ್ಷ ಧೋನಿ ಸಿಎಸ್‌ಕೆ ತಂಡಕ್ಕೆ ಬೇಕು ಅಂತ ಕೇಳಿಕೊಂಡಿದ್ದರು. ಈಗಾಗಲೇ ರುತುರಾಜ್ ನಾಯಕನಾಗಿ ಉತ್ತಮ ಕೆಲಸ ಮಾಡಿದ್ದರೂ, ಇನ್ನಷ್ಟು ತಿಳಿಯುವ ಅವಶ್ಯಕತೆಯಿದೆ ಎಂದು ರೈನಾ ಕಿವಿಮಾತು ಹೇಳಿದ್ದಾರೆ.

2024ರ ಐಪಿಎಲ್‌ಗೂ ಮುನ್ನ ಎಂ.ಎಸ್ ಧೋನಿ ಅವರು ಸಿಎಸ್‌ಕೆ ನಾಯಕತ್ವ ಗಾಯಕ್ವಾಡ್‌ಗೆ ಹಸ್ತಾಂತರಿಸಿದ್ದರು. ಕಳೆದ ವರ್ಷ ಐಪಿಎಲ್‌ನಲ್ಲಿ ಮೊಣಕಾಲು ಗಾಯದ ಸಮಸ್ಯೆಗೆ ತುತ್ತಾಗಿದ್ದ ಮಹಿ, ಫಿನಿಶರ್ ಪಾತ್ರದಲ್ಲಿ ಕೆಳ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡುತ್ತಿದ್ದರು. 14 ಪಂದ್ಯಗಳಿಂದ 220.25 ಸ್ಟ್ರೈಕ್ ರೇಟ್‌ನಲ್ಲಿ ಒಟ್ಟು 161 ರನ್ ಗಳಿಸಿದ್ದರು. ಆದ್ರೆ 2025ರ ಐಪಿಎಲ್‌ನಲ್ಲಿ ಧೋನಿಯನ್ನು ಉಳಿಸಿಕೊಳ್ಳುವುದು, ಬಿಡುವುದು ಬಿಸಿಸಿಐ ನಿಗದಿಪಡಿಸುವ ನಿಯಮದ ಮೇಲೆ ನಿರ್ಧಾರವಾಗಿದೆ. ಆದ್ದರಿಂದ ಧೋನಿ ಅವರನ್ನು ಮೆಗಾ ಹರಾಜಿನಲ್ಲಿ ಬಿಡ್ ಮಾಡಬೇಕೇ ಅಥವಾ ರಿಟೇನ್ ಮಾಡಿಕೊಳ್ಳಬೇಕೇ ಎಂಬ ನಿರ್ಧಾರವನ್ನು ಮುಂದಿನ ದಿನಗಳಲ್ಲಿ ತಿಳಿಸುತ್ತೇವೆ ಎಂದು ಸಿಎಸ್‌ಕೆ ಫ್ರಾಂಚೈಸಿ ಹೇಳಿದೆ.




## ಅನ್‌ಕ್ಯಾಪ್ಡ್ ಪ್ಲೇಯರ್ ಆಗ್ತಾರಾ ಮಹಿ?

**ಐಪಿಎಲ್ ನಿಯಮದ ಪ್ರಕಾರ, ಯಾವುದೇ ರಾಷ್ಟ್ರೀಯ ತಂಡದ ಆಟಗಾರರು ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತಿ ಹೊಂದಿ 5 ವರ್ಷ ಮುಕ್ತಾಯಗೊಂಡು, ಐಪಿಎಲ್‌ನಲ್ಲಿ ಭಾಗವಹಿಸಿದರೆ, ಅವರನ್ನ ಅನ್‌ಕ್ಯಾಪ್ಡ್ ಪ್ಲೇಯರ್ (ಹೊಸಬರು) ಅಂತ ಪರಿಗಣಿಸಲಾಗುತ್ತದೆ. ಧೋನಿ ಅವರು 2020ರ ಆಗಸ್ಟ್ 15ರಂದು ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಹೇಳಿದ್ದರು. 2025ರ ಆಗಸ್ಟ್ 15ಕ್ಕೆ 5 ವರ್ಷ ಪೂರ್ಣಗೊಳ್ಳಲಿದೆ. ಒಂದು ವೇಳೆ ಮುಂದಿನ ವರ್ಷ ಜೂನ್, ಜುಲೈನಲ್ಲೇ ಐಪಿಎಲ್ ನಡೆದರೆ, ಅದು ಧೋನಿ ಅವರಿಗೂ ಲಾಭವಾಗಲಿದೆ. ಏಕೆಂದರೆ ಧೋನಿ ಅವರು ಪ್ರಸ್ತುತ ಒಂದು ಆವೃತ್ತಿಗೆ 12 ಕೋಟಿ ರೂ. ಸಂಭಾವನೆ ಪಡೆಯುತ್ತಿದ್ದಾರೆ. ಅನ್‌ಕ್ಯಾಪ್ಡ್ ಪ್ಲೇಯರ್ ಆಗಿ ಪರಿಗಣಿಸಿದರೆ, ಸುಮಾರು 4 ಕೋಟಿ ರೂ. ಅಷ್ಟೇ ಸಂಭಾವನೆ ಸಿಗಲಿದೆ ಎಂದು ಫ್ರಾಂಚೈಸಿ ಮೂಲಗಳಿಂದ ತಿಳಿದುಬಂದಿದೆ.**

# ದ್ವೇಷದ ಪೋಸ್ಟ್: ವಿಜಯೇಂದ್ರ ವಿರುದ್ಧದ ಎಫ್‌ಐಆರ್‌ಗೆ ಹೈಕೋರ್ಟ್ ತಡೆ

**ಬೆಂಗಳೂರು:** ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧ ಹೈಗ್ರೌಂಡ್ಸ್ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣದ ಎಫ್‌ಐಆರ್‌ಗೆ ಹೈಕೋರ್ಟ್ ತಡೆ ನೀಡಿದೆ.

ಪ್ರಕರಣ ರದ್ದು ಮಾಡುವಂತೆ ಬಿ.ವೈ. ವಿಜಯೇಂದ್ರ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾ. ಎಂ ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಎಫ್‌ಐಆರ್‌ಗೆ ತಡೆ ನೀಡಿ ವಿಚಾರಣೆಯನ್ನು ಸೆ.19ಕ್ಕೆ ಮುಂದೂಡಿತು.

ಏನಿದು ಪ್ರಕರಣ?: ಮೀಸಲಾತಿಗೆ ಸಂಬಂಧಿಸಿದಂತೆ ವಿಡಿಯೊ ತುಣುಕನ್ನು ಬಿಜೆಪಿ ರಾಜ್ಯ ಘಟಕದ ಎಕ್ಸ್ ಖಾತೆಯಲ್ಲಿ ಹಂಚಿಕೊಳ್ಳಲಾಗಿತ್ತು. ದ್ವೇಷ ಸೃಷ್ಟಿಸಲು ಯತ್ನಿಸಿದ್ದ ಆರೋಪದ ಮೇಲೆ ಬಿಜೆಪಿ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವೀಯ,



ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಮತ್ತು ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ವಿರುದ್ಧ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಮುಖ್ಯಸ್ಥ ರಮೇಶ್ ಬಾಬು ದೂರು ನೀಡಿದ್ದರು.

ಜನ ಪ್ರತಿನಿಧಿಗಳ ಕಾಯ್ದೆ ಹಾಗೂ ಸೆಕ್ಷನ್ 505 (2) (ವರ್ಗಗಳ ನಡುವೆ ದ್ವೇಷ, ದ್ವೇಷ ಅಥವಾ ದುಶ್ಚಟವನ್ನು ಸೃಷ್ಟಿಸುವ ಅಥವಾ ಉತ್ತೇಜಿಸುವ ಹೇಳಿಕೆಗಳು) ಅಡಿಯಲ್ಲಿ ಮೂವರು ಬಿಜೆಪಿ ನಾಯಕರ ವಿರುದ್ಧ ಪ್ರಕರಣ ದಾಖಲಾಗಿತ್ತು.

ವಿಡಿಯೋದಲ್ಲಿ ಏನಿತ್ತು?: ಎಸ್‌ಸಿ, ಎಸ್‌ಟಿ ಮತ್ತು ಹಿಂದುಳಿದ ವರ್ಗಗಳನ್ನು ಮೊಟ್ಟೆಗಳೆಂದು ಬಿಂಬಿಸಿ, ಆ ಮೊಟ್ಟೆಗಳಿರುವ ಬುಟ್ಟಿಗೆ ಮುಸ್ಲಿಂ ಮೊಟ್ಟೆಯನ್ನು ರಾಹುಲ್ ಗಾಂಧಿ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ತಂದಿಡುವಂತೆ ತೋರಿಸಲಾಗಿತ್ತು. ಮರಿಯಾದ ಬಳಿಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ಮರಿಗಳಿಗೆ ಸೇರಬೇಕಾದ ಅನುದಾನವನ್ನು ಮುಸ್ಲಿಂ ಮರಿಗಳಿಗೆ ಮಾತ್ರ ನೀಡಲಾಗುತ್ತದೆ ಎಂದು ಬಿಂಬಿಸುವ ವಿಡಿಯೋ ತುಣಕು ಇರುವ ಪೋಸ್ಟ್ ಅನ್ನು ಬಿಜೆಪಿ ಅಪ್ಲೋಡ್ ಮಾಡಿತ್ತು.

# ವಿಇಸಿವಿ ಪ್ರವಾಸ್ 4.0 ನಲ್ಲಿ 'ಪ್ರಯಾಣಿಕ-ಕೇಂದ್ರಿತ' ಸಾರಿಗೆ ಪ್ರದರ್ಶನ

**ಪೀಣ್ಯ ದಾಸರಹಳ್ಳಿ:** ಕಮರ್ಷಿಯಲ್ ವೆಹಿಕಲ್ಸ್ ಲಿಮಿಟೆಡ್, ವೋಲ್ವೋ ಗ್ರೂಪ್ ಮತ್ತು ಐಷರ್ ಮೋಟಾರ್ಸ್ ನಡುವಿನ ಜಂಟಿ ಉದ್ಯಮವು ಪ್ರವಾಸ್ 4.0 ನಲ್ಲಿ ಮುಂದಿನ ಪೀಳಿಗೆಯ ವೋಲ್ವೋ ಮತ್ತು ಐಷರ್ ಬಸ್‌ಗಳನ್ನು ಪ್ರದರ್ಶಿಸಿದೆ.

ವಿಇಸಿವಿಯ ಎಂಡಿ ಮತ್ತು ಸಿಇಒ ವಿನೋದ್ ಅಗರ್ವಾಲ್ ಮಾತನಾಡಿ, ಅತ್ಯಾಧುನಿಕ ಉತ್ಪನ್ನಗಳೊಂದಿಗೆ, ನಾವು ಸುರಕ್ಷತೆ, ಐಷಾರಾಮಿ ಮತ್ತು ಸುಸ್ಥಿರತೆಯನ್ನು ನೀಡುತ್ತೇವೆ. ಪ್ರವಾಸ್ 4.0 ಅನ್ನು ಸಂಘಟಿಸಲು ಮತ್ತು ಪ್ರಮುಖ ಸಾರ್ವಜನಿಕ ಸಾರಿಗೆ ಪಾಲುದಾರರನ್ನು ಒಟ್ಟುಗೂಡಿಸಲು ನಾನು ಬಿಒಸಿಐ ಅನ್ನು ಅಭಿನಂದಿಸುತ್ತೇನೆ.'' ಎಂದು ಹೇಳಿದರು. ವಿಇಸಿವಿ ಬಸ್ ವಿಭಾಗದ ಕಾರ್ಯನಿರ್ವಾಹಕ ಉಪಾಧ್ಯಕ್ಷ ಸುರೇಶ್ ಚೆಟ್ಟಿಯಾರ್, ''ಚಾಲಕ ಮತ್ತು ಉತ್ಪನ್ನ ದಕ್ಷತೆಯನ್ನು ಹೆಚ್ಚಿಸುವ ಜೊತೆಗೆ ಪ್ರಯಾಣಿಕರ ಸೌಕರ್ಯವಿರುವ ವಾಹನಗಳೊಂದಿಗೆ ಭಾರತದ ವಿಕಸನಗೊಳ್ಳುತ್ತಿರುವ ಸಾರಿಗೆಗೆ ಕೊಡುಗೆಯಾಗಿ ನೀಡಲು ನಾವು ಹೆಮ್ಮೆಪಡುತ್ತೇವೆ.ಎಂದರು. ಕಮರ್ಷಿಯಲ್ ವೆಹಿಕಲ್ಸ್ ಲಿಮಿಟೆಡ್, ವೋಲ್ವೋ ಗ್ರೂಪ್ ಮತ್ತು ಐಷರ್ ಮೋಟಾರ್ಸ್ ನಡುವಿನ ಜಂಟಿ ಉದ್ಯಮವು ಪ್ರವಾಸ್ 4.0 ನಲ್ಲಿ ಮುಂದಿನ ಪೀಳಿಗೆಯ ವೋಲ್ವೋ ಮತ್ತು ಐಷರ್ ಬಸ್‌ಗಳನ್ನು ಪ್ರದರ್ಶಿಸಿದೆ. ಅತ್ಯಾಧುನಿಕ ಸಾರ್ವಜನಿಕ ಐಷಾರಾಮಿ ವೋಲ್ವೋ 9600 ಕೋಚ್, ಎಲೆಕ್ಟ್ರಿಕ್ ಐಷರ್ ಸ್ಕೈಲೈನ್ ಪ್ರೊ-ಇ 13.5 ಮೀ ಮೊನೊಕಾಕ್ ಇಂಟರ್‌ಸಿಟಿ ಕೋಚ್ ಮತ್ತು ಐಷರ್ ಸ್ಕೈಲೈನ್ ಪ್ರೊ 3010 ಸ್ಕೂಲ್ ಬಸ್ ಒಳಗೊಂಡಿದೆ.




# ಭಾರತಕ್ಕೆ ಡಬಲ್ ಧಮಾಕ; ಚಿನ್ನ, ಕಂಚಿನ ಪದಕಕ್ಕೆ ಗುರಿಯಿಟ್ಟ ಶೂಟರ್ಸ್

ಪ್ರಸ್ತುತ ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಭಾರತದ ಪದಕ ಬೇಟೆ ಆರಂಭವಾಗಿದೆ. ಕ್ರೀಡಾಕೂಟ ಆರಂಭವಾದ 2ನೇ ದಿನವೇ ಭಾರತ ಒಂದೇ ಸ್ಪರ್ಧೆಯಲ್ಲಿ 2 ಪದಕಗಳನ್ನು ಗೆದ್ದು ಬೀಗಿದೆ.

ಮಹಿಳೆಯರ 10 ಮೀಟರ್ ಏರ್ ರೈಫಲ್ ಸ್ಟ್ಯಾಂಡಿಂಗ್ ಎಸ್‌ಹೆಚ್1 ವಿಭಾಗದ ಫೈನಲ್‌ನಲ್ಲಿ ಶೂಟರ್ ಅವನಿ ಲೆಖರಾ ಚಿನ್ನದ ಪದಕ ಗೆದ್ದು ಬೀಗಿದರೆ, ಮೋನಾ ಅಗರ್ವಾಲ್ ಕಂಚಿನ ಪದಕಕ್ಕೆ ಗುರಿಯಿಟ್ಟರು. ಈ ಹಿಂದೆ ಟೋಕಿಯೊ ಪ್ಯಾರಾಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಗೆದ್ದುಕೊಂಡಿದ್ದ ಅವನಿ ಇದೀಗ ಮತ್ತೊಂದು ಚಿನ್ನದ ಪದಕದೊಂದಿಗೆ ದಾಖಲೆ ಬರೆದಿದ್ದಾರೆ.

ಅವನಿ 249.7 ಅಂಕ ಗಳಿಸಿ ಚಿನ್ನದ ಪದಕಕ್ಕೆ ಮುತ್ತಿಟ್ಟರೆ, ಮೋನಾ ಅಗರ್ವಾಲ್ 228.7 ಅಂಕಗಳೊಂದಿಗೆ ಕಂಚಿನ ಪದಕಕ್ಕೆ ಕೊರಳೊಡ್ಡಿದರು.

ಇನ್ನೂ ಬ್ಯಾಡ್ಮಿಂಟನ್ ಸಿಂಗಲ್ಸ್ ವಿಭಾಗದ 3ನೇ ಗುಂಪಿನ ಎ ಪಂದ್ಯದಲ್ಲಿ ಷಟ್ಲರ್ ನಿತೇಶ್ ಕುಮಾರ್, ನೇರ ಸುತ್ತಿನಲ್ಲಿ ಚೀನಾದ ಯಾಂಗ್ ಜಿಯಾನ್ಯುವಾನ್ ಅವರನ್ನ ಸೋಲಿಸಿ ಸೆಮಿಸ್‌ಗೆ ಲಗ್ಗೆಯಿಟ್ಟರು.



# ಪತ್ನಿಯ ಶೀಲ ಶಂಕಿಸಿ ಇಸ್ತ್ರಿಪೆಟ್ಟಿಗೆಯಿಂದ ಮೈ-ಕೈ ಸುಟ್ಟ ಪತಿ

**ಚಿತ್ರದುರ್ಗ:** ವ್ಯಕ್ತಿಯೊಬ್ಬ ತನ್ನ ಪತ್ನಿಯ ಶೀಲ ಶಂಕಿಸಿ ಇಸ್ತ್ರಿ ಪೆಟ್ಟಿಗೆಯಿಂದ ಆಕೆಯ ಮೈ ಸುಟ್ಟಿರುವುದು ಮೊಳಕಾಲ್ಮೂರು ಪಟ್ಟಣದಲ್ಲಿ ನಡೆದಿದೆ. ನಾಗೇಶ್ ಎಂಬಾತ ಆ.15 ರಂದು ಪತ್ನಿ ಮೇಲೆ ದೌರ್ಜನ್ಯ ಎಸಗಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಆರೋಪಿ, ಪತ್ನಿಯ ಮುಖ, ಕೈ-ಕಾಲು, ತೊಡೆ ಸೇರಿ ಹಲವೆಡೆ ಸುಟ್ಟು ವಿಕೃತಿ ಮೆರೆದಿದ್ದಾನೆ. ಮಹಿಳೆಗೆ ಬಳ್ಳಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದ್ದು, ಆಕೆ ಚೇತರಿಸಿಕೊಂಡಿದ್ದಾರೆ. ಗಾಯಾಳು ಮಹಿಳೆ ಬಳ್ಳಾರಿಯ ತವರುಮನೆಯಲ್ಲಿದ್ದು, ಮಾಧ್ಯಮಗಳಿಗೆ ಪ್ರತಿಕ್ರಿಯಿಸಲು ನಿರಾಕರಿಸಿದ್ದಾರೆ. ನಾಗೇಶ್‌ನ ತಂದೆ ಚಂದ್ರಣ್ಣನ ವಿರುದ್ಧವೂ ದೌರ್ಜನ್ಯ ಆರೋಪ ಕೇಳಿ ಬಂದಿದೆ.



Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com